24 ವರ್ಷಗಳಿಂದ ದೆಹಲಿಯಲ್ಲಿ ಪ್ರಕಟವಾಗುತ್ತಿರುವ ಪ್ರಪ್ರಥಮ ರಾಷ್ಟ್ರೀಯ ಕನ್ನಡ ದಿನಪತ್ರಿಕೆ

# ದೆಹಲಿ ವಾರ್ತೆ

www.dehalivaarthe.com

EDITION: NEW DELHI / CIRCULATION IN U.P. & HARYANA | EDITOR : K.R. RENU | RNI No. DELKAN/2003/10363 | ಪುಟ 8 | ಸಂಪುಟ 24 | ಸಂಚಿಕೆ 48 | ನವದೆಹಲಿ | ಬೆಲೆ ₹10 | ಆಗಸ್ಟ್ 13 2026 ಗುರುವಾರ

## ಒಳಪುಟಗಳಲ್ಲಿ

ಸಾಮಾಜಿಕ ಭದ್ರತಾ ಯೋಜನೆಗಳಿಂದ 95 ಕೋಟಿ ಜನರಿಗೆ ಪ್ರಯೋಜನ: ಪ್ರಧಾನಿ ಮೋದಿ ಪ್ರಶಂಸೆ- ಪು.4

ನಿಮ್ಮಂತೆ ಬಾಯಿ ಮುಚ್ಚಿಕೊಂಡಿರಬೇಕೆ? ಮಾಧ್ಯಮಗಳಿಗೆ ಪ್ರಿಯಾಂಕಾ ತರಾಟೆ - ಪು.4

ಬ್ರಾಹ್ಮಣ ಅಭಿವೃದ್ಧಿ ಮಂಡಳಿಗೆ 100 ಕೋಟಿ ರೂ. ಅನುದಾನಕ್ಕೆ ದಿನೇಶ್ ಗುಂಡೂರಾವ್ ಆಗ್ರಹ -ಪು..5

# ಸಂಸತ್ ಕಲಾಪ: ಪ್ರತಿಪಕ್ಷ ಪ್ರತಿಭಟನೆ ನಡುವೆ 18ನೇ ದಿನವೂ ಮುಂದೂಡಿಕೆ

### ಅಮಿತ್ ಶಾ- ರಾಹುಲ್ ಗಾಂಧಿ ಮಾತಿನ ಚಕಮಕಿ



**ನವದೆಹಲಿ, ಆ.12:** ಸಂಸತ್ತಿನ ಮಳೆಗಾಲದ ಅಧಿವೇಶನವು ಬುಧವಾರ ಮತ್ತೊಂದು ರಾಜಕೀಯ ಬಿಕ್ಕಟ್ಟಿಗೆ ಸಿಲುಕಿತು, ಕೇಂದ್ರ ಗೃಹ ಸಚಿವ ಅಮಿತ್ ಶಾ ಅವರು ವಿರೋಧ ಪಕ್ಷಗಳು ಚರ್ಚೆಯನ್ನು ತಡೆಯುತ್ತಿದ್ದಾರೆ ಎಂದು ಆರೋಪಿಸಿದರು ಮತ್ತು ರಾಹುಲ್ ಗಾಂಧಿ ಅವರು "ಅಮಿತ್ ಶಾ ಉಪನ್ಯಾಸ ಕೇಳಲು ನಮಗೆ ಆಸಕ್ತಿ ಇಲ್ಲ ಎಂದು ತಿರುಗೇಟು ನೀಡಿದರು.

ಜುಲೈ 20ರಂದು ಜಂತರ್ ಮಂತರ್‌ನಲ್ಲಿ ನಡೆದ ವಿದ್ಯಾರ್ಥಿಗಳ ಪ್ರತಿಭಟನೆಯ ಸಂದರ್ಭದಲ್ಲಿ ಪೊಲೀಸ್ ದೌರ್ಜನ್ಯದ ಬಗ್ಗೆ ಸಂಸತ್ತಿನಲ್ಲಿ ಪ್ರತಿಕ್ರಿಯಿಸಲು ಶಾ ಅವರನ್ನು ಗಾಂಧಿ ಪ್ರಶ್ನಿಸಿದರು, ಪ್ರತಿಭಟನಾಕಾರರ ವಿರುದ್ಧ ಬಲಪ್ರಯೋಗಕ್ಕೆ ಯಾರು ಆದೇಶಿಸಿದರು ಮತ್ತು ಗೃಹ ಸಚಿವರು ಈ ಕ್ರಮಕ್ಕೆ ಅಧಿಕಾರ ನೀಡಿದ್ದಾರೆಯೇ ಎಂದು ಕೇಳಿದರು. ಕಳೆದ ಹಲವು ದಿನಗಳಿಂದ ಶಾ ಸಂಸತ್ತಿಗೆ ಗೈರುಹಾಜರಾಗಿದ್ದಾರೆ ಎಂದು ಆರೋಪಿಸಿದರು ಮತ್ತು ಸದನದಲ್ಲಿ ವಿರೋಧ ಪಕ್ಷದ ಪ್ರಶ್ನೆಗಳಿಗೆ ಉತ್ತರಿಸಬೇಕೆಂದು ಒತ್ತಾಯಿಸಿದರು. "ನಮ್ಮ ಮಕ್ಕಳಿಗೆ ಗುಂಡು ಹಾರಿಸಲು ಅಮಿತ್ ಶಾ ಈ ಆದೇಶ ನೀಡಿದ್ದಾರೆಯೇ? ಹಾಗೆ ಮಾಡಿದ್ದಲ್ಲಿ ಅವರು ರಾಜೀನಾಮೆ ನೀಡಬೇಕು. ಕಳೆದ 20 ದಿನಗಳಿಂದ ಅಮಿತ್ ಶಾ ಕಾಣೆಯಾಗಿದ್ದಾರೆ. ಭಾರತದ ಗೃಹ ಸಚಿವರಿಗೆ ಧೈರ್ಯವಿಲ್ಲ; ಸದನಕ್ಕೆ ಬರಲು ಮುಖವಿಲ್ಲ ಎಂದು ಹೇಳಿದರು.

ಜಂತರ್ ಮಂತರ್ ಪ್ರತಿಭಟನೆಯ ಸಂದರ್ಭದಲ್ಲಿ ವಿದ್ಯಾರ್ಥಿಗಳ ಪ್ರತಿಭಟನೆ ಮತ್ತು ಪೊಲೀಸ್ ದೌರ್ಜನ್ಯದ ಕುರಿತು ವಿವರವಾದ ಚರ್ಚೆಗೆ ಸರ್ಕಾರ ಸಿದ್ಧವಾಗಿದೆ ಎಂದು ಕೇಂದ್ರ ಗೃಹ ಸಚಿವ ಅಮಿತ್ ಶಾ ಹೇಳಿದರು. ಸಂಸತ್ತಿನಲ್ಲಿ ವಿರೋಧ ಪಕ್ಷದ ಪ್ರಶ್ನೆಗಳಿಗೆ ಉತ್ತರಿಸಲು ನಾನು ಸಿದ್ಧ ಎಂದು ಹೇಳಿದರು.

ಸಂಸತ್ತಿನ ಹೊರಗೆ ಸುದ್ದಿಗಾರರೊಂದಿಗೆ ಮಾತನಾಡಿದ ಶಾ, ವಿರೋಧ ಪಕ್ಷವು ಸದನಗಳು ಕಾರ್ಯನಿರ್ವಹಿಸದಂತೆ ಪದೇಪದೇ ತಡೆಯುತ್ತಿವೆ. ಸಂಸತ್ತಿನಲ್ಲಿ ವಿಪಕ್ಷಗಳ ಯಾವುದೇ ಪ್ರಶ್ನೆಗೆ ಉತ್ತರಿಸಲು ಸಿದ್ಧನಿದ್ದೇನೆ, ಆದರೆ ಅವರು ಚರ್ಚೆ ನಡೆಯುವುದನ್ನು ಬಯಸುವುದಿಲ್ಲ ಎಂದು ಹೇಳಿದರು.

ಬುಧವಾರ ಮಧ್ಯಾಹ್ನ 3 ಗಂಟೆಯಿಂದ ಗುರುವಾರ ಮಧ್ಯಾಹ್ನ 3 ಗಂಟೆಯವರೆಗೆ ಸರ್ಕಾರ ಚರ್ಚೆಗೆ ಸಿದ್ಧವಾಗಿದೆ ಎಂದು ಹೇಳುವ ಮೂಲಕ ಅವರು ವಿರೋಧ ಪಕ್ಷವನ್ನು ಮಧ್ಯಾಹ್ನ 2 ಗಂಟೆಯೊಳಗೆ ಸ್ಪೀಕರ್‌ಗೆ ಪತ್ರವನ್ನು ಸಲ್ಲಿಸುವಂತೆ ಕೇಳಿಕೊಂಡರು.

ಕೇಂದ್ರ ಗೃಹ ಸಚಿವ ಅಮಿತ್ ಶಾ ವಿರೋಧ ಪಕ್ಷವನ್ನು ಲೋಕಸಭೆ ಸ್ಪೀಕರ್‌ಗೆ ಪತ್ರ ಸಲ್ಲಿಸುವಂತೆ ಕೇಳಿದ ನಿಮಿಷಗಳ ನಂತರ. ಲೋಕಸಭೆಯ ವಿರೋಧ ಪಕ್ಷದ ನಾಯಕ ರಾಹುಲ್ ಗಾಂಧಿ, ಅಮಿತ್ ಶಾ ಉಪನ್ಯಾಸ ಕೇಳಲು ಆಸಕ್ತಿಯಿಲ್ಲ ಎಂದು ಸ್ಪಷ್ಟಪಡಿಸಿದರು.



### ಅಮಿತ್‌ಶಾ ಮೌನ ತಪ್ಪೊಪ್ಪಿಗೆ

**ಪ್ರತಿಭಟನಾನಿರತ ವಿದ್ಯಾರ್ಥಿಗಳ ವಿರುದ್ಧ ಅತಿಯಾದ ಬಲಪ್ರಯೋಗದ ಆರೋಪಗಳ ಬಗ್ಗೆ ಶಾ ಅವರ ಮೌನ ತಪ್ಪೊಪ್ಪಿಗೆಯಾಗಿದೆ ಎಂದು ರಾಹುಲ್ ಹೇಳಿದರು ಮತ್ತು ಆಪಾದಿತ ಪೊಲೀಸ್ ಕ್ರಮಕ್ಕೆ ಅವರು ವೈಯಕ್ತಿಕವಾಗಿ ಆದೇಶಗಳನ್ನು ನೀಡಿದ್ದಾರೆಯೇ ಎಂಬುದನ್ನು ಲೆಕ್ಕಿಸದೆ ಗೃಹ ಸಚಿವರು ರಾಜೀನಾಮೆ ನೀಡಬೇಕು ಎಂದು ವಾದಿಸಿದರು. "ಅವರು 20 ದಿನಗಳಿಂದ ಕಣ್ಮರೆಯಾಗಿದ್ದಾರೆ ಎಂಬುದು ಅರ್ಥಮಾಡಿಕೊಳ್ಳಬೇಕಾದ ಪ್ರಮುಖ ವಿಷಯ" ಎಂದರು.**

### ಕೇರಳಂ- ಹೆಸರು ಬದಲಾವಣೆ ಮಸೂದೆ ಅಂಗೀಕಾರ

**ಲೋಕಸಭೆಯು ಕೇರಳ (ಹೆಸರಿನ ಬದಲಾವಣೆ) ಮಸೂದೆ, 2026 ಅನ್ನು ಅಂಗೀಕರಿಸಿದ್ದು, ರಾಜ್ಯದ ಅಧಿಕೃತ ಹೆಸರನ್ನು ಕೇರಳದಿಂದ ಕೇರಳ ಎಂದು ಬದಲಾಯಿಸಿದೆ. ರಾಜ್ಯಸಭೆಯಲ್ಲಿ, ಅಮಿತ್ ಶಾ ಅವರು ಕೇರಳ (ಹೆಸರಿನ ಬದಲಾವಣೆ) ಮಸೂದೆ, 2026 ಮತ್ತು ರಾಷ್ಟ್ರೀಯ ಸಹಕಾರ ಅಭಿವೃದ್ಧಿ ನಿಗಮ (ತಿದ್ದುಪಡಿ) ಮಸೂದೆ, 2026 ಅನ್ನು ಪರಿಗಣನೆ ಮತ್ತು ಅಂಗೀಕಾರಕ್ಕಾಗಿ ಮಂಡಿಸಲಿದ್ದಾರೆ. ಗುರುವಾರ ಮುಂಗಾರು ಅಧಿವೇಶನ ಮುಕ್ತಾಯಗೊಳ್ಳಲಿದ್ದು, ಸರ್ಕಾರವು ಹಲವಾರು ಬಾಕಿ ಮಸೂದೆಗಳನ್ನು ಮಂಡಿಸುವ ನಿರೀಕ್ಷೆಯಿದೆ.**

# ಸಾಮಾನ್ಯ ವರ್ಷದ ಪ್ರಮಾಣದಲ್ಲೇ ನೀರು ಬಿಡುಗಡೆ ನ್ಯಾಯಸಮ್ಮತವಲ್ಲ

- ಕಾವೇರಿ ಜಲಾಶಯಗಳ ಒಳಹರಿವಿನಲ್ಲಿ ಶೇ.65.76 ಕೊರತೆ: ಸುಪ್ರೀಂ ಎದುರು ಕರ್ನಾಟಕದ ವಾದ

**ನವದೆಹಲಿ, ಆ.12:** ಕಾವೇರಿ ನದಿ ನೀರು ಹಂಚಿಕೆ ವಿವಾದ ಮತ್ತೆ ತೀವ್ರ ಸ್ವರೂಪ ಪಡೆದಿದೆ. ಕರ್ನಾಟಕದಿಂದ ತನ್ನ ಪಾಲಿನ ನೀರು ಬಿಡುಗಡೆ ಮಾಡಿಸುವಂತೆ ತಮಿಳುನಾಡು ಸರ್ಕಾರ ಸುಪ್ರೀಂ ಕೋರ್ಟ್ ಮೊರೆಹೋದ ಬೆನ್ನಲ್ಲೇ, ಕರ್ನಾಟಕ ಸರ್ಕಾರ ನ್ಯಾಯಾಲಯಕ್ಕೆ ಸುದೀರ್ಘ ಪ್ರತ್ಯುತ್ತರ ಸಲ್ಲಿಸಿದೆ. ಸಂಕಷ್ಟದ ವರ್ಷದಲ್ಲಿ ಸಾಮಾನ್ಯ ವರ್ಷದ ಪ್ರಮಾಣದಲ್ಲೇ ನೀರು ಬಿಡುಗಡೆಗೆ ಪರಿಗಣಿಸುವುದು ನ್ಯಾಯಸಮ್ಮತವಲ್ಲ ಎಂದು ವಾದಿಸಿದೆ. ಹಾಗೂ ಈ ವರ್ಷ ಕಾವೇರಿ ಜಲಾನಯನ ಪ್ರದೇಶದಲ್ಲಿ ತೀವ್ರ ನೀರಿನ ಸಂಕಷ್ಟವಿದೆ. ರಾಜ್ಯದ ನಾಲ್ಕು ಪ್ರಮುಖ ಕಾವೇರಿ ಜಲಾಶಯಗಳ ಒಳಹರಿವಿನಲ್ಲಿ ಶೇ. 65.76 ಕೊರತೆ ಉಂಟಾಗಿದೆ ಎಂಬ ಅಂಶವನ್ನು ನ್ಯಾಯಾಲಯದ ಗಮನಕ್ಕೆ ತರಲಾಗಿದೆ.

**ನೀರು ಹರಿಸಿರುವ ಲೆಕ್ಕ:** ಜುಲೈ 29ರಿಂದ ಆಗಸ್ಟ್ 10ರವರೆಗೆ ಜಲಾಶಯಗಳಿಂದ ಒಟ್ಟು 1,64,080 ಕ್ಯೂಸೆಕ್ ನೀರು ಹೊರಹರಿದಿದ್ದು, ಅದರಲ್ಲಿ 86,797 ಕ್ಯೂಸೆಕ್ ನೀರು ಬಿಳಿಗುಂಡ್ಲು ಮೂಲಕ ತಮಿಳುನಾಡಿಗೆ ತಲುಪಿದೆ ಎಂದು ಕರ್ನಾಟಕ ನ್ಯಾಯಾಲಯಕ್ಕೆ ತಿಳಿಸಿದೆ. ವಯನಾಡು ಜಲಾನಯನ ಪ್ರದೇಶದಲ್ಲಿ ಉತ್ತಮ ಮಳೆಯಾದ ಸಂದರ್ಭದಲ್ಲಿ ಕಬಿನಿ ಸೇರಿ ಕೆಲವು ಜಲಾಶಯಗಳಿಗೆ ಹೆಚ್ಚುವರಿ ಒಳಹರಿವು ಬಂದ ಹಿನ್ನೆಲೆಯಲ್ಲಿ ಸಿಡಬ್ಲ್ಯುಎಂಎ ಶಿಫಾರಸಿಗಿಂತಲೂ ಹೆಚ್ಚಿನ ಪ್ರಮಾಣದ ನೀರು ತಮಿಳುನಾಡಿನತ್ತ ಹರಿದಿದೆ ಎಂಬುದನ್ನೂ ನ್ಯಾಯಾಲಯದ ಗಮನಕ್ಕೆ ತಂದಿದೆ. ಹಾಗೂ ಬಿಳಿಗುಂಡ್ಲುವಿನ ಸಿಡಬ್ಲ್ಯುಆರ್‌ಸಿ ಗೇಜ್ ಸ್ಟೇಷನ್‌ನಲ್ಲಿ ನೀರಿನ ಹರಿವು ಗಂಟೆಗೊಮ್ಮೆ ದಾಖಲಾಗುತ್ತದೆ. ಹೀಗಾಗಿ ಅಲ್ಲಿ ದಾಖಲಾದ ಪ್ರಮಾಣವೇ ಅಂತರರಾಜ್ಯ ನೀರು ಹರಿವಿನ ವಾಸ್ತವಿಕ ಪ್ರಮಾಣವನ್ನು ಅಳೆಯಲು ಪ್ರಮುಖ ಆಧಾರವಾಗಬೇಕು ಎಂಬ ವಾದವನ್ನು ಕರ್ನಾಟಕ ಮುಂದಿಟ್ಟಿದೆ.

**ಸಂಕಷ್ಟದ ವರ್ಷದಲ್ಲಿ ಪ್ರೊ-ರೇಟಾ ಸೂತ್ರದ ಪ್ರಶ್ನೆ:** ಸಾಮಾನ್ಯ ವರ್ಷದಲ್ಲಿ ನಿಗದಿಯಾಗಿರುವ ನೀರಿನ ಪ್ರಮಾಣವನ್ನು ಮಳೆ ಕೊರತೆ, ಒಳಹರಿವು ಮತ್ತು ಜಲಾಶಯಗಳ ಸಂಗ್ರಹದ ಪರಿಸ್ಥಿತಿಯನ್ನು ಪರಿಗಣಿಸದೆ ಜಾರಿಗೊಳಿಸಿದರೆ, ಕಾವೇರಿ ಜಲಾನಯನ ಪ್ರದೇಶದ ಮೇಲ್ಭಾಗದಲ್ಲಿರುವ ಕರ್ನಾಟಕದ ಕುಡಿಯುವ ನೀರು ಹಾಗೂ ಕೃಷಿ ಅಗತ್ಯಗಳಿಗೆ ತೀವ್ರ ಹೊಡೆತ ಬೀಳಬಹುದು ಎಂಬುದು ರಾಜ್ಯದ ವಾದವಾಗಿದೆ. ತಮಿಳುನಾಡು ಇದಕ್ಕೆ ವಿರುದ್ಧವಾಗಿ, ಸುಪ್ರೀಂ ಕೋರ್ಟ್ ಮಾರ್ಪಡಿಸಿರುವ ಕಾವೇರಿ ಹಂಚಿಕೆ ವ್ಯವಸ್ಥೆ ಮತ್ತು ಕಾವೇರಿ ನೀರು ನಿರ್ವಹಣಾ ಸಮಿತಿ ಮತ್ತು ಪ್ರಾಧಿಕಾರದ ಆದೇಶಗಳನ್ನು ಕರ್ನಾಟಕ ಪಾಲಿಸಲೇಬೇಕು ಎಂದು ಪ್ರತಿಪಾದಿಸುತ್ತಿದೆ. ಈ ನಡುವೆ ನೀರಿನ ಕೊರತೆ ನಡುವೆಯೂ ನೀರು ಬಿಡುವಂತೆ ಸೂಚಿಸಿರುವ ಕರ್ನಾಟಕದಲ್ಲಿ ರೈತರ ಆಕ್ರೋಶಕ್ಕೆ ಕಾರಣವಾಗಿದೆ.

ಬೆಳವಣಿಗೆ ಮತ್ತಷ್ಟು ಗಂಭೀರಗೊಂಡಿದ್ದು, ಕಾವೇರಿ ನೀರು ನಿರ್ವಹಣಾ ಪ್ರಾಧಿಕಾರ ಕರ್ನಾಟಕವು ತಮಿಳುನಾಡಿಗೆ ಪ್ರತಿದಿನ 12,000 ಕ್ಯೂಸೆಕ್‌ನಂತೆ 15 ದಿನ ನೀರು ಹರಿಸಬೇಕೆಂದು ಸೂಚಿಸಿದೆ. ಇದು ಆ.12ರಿಂದ ಜಾರಿಗೆ ಬರಲಿದೆ. ತಮಿಳುನಾಡು ಆ.3ರಂದು ಸುಪ್ರೀಂ ಕೋರ್ಟ್‌ಗೆ ಅರ್ಜಿ ಅಲ್ಲಿಸಿ ನೀರು ಬಿಡುವಂತೆ ಕರ್ನಾಟಕಕ್ಕೆ ನಿರ್ದೇಶಿಸುವಂತೆ ಮನವಿ ಮಾಡಿತ್ತು. ಈ ಅರ್ಜಿ ವಿಚಾರಣೆ ಆ.13ರಂದು ನಡೆಯಬೇಕಿತ್ತು. ಆದರೆ, ಆ.12ರಂದು ನಡೆಯಬೇಕಿದ್ದ ವಿಚಾರಣೆಯನ್ನು ಸುಪ್ರಿಂ ಕೋರ್ಟ್ ಆ.17ಕ್ಕೆ ಮುಂದೂಡಿದೆ. ಹೀಗಾಗಿ ಕರ್ನಾಟಕದ ವಾದ ಮಹತ್ವ ಪಡೆದಿದೆ.

### ಕಾನೂನು ಹೋರಾಟ ನಡೆಸಲು ಸರ್ಕಾರ ಸಿದ್ಧ



**ನವದೆಹಲಿ, ಆ.12:** ತಮಿಳುನಾಡಿಗೆ ಪ್ರತಿದಿನ 12 ಸಾವಿರ ಕ್ಯೂಸೆಕ್ ಕಾವೇರಿ ನೀರು ಹರಿಸುವಂತೆ ಕಾವೇರಿ ನೀರು ನಿಯಂತ್ರಣ ಸಮಿತಿ ನೀಡಿರುವ ಶಿಫಾರಸಿನಿಂದ ರಾಜ್ಯಕ್ಕೆ ಸಂಕಷ್ಟ ಎದುರಾಗಿದೆ. ರೈತರ ಹಿತ ಕಾಪಾಡಲು ಅಗತ್ಯವಿದ್ದರೆ ಸುಪ್ರೀಂ ಕೋರ್ಟ್‌ವರೆಗೂ ಕಾನೂನು ಹೋರಾಟ ನಡೆಸಲು ಸರ್ಕಾರ ಸಿದ್ಧವಿದೆ ಎಂದು ನೀರಾವರಿ ಸಚಿವ ಎನ್. ಚೆಲುವರಾಯಸ್ವಾಮಿ ಹೇಳಿದರು.

ದೆಹಲಿಯಲ್ಲಿ ಬುಧವಾರ ಮಾತನಾಡಿದ ಅವರು, ಈ ಹಿಂದೆ ಅಘಾಂ 3,500 ಕ್ಯೂಸೆಕ್ ನೀರು ಹರಿಸುವಂತೆ ಆದೇಶಿಸಿತ್ತು. ಇದೀಗ ಪ್ರತಿದಿನ 12 ಸಾವಿರ ಕ್ಯೂಸೆಕ್ ನೀರು ಬಿಡುವಂತೆ ಸೂಚಿಸಿರುವುದು ರಾಜ್ಯಕ್ಕೆ ದೊಡ್ಡ ಸಮಸ್ಯೆ ತಂದಿದೆ. ಕರ್ನಾಟಕಕ್ಕೆ ಮುಂದಿನ ಜೂನ್‌ವರೆಗೆ ಕುಡಿಯುವ ನೀರಿನ ಅಗತ್ಯವಿದ್ದು, ಇಂತಹ ಸಂದರ್ಭದಲ್ಲಿ ತಮಿಳುನಾಡು ತನ್ನ ಬೆಳೆಗೆ ನೀರು ಕೇಳುತ್ತಿದೆ ಎಂದು ಹೇಳಿದರು.

ತಮಿಳುನಾಡಿನಲ್ಲಿ ಕರ್ನಾಟಕಕ್ಕಿಂತಲೂ ಹೆಚ್ಚಿನ ಪ್ರಮಾಣದಲ್ಲಿ ನೀರಿನ ಸಂಗ್ರಹವಿದೆ. ಆದರೂ ನೀರು ಕೇಳಲಾಗುತ್ತಿದೆ. ಪರಿಸ್ಥಿತಿ ಗಂಭೀರವಾಗಿದ್ದು, ರಾಜ್ಯದ ರೈತರು ಈಗಾಗಲೇ ಪ್ರತಿಭಟನೆ ಹಾಗೂ ಆಕ್ರೋಶ ವ್ಯಕ್ತಪಡಿಸುತ್ತಿದ್ದಾರೆ. ಹೀಗಾಗಿ ರೈತರ ಹಿತಕ್ಕಾಗಿ ಕಾನೂನು ಹೋರಾಟ ನಡೆಸುವುದು ಅನಿವಾರ್ಯವಾಗಿದೆ ಎಂದರು.

# ಸಿಲ್ಕ್ ಸಮಗ್ರ-2 ಯೋಜನೆಯಡಿ ಕರ್ನಾಟಕಕ್ಕೆ 2,235.86 ಕೋಟಿ ರೂ. ನೆರವು: ಸಂಸದ ಸಿ.ಎನ್.ಮಂಜುನಾಥ್

**ನವದೆಹಲಿ, ಆ.12: ಸಿಲ್ಕ್ ಸಮಗ್ರ-2 ಯೋಜನೆಯಡಿ ಕರ್ನಾಟಕಕ್ಕೆ 2,235.86 ಕೋಟಿ ರೂ. ನೆರವು ನೀಡಲಾಗಿದೆ ಎಂದು ಕೇಂದ್ರ ಜವಳಿ ಖಾತೆ ರಾಜ್ಯ ಸಚಿವ ಪಬಿತ್ರ ಮಾರ್ಗರಿಟಾ ಅವರು ಲೋಕಸಭೆಯಲ್ಲಿ ಬುಧವಾರ ಮಾಹಿತಿ ನೀಡಿದರು.**



ಬೆಂಗಳೂರು ದಕ್ಷಿಣ ಕ್ಷೇತ್ರದ ಲೋಕಸಭೆ ಸಂಸದ ಡಾ.ಸಿ.ಎನ್. ಮಂಜುನಾಥ್ ಅವರ ಪ್ರಶ್ನೆಗೆ ಕೇಂದ್ರ ಸಚಿವರು ಮಾಹಿತಿ ನೀಡಿದ್ದಾರೆ.

ಕಳೆದ ಮೂರು ವರ್ಷಗಳಲ್ಲಿ ಸಿಲ್ಕ್ ಸಮಗ್ರ-2 ಯೋಜನೆಯಡಿ ಕರ್ನಾಟಕಕ್ಕೆ 2,235.86 ಕೋಟಿ ರೂ. ಕೇಂದ್ರ ಸರ್ಕಾರದಿಂದ ನೆರವು ನೀಡಲಾಗಿದೆ. ಈ ನೆರವು ಚಾಕಿ ಸಾಕಾಣಿಕೆ ಕೇಂದ್ರಗಳು, ರೀಲಿಂಗ್ ಮತ್ತು ನೇಯ್ಗೆ ಘಟಕಗಳು, ಕಾಮನ್ ಫೆಸಿಲಿಟಿ ಸೆಂಟರ್‌ಗಳು ಹಾಗೂ ರೇಷ್ಮೆ ಕ್ಷೇತ್ರದ ವಿವಿಧ ಮೂಲಸೌಕರ್ಯಗಳ ಅಭಿವೃದ್ಧಿಗೆ ಸಹಕಾರಿಯಾಗಿದೆ. ಈ ಯೋಜನೆಯಡಿ ಬೆಂಗಳೂರು ದಕ್ಷಿಣ ಜಿಲ್ಲೆಯ ರಾಮನಗರ, ಕನಕಪುರ, ಚನ್ನಪಟ್ಟಣ ಮತ್ತು ಮಾಗಡಿ ತಾಲ್ಲೂಕುಗಳಿಗೆ ಒಟ್ಟು 6762 ಲಕ್ಷ ರೂ. ನೆರವು ನೀಡಲಾಗಿದ್ದು, ಇದರಲ್ಲಿ 4557 ಲಕ್ಷ ರೂ. ಕೇಂದ್ರದ ಪಾಲಾಗಿದೆ.

ಕಳೆದ ಐದು ವರ್ಷಗಳಲ್ಲಿ ಕರ್ನಾಟಕದ 28,500 ಫಲಾನುಭವಿಗಳಿಗೆ 352.64 ಕೋಟಿ ರೂ. ಗಳನ್ನು ರೀಲಿಂಗ್, ನೇಯ್ದೆ, ಕೈಮಗ್ಗ, ಆಧುನಿಕ ಯಂತ್ರೋಪಕರಣಗಳು ಸೇರಿ ವಿವಿಧ ಚಟುವಟಿಕೆಗಳಿಗೆ ನೆರವು ಒದಗಿಸುವುದಲ್ಲದೆ, 12,789 ಮಂದಿಗೆ ತರಬೇತಿ ನೀಡಲಾಗಿದೆ.

### ಕೇಂದ್ರದ ನೆರವಿಗೆ ಸಂಸದರ ಸ್ವಾಗತ



**ಕರ್ನಾಟಕದಲ್ಲಿ ಕಚ್ಚಾ ರೇಷ್ಮೆ ಉತ್ಪಾದಕತ 2020-21ರಲ್ಲಿ 108 ಕೆ.ಜಿ./ಹೆಕ್ಟೇರ್‌ನಿಂದ 2025-26ರಲ್ಲಿ 114 ಕೆ.ಜಿ./ಹೆಕ್ಟೇರ್‌ಗೆ ಏರಿಕೆಯಾಗಿದೆ. ಅಂತೆಯೇ ಅಂತರರಾಷ್ಟ್ರೀಯ ಗುಣಮಟ್ಟದ ಬೈವೋಲ್ಟಿನ್ ಕಚ್ಚಾ ರೇಷ್ಮೆ ಉತ್ಪಾದನೆಯೂ ಸಹಾ 6,783 ಮೆಟ್ರಿಕ್ ಟನ್‌ನಿಂದ 11,229 ಮೆಟ್ರಿಕ್ ಟನ್‌ಗೆ ಹೆಚ್ಚಾಗಿದೆ. ಕರ್ನಾಟಕವು ದೇಶದ ಪ್ರಮುಖ ರೇಷ್ಮೆ ಉತ್ಪಾದಕ ರಾಜ್ಯಗಳಲ್ಲಿ ಒಂದಾಗಿದೆ. ರಾಜ್ಯದಲ್ಲಿ ರೇಷ್ಮೆ ಕ್ಷೇತ್ರದೊಂದಿಗೆ ಲಕ್ಷಾಂತರ ಜನರ ಜೀವನೋಪಾಯ ನೇರವಾಗಿ ಮತ್ತು ಪರೋಕ್ಷವಾಗಿ ಅವಲಂಬಿತವಾಗಿದೆ. ಸಿಲ್ಕ್ ಸಮಗ್ರ-2 ಯೋಜನೆಯಡಿ ಕೇಂದ್ರ ಸರ್ಕಾರ ನೀಡುತ್ತಿರುವ ಮಹತ್ವದ ನೆರವು ಸ್ವಾಗತಾರ್ಹ. ಮುಂದಿನ ದಿನಗಳಲ್ಲಿ ಆಧುನಿಕ ತಂತ್ರಜ್ಞಾನ ಉತ್ತಮ ಮೂಲಸೌಕರ್ಯ, ಹೆಚ್ಚಿನ ಉತ್ಪಾದಕತೆ, ಮೌಲ್ಯವರ್ಧನೆ ಹಾಗೂ ಮಾರುಕಟ್ಟೆ ಸಂಪರ್ಕಕ್ಕೆ ಹೆಚ್ಚಿನ ಒತ್ತು ನೀಡಿ ಕರ್ನಾಟಕದ ರೇಷ್ಮೆ ಕ್ಷೇತ್ರವನ್ನು ಜಾಗತಿಕ ಮಟ್ಟದಲ್ಲಿ ಮತ್ತಷ್ಟು ಸ್ಪರ್ಧಾತ್ಮಕಗೊಳಿಸಬೇಕು ಎಂದು ಡಾ. ಸಿ.ಎನ್. ಮಂಜುನಾಥ್ ತಿಳಿಸಿದ್ದಾರೆ.**

# ಹುಬ್ಬಳ್ಳಿ-ವಾರಾಣಸಿ ರೈಲು ಸಂಚಾರ ವಾರದಲ್ಲಿ 3 ದಿನ ವಿಸ್ತರಣೆ ಭರವಸೆ

- ಹೆಚ್ಚಿನ ರೈಲು ಸೇವೆಗಾಗಿ ಕೇಂದ್ರ ರೈಲ್ವೆ ಸಚಿವರಿಗೆ ಪ್ರಲ್ಹಾದ ಜೋಶಿ ಮನವಿ

**ನವದೆಹಲಿ, ಆ.12:** ಉತ್ತರ ಕರ್ನಾಟಕ ಭಾಗದ ಜನತೆಗೆ ಅನುಕೂಲವಾಗುವಂತೆ ನಿರಂತರವಾಗಿ ವಾರದಲ್ಲಿ ಮೂರು ದಿನಗಳ ಕಾಲ ಹುಬ್ಬಳ್ಳಿ-ವಾರಾಣಸಿ ರೈಲು ಸಂಚಾರ ವಿಸ್ತರಣೆಗೆ ಕೇಂದ್ರ ರೈಲ್ವೆ ಸಚಿವರಿಂದ ಭರವಸೆ ಸಿಕ್ಕಿದೆ.

ದೆಹಲಿಯಲ್ಲಿ ಬುಧವಾರ ಕೇಂದ್ರ ಸಚಿವ ಪ್ರಲ್ಹಾದ ಜೋಶಿ ಅವರು ರೈಲ್ವೆ ಸಚಿವ ಅಶ್ವಿನಿ ವೈಷ್ಣವ ಅವರನ್ನು ಭೇಟಿ ಮಾಡಿ, ಉತ್ತರ ಕರ್ನಾಟಕ ಹಾಗೂ ಕಾಶಿ (ವಾರಾಣಸಿ) ನಡುವಿನ ಸಂಪರ್ಕವನ್ನು ಮತ್ತಷ್ಟು ಬಲಪಡಿಸುವ ನಿಟ್ಟಿನಲ್ಲಿ 'ಹುಬ್ಬಳ್ಳಿ-ವಾರಾಣಸಿ' ರೈಲು ಸೇವೆಯನ್ನು ಹೆಚ್ಚಿಸುವಂತೆ ಮನವಿ ಸಲ್ಲಿಸಿದರು.

ಪ್ರಸ್ತುತ ಹುಬ್ಬಳ್ಳಿ-ವಾರಾಣಸಿ ರೈಲು ವಾರದಲ್ಲಿ ಒಂದು ದಿನ ಸಂಚರಿಸುತ್ತಿದ್ದು, ಇದನ್ನು ವಾರದಲ್ಲಿ ಮೂರು ದಿನ ವಿಸ್ತರಿಸಿದರೆ ಕಾಶಿ, ವಾರಾಣಸಿಗೆ ಧಾರ್ಮಿಕ ಯಾತ್ರೆ ಕೈಗೊಳ್ಳುವ ಉತ್ತರ ಕರ್ನಾಟಕ ಭಾಗದ ಭಕ್ತಾದಿಗಳಿಗೆ, ಪ್ರವಾಸಿಗರಿಗೆ ಹಾಗೂ ಉದ್ಯೋಗ-ವ್ಯಾಪಾರ ನಿಮಿತ್ತ ಪ್ರಯಾಣಿಸುವ ಸಾರ್ವಜನಿಕರಿಗೆ ಹೆಚ್ಚಿನ ಅನುಕೂಲವಾಗಲಿದೆ ಎಂದು ಸಚಿವರು ಗಮನ ಸೆಳೆದರು.



**ಹುಬ್ಬಳ್ಳಿ ನಿಲ್ದಾಣ ಹೈಟೆಕ್ ಗೊಳಿಸಿ:** ಹುಬ್ಬಳ್ಳಿ ರೈಲ್ವೆ ನಿಲ್ದಾಣವನ್ನು ಆಧುನಿಕ ಹಾಗೂ ಹೈಟೆಕ್ ಸೌಲಭ್ಯಗಳೊಂದಿಗೆ ಮತ್ತಷ್ಟು ಉತ್ತಮಪಡಿಸುವಂತೆಯೂ ಜೋಶಿ ವಿನಂತಿಸಿದರು. ರೈಲ್ವೆ ನಿಲ್ದಾಣದಲ್ಲಿ ಪಾರ್ಕಿಂಗ್ ವ್ಯವಸ್ಥೆ, ಶಾಪಿಂಗ್ ಮಾಲ್, ಮಲ್ಟಿಪ್ಲೆಕ್ಸ್, ರೆಸ್ಟೋರೆಂಟ್, ವಾಣಿಜ್ಯ ಮಳಿಗೆ ಸೇರಿದಂತೆ ಪ್ರಯಾಣಿಕರಿಗೆ ಅಗತ್ಯವಿರುವ ಹಲವು ಸೌಲಭ್ಯಗಳನ್ನು ಕಲ್ಪಿಸುವಂತೆ ಒತ್ತಾಯಿಸಿದರು.

**ಅಶ್ವಿನಿ ವೈಷ್ಣವ ಭರವಸೆ:** ಪ್ರಲ್ಹಾದ ಜೋಶಿ ಅವರ ಕೋರಿಕೆಗೆ ರೈಲ್ವೆ ಸಚಿವರು ಸಕಾರಾತ್ಮಕವಾಗಿ ಸ್ಪಂದಿಸಿದ್ದು, ಶೀಘ್ರದಲ್ಲಿಯೇ ಹುಬ್ಬಳ್ಳಿ-ವಾರಾಣಸಿ ರೈಲು (ಸಂಖ್ಯೆ 07323/24) ಸೇವೆಯನ್ನು ಇನ್ನು ಮುಂದೆ ವಾರಕ್ಕೆ ಮೂರು ದಿನಗಳಿಗೆ ವಿಸ್ತರಿಸುವುದಾಗಿ ಭರವಸೆ ನೀಡಿದ್ದಾರೆ. ಅಲ್ಲದೇ, ಮುಂಬರುವ ದಿನಗಳಲ್ಲಿ ಹುಬ್ಬಳ್ಳಿ ರೈಲ್ವೆ ನಿಲ್ದಾಣದ ಉನ್ನತೀಕರಣಕ್ಕೂ ಅಶ್ವಿನಿ ವೈಷ್ಣವ್ ಸಮ್ಮತಿಸಿದ್ದಾರೆ. ಇದಕ್ಕಾಗಿ ಸಮಸ್ತ ಉತ್ತರ ಕರ್ನಾಟಕದ ಜನತೆಯ ಪರವಾಗಿ ಧನ್ಯವಾದಗಳು ಎಂದಿದ್ದಾರೆ ಸಚಿವ ಪ್ರಲ್ಹಾದ ಜೋಶಿ.

# ಕೊನೆಗೂ ಖಾತೆಗಳ ಹಂಚಿಕೆ: ಹಣಕಾಸು, ಸಂಸದೀಯ ವ್ಯವಹಾರ ಖಾತೆ ಉಳಿಸಿಕೊಂಡ ಸಿಎಂ

### ಕೆ.ಎಚ್. ಮುನಿಯಪ್ಪಗೆ - ಸಮಾಜ ಕಲ್ಯಾಣ, ರಾಮಲಿಂಗಾರೆಡ್ಡಿಗೆ - ಅರಣ್ಯ, ಚಲುವರಾಯಸ್ವಾಮಿಗೆ - ಜಲಸಂಪನ್ಮೂಲ

**ಬೆಂಗಳೂರು, ಆ.12:** ಕೊನೆಗೂ ಬಹುನಿರೀಕ್ಷಿತ ಮುಖ್ಯಮಂತ್ರಿ ಡಿ.ಕೆ ಶಿವಕುಮಾರ್ ಸಂಪುಟದ ನೂತನ ಸಚಿವರಿಗೆ ಬುಧವಾರ ಖಾತೆಗಳನ್ನು ಹಂಚಿಕೆ ಮಾಡಲಾಗಿದ್ದು, ಅಧಿಕೃತ ಖಾತೆ ಹಂಚಿಕೆ ಪಟ್ಟಿಗೆ ರಾಜ್ಯಪಾಲ ಥಾವರ್‌ಚಂದ್ ಗೆಹ್ಲೋತ್ ಅವರು ಸಹಿ ಹಾಕಿದ್ದಾರೆ.

ಸಚಿವ ಕೆ.ಎಚ್. ಮುನಿಯಪ್ಪ ಹಾಗೂ ಸಚಿವ ರಾಮಲಿಂಗಾರೆಡ್ಡಿ ಅವರ ಖಾತೆಗಳನ್ನು ಬದಲಾವಣೆ ಮಾಡಲಾಗಿದೆ. ಈ ಮುಂಚೆ ಮುನಿಯಪ್ಪ ಅವರಿಗೆ ಆಹಾರ ಖಾತೆಯನ್ನು ನೀಡಲಾಗಿತ್ತು. ಆದರೆ ಈ ಬಾರಿ ಸಮಾಜ ಕಲ್ಯಾಣ ಇಲಾಖೆಯನ್ನು ಜವಾಬ್ದಾರಿ ವಹಿಸಲಾಗಿದೆ. ಮುನಿಯಪ್ಪ ಅವರು ಸಮಾಜಕಲ್ಯಾಣ ಖಾತೆ ಬೇಕೆಂದು ಪಟ್ಟು ಹಿಡಿದಿದ್ದರು ಮತ್ತು ಖುದ್ದು ರಾಹುಲ್ ಗಾಂಧಿ ಭೇಟಿಮಾಡಿ ಖಾತೆ ಬದಲಾವಣೆಗೆ ಮನವಿ ಮಾಡಿದ್ದರು.

ಇನ್ನು ಜಲಸಂಪನ್ಮೂಲ ಖಾತೆ ನೀಡಿದ್ದಕ್ಕೆ ತೀವ್ರ ಅಸಮಾಧಾನಗೊಂಡಿದ್ದ ರಾಮಲಿಂಗಾರೆಡ್ಡಿ ಅವರು ಸಚಿವ ಸ್ಥಾನಕ್ಕೆ ರಾಜೀನಾಮೆ ನೀಡುವ ಹಂತಕ್ಕೆ ಹೋಗಿದ್ದರು. ಆದರೆ ಇದೀಗ ಅವರಿಗೆ ಅರಣ್ಯ ಖಾತೆಯನ್ನು ನೀಡಲಾಗಿದೆ.

ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರು ಹಣಕಾಸು, ಸಂಪುಟ ವ್ಯವಹಾರಗಳು, ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ, ಗುಪ್ತದಳ, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ, ಕಾನೂನು ಮತ್ತು ನ್ಯಾಯ ಹಾಗೂ ಮಾನವ ಹಕ್ಕುಗಳು, ಸಂಸದೀಯ ವ್ಯವಹಾರಗಳು ಮತ್ತು ಕಾನೂನು ರಚನೆ, ಕೃಷಿ ಮಾರುಕಟ್ಟೆ, ನಗರ ಮತ್ತು ಪಟ್ಟಣ ಯೋಜನೆ, ಬಿಡಿಎ ಮತ್ತು ಬಿಎಂಆರ್ ಡಿ.ಎ. ವ್ಯಾಪ್ತಿಗೆ ಒಳಪಡುವ ಎಲ್ಲಾ ನಗರ ಸ್ಥಳೀಯ ಸಂಸ್ಥೆಗಳು, ಮಂಜೂರು ಮಾಡದ ವಿವಿಧ ಖಾತೆಗಳನ್ನು ಹೊಂದಲಿದ್ದಾರೆ.



**●ಡಿ.ಕೆ. ಶಿವಕುಮಾರ್ (ಮುಖ್ಯಮಂತ್ರಿ):** ಹಣಕಾಸು, ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಗುಪ್ತಚರ, ವಾರ್ತಾ, ಕಾನೂನು, ನ್ಯಾಯ ಮತ್ತು ಮಾನವ ಹಕ್ಕುಗಳು, ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ, ಕೃಷಿ ಮಾರಾಟ, ನಗರಾಭಿವೃದ್ಧಿ ಹಾಗೂ ಹಂಚಿಕೆಯಾಗದ ಇಲಾಖೆಗಳು



**●ಯು.ಟಿ. ಖಾದರ್:** ಅಲ್ಪಸಂಖ್ಯಾತರ ಕಲ್ಯಾಣ, ಹಜ್ ಮತ್ತು ವಕ್ಫ್, ಆರೋಗ್ಯ ಕುಟುಂಬ ಕಲ್ಯಾಣ



**●ವಿಜಯಾನಂದ ಕಾಶಪ್ಪನವರ್:** ಸಣ್ಣ ಪ್ರಮಾಣದ ಕೈಗಾರಿಕೆಗಳು ಮತ್ತು ಸಾರ್ವಜನಿಕ ಉದ್ದಿಮೆಗಳು



**●ಕೆ.ಎಸ್. ಬಸವಂತಪ್ಪ:** ಮುಜರಾಯಿ, ಮೀನುಗಾರಿಕೆ, ಬಂದರು ಮತ್ತು ಒಳನಾಡು ಜಲಸಾರಿಗೆ



**●ರಿಜ್ವಾನ್ ಅರ್ಷದ್:** ಆಹಾರ ಮತ್ತು ನಾಗರಿಕ ಸರಬರಾಜು, ಗ್ರಾಹಕರ ವ್ಯವಹಾರ



**●ಬಸವರಾಜ ರಾಯರೆಡ್ಡಿ:** ಉನ್ನತ ಶಿಕ್ಷಣ



**●ಕೆ.ಎಂ. ಶಿವಲಿಂಗೇಗೌಡ:** ಅಬಕಾರಿ



**●ಕೆ.ಎಚ್. ಮುನಿಯಪ್ಪ:** ಸಮಾಜ ಕಲ್ಯಾಣ



**●ಎಚ್.ಸಿ. ಬಾಲಕೃಷ್ಣ:** ಪೌರಾಡಳಿತ



**●ಶಿವರಾಜ ತಂಗಡಗಿ:** ಹಿಂದುಳಿದ ವರ್ಗಗಳ ಕಲ್ಯಾಣ, ಕನ್ನಡ ಮತ್ತು ಸಂಸ್ಕೃತಿ



**●ಡಾ. ಅಜಯ್ ಸಿಂಗ್:** ಸಣ್ಣ ನೀರಾವರಿ, ವಿಜ್ಞಾನ ಮತ್ತು ತಂತ್ರಜ್ಞಾನ



**●ಲಕ್ಷ್ಮಣ ಸವದಿ:** ಸಹಕಾರ ಇಲಾಖೆ (ಕೃಷಿ ಮಾರಾಟ ಹೊರತುಪಡಿಸಿ)



**●ಎನ್. ಚಲುವರಾಯಸ್ವಾಮಿ:** ಬೃಹತ್ ಮತ್ತು ಮಧ್ಯಮ ನೀರಾವರಿ



**●ಟಿ. ರಘುಮೂರ್ತಿ:** ಪರಿಶಿಷ್ಟ ಪಂಗಡಗಳ ಕಲ್ಯಾಣ



**●ಸಂತೋಷ್ ಲಾಡ್:** ಕಾರ್ಮಿಕ ಮತ್ತು ಉದ್ಯೋಗ ಇಲಾಖೆ



**●ಎಸ್.ಎಸ್. ಮಲ್ಲಿಕಾರ್ಜುನ್:** ಗಣಿ ಮತ್ತು ಭೂವಿಜ್ಞಾನ, ತೋಟಗಾರಿಕೆ

### ನೀಡಿರುವ ಖಾತೆ ನಿರ್ವಹಿಸಬೇಕು: ಡಿ.ಕೆ. ಶಿವಕುಮಾರ್

ಬೆಂಗಳೂರು, ಆ.12: ಹೊಸದಾಗಿ ವಿಸ್ತರಿಸಲಾದ ಸಚಿವ ಸಂಪುಟದಲ್ಲಿನ ಅಸಮಾಧಾನದ ಬಗ್ಗೆ ಹೆಚ್ಚುತ್ತಿರುವ ಊಹಾಪೋಹಗಳ ನಡುವೆಯೇ, ಸಚಿವರಿಗೆ ಹಂಚಿಕೆ ಮಾಡಲಾದ ಖಾತೆಗಳಲ್ಲಿ ಯಾವುದೇ ಬದಲಾವಣೆಯನ್ನು ಮುಖ್ಯಮಂತ್ರಿ ಡಿ.ಕೆ ಶಿವಕುಮಾರ್ ಬುಧವಾರ ತಳ್ಳಿಹಾಕಿದ್ದಾರೆ.

ತಮ್ಮ ನಿಲುವನ್ನು ಸ್ಪಷ್ಟಪಡಿಸಿದ ಶಿವಕುಮಾರ್, ಈಗಾಗಲೇ ಪ್ರಮಾಣವಚನ ಸ್ವೀಕರಿಸಿದ ಮತ್ತು ಹಂಚಿಕೆ ಮಾಡಲಾದ ಖಾತೆಗಳನ್ನು ಹೊಂದಿರುವ ಸಚಿವರು ತಮಗೆ ನೀಡಲಾದ ಖಾತೆಗಳನ್ನು ಮುಂದುವರಿಸಬೇಕಾಗುತ್ತದೆ ಎಂದು ಹೇಳಿದರು. ಖಾತೆಗಳಲ್ಲಿ ಯಾವುದೇ ಬದಲಾವಣೆ ಇಲ್ಲ. ಇಲಾಖೆಗಳನ್ನು ಪಡೆದವರು ತಮಗೆ ನೀಡಲಾದ ಇಲಾಖೆಗಳನ್ನು ನಿರ್ವಹಿಸಬೇಕು" ಎಂದು ಹೇಳಿದ್ದಾರೆ.



**●ಮಧು ಬಂಗಾರಪ್ಪ:** ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ



**●ಸಿ. ಪುಟ್ಟರಂಗ ಶೆಟ್ಟಿ:** ಪಶುಸಂಗೋಪನೆ ಮತ್ತು ರೇಷ್ಮೆ



**●ರಾಮಲಿಂಗಾರೆಡ್ಡಿ:** ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ



**●ಬಿ.ಝಡ್. ಜಮೀರ್ ಅಹಮದ್ ಖಾನ್:** ವಸತಿ



**●ರುದ್ರಪ್ಪ ಮಾನಪ್ಪ ಲಮಾಣಿ:** ಸಕ್ಕರೆ ಮತ್ತು ಜವಳಿ



**●ಬಿ. ನಾಗೇಂದ್ರ:** ಯೋಜನೆ ಮತ್ತು ಸಾಂಖ್ಯಿಕ ಇಲಾಖೆ

## ನಿತ್ಯ ಪಂಚಾಂಗ 13.08.2026 ಗುರುವಾರ



**ಶ್ರೀಶಕ 1949 ಶ್ರೀ ಪರಾಭವ ನಾಮ ಸಂವತ್ಸರ, ದಕ್ಷಿಣಾಯಣ ಗ್ರೀಷ್ಮ ಋತು, ಚಾಂದ್ರಮಾನ, ಆಷಾಢ-ಶ್ರಾವಣ ಮಾಸ**

ಶ್ರಾವಣ ಶುದ್ಧ, ಪಾಡ್ಯ, ಆಶ್ಲೇಷ ನಕ್ಷತ್ರ, ಸಪ್ತ ಪರಮಸ್ಥಾನ ವ್ರತಾರಂಭ, ಎಡಚರ ದಿನ, ಗೋಪಾಲ ಒಡೆಯರ ಆರಾಧನೆ, ಹುಲಗನಮರಡಿ ಜಾತ್ರೆ

| ದಿನ | ರಾಹುಕಾಲ | ಯಮಗಂಡ | ಗುಳಿಕಕಾಲ |
|---|---|---|---|
| ಭಾನು | ಸ. 5.04– 6.33 | 12.00– 1.30 | 3.00– 4.00 |
| ಸೋಮ | ಬೆ. 7.20– 9.04 | 10.30–12.00 | 1.30– 3.00 |
| ಮಂಗಳ | ಮ. 3.25– 4.59 | 9.00–10.30 | 12.00– 1.30 |
| ಬುಧ | ಮ.12.16– 1.50 | 7.30– 9.00 | 10.30– 12.00 |
| ಗುರು | ಮ. 1.50– 3.29 | 6.00– 7.30 | 9.00– 10.30 |
| ಶುಕ್ರ | ಬೆ.10.42–12.16 | 3.00– 4.30 | 7.30– 9.00 |
| ಶನಿ | ಬೆ. 9.07–10.41 | 1.30– 3.00 | 6.00– 7.30 |

# ಸ್ವಾತಂತ್ರ್ಯೋತ್ಸವ ಧ್ವಜಾರೋಹಣ: ಜಿಲ್ಲಾವಾರು ಸಚಿವರ ನೇಮಕ

**ಬೆಂಗಳೂರು, ಆ.12:** ಆ.15ರ ಸ್ವಾತಂತ್ರ್ಯ ದಿನಾಚರಣೆಯಂದು ಜಿಲ್ಲಾ ಕೇಂದ್ರಗಳಲ್ಲಿ (ಬೆಂಗಳೂರು ನಗರ ಜಿಲ್ಲೆ ಹೊರತುಪಡಿಸಿ) ನಡೆಯಲಿರುವ ಕಾರ್ಯಕ್ರಮದಲ್ಲಿ ಧ್ವಜಾರೋಹಣಕ್ಕೆ ಮಾಡಲು ಜಿಲ್ಲಾವಾರು ಸಚಿವರನ್ನು ನೇಮಕ ಮಾಡಿ ಸರ್ಕಾರ ಪ್ರಕಟಣೆ ಹೊರಡಿಸಿದೆ.

| ಸಚಿವರ ವಿವರ | | |
|---|---|---|
| ಡಾ.ಜಿ. ಪರಮೇಶ್ವರ್ – ತುಮಕೂರು | ಬೈರತಿ ಸುರೇಶ್ – ಚಿಕ್ಕಬಳ್ಳಾಪುರ | ಪಿ.ಎಂ. ನರೇಂದ್ರಸ್ವಾಮಿ – ಕೊಡಗು |
| ಕೆ.ಎಚ್.ಮುನಿಯಪ್ಪ – ಬೆಂಗಳೂರು ಗ್ರಾಮಾಂತರ | ಡಾ.ಶರಣಪ್ರಕಾಶ್ ಪಾಟೀಲ್ – ಯಾದಗಿರಿ | ಸಿ.ಪುಟ್ಟರಂಗಶೆಟ್ಟಿ – ಚಾಮರಾಜನಗರ |
| ಕೆ.ಜೆ. ಜಾರ್ಜ್ – ಚಿಕ್ಕಮಗಳೂರು | ಅಜಯ್‌ಸಿಂಗ್ – ರಾಯಚೂರು | ರುದ್ರಪ್ಪ ಲಮಾಣಿ – ಹಾವೇರಿ |
| ಎಂ.ಬಿ.ಪಾಟೀಲ್ – ವಿಜಯಪುರ | ಎಚ್.ಸಿ. ಬಾಲಕೃಷ್ಣ – ಬೆಂಗಳೂರು ದಕ್ಷಿಣ | ಸಂತೋಷ್‌ಲಾಡ್ – ಧಾರವಾಡ |
| ರಾಮಲಿಂಗಾರೆಡ್ಡಿ – ಕೋಲಾರ | ಬಸವರಾಜ ರಾಯರೆಡ್ಡಿ – ಗದಗ | ಕೆ.ಎಂ.ಶಿವಲಿಂಗೇಗೌಡ – ಹಾಸನ |
| ಸತೀಶ್ ಜಾರಕಿಹೊಳಿ – ಬೆಳಗಾವಿ | ಎನ್. ಚಲುವರಾಯಸ್ವಾಮಿ – ಮಂಡ್ಯ | ಶಿವರಾಜ್ ಎಸ್. ತಂಗಡಗಿ – ಕೊಪ್ಪಳ |
| ಪ್ರಿಯಾಂಕ್ ಖರ್ಗೆ – ಕಲಬುರಗಿ | ಲಕ್ಷ್ಮಣ ಸವದಿ – ಉತ್ತರ ಕನ್ನಡ | ವಿಜಯಾನಂದ್ ಕಾಶಪ್ಪನವರ್ – ಬಾಗಲಕೋಟೆ |
| ಯು.ಟಿ. ಖಾದರ್ – ದಕ್ಷಿಣ ಕನ್ನಡ1 | ಮಧು ಬಂಗಾರಪ್ಪ – ಶಿವಮೊಗ್ಗ | ಜಮೀರ್ ಅಹ್ಮದ್ ಖಾನ್ – ವಿಜಯನಗರ |
| ಈಶ್ವರ ಖಂಡ್ರೆ – ಬೀದರ್ | ಎಸ್.ಎಸ್. ಮಲ್ಲಿಕಾರ್ಜುನ – ದಾವಣಗೆರೆ | ಟಿ.ರಘುಮೂರ್ತಿ – ಚಿತ್ರದುರ್ಗ |
| ಡಾ. ಯತೀಂದ್ರ ಸಿದ್ದರಾಮಯ್ಯ – ಮೈಸೂರು | ಬಿ.ನಾಗೇಂದ್ರ – ಬಳ್ಳಾರಿ | ಬಸವಂತಪ್ಪ – ಉಡುಪಿ |






ದೆಹಲಿಯಲ್ಲಿ ಇಂದು ನಡೆದ ಹರ್ ಘರ್ ತಿರಂಗಾ ಕಾರ್ಯಕ್ರಮದಲ್ಲಿ ಬಾಗಿಯಾಗಿ ಭಾರತ್ ಮಂಟಪಂ ನಿಂದ ಮೇಜರ್ ಧ್ಯಾನ್ ಚಂದ್ ಸ್ಟೇಡಿಯಂನವರೆಗೆ ತಿರಂಗಾ ಯಾತ್ರೆಯಲ್ಲಿ ಭಾಗಿಯಾದ ಕೇಂದ್ರ ರೇಲ್ವೆ ಮತ್ತು ಜಲಶಕ್ತಿ ರಾಜ್ಯಖಾತೆಯ ಸಚಿವ ವಿ. ಸೋಮಣ್ಣ.

# ಪೊನ್ನಣ್ಣ ಸಿಎಂ ರಾಜಕೀಯ ಕಾರ್ಯದರ್ಶಿ, ಮಂಕಾಳ ವೈದ್ಯ ಬಹುತೇಕ ಉಪಸಭಾಧ್ಯಕ್ಷ

**ಬೆಂಗಳೂರು, ಆ.12:** ಸಚಿವ ಸ್ಥಾನ ಕೈತಪ್ಪಿದ್ದರಿಂದ ತೀವ್ರ ಅಸಮಾಧಾನಗೊಂಡಿದ್ದ ಮಾಜಿ ಸಚಿವ ಮಂಕಾಳ ವೈದ್ಯ ಅವರನ್ನು ಈಗ ವಿಧಾಸಭೆಯ ಉಪ ಸಭಾಧ್ಯಕ್ಷರನ್ನಾಗಿ ನೇಮಕ ಮಾಡಲಾಗುತ್ತಿದೆ.

ಈ ಮುಂಚೆ ವಿಧಾನಸಭೆ ಉಪ ಸಭಾಧ್ಯಕ್ಷ ಸ್ಥಾನಕ್ಕೆ ಆಯ್ಕೆಯಾಗಿದ್ದ ಕೊಡಗು ಜಿಲ್ಲೆಯ ವಿರಾಜಪೇಟೆ ಕ್ಷೇತ್ರದ ಕಾಂಗ್ರೆಸ್ ಶಾಸಕ ಎ.ಎಸ್.ಪೊನ್ನಣ್ಣ ಅವರನ್ನು ಮುಖ್ಯ ಮಂತ್ರಿಗಳ ರಾಜಕೀಯ ಕಾರ್ಯದರ್ಶಿಯಾಗಿ ನೇಮಕ ಮಾಡಲಾಗಿದೆ.

ಮಾಜಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಸರ್ಕಾರದಲ್ಲಿ ಸಿಎಂ ಕಾನೂನು ಸಲಹೆಗಾರರಾಗಿದ್ದ ಪೊನ್ನಣ್ಣ ಅವರು, ಸಚಿವ ಸಂಪುಟ ವಿಸ್ತರಣೆ ಬಳಿಕ ಸಚಿವ ಸ್ಥಾನ ನಿರೀಕ್ಷೆಯಲ್ಲಿದ್ದರು.

ಸಭಾಧ್ಯಕ್ಷರಾಗಿ ರೋಣ ಕ್ಷೇತ್ರದ ಶಾಸಕರಾದ ಜಿ.ಎಸ್. ಪಾಟೀಲ್ ಅವರ ಹೆಸರಿಗೆ ಕಾಂಗ್ರೆಸ್ ಹೈಕಮಾಂಡ್ ಅನುಮೋದನೆ ನೀಡಿತ್ತು. ಆದರೆ ಅವರಿಗೆ ಈ ಮಹತ್ವದ ಹುದ್ದೆ ಕೈ ತಪ್ಪಿದೆ. ಆದರೆ ಇತ್ತೀಚಿಗೆ ಸಂಪುಟ ವಿಸ್ತರಣೆಯಲ್ಲಿ ಅವರಿಗೆ ಸಚಿವ ಸ್ಥಾನ ಕೈತಪ್ಪಿದ್ದಕ್ಕೆ ಪೊನ್ನಣ್ಣ ಅವರನ್ನು ಉಪಸಭಾಧ್ಯಕ್ಷರಾಗಿ ನೇಮಕ ಮಾಡಲು ಹೈಕಮಾಂಡ್ ತೀರ್ಮಾನಿಸಿತ್ತು. ಆದರೆ ಇದೀಗ ಅದರಿಂದಲೂ ಕೊಕ್ ನೀಡಿ, ಸಿಎಂ ರಾಜಕೀಯ ಕಾರ್ಯದರ್ಶಿಯಾಗಿ ನೇಮಕ ಮಾಡಲಾಗಿದೆ.

ಇಂದು ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರ ಆದೇಶದ ಮೇರೆಗೆ ರಾಜ್ಯಪಾಲ ಥಾವರ್ ಚಂದ್ ಗೆಹ್ಲೋಟ್ ಅವರು, ಎ.ಎಸ್.ಪೊನ್ನಣ್ಣ ಅವರಿಗೆ ಸಂಪುಟ ದರ್ಜೆ ಸ್ಥಾನಮಾನದೊಂದಿಗೆ ಮುಖ್ಯಮಂತ್ರಿಗಳ ರಾಜಕೀಯ ಕಾರ್ಯದರ್ಶಿಯಾಗಿ ನೇಮಕ ಮಾಡಿ ಆದೇಶ ಹೊರಡಿಸಿದ್ದಾರೆ.

**ಅಂಬೇಡ್ಕರ್ ಅಭಿವೃದ್ಧಿ ನಿಗಮಕ್ಕೆ ಸಿ.ನರೇಂದ್ರ ಅಧ್ಯಕ್ಷ**

ಮೈಸೂರು ತಾಲೂಕಿನ ನಾಗವಾಲ ಗ್ರಾಮದ ಸಿ.ನರೇಂದ್ರ ಅವರನ್ನು ಡಾ. ಬಿ.ಆರ್. ಅಂಬೇಡ್ಕರ್ ಅಭಿವೃದ್ಧಿ ನಿಗಮದ ಅಧ್ಯಕ್ಷರನ್ನಾಗಿ ನೇಮಕ ಮಾಡಿ ಕರ್ನಾಟಕ ಸರ್ಕಾರ ಆದೇಶ ಹೊರಡಿಸಿದೆ. ಸಾಮಾಜಿಕ ಕಲ್ಯಾಣ ಇಲಾಖೆ ಆ.12ರಂದು ಅಧಿಕೃತ ಅಧಿಸೂಚನೆ ಬಿಡುಗಡೆ ಮಾಡಿದೆ.

# ಐಎಎಸ್‌ಗಳ ವರ್ಗಾವಣೆ

## ಕೆಪಿಎಸ್‌ಸಿ ಪರೀಕ್ಷಾ ನಿಯಂತ್ರಕರಾಗಿ ಎಚ್.ಪ್ರಸನ್ನಗೆ ಹೆಚ್ಚುವರಿ ಕಾರ್ಯಭಾರ

**ಬೆಂಗಳೂರು, ಆ.12:** ಮೂವರು ಐಎಎಸ್ ಅಧಿಕಾರಿಗಳನ್ನು ವರ್ಗಾವಣೆ ಮಾಡಿ ಸರ್ಕಾರ ಆದೇಶ ಹೊರಡಿಸಿದೆ. ಈ ಪೈಕಿ ಇಬ್ಬರನ್ನು ಕರ್ನಾಟಕ ಲೋಕಸೇವಾ ಆಯೋಗದ ವಿವಿಧ ಹುದ್ದೆಗಳಿಗೆ ನೇಮಕ ಮಾಡಲಾಗಿದೆ.

☐ ಕರ್ನಾಟಕ ಪರೀಕ್ಷಾ ಪ್ರಾಧಿಕಾರದ ಎಕ್ಸಿಕ್ಯೂಟಿವ್ ಡೈರೆಕ್ಟರ್ ಎಚ್.ಪ್ರಸನ್ನ ಅವರಿಗೆ ಕರ್ನಾಟಕ ಲೋಕಸೇವಾ ಆಯೋಗದ ಪರೀಕ್ಷಾ ನಿಯಂತ್ರಕರಾಗಿ ಹೆಚ್ಚುವರಿ ಕಾರ್ಯಭಾರ ವಹಿಸಲಾಗಿದೆ.

☐ ಸದ್ಯ ಕೆಪಿಎಸ್‌ಸಿ ಪರೀಕ್ಷಾ ನಿಯಂತ್ರಕ ಹುದ್ದೆಯಲ್ಲಿ ಕಾರ್ಯನಿರ್ವಹಿಸುತ್ತಿದ್ದ ಐಎಎಸ್ ಅಧಿಕಾರಿ ದಿಗ್ವಿಜಯ್ ಬೋಡ್ಕೆಯವರನ್ನು ವರ್ಗಾವಣೆ ಮಾಡಲಾಗಿದ್ದು, ಅವರಿಗೆ ಯಾವುದೇ ಹುದ್ದೆ ಸೂಚಿಸಿಲ್ಲ.

☐ ಯಾದಗಿರಿ ಜಿಲ್ಲಾ ಪಂಚಾಯತ್ ಸಿಇಒ ಆಗಿದ್ದ ಲವಿಶ್ ಓರ್ಡಿಯಾರನ್ನು ಕೆಪಿಎಸ್‌ಸಿ ಜಂಟಿ ಪರೀಕ್ಷಾ ನಿಯಂತ್ರಕ ಹುದ್ದೆಗೆ ನೇಮಕ ಮಾಡಲಾಗಿದೆ. ಯಾದಗಿರಿ ಜಿಪಂ ಸಿಇಒ ಹುದ್ದೆಗೆ ಯಾರನ್ನು ನೇಮಿಸಿಲ್ಲ.

# ಸಾಹಸಿಗರ ಸಂಸ್ಥೆಯಿಂದ ಆ.15, 16ರಂದು ಕುದುರೆಮುಖದಲ್ಲಿ ಆಫ್‌ರೋಡ್ ಸಾಹಸ

**ಜಲಮೂಲ, ಗ್ರಾಮೀಣ ರಸ್ತೆ ಹಾಳಾದರೆ ಕಠಿಣ ಕ್ರಮ: ಈಶ್ವರ ಖಂಡ್ರೆ**

ಬೆಂಗಳೂರು, ಆ.12: ಬೆಂಗಳೂರಿನ ಸಾಹಸಿಗರ ಸಂಸ್ಥೆಯೊಂದು ಆ.15, 16ರಂದು ಕುದುರೆಮುಖದಲ್ಲಿ ಆಫ್‌ರೋಡ್ ಸಾಹಸ ಆಂ2ೋಜಿಸಿದ್ದು, ಇದರಿಂದ ಜಲಮೂಲ ಕಲುಷಿತವಾದರೆ ಮತ್ತು ಗ್ರಾಮೀಣ ರಸ್ತೆ ನಾಶವಾದರೆ ಕಠಿಣ ಕ್ರಮ ಜರುಗಿಸುವಂತೆ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವ ಈಶ್ವರ ಬಿ ಖಂಡ್ರೆ ಸೂಚನೆ ನೀಡಿದ್ದಾರೆ. ಚಿಕ್ಕಮಗಳೂರು ಜಿಲ್ಲಾ ಪಂಚಾಯತಿಯ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳಿಗೆ ಈ ಸಂಬಂಧ ಲಿಖಿತ ಸೂಚನೆ ನೀಡಿರುವ ಅವರು, ಆ.15, 16ರಂದು ಚಿಕ್ಕಮಗಳೂರು ಜಿಲ್ಲೆ ಕುದುರೆಮುಖದಲ್ಲಿ ಆಫ್ ರೋಡ್ ಅಡ್ವೆಂಚರ್ ನಡೆಸುತ್ತಿರುವುದಾಗಿ ಬೆಂಗಳೂರಿನ ಒಂದು ಸಂಸ್ಥೆ ಪ್ರಚಾರ ಮಾಡಿದ್ದು, ಈ ಆಫ್ –ರೋಡ್ ನಲ್ಲಿ ನದಿಗಳನ್ನು ದಾಟುವ, ಮಣ್ಣು ದಾರಿಯಲ್ಲಿ ಸಾಗುವ, ಬೆಟ್ಟ–ಗುಡ್ಡ ಹತ್ತಿ ಇಳಿಯುವ ಸಾಹಸದ ಅವಕಾಶವಿದೆ ಎಂದು ಹೇಳಿಕೊಂಡಿದೆ. ಇದರಿಂದ ರಸ್ತೆಗಳು ಹಾಳಾಗದಂತೆ ಕ್ರಮ ವಹಿಸಲು ಸೂಚಿಸಿದ್ದಾರೆ.

ದೇಶದ ಪವಿತ್ರ ಸಂವಿಧಾನ ವಿಧಿಯನ್ವಯ ಭಾರತದ ಪ್ರಜೆಯಾಗಿ ನಾನು ಅರಣ್ಯ, ಸರೋವರ, ನದಿ, ವನ್ಯಜೀವಿಗಳು ಸೇರಿದಂತೆ ನೈಸರ್ಗಿಕ ಪರಿಸರವನ್ನು ರಕ್ಷಿಸುತ್ತೇನೆ ಮತ್ತು ಸುಧಾರಿಸುತ್ತೇನೆ. ಭಾರತದ ಸಂವಿಧಾನದ ಆಶಯದಂತೆ ನಾನು ಜೀವಂತ ಜೀವಿಗಳ ಬಗ್ಗೆ ಸಹಾನುಭೂತಿ ಹೊಂದಿರುತ್ತೇನೆ ಎಂಬ ಅಂಶವನ್ನು ಉಲ್ಲೇಖಿಸಿ, ನದಿ, ಪರಿಸರ ರಕ್ಷಣೆ ಪ್ರತಿಯೊಬ್ಬರ ಹೊಣೆ ಎಂದು ತಿಳಿಸಿದ್ದಾರೆ.

ಈ ಸಾಹಸದಲ್ಲಿ ಬಳಸಲಾಗುವ ವಾಹನಗಳಿಗೆ ಪರಿವರ್ತಿತ (ಮಾಡಿಫೈಡ್) ದಪ್ಪ ಟೈರ್ ಗಳನ್ನು ಹಾಕುವ ಕಾರಣ ಮತ್ತು ಆ ವಾಹನಗಳು ಮಳೆಯಿಂದ ತೊಯ್ದ ರಸ್ತೆಯಲ್ಲಿ ಅತಿ ರಭಸದಿಂದ ಸಾಗುವ ಕಾರಣ ಗ್ರಾಮೀಣ ರಸ್ತೆಗಳು ಹಾಳಾಗುವ ಅಪಾಯ ಇರುವುದಲ್ಲದೆ, ಬೆಟ್ಟಗುಡ್ಡಗಳ ಮೇಲಿನ ಮೇಲ್ಮೈ ಪದರ ಸವಕಳಿಯಾಗಿ ಮಳೆ ಬಂದಾಗ ಕೊಚ್ಚಿಕೊಂಡು ಬಂದು ಕೆರೆ, ಕಟ್ಟೆ, ಸರೋವರ ಇತ್ಯಾದಿ ಜಲಮೂಲಗಳಲ್ಲಿ ಹೂಳು ಹೆಚ್ಚಾಗಿ ನೀರಿನ ಸಂಗ್ರಹಣಾ ಸಾಮರ್ಥ್ಯ ಕಡಿಮೆಯಾಗುತ್ತದೆ ಎಂದೂ ತಿಳಿಸಿದ್ದಾರೆ.

ಆಫ್ ರೋಡ್ ಟ್ರಯಲ್‌ಗಳು ಶಬ್ದಮಾಲಿನ್ಯ, ವಾಯುಮಾಲಿನ್ಯಕ್ಕೂ ಕಾರಣವಾಗಲಿದ್ದು, ಹಲವು ಜೀವಿಜಂತುಗಳ ಸಾವಿಗೂ ಕಾರಣವಾಗುತ್ತದೆ. ಈ ನಿಟ್ಟಿನಲ್ಲಿ ಕುಡಿಯುವ ನೀರು ಪೂರೈಸುವ ಜಲ ಮೂಲಗಳಾದ ನದಿ, ತೊರೆ, ಕಾಲುವೆಗಳಲ್ಲಿ ಯಾವುದೇ ಸಾಹಸಿ ವಾಹನ ಸಂಚರಿಸಿ ನೀರು ಕಲುಷಿತಗೊಳಿಸದಂತೆ ಮತ್ತು ಗ್ರಾಮೀಣ ರಸ್ತೆಗಳು ಹಾಳಾಗದಂತೆ ಕ್ರಮ ವಹಿಸಲು, ಒಂದೊಮ್ಮೆ ರಸ್ತೆ ಹಾಳಾದರೆ, ಜಲಮೂಲ ಕಲುಷಿತವಾದರೆ ನಿರ್ದಾಕ್ಷಿಣ್ಯವಾಗಿ ನಿಯಮಾನುಸಾರ ಕಾನೂನು ಕ್ರಮ ಜರುಗಿಸಲು ಜಿಲ್ಲಾ ಪಂಚಾಯತಿ ಸಿಇಒ ಅವರಿಗೆ ಈಶ್ವರ ಖಂಡ್ರೆ ಸೂಚನೆ ನೀಡಿದ್ದಾರೆ

# ಕಾರ್ಯಚಟುವಟಿಕೆಗೆ ವಿಸ್ತರಣೆಗೆ ಬೆಂಗಳೂರು ಆಯ್ಕೆಗೆ ಲುಫ್ತಾನ್ಸಾ ಆಸಕ್ತಿ: ಸಚಿವ ಎಂ.ಬಿ.ಪಾಟೀಲ್

**ವಿಮಾನ ನಿರ್ವಹಣೆ, ದುರಸ್ತಿ ವಲಯದಲ್ಲಿ ಹೆಸರು ಮಾಡಿರುವ ಸಂಸ್ಥೆ ಸಿಇಒ ನೇತೃತ್ವದ ನಿಯೋಗದ ಜತೆ ಮಾತುಕತೆ**

**ಬೆಂಗಳೂರು, ಆ.12:** ವಿಮಾನಗಳ ನಿರ್ವಹಣೆ, ದುರಸ್ತಿ ಮತ್ತು ಓವರ್–ಹಾಲ್ ವಲಯದಲ್ಲಿ ಜಾಗತಿಕ ಮಟ್ಟದಲ್ಲಿ ಹೆಸರು ಮಾಡಿರುವ ಲುಫ್ತಾನ್ಸಾ ಟೆಕ್ನಿಕ್ ಕಂಪನಿಯು ತನ್ನ ಕಾರ್ಯ ಚಟುವಟಿಕೆಗಳ ವಿಸ್ತರಣೆಗೆ ಮುಂದಾಗಿದ್ದು, ಬೆಂಗಳೂರನ್ನು ಆಯ್ಕೆ ಮಾಡಿಕೊಳ್ಳಲು ಆಸಕ್ತಿ ಹೊಂದಿದೆ ಎಂದು ಬೃಹತ್ ಮತ್ತು ಮಧ್ಯಮ ಕೈಗಾರಿಕಾ ಸಚಿವ ಎಂ.ಬಿ ಪಾಟೀಲ್ ತಿಳಿಸಿದ್ದಾರೆ.



ನಗರದ ಖನಿಜ ಭವನದಲ್ಲಿ ಮಂಗಳವಾರ ಭೇಟಿಯಾಗಿದ್ದ ಕಂಪನಿಯ ಸಿಇಒ ಮಾರ್ಸೆಲ್ ಪಾಸ್ಲೂಸ್ಕ್ ನೇತೃತ್ವದ ಉನ್ನತ ಮಟ್ಟದ ನಿಯೋಗದ ಜತೆ ಮಾತುಕತೆ ನಡೆಸಿದರು. ಬೆಂಗಳೂರಿನಲ್ಲಿರುವ ಜರ್ಮನ್ ಡೆಪ್ಯುಟಿ ಕಾನ್ಸುಲ್ ಜನರಲ್ ಅನೆಟ್ ಬೇಸ್ಲರ್ ಕೂಡ ಇದ್ದರು.

ಮಾತುಕತೆ ನಂತರ ಮಾತನಾಡಿದ ಎಂ.ಬಿ ಪಾಟೀಲ್, ಬೆಂಗಳೂರಿನಲ್ಲಿ ಇರುವ ವೈಮಾನಿಕ ಕ್ಷೇತ್ರದ ಸುಸ್ಥಿತಿ, ಇಲ್ಲಿನ ಅಂತಾರಾಷ್ಟ್ರೀಯ ವಿಮಾನ ನಿಲ್ದಾಣವು ಜಾಗತಿಕ ಮಟ್ಟದಲ್ಲಿ ಗಮನ ಸೆಳೆಯುವಂತೆ ಹೊಂದಿರುವ ಅತ್ಯುತ್ತಮ ವಿಮಾನಸೇವೆ, ಕೌಶಲ್ಯ ಹೊಂದಿರುವ ಪ್ರತಿಭಾ ಸಂಪನ್ಮೂಲ, ಸಂಶೋಧನೆ ಮತ್ತು ಅಭಿವೃದ್ಧಿ, ಹೂಡಿಕೆಸ್ನೇಹಿ ನೀತಿಗಳು, ವಿಶ್ವ ದರ್ಜೆಯ ಎಂಜಿನಿಯರಿಂಗ್, ಏರೋಸ್ಪೇಸ್ ಮತ್ತು ರಕ್ಷಣಾ ಪರಿವ್ಯವಸ್ಥೆ ಇವುಗಳನ್ನು ಲುಫ್ತಾನ್ಸಾ ಟೆಕ್ನಿಕ್ ನಿಯೋಗಕ್ಕೆ ಮನದಟ್ಟು ಮಾಡಿಕೊಡಲಾಗಿದೆ ಎಂದಿದ್ದಾರೆ.

ಕಂಪನಿಯ ಹೂಡಿಕೆ ಪ್ರಸ್ತಾವನೆಯನ್ನು ನಾವು ಸರಿಯಾಗಿ ಬಳಸಿಕೊಳ್ಳಬೇಕು. ಈ ನಿಟ್ಟಿನಲ್ಲಿ ಇನ್ವೆಸ್ಟ್ ಇಂಡಿಯಾ ಮುಂತಾದ ಉಪಕ್ರಮಗಳೊಂದಿಗೆ ಕೆಲಸ ಮಾಡಲಾಗುವುದು. ಇದು ಸಾಧ್ಯವಾದರೆ, ಏರೋಸ್ಪೇಸ್ ಮತ್ತು ರಕ್ಷಣಾ ವಲಯದಲ್ಲಿ ರಾಜ್ಯದ ಸ್ಥಾನವು ಮತ್ತಷ್ಟು ದೃಢವಾಗಲಿದೆ ಎಂದು ಅವರು ಭರವಸೆ ವ್ಯಕ್ತಪಡಿಸಿದ್ದಾರೆ. ನಿಯೋಗದಲ್ಲಿ ಕಂಪನಿಯ ಉನ್ನತಾಧಿಕಾರಿಗಳಾದ ಜೂಲಿಯಾ ಶ್ಮಿಟ್, ಫಿಲಿಪ್ ಜೆಸೆಲ್, ಜಯಂತ್ ಸಿಂಗ್ ಕೂಡ ಇದ್ದರು.

# ಗೃಹ ಇಲಾಖೆ ಅನುಮತಿ ಪಡೆದೇ ಪರಪ್ಪನ ಅಗ್ರಹಾರ ಕಾರಾಗೃಹದ ಮೇಲೆ ದಾಳಿ: ಪ್ರಿಯಾಂಕ್ ಖರ್ಗೆ





**ಕೈದಿಗಳಿಗೆ ಮೊಬೈಲ್ ಮತ್ತಿತರ ನಿಷೇಧಿತ ವಸ್ತುಗಳನ್ನು ತಲುಪಿಸಲು ಸಹಕರಿಸಿದ ಅಧಿಕಾರಿಗಳ ಅಮಾನತಿಗೆ ಸೂಚನೆ**

**ಬೆಂಗಳೂರು, ಆ.12:** ಪರಪ್ಪನ ಅಗ್ರಹಾರ ಕೇಂದ್ರ ಕಾರಾಗೃಹದ ಮೇಲೆ ಇತ್ತೀಚೆಗೆ ನಡೆದ ಸಿಸಿಬಿ ಅಧಿಕಾರಿಗಳ ದಿಢೀರ್ ದಾಳಿಯ ಹಿನ್ನೆಲೆಯಲ್ಲಿ ಗೃಹ ಸಚಿವ ಪ್ರಿಯಾಂಕ್ ಖರ್ಗೆ ಮಹತ್ವದ ಸ್ಪಷ್ಟನೆ ನೀಡಿದ್ದು, ಈ ದಾಳಿ ಗೃಹ ಇಲಾಖೆ ಅನುಮತಿ ನೀಡಿದ್ದು, ಮುಖ್ಯಮಂತ್ರಿಗಳ ಗಮನಕ್ಕೆ ತಂದು ಈ ಕ್ರಮ ಕೈಗೊಳ್ಳಲಾಗಿದೆ ಎಂದಿದ್ದಾರೆ.

ದಾಳಿ ವೇಳೆ ಪ್ರಜ್ವಲ್ ರೇವಣ್ಣ ಅವರ ಬ್ಯಾರಕ್‌ನಲ್ಲಿ ಮೊಬೈಲ್ ಪತ್ತೆಯಾಗಿರುವ ವಿಚಾರಕ್ಕೂ ಪ್ರತಿಕ್ರಿಯಿಸಿದ್ದು, ಸುಮಾರು ಎರಡು ವಾರಗಳ ಹಿಂದೆ ಖುದ್ದಾಗಿ ಪರಪ್ಪನ ಅಗ್ರಹಾರ ಜೈಲಿಗೆ ಭೇಟಿ ನೀಡಿದ್ದಾಗ ಕೆಲವು ಅಕ್ರಮಗಳು ಮತ್ತು ಭದ್ರತಾ ಲೋಪಗಳು ಕಂಡುಬಂದಿದ್ದವು. ಈ ಕುರಿತು ಅಧಿಕಾರಿಗಳಿಂದ ಸಂಪೂರ್ಣ ಮಾಹಿತಿ ಪಡೆದ ನಂತರ ಸಿಸಿಬಿ ಕಾರ್ಯಾಚರಣೆಗೆ ಸೂಚನೆ ನೀಡಲಾಯಿತು. ಜೈಲಿನಲ್ಲಿ ನಡೆದ ಅಕ್ರಮಗಳಿಗೆ ಹಾಗೂ ಕೈದಿಗಳಿಗೆ ಮೊಬೈಲ್‌ನಂತಹ ನಿಷೇಧಿತ ವಸ್ತುಗಳನ್ನು ತಲುಪಿಸಲು ಸಹಕರಿಸಿದ ಎಲ್ಲಾ ತಪ್ಪಿತಸ್ಥ ಅಧಿಕಾರಿಗಳನ್ನು ತಕ್ಷಣದಿಂದಲೇ ಜಾರಿಗೆ ಬರುವಂತೆ ಅಮಾನತುಗೊಳಿಸಲು ಸೂಚಿಸಲಾಗಿದೆ. ಪರಪ್ಪನ ಅಗ್ರಹಾರ ಮಾತ್ರವಲ್ಲದೆ, ರಾಜ್ಯದಾದ್ಯಂತ ಇರುವ ಎಲ್ಲಾ ಕಾರಾಗೃಹಗಳ ಮೇಲೆಯೂ ಇಂತಹ ನಿರಂತರ ತಪಾಸಣೆ ಮತ್ತು ಕಾರ್ಯಾಚರಣೆ ಮುಂದುವರಿಯಲಿದೆ ಎಂದು ಹೇಳಿದ್ದಾರೆ. ಕೆಲವು ಅಧಿಕಾರಿಗಳು ತಮ್ಮ ಹಳೆಯ ಚಾಳಿಯನ್ನು ಇನ್ನೂ ಮುಂದುವರಿಸುತ್ತಿದ್ದು, ಅವರ ವಿರುದ್ಧ ಶಿಸ್ತುಕ್ರಮ ಅನಿವಾರ್ಯವಾಗಿದೆ. ಗೃಹ ಖಾತೆ ವಹಿಸಿಕೊಂಡ ಕೇವಲ ಎರಡು ತಿಂಗಳಲ್ಲಿ ಇಷ್ಟು ದೊಡ್ಡ ಮಟ್ಟದ ಕಾರ್ಯಾಚರಣೆ ನಡೆಸಿ ಕ್ರಮ ಕೈಗೊಳ್ಳಲಾಗಿದೆ. ಅಧಿಕಾರಿಗಳನ್ನು ತಕ್ಷಣ ನೇಣಿಗೆ ಹಾಕಲು ಸಾಧ್ಯವಿಲ್ಲ; ಅವರ ವಿರುದ್ಧ ಸೇವಾ ವಜಾ ಸೇರಿದಂತೆ ಕಠಿಣ ಕ್ರಮ ಜರುಗಿಸಲು ಕಾನೂನುಬದ್ಧ ನಿಯಮ ಹಾಗೂ ಮಾನದಂಡಗಳಿದ್ದು, ಅದರಂತೆಯೇ ಸರ್ಕಾರ ಸೂಕ್ತ ಕ್ರಮ ಕೈಗೊಳ್ಳಲಿದೆ ಎಂದಿದ್ದಾರೆ.

## ಪ್ರಜ್ವಲ್ ರೇವಣ್ಣ ಬ್ಯಾರಕ್‌ನಲ್ಲಿ ಮೊಬೈಲ್ ವಶ

ಪರಪ್ಪನ ಅಗ್ರಹಾರ ಕೇಂದ್ರ ಕಾರಾಗೃಹಕ್ಕೆ ಕೇಂದ್ರ ಅಪರಾಧಿ ವಿಭಾಗ (ಸಿಸಿಬಿ)ದ ಪೊಲೀಸರು ದಿಢೀರ್ ದಾಳಿ ನಡೆಸಿದ ವೇಳೆ ಅತ್ಯಾಚಾರ ಪ್ರಕರಣದಲ್ಲಿ ಅಪರಾಧಿಯಾಗಿ ಜೈಲು ಸೇರಿರುವ ಪ್ರಜ್ವಲ್ ರೇವಣ್ಣ ಇರುವ ಬ್ಯಾರಕ್‌ನಲ್ಲಿ ಮೊಬೈಲ್ ಫೋನ್ ಪತ್ತೆಯಾಗಿದೆ ಎಂದು ತಿಳಿದುಬಂದಿದೆ. ಈ ವೇಳೆ ಮೊಬೈಲ್ ಫೋನ್ ವಶಪಡಿಸಿಕೊಳ್ಳಲಾಗಿದೆ ಎಂದು ಜೈಲು ಮತ್ತು ಸುಧಾರಣಾ ಸೇವೆಗಳ ಪೊಲೀಸ್ ಮಹಾನಿರ್ದೇಶಕ ಅಲೋಕ್ ಕುಮಾರ್ ತಿಳಿಸಿದ್ದಾರೆ. ಮಂಗಳವಾರ ಮಧ್ಯಾಹ್ನ ಸಿಸಿಬಿ ದಾಳಿ ನಡೆದಿದೆ. ಈ ಬಗ್ಗೆ ಪರಪ್ಪನ ಅಗ್ರಹಾರ ಪೊಲೀಸ್ ಠಾಣೆಯಲ್ಲಿ ದೂರು ದಾಖಲಾಗಿದೆ.



ಅಖಿಲ ಭಾರತ ಶಿಕ್ಷಕರ ಸಂಘದ ಅಧ್ಯಕ್ಷ ಬಸವರಾಜ ಗುರಿಕಾರ ಅವರು ಸಂಘದ ಇತರ ಪದಾಧಿಕಾರಿಗಳೊಂದಿಗೆ ಜಲಸಂಪನ್ಮೂಲ ಸಚಿವ ಎನ್ ಚಲುವರಾಯಸ್ವಾಮಿ ಅವರನ್ನು ನವದೆಹಲಿಯ ಕರ್ನಾಟಕ ಭವನದಲ್ಲಿ ಭೇಟಿಯಾಗಿದ್ದರು.

# ವಿಶ್ರಾಂತಿ ಆಲೋಚನೆ ಬಿಟ್ಟು ಸಿಎಂ ಜತೆ ಕೈಜೋಡಿಸಿ, ಪಕ್ಷ ಸಂಘಟನೆ ಮಾಡಿ

**ಮೈಸೂರು, ಆ.12:** ಸಿದ್ಧರಾಮಯ್ಯ ಅವರು ರಾಜಕೀಯದಿಂದ ವಿಶ್ರಾಂತಿ ಪಡೆಯುವ ಆಲೋಚನೆ ಬಿಟ್ಟು, ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರೊಂದಿಗೆ ಕೈಜೋಡಿಸಿ ಕಾಂಗ್ರೆಸ್ ಪಕ್ಷ ಸಂಘಟನೆಗೆ ಮುಂದಾಗಬೇಕು ಎಂದು ವಿಧಾನಸಭೆಯ ಮಾಜಿ ಸ್ಪೀಕರ್ ಕೆ.ಆರ್. ರಮೇಶ್ ಕುಮಾರ್ ಸಲಹೆ ನೀಡಿದ್ದಾರೆ. ಮೈಸೂರಿನಲ್ಲಿ ಆಯೋಜಿಸಲಾಗಿದ್ದ ಕಾರ್ಯಕ್ರಮವೊಂದರಲ್ಲಿ ಮಾತನಾಡಿದ ಅವರು, ಸಿದ್ದರಾಮಯ್ಯ ಕಾಂಗ್ರೆಸ್‌ಗೆ ಬರುವ ಮುನ್ನವೇ ಪಕ್ಷದ ಅಡಿಪಾಯ ಸಿದ್ಧವಾಗಿತ್ತು. ಅವರು ಈಗಾಗಲೇ ನಿರ್ಮಾಣಗೊಂಡಿದ್ದ ಮನೆಗೆ ಎಂಟ್ರಿ ಕೊಟ್ಟವರು. ಆದ್ದರಿಂದ, ತಾವು ನಿರ್ವಹಿಸಿದ ಅಧಿಕಾರ ಮುಗಿಯಿತು ಎಂದು ವಿಶ್ರಾಂತಿ ಪಡೆಯುವುದು ಸರಿಯಲ್ಲ. ಸಿದ್ದರಾಮಯ್ಯ ಅವರು ಪಕ್ಷಕ್ಕಾಗಿ ತಮ್ಮ ಕೊಡುಗೆಯನ್ನು ಮುಂದುವರಿಸಬೇಕು ಎಂದು ಪ್ರತಿಪಾದಿಸಿದರು. ಪಕ್ಷದ ಭವಿಷ್ಯ ಮತ್ತು ಬಲವರ್ಧನೆಯ ದೃಷ್ಟಿಯಿಂದ ಹಿರಿಯ ನಾಯಕರೆಲ್ಲರೂ ಒಗ್ಗಟ್ಟಿನಿಂದ ಶ್ರಮಿಸುವುದು ಅತ್ಯಗತ್ಯ ಎಂದ ರಮೇಶ್ ಕುಮಾರ್, ಡಿ.ಕೆ. ಶಿವಕುಮಾರ್ ಅವರ ಜೊತೆಗೂಡಿ ಸಿದ್ದರಾಮಯ್ಯನವರು ರಾಜ್ಯಾದ್ಯಂತ ಪ್ರವಾಸ ಮಾಡಿ ಪಕ್ಷವನ್ನು ಮತ್ತಷ್ಟು ಬಲಪಡಿಸಬೇಕು ಎಂದು ಆಗ್ರಹಿಸಿದರು.

# ಹೆದ್ದಾರಿ ಸಚಿವ ನಿತಿನ್ ಗಡ್ಕರಿ ಅವರನ್ನು ಭೇಟಿ ಮಾಡಿದ ರೈಲ್ವೆ ಸಚಿವ ವಿ.ಸೋಮಣ್ಣ



**ನವದೆಹಲಿ, ಆ.12:** ನವದೆಹಲಿಯಲ್ಲಿ ಕೇಂದ್ರ ರಸ್ತೆ ಹಾಗೂ ಹೆದ್ದಾರಿ ಸಚಿವ ನಿತಿನ್ ಗಡ್ಕರಿ ಅವರನ್ನು ಭೇಟಿಯಾಗಿ ತುಮಕೂರು ನಗರದ ರಾಷ್ಟ್ರೀಯ ಹೆದ್ದಾರಿ 206ರಲ್ಲಿ ಹೆಚ್ಚುತ್ತಿರುವ ಸಂಚಾರ ದಟ್ಟಣೆ ಮತ್ತು ರಸ್ತೆ ಸುರಕ್ಷತೆಯ ಸಮಸ್ಯೆಗಳನ್ನು ಪರಿಹರಿಸಲು ನಗರದ 5 ಪ್ರಮುಖ ಜಂಕ್ಷನ್‌ಗಳಲ್ಲಿ ರಸ್ತೆ ವಿಭಜಕಗಳನ್ನು ನಿರ್ಮಿಸಲು ಹಾಗೂ ಈ ಕಾಮಗಾರಿಗಳನ್ನು Tumakuru One-Time Improvement Works ಅಡಿಯಲ್ಲಿ Change of Scope (COS) ಮೂಲಕ ಕೈಗೊಳ್ಳುವಂತೆ ಮನವಿ ಮಾಡಲಾಯಿತು.

ವಸಂತ ನರಸಾಪುರ ಕೈಗಾರಿಕಾ ಪ್ರದೇಶ, ಬೆಂಗಳೂರು–ಚೆನ್ನೈ ಕೈಗಾರಿಕಾ ಕಾರಿಡಾರ್, HAL ಹೆಲಿಕಾಪ್ಟರ್ ತಯಾರಿಕಾ ಘಟಕ ಮತ್ತು ISRO ಕ್ಯಾಂಪಸ್‌ಗಳು ತುಮಕೂರು ನಗರದಲ್ಲಿ ಹಾದು ಹೋಗುವ NH–206ರ ಸಮೀಪ ದಲ್ಲಿದ್ದು, ಇದರಿಂದಾಗಿ ನಗರದಾದ್ಯಂತ ಸಂಚಾರಿ ದಟ್ಟಣೆ ಹೆಚ್ಚಳವಾಗುತ್ತಿದೆ. ಕೇವಲ 12 ಕಿ.ಮೀ. ಪ್ರಯಾಣಕ್ಕೆ 30–45 ನಿಮಿಷ ಬೇಕಾಗುತ್ತಿದ್ದು, ಆಂಬ್ಯುಲೆನ್ಸ್ ಸೇರಿದಂತೆ ತುರ್ತು ವೈದ್ಯಕೀಯ ಸೇವೆಗಳ ಮೇಲೂ ಪರಿಣಾಮ ಬೀರುತ್ತಿದೆ. ಆದ್ದರಿಂದ, ಡಾ. ಶಿವಕುಮಾರ್ ಸ್ವಾಮಿ ವೃತ್ತ, ಬಂಡಿಮನೆ ಚೌಲ್ಟ್ರಿ ವೃತ್ತ, ಟೌನ್‌ಹಾಲ್ ವೃತ್ತ, ಲಕ್ಕಪ್ಪ ವೃತ್ತ ಹಾಗೂ ರಿಂಗ್ ರೋಡ್ ಜಂಕ್ಷನ್‌ನಲ್ಲಿ ಗ್ರೇಡ್ ಸೆಪರೇಟರ್‌ಗಳನ್ನು ನಿರ್ಮಿಸುವಂತೆ ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರಕ್ಕೆ ನಿರ್ದೇಶನ ನೀಡಬೇಕೆಂದು ಸಚಿವರಲ್ಲಿ ಕೋರಲಾಯಿತು.

# ಖಾತೆ ಹಂಚಿಕೆಯಲ್ಲಿ ಸಿದ್ದರಾಮಯ್ಯ ಅನಗತ್ಯ ಪ್ರವೇಶ

**ಕುರುಬ ಸಮುದಾಯದಲ್ಲೂ ಅಸಮಾಧಾನ: ಮಾಜಿ ಎಂಎಲ್‌ಸಿ ಎಚ್.ವಿಶ್ವನಾಥ್ ವಾಗ್ದಾಳಿ**

**ಮೈಸೂರು, ಆ.12:** ಸಚಿವ ಸಂಪುಟ ವಿಸ್ತರಣೆ ಹಾಗೂ ಖಾತೆ ಹಂಚಿಕೆ ವಿಚಾರದಲ್ಲಿ ಮಾಜಿ ಮುಖ್ಯಮಂತ್ರಿ ಸಿದ್ದರಾಮಯ್ಯ ವಿರುದ್ಧ ಮಾಜಿ ಎಂಎಲ್‌ಸಿ ಎಚ್. ವಿಶ್ವನಾಥ್ ತೀವ್ರ ವಾಗ್ದಾಳಿ ನಡೆಸಿದ್ದಾರೆ. ಸಂಪುಟ ರಚನೆಯಲ್ಲಿ ಸಿದ್ದರಾಮಯ್ಯ ಅನಗತ್ಯವಾಗಿ ಮಧ್ಯಪ್ರವೇಶ ಮಾಡುತ್ತಿದ್ದಾರೆ ಎಂದು ಆರೋಪಿಸಿರುವ ಅವರು, ಇದರಿಂದ ಕುರುಬ ಸಮುದಾಯದಲ್ಲೂ ಅಸಮಾಧಾನ ಉಂಟಾಗಿದೆ ಎಂದಿದ್ದಾರೆ.

ಮೈಸೂರಿನ ಜಲದರ್ಶಿನಿ ಅತಿಥಿಗೃಹದಲ್ಲಿ ಸುದ್ದಿಗೋಷ್ಠಿ ನಡೆಸಿದ ವಿಶ್ವನಾಥ್, ಜಿಲ್ಲೆಗೆ ಸಚಿವ ಸಂಪುಟದಲ್ಲಿ ನಿರೀಕ್ಷಿತ ಪ್ರಾತಿನಿಧ್ಯ ಸಿಕ್ಕಿಲ್ಲ ಎಂದು ಅಸಮಾಧಾನ ವ್ಯಕ್ತಪಡಿಸಿದರು. ಯತೀಂದ್ರ ಸಿದ್ದರಾಮಯ್ಯ ಅವರಿಗೆ ಮೈಸೂರು ಜಿಲ್ಲಾ ಉಸ್ತುವಾರಿ ನೀಡಿರುವುದನ್ನೂ ಪ್ರಶ್ನಿಸಿದ ಅವರು, ದೊಡ್ಡ ಜಿಲ್ಲೆಯ ಜವಾಬ್ದಾರಿ ನಿರ್ವಹಿಸುವ ಅನುಭವ ಅವರಿಗಿಲ್ಲ ಎಂದು ಟೀಕಿಸಿದರು. ಪುತ್ರ ವ್ಯಾಮೋಹದಿಂದ ಸಿದ್ದರಾಮಯ್ಯ ಹೊರಬರಬೇಕು ಎಂದು ಸಲಹೆ ನೀಡಿದರು. ಹಿರಿಯ ಶಾಸಕ ತನ್ವೀರ್ ಸೇಠ್‌ಗೆ ಸಚಿವ ಸ್ಥಾನ ಕಲ್ಪಿಸಬೇಕು ಹಾಗೂ ಹಿರಿಯ ನಾಯಕರಾದ ಕೆ. ವೆಂಕಟೇಶ್ ಮತ್ತು ಮಹದೇವಪ್ಪರನ್ನು ಕಡೆಗಣಿಸಬಾರದು ಎಂದು ಒತ್ತಾಯಿಸಿದರು. ಸಚಿವರಿಗೆ ಇನ್ನೂ ಖಾತೆ ಹಂಚಿಕೆಯಾಗದಿರುವುದು ಸರ್ಕಾರದ ವೈಫಲ್ಯವಾಗಿದ್ದು, ಹೈಕಮಾಂಡ್ ಮಧ್ಯಪ್ರವೇಶಿಸಿ ಸಮಸ್ಯೆ ಬಗೆಹರಿಸಬೇಕು ಎಂದರು. ದೇವರಾಜ ಅರಸು ಅವರ ಸಾಧನೆಗೆ ಸಿದ್ದರಾಮಯ್ಯರನ್ನು ಹೋಲಿಸುವುದು ಸರಿಯಲ್ಲ, ಯಾವ ಆಯಾಮದಲ್ಲೂ ಸಿದ್ದು ಅರಸು ಅವರಿಗೆ ಸಮನಲ್ಲ ಎಂದ ವಿಶ್ವನಾಥ್, ಅರಸು ಜಾರಿಗೆ ತಂದ ಭೂ ಸುಧಾರಣಾ ಕ್ರಮಗಳನ್ನು ಸ್ಮರಿಸಿದ್ದಾರೆ.



Chief reporter : SANDEEP RENU ✆ 99728 72151 | Executive Editor : SHARAT JYOTSNA B.R ✆ 9886766483 ✉ vaarthe@gmail.com

Published from: K10,'A'/4, Khriki Extension, Malviya Nagar, New Delhi-110 017. Phone: 95-120-3917916-20

Printed at: Jyoti Printers, E-94, Sector 6, Noida, UP. Phone: 0120-4232687 Off : E-94,Sector 6, Noida,UP | RNI No. DELKAN/2003/10363

# ಇಂದಿನಿಂದ ವಿಧಾನಮಂಡಲ ಅಧಿವೇಶನ: ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಸರ್ಕಾರಕ್ಕೆ ಅಗ್ನಿಪರೀಕ್ಷೆ

**ಬೆಂಗಳೂರು, ಆ.12:** ಸಂಪುಟ ಪುನರ್ ರಚನೆ ಬಿಕ್ಕಟ್ಟು, ಖಾತೆ ಹಂಚಿಕೆ ಗೊಂದಲ, ಕಾಂಗ್ರೆಸ್ ಪಾಳಯದಲ್ಲಿನ ಬಂಡಾಯದ ನಡುವೆ ಗುರುವಾರ ವಿಧಾನ ಮಂಡಲದ ಉಭಯ ಸದನಗಳ ಮಳೆಗಾಲದ ಅಧಿವೇಶನ ಆರಂಭವಾಗಲಿದೆ.



ಡಿ.ಕೆ.ಶಿವಕುಮಾರ್ ಮುಖ್ಯಮಂತ್ರಿಯಾದ ಬಳಿಕ ಮೊದಲ ಅಧಿವೇಶನ ಇದಾಗಿದೆ. ಸಿದ್ದರಾಮಯ್ಯ ಮಾಜಿ ಮುಖ್ಯಮಂತ್ರಿ ಯಾದ ಬಳಿಕ ನಡೆಯುತ್ತಿರುವ ಮೊದಲ ಅಧಿವೇಶನವಾಗಿದೆ. ಹಾಗೆಯೇ ಶಾಸಕರಾಗಿದ್ದ ಕೆಲವರು ಸಚಿವರಾಗಿದ್ದಾರೆ. ಸಚಿವರಾಗಿದ್ದ ಕೆಲವರು ಮಾಜಿ ಸಚಿವರಾಗಿದ್ದಾರೆ. ಹೀಗಾಗಿ ಅವರ ಸ್ಥಾನಗಳು ಬದಲಾಗಿರುವುದರಿಂದ ಅಧಿವೇಶನ ತೀವ್ರ ಕುತೂಹಲ ಮೂಡಿಸಿದೆ.

ರಾಜ್ಯದ ಜ್ವಲಂತ ಸಮಸ್ಯೆಗಳು, ವಿವಿಧ ಸಚಿವಾಲಯಗಳಲ್ಲಿ ಏನಾಗುತ್ತಿದೆ ಎಂಬ ಮಾಹಿತಿಯೇ ಇಲ್ಲದಂತಹ ಪರಿಸ್ಥಿತಿ ನಡುವೆ ಅಧಿವೇಶನ ನಡೆಯುತ್ತಿದೆ. ಯುದ್ಧ ಕಾಲದಲ್ಲಿ ಶಸ್ತ್ರಾಭ್ಯಾಸ ಎಂಬಂತೆ ಅಧಿವೇಶನಕ್ಕೂ ಒಂದು ದಿನ ಮುಂಚೆ ಸಚಿವ ಖಾತೆಗಳ ಹಂಚಿಕೆಯಾಗಿದೆ. ಖಾತೆಗಳ ಅಸಮಾಧಾನ ಇನ್ನೂ ನಿಂತಿಲ್ಲ.

ಪ್ರತಿಪಕ್ಷಗಳ ಅಸ್ತ್ರಕ್ಕೆ ಪ್ರತ್ಯಸ್ತ್ರ ಹೂಡುವುದು ಅಷ್ಟೇನು ಸುಲಭವಲ್ಲ. ಎಂತಹ ಅನುಭವವಿದ್ದರೂ ವಿಪಕ್ಷಗಳನ್ನು ಎದುರಿಸಲು ತಕ್ಕಮಟ್ಟಿಗೆ ಸಿದ್ಧತೆ ಅಗತ್ಯ. ಆದರೆ ಯುದ್ಧಕಾಲದಲ್ಲಿ ಶಸ್ತ್ರಾಭ್ಯಾಸ ಮಾಡಿ ಸಂಸದೀಯ ಸಮರದಲ್ಲಿ ಆಡಳಿತ ಪಕ್ಷ ಗೆಲುವು ಸಾಧಿಸಲಿದೆಯೇ ಎಂಬ ಪ್ರಶ್ನೆ ಎದ್ದಿದೆ. ಅಪಾರ ಅನುಭವವಿರುವ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರೇ ಸಂಸದೀಯ ವ್ಯವಹಾರಗಳ ಸಚಿವ ಸ್ಥಾನವನ್ನು ವಹಿಸಿಕೊಂಡಿದ್ದಾರೆ. ಮುಖ್ಯಮಂತ್ರಿಯಾಗಿ ಅವರಿಗೆ ಬೇರೆ ಜವಾಬ್ದಾರಿಗಳು ಸಹ ಇವೆ. ಸರ್ಕಾರದ ಮೇಲೆ ಮುಗಿಬೀಳಲು ವಿಪಕ್ಷಗಳಿಗೆ ಬಹುಶಃ ಇದಕ್ಕಿಂತ ಉತ್ತಮ ಅವಕಾಶ ಮತ್ತೊಂದಿಲ್ಲ.

ಅಧಿವೇಶನದ ಹಿಂದಿನ ದಿನ ಖಾತೆಗಳನ್ನು ಹಂಚಿದ ಪರಿಸ್ಥಿತಿ ಹಿಂದೆಂದೂ ಎದುರಾಗಿರಲಿಲ್ಲ. ಆಡಳಿತ ಮತ್ತು ಪ್ರತಿಪಕ್ಷಗಳ ಸಾಲಿನಲ್ಲಿ ಘಟಾನುಘಟಿ ಸಂಸದೀಯಪಟುಗಳಿದ್ದಾರೆ. ಆದರೆ ಅತ್ಯಂತ ವಿಲಕ್ಷಣ ಪರಿಸ್ಥಿತಿಯಯಲ್ಲಿ ಅಧಿವೇಶನ ನಡೆಯುತ್ತಿದ್ದು, ಇದು ಭಾರೀ ಕುತೂಹಲಕ್ಕೆ ಕಾರಣವಾಗಿದೆ. ಅಂತೂ ಡಿ.ಕೆ. ಶಿವಕುಮಾರ್ ಸರ್ಕಾರಕ್ಕೆ ಅಗ್ನಿ ಪರೀಕ್ಷೆ ಎದುರಾಗಿದೆ

ರಾಜ್ಯದಲ್ಲಿನ ಭೀಕರ ಬರ ಪರಿಸ್ಥಿತಿ, ಕೆಲವೆಡೆ ಉಂಟಾಗಿರುವ ಅತಿವೃಷ್ಟಿ, ಬಿಡದಿ ಉಪನಗರ ಯೋಜನೆ ವಿರೋಧಿಸಿ ರೈತರು ನಡೆಸುತ್ತಿರುವ ಹೋರಾಟ, ತಮಿಳುನಾಡಿಗೆ ಕಾವೇರಿ ನದಿ ನೀರು ಹಂಚಿಕೆ ವಿಚಾರ, ಬಿಎಂಐಸಿ ಯೋಜನೆ, ನೈಸ್ ಸಂಸ್ಥೆಯಿಂದ ನಿಯಮ ಬಾಹಿರವಾಗಿ ಟೋಲ್ ಸಂಗ್ರಹಿಸುತ್ತಿರುವ ಆರೋಪ, ಸಂಪುಟ ವಿಸ್ತರಣೆಯ ಅಸಮಾಧಾನ, ಖಾತೆ ಹಂಚಿಕೆ ವಿಳಂಬ ಮೊದಲಾದ ವಿಚಾರಗಳು ಅಧಿವೇಶನದಲ್ಲಿ ಪ್ರಮುಖವಾಗಿ ಪ್ರಸ್ತಾಪಗೊಂಡು ಆಡಳಿತ ಮತ್ತು ಪ್ರತಿಪಕ್ಷಗಳ ನಡುವೆ ಆರೋಪ–ಪ್ರತ್ಯಾರೋಪ ತಾರಕಕ್ಕೇರುವ ಸಾಧ್ಯತೆಗಳಿವೆ.

ರಾಜ್ಯ ಸರ್ಕಾರ ಹಾಗೂ ಆಡಳಿತಾರೂಢ ಕಾಂಗ್ರೆಸ್ ಪಕ್ಷವನ್ನು ಇಕ್ಕಟ್ಟಿಗೆ ಸಿಲುಕಿಸಲು ವಿರೋಧ ಪಕ್ಷಗಳಾದ ಬಿಜೆಪಿ ಮತ್ತು ಜೆಡಿಎಸ್ ಸಜ್ಜಾಗಿವೆ. ಅದೇ ರೀತಿ ಸರ್ಕಾರದ ಸಮರ್ಥನೆಗೆ ಕಾಂಗ್ರೆಸ್ ಪಕ್ಷವೂ ಕೂಡ ಸಿದ್ಧತೆ ನಡೆಸಿದೆ. ವಾಲ್ಮೀಕಿ ಅಭಿವೃದ್ಧಿ ನಿಗಮದ ಹಣದ ಅವ್ಯವಹಾರದ ಆರೋಪ ಎದುರಿಸುತ್ತಿರುವ ನಾಗೇಂದ್ರ ಅವರನ್ನು ಸಂಪುಟಕ್ಕೆ ಸೇರ್ಪಡೆ ಮಾಡಿಕೊಂಡಿರುವುದಕ್ಕೆ ಪ್ರತಿಪಕ್ಷ ತೀವ್ರ ವಿರೋಧ ವ್ಯಕ್ತಪಡಿಸಿದ್ದು, ಸಂಪುಟದಿಂದ ಕೈಬಿಡುವಂತೆ ಆಗ್ರಹಿಸುತ್ತಿದೆ. ಈ ವಿಚಾರವನ್ನು ಸದನದಲ್ಲಿ ಪ್ರಮುಖವಾಗಿ ಪ್ರಸ್ತಾಪಿಸುವುದಾಗಿ ಪ್ರಕಟಿಸಿದೆ. ಆ.27ರವರೆಗೆ 10 ದಿನಗಳ ಕಾಲ ಅಧಿವೇಶನ ನಡೆಯಲಿದ್ದು, ವಿಧಾನಸಭೆ ಮತ್ತು ವಿಧಾನ ಪರಿಷತ್ತಿನ ಸಚಿವಾಲಯ ಸಕಲ ಸಿದ್ಧತೆ ಮಾಡಿಕೊಂಡಿದೆ. ವಿಧಾನಸೌಧದ ಸಿದ್ಧತಾ ಕಾರ್ಯ ಭರದಿಂದ ಸಾಗಿದೆ.

ನಿರೀಕ್ಷೆಯಂತೆ ಮೊದಲ ದಿನ ಆರಂಭದಲ್ಲಿ ಅಗಲಿದ ಗಣ್ಯರಿಗೆ ಶ್ರದ್ಧಾಂಜಲಿ ಸಲ್ಲಿಸಲಾಗುತ್ತದೆ. ಅನಂತರ ಸರ್ಕಾರದ ಅಧಿಕೃತ ಕಾರ್ಯಕಲಾಪಗಳು ನಡೆಯಲಿವೆ. ಬರಪೀಡಿತ ಪ್ರದೇಶಗಳನ್ನು ಘೋಷಣೆ ಮಾಡಿ ಬರಪರಿಹಾರ ನೀಡುತ್ತಿಲ್ಲ. ರೈತರು ಬೆಳೆ ಕಳೆದುಕೊಂಡು ಕಂಗಾಲಾಗಿದ್ದಾರೆ. ಕುಡಿಯುವ ನೀರಿಗೂ ಸಮಸ್ಯೆ ಎದುರಾಗುವ ಸಾಧ್ಯತೆಗಳಿದ್ದು, ಈ ವಿಚಾರದಲ್ಲಿ ಪಕ್ಷಭೇದ ಮರೆತು ಚರ್ಚೆ ನಡೆಸುವ ಸಾಧ್ಯತೆಗಳಿವೆ.

ಬಿಡದಿ ಉಪನಗರ ಯೋಜನೆ ವಿಚಾರದಲ್ಲಿ ರೈತರಿಗೆ ಬೆಂಬಲ ವ್ಯಕ್ತಪಡಿಸಿ ಪ್ರತಿಭಟಿಸುತ್ತಿರುವ ವಿರೋಧ ಪಕ್ಷಗಳು ಪ್ರಮುಖವಾಗಿ ಈ ವಿಷಯ ಪ್ರಸ್ತಾಪಿಸಲಿವೆ. ಈ ವಿಚಾರದಲ್ಲಿ ಆಡಳಿತ ಮತ್ತು ಪ್ರತಿಪಕ್ಷಗಳ ನಡುವೆ ವಾಗ್ವಾದ ಕಾವೇರಿದ ದನಿಯಲ್ಲಿ ನಡೆಯುವ ಸಾಧ್ಯತೆಗಳು ಹೆಚ್ಚಾಗಿವೆ. ಸಂಕಷ್ಟ ಪರಿಸ್ಥಿತಿಯಲ್ಲೂ ತಮಿಳುನಾಡಿಗೆ ಕಾವೇರಿ ನದಿಯಿಂದ ನೀರು ಬಿಡಲು ಆದೇಶ ನೀಡಿರುವ ವಿಚಾರವೂ ಪ್ರತಿಧ್ವನಿಸಲಿದ್ದು, ಮೇಕೆದಾಟು ಯೋಜನೆ ಅನುಷ್ಠಾನಕ್ಕೆ ಆಗ್ರಹ ಕೇಳಿಬರಲಿದೆ.

ಅಲ್ಲದೆ, ಸಂಪುಟ ವಿಸ್ತರಣೆ ಬೆನ್ನಲ್ಲೆ ಕಾಂಗ್ರೆಸ್‌ನಲ್ಲಿ ಉಂಟಾಗಿರುವ ಅಸಮಾಧಾನ, ಖಾತೆ ಹಂಚಿಕೆ ವಿಳಂಬದ ವಿಚಾರವೂ ಸಂದರ್ಭೋಚಿತವಾಗಿ ಪ್ರಸ್ತಾಪವಾಗುವ ಸಾಧ್ಯತೆಗಳು ಹೆಚ್ಚಾಗಿವೆ. ಗ್ಯಾರಂಟಿ ಸವಲತ್ತುಗಳು ಫಲಾನುಭವಿಗಳಿಗೆ ಸಕಾಲದಲ್ಲಿ ತಲುಪದಿರುವುದು, ಅಭಿವೃದ್ಧಿ ಕಾರ್ಯಗಳಿಗೆ ಅನುದಾನ ನೀಡದ ಆರೋಪ, ಮತದಾರರ ಪಟ್ಟಿ ವಿಶೇಷ ಪರಿಷ್ಕರಣೆ ಸೇರಿಂತೆ ನಾಡು ಎದುರಿಸುತ್ತಿರುವ ಹತ್ತು ಹಲವು ಜ್ವಲಂತ ಸಮಸ್ಯೆಗಳ ಮೇಲೆ ಶಾಸಕರು ಬೆಳಕು ಚೆಲ್ಲಿ ಸರ್ಕಾರದಿಂದ ಸೂಕ್ತ ಉತ್ತರ ಪಡೆಯುವ ಸಾಧ್ಯತೆಗಳಿವೆ.

# ರಾಜಕಾರಣಿಗಳು ರಾಜ್ಯದ ಹಿತದ ವಿಚಾರದಲ್ಲಿ ಗಂಭೀರವಾಗಿ ನಡೆದುಕೊಳ್ಳಬೇಕು: ಚೆಲುವರಾಯಸ್ವಾಮಿ

**ಬೆಂಗಳೂರು, ಆ.12:** ಕಾವೇರಿ ವಿಚಾರದಲ್ಲಿ ಮಾಜಿ ಮುಖ್ಯಮಂತ್ರಿ ಎಚ್.ಡಿ. ಕುಮಾರಸ್ವಾಮಿ ಮಾಡಿರುವ ಟೀಕೆಗಳಿಗೆ ಪ್ರತಿಕ್ರಿಯಿಸಿದ ಚೆಲುವರಾಯಸ್ವಾಮಿ, ಅವರ ಹೇಳಿಕೆಗಳು ಹಳಸಿಹೋಗಿವೆ. ರಾಜಕಾರಣಿಗಳು ರಾಜ್ಯದ ಹಿತದ ವಿಚಾರದಲ್ಲಿ ಗಂಭೀರವಾಗಿ ನಡೆದುಕೊಳ್ಳಬೇಕು ಎಂದರು.



"ರಾಜ್ಯ ಸರ್ಕಾರ ಹೋರಾಟ ಮಾಡಲಿ, ನಾವು ನಿಂತು ಸಲಹೆ ನೀಡುತ್ತೇವೆ" ಎಂಬ ನಿಲುವು ಗೌರವಯುತ. ಆದರೆ ಕೇವಲ ಟೀಕೆ–ಟಿಪ್ಪಣಿ ಮಾಡಿಕೊಂಡು ರಾಜಕಾರಣ ಮಾಡುವುದನ್ನು ಒಪ್ಪಲು ಸಾಧ್ಯವಿಲ್ಲ ಎಂದು ಅವರು ಹೇಳಿದರು.

ಕಾವೇರಿ ನೀರು ವಿಚಾರವಾಗಿ ಮೂರು–ನಾಲ್ಕು ಬಾರಿ CWRC ಸಭೆಗಳು ನಡೆದಿವೆ. ಎರಡು–ಮೂರು ಬಾರಿ ಯಾವುದೇ ಆದೇಶ ಬಂದಿರಲಿಲ್ಲ. ಇದೀಗ ಆದೇಶ ಬರಲು ಕರ್ನಾಟಕದ ವಾದವೂ ಪ್ರಮುಖ ಕಾರಣವಾಗಿದೆ. ಹೀಗಿರುವಾಗ ಸರ್ಕಾರಕ್ಕೆ ಪೂರ್ವಸಿದ್ಧತೆ ಇರಲಿಲ್ಲ ಎಂಬ ಆರೋಪ ಸರಿಯಲ್ಲ ಎಂದು ಕುಮಾರಸ್ವಾಮಿ ವಿರುದ್ಧ ತೀವ್ರ ವಾಗ್ದಾಳಿ ನಡೆಸಿದರು.

"ಕುಮಾರಸ್ವಾಮಿ ಅವರಿಗೆ ಮಾಹಿತಿ ಇಲ್ಲವೇ?" ಎಂದು ಪ್ರಶ್ನಿಸಿದ ಅವರು, ರಾಜ್ಯದ ಹಿತಕ್ಕಾಗಿ ಎಲ್ಲರೂ ಒಗ್ಗೂಡಿ ನೀರಿನ ಹೋರಾಟ ನಡೆಸಬೇಕು. ರೈತರ ಹಿತ ಕಾಪಾಡುವುದು ಸರ್ಕಾರದ ಶೇ.100ರ ಬದ್ಧತೆಯಾಗಿದೆ. ರೈತರ ಹಿತಕ್ಕಾಗಿ ಸುಪ್ರೀಂ ಕೋರ್ಟ್‌ವರೆಗೂ ಹೋಗುತ್ತೇವೆ ಎಂದರು.

ಕಾವೇರಿ ವಿಚಾರದಲ್ಲಿ ರಾಜಕೀಯ ಮಾಡದೆ ರಾಜ್ಯದ ಹಿತಾಸಕ್ತಿಯನ್ನು ಮುಂದಿಟ್ಟುಕೊಂಡು ಕೆಲಸ ಮಾಡಬೇಕು. ಕೇಂದ್ರ ಸರ್ಕಾರಕ್ಕೂ ಮನವಿ ಮಾಡಲಾಗುವುದು. ಸಂಕಷ್ಟ ಸೂತ್ರದ ಬಗ್ಗೆ ಮಾಧ್ಯಮಗಳ ಮುಂದೆ ಎಲ್ಲವನ್ನೂ ಚರ್ಚಿಸಲು ಸಾಧ್ಯವಿಲ್ಲ. ಅದರ ಬಗ್ಗೆ ತಮಗೂ ಕೆಲವು ಮಾಹಿತಿಯಿದೆ ಎಂದು ಚೆಲುವರಾಯಸ್ವಾಮಿ ಹೇಳಿದರು.

# ಕಾಮಗಾರಿಗಳ ಗುಣಮಟ್ಟ, ಅನುಷ್ಠಾನದ ಮೇಲೆ ನಿಗಾ ಇಡಿ ಮಹಾನಗರಪಾಲಿಕೆಗಳಿಗೆ ಸಚಿವ ಯತೀಂದ್ರ ಸೂಚನೆ



**ಬೆಂಗಳೂರು, ಆ.12:** ನಗರಗಳ ಬೆಳವಣಿಗೆಗೆ ಅನುಗುಣವಾಗಿ ಮೂಲಸೌಕರ್ಯಗಳನ್ನು ಬಲಪಡಿಸುವುದು, ನಾಗರಿಕರಿಗೆ ತ್ವರಿತ ಹಾಗೂ ಪರಿಣಾಮಕಾರಿ ಸೇವೆಗಳನ್ನು ಒದಗಿಸುವುದು ಮತ್ತು ತ್ಯಾಜ್ಯ ನಿರ್ವಹಣೆಯನ್ನು ವೈಜ್ಞಾನಿಕ ಹಾಗೂ ಸುಸ್ಥಿರಗೊಳಿಸುವುದು ಸರ್ಕಾರದ ಪ್ರಮುಖ ಆದ್ಯತೆಯಾಗಿದೆ. ಈ ನಿಟ್ಟಿನಲ್ಲಿ ಮಹಾನಗರ ಪಾಲಿಕೆಗಳು ತಮ್ಮ ವ್ಯಾಪ್ತಿಯಲ್ಲಿ ಕೈಗೊಳ್ಳುವ ಕಾಮಗಾರಿಗಳ ಗುಣಮಟ್ಟ ಹಾಗೂ ಅನುಷ್ಠಾನದ ಮೇಲೆ ವಿಶೇಷ ಗಮನಹರಿಸುವಂತೆ ನಗರಾಭಿವೃದ್ಧಿ ಸಚಿವ ಡಾ. ಯತೀಂದ್ರ ಸಿದ್ದರಾಮಯ್ಯ ಸೂಚನೆ ನೀಡಿದ್ದಾರೆ.

ನಗರದ ತಮ್ಮ ಗೃಹ ಕಚೇರಿಯಲ್ಲಿ ಮಹಾತ್ಮ ಗಾಂಧಿ ನಗರ ವಿಕಾಸ ಯೋಜನೆ (ಹಂತ–2)ರ ರಾಜ್ಯ ಮಟ್ಟದ ಸಮಿತಿ ಸಭೆಯಲ್ಲಿ ಅಧ್ಯಕ್ಷತೆ ವಹಿಸಿ ಮಾತನಾಡಿ, ಪ್ರತಿಯೊಂದು ಮಹಾನಗರ ಪಾಲಿಕೆಯ ವಿವರಗಳು, ಸಾರ್ವಜನಿಕ ಸೇವೆಗಳು ಹಾಗೂ ಅಗತ್ಯ ಮಾಹಿತಿಯನ್ನು ಜನರಿಗೆ ಸುಲಭವಾಗಿ ತಲುಪಿಸುವ ಉದ್ದೇಶದಿಂದ ವಿಶೇಷ ಮೊಬೈಲ್ ಆಯಪ್/ಸಾಫ್ಟ್‌ವೇರ್ ಅಭಿವೃದ್ಧಿ ಪಡಿಸುವಂತೆ ತಿಳಿಸಿದ್ದಾರೆ.ಎಲ್ಲಾ ಮಹಾನಗರ ಪಾಲಿಕೆಗಳಲ್ಲಿ ಉತ್ಪತ್ತಿಯಾಗುವ ಕಸದ ಪ್ರಮಾಣವನ್ನು ಆಧರಿಸಿ, ಅದಕ್ಕಿಂತ ಹೆಚ್ಚಿನ ಸಾಮರ್ಥ್ಯ ಹೊಂದಿರುವ ವೇಸ್ಟ್ ಪ್ರೊಸೆಸಿಂಗ್ ಯೂನಿಟ್‌ಗಳನ್ನು ಸ್ಥಾಪಿಸುವಂತೆ ಅಧಿಕಾರಿಗಳಿಗೆ ನಿರ್ದೇಶನ ನೀಡಿದ್ದಾರೆ. ತ್ಯಾಜ್ಯವನ್ನು ಮೂಲದಲ್ಲಿಯೇ ವೈಜ್ಞಾನಿಕವಾಗಿ ವಿಂಗಡಿಸಿ ಸಂಸ್ಕರಿಸುವ ನಿಟ್ಟಿನಲ್ಲಿ ಅಗತ್ಯವಿರುವ ಸೆಗ್ರಿಗೇಟಿಂಗ್ ಯಂತ್ರಗಳನ್ನು ಖರೀದಿಸಲು ಆಡಳಿತಾತ್ಮಕ ತಿಳಿಸಲಾಗಿದೆ. ಹಾಸನ ಮಹಾನಗರ ಪಾಲಿಕೆಯ ಮೂಲಭೂತ ಸೌಕರ್ಯಗಳ ಸಮಗ್ರ ಅಭಿವೃದ್ಧಿಗಾಗಿ 185 ಕೋಟಿ ರೂಪಾಯಿ ಮೊತ್ತದ ವಿವಿಧ ಕಾಮಗಾರಿಗಳ ಕ್ರಿಯಾ ಯೋಜನೆಗೆ ಅನುಮೋದನೆ ನೀಡಲಾಗಿದೆ ಎಂದು ಯತೀಂದ್ರ ಸಿದ್ದರಾಮಯ್ಯ ಮಾಹಿತಿ ನೀಡಿದ್ದಾರೆ.

ತುಮಕೂರು ಮಹಾನಗರ ಪಾಲಿಕೆಗೆ ಹಂಚಿಕೆಯಾಗಿರುವ ಅನುದಾನದಲ್ಲಿ 6 ಕೋಟಿ ರೂಪಾಯಿ ಮೊತ್ತದ ಬದಲಿ ಕಾಮಗಾರಿಗಳು (ನೀರು ಸರಬರಾಜು ಸರಬರಾಜು ವ್ಯವಸ್ಥೆಯ ಸುಧಾರಣೆಗಾಗಿ ಬಿಎಂ ಪಾಳ್ಯ ಮತ್ತು ಶೆಟ್ಟಿಹಳ್ಳಿಯಲ್ಲಿ ರೂ ಮೇಲ್ಮಟ್ಟದ ಜಲಸಂಗ್ರಾಹರಗಳ ನಿರ್ಮಾಣ ಕಾಮಗಾರಿ, ಪಂಪಿಂಗ್ ಯಂತ್ರಗಳು, ಹಾಗೂ ಏರು ಕೊಳವೆ ಮಾರ್ಗ ಅಳವಡಿಸುವ ಕಾಮಗಾರಿ) ಕ್ರಿಯಾಯೋಜನೆ ಸಿದ್ಧಪಡಿಸುವಂತೆ ತಿಳಿಸಿದ್ದಾರೆ.

ಸಭೆಯಲ್ಲಿ ರಾಜ್ಯದ ಮಹಾನಗರ ಪಾಲಿಕೆಗಳ ವ್ಯಾಪ್ತಿಯಲ್ಲಿ ಕೈಗೊಳ್ಳಲಾಗುತ್ತಿರುವ ಮೂಲಭೂತ ಸೌಕರ್ಯ ಹಾಗೂ ಅಭಿವೃದ್ಧಿ ಕಾಮಗಾರಿಗಳ ಕುರಿತು ಸಮಗ್ರವಾಗಿ ಚರ್ಚಿಸಿ, ನಗರಗಳ ಸಮಗ್ರ ಅಭಿವೃದ್ಧಿ, ನಾಗರಿಕ ಸೇವೆಗಳ ಸುಧಾರಣೆ ಹಾಗೂ ವೈಜ್ಞಾನಿಕ ತ್ಯಾಜ್ಯ ನಿರ್ವಹಣೆಗೆ ಸಂಬಂಧಿಸಿದಂತೆ ಹಲವು ಮಹತ್ವದ ನಿರ್ಧಾರಗಳನ್ನು ಕೈಗೊಳ್ಳಲಾಯಿತು.ಈ ವೇಳೆ ನಗರಾಭಿವೃದ್ಧಿ ಇಲಾಖೆಯ ಕಾರ್ಯದರ್ಶಿ ಬಿ.ಬಿ. ಕಾವೇರಿ, ಪೌರಾಡಳಿತ ನಿರ್ದೇಶನಾಲಯದ ನಿರ್ದೇಶಕ ಪಿ.ಎನ್. ರವೀಂದ್ರ, ಜಂಟಿ ನಿರ್ದೇಶಕ ತುಷಾರಾಮಣಿ ಹಾಗೂ ಇಲಾಖೆಯ ಹಿರಿಯ ಅಧಿಕಾರಿಗಳು ಉಪಸ್ಥಿತರಿದ್ದರು.

# ಕಾವೇರಿ: ವಕೀಲರನ್ನು ಕತ್ತಲೆಯಲ್ಲಿಟ್ಟ ರಾಜ್ಯ ಸರ್ಕಾರ– ಕೇಂದ್ರ ಸಚಿವ ಎಚ್.ಡಿ.ಕುಮಾರಸ್ವಾಮಿ ಗಂಭೀರ ಆರೋಪ

## ಕಾವೇರಿ ಬಿಕ್ಕಟ್ಟು ನಿರ್ವಹಣೆಯಲ್ಲಿ ರಾಜ್ಯ ಕಾಂಗ್ರೆಸ್ ಸರಕಾರ ಸಂಪೂರ್ಣ ವಿಫಲ

**ನವದೆಹಲಿ, ಆ.12:** ಕಾವೇರಿ ವಿಚಾರದಲ್ಲಿ ನಿರಂತರವಾಗಿ ತಪ್ಪು ಹೆಜ್ಜೆಗಳನ್ನು ಇರಿಸುತ್ತಿರುವ ರಾಜ್ಯ ಕಾಂಗ್ರೆಸ್ ಸರ್ಕಾರವು ನಮ್ಮ ಕಾನೂನು ಪಂಡಿತರನ್ನು ಕತ್ತಲೆಯಲ್ಲಿಟ್ಟಿದೆ ಎಂದು ಕೇಂದ್ರ ಸಚಿವ ಎಚ್.ಡಿ.ಕುಮಾರಸ್ವಾಮಿ ಅವರು ಗಂಭೀರ ಆರೋಪ ಮಾಡಿದರು.



ನವದೆಹಲಿಯಲ್ಲಿ ಮಾಧ್ಯಮಗೋಷ್ಠಿಯನ್ನು ಉದ್ದೇಶಿಸಿ ಮಾತನಾಡಿದ ಕೇಂದ್ರ ಸಚಿವರು; ರಾಜ್ಯದ ಪರವಾಗಿ ಸುಪ್ರೀಂ ಕೋರ್ಟ್ ಮತ್ತು ಪ್ರಾಧಿಕಾರ, ಸಮಿತಿಗಳ ಮುಂದೆ ರಾಜ್ಯದ ಪರವಾಗಿ ವಾದ ಮಾಡುತ್ತಿರುವ ಹಿರಿಯ ವಕೀಲರನ್ನು ಸರ್ಕಾರ ಗೌರವಯುತವಾಗಿ ನಡೆಸಿಕೊಳ್ಳುತ್ತಿಲ್ಲ ಎಂದು ಅತೀವ ಬೇಸರ ವ್ಯಕ್ತಪಡಿಸಿದರು.

ನವದೆಹಲಿಯ ಕರ್ನಾಟಕ ಭವನದಲ್ಲಿ ಮುಖ್ಯಮಂತ್ರಿಗಳು ಕರೆದಿದ್ದ ಸಂಸದರ ಸಭೆಯಲ್ಲಿ ಹಿರಿಯ ವಕೀಲ ಮೋಹನ್ ಕಾತರಕಿ ಅವರಿಗೆ ಕೂರಲು ಕುರ್ಚಿಯನ್ನೇ ನೀಡಲಿಲ್ಲ. ಅವರು ಬೇಸರದಿಂದ ಸಭೆಯಿಂದ ಹೊರಟು ಹೋದ ಬಗ್ಗೆ ಮಾಧ್ಯಮಗಳು ವರದಿ ಮಾಡಿವೆ. ಅದಾದ ಮೇಲೆ ಬೆಂಗಳೂರಿನ ಕೃಷ್ಣಾ ಕಚೇರಿಯಲ್ಲಿ ನಡೆದ ಸರ್ವಪಕ್ಷ ಸಭೆಯಲ್ಲಿ ಕೂಡ ಕಾನೂನು ಪಂಡಿತರನ್ನು ಮುಖ್ಯಮಂತ್ರಿ ಸರಿಯಾಗಿ ನಡೆಸಿಕೊಳ್ಳಲಿಲ್ಲ. ಸಭೆಗೆ ಆರಂಭದಲ್ಲಿಯೇ ಅವರ ಅಭಿಪ್ರಾಯವನ್ನು ಪಡೆಯಬೇಕಿತ್ತು. ಮುಂದಾಲೋಚನೆ, ದೂರದೃಷ್ಟಿ ಇಲ್ಲದೆ ನಮ್ಮ ರಾಜ್ಯದ ಸರ್ಕಾರ ಕೆಲಸ ಮಾಡುತ್ತಿದೆ ಎನ್ನುವುದಕ್ಕೆ ಅದು ಸ್ಪಷ್ಟ ನಿದರ್ಶನ. ಇಂಥ ಸಭೆ ಕರೆದಾಗ ಕಾನೂನು ವಿಚಾರ, ತಾಂತ್ರಿಕ ವಿಚಾರಗಳನ್ನು ಸಭೆಯ ಮುಂದೆ ಮಂಡಿಸಬೇಕಿತ್ತು. ಮುಖ್ಯಮಂತ್ರಿಗಳು ಅದನ್ನು ಮಾಡದೇ ತಾವೇ ಸರ್ವವನ್ನೂ ಬಲ್ಲವರಂತೆ ಮಾತನಾಡುತ್ತ ಹೋದರು. ಕಾನೂನು ಪರಿಣಿತರನ್ನು ಹೀಗೆ ನಿರ್ಲಕ್ಷ್ಯ ಮಾಡಿದರೆ ಹೇಗೆ ಎಂದು ಕೇಂದ್ರ ಸಚಿವ ಕುಮಾರಸ್ವಾಮಿ ಖಾರವಾಗಿ ಪ್ರಶ್ನಿಸಿದರು

ಕಾವೇರಿ ನದಿ ನೀರಿನ ಬಿಕ್ಕಟ್ಟು ನಿರ್ವಹಣೆಯಲ್ಲಿ ರಾಜ್ಯ ಸರ್ಕಾರ ಸಂಪೂರ್ಣ ವಿಫಲವಾಗಿದೆ, ಸದಾ ಎಚ್ಚರಿಕೆಯಿಂದ ಇರುವ ತಮಿಳುನಾಡು ಸರಕಾರ, ರಾಜ್ಯ ಸರಕಾರದ ವೈಫಲ್ಯಗಳನ್ನು ತನ್ನ ಅನುಕೂಲಕ್ಕೆ ಬಳಕೆ ಮಾಡಿಕೊಳ್ಳುತ್ತಿದೆ. ಈವರೆಗೂ ಆಗಿರುವ ತಪ್ಪುಗಳಿಂದ ರಾಜ್ಯ ಪಾಠ ಕಲಿಯುವ ಲಕ್ಷಣ ಕಾಣುತ್ತಿಲ್ಲ ಎಂದು ಸಚಿವರು ಕಟುವಾಗಿ ಟೀಕಿಸಿದರು.

ಕಾವೇರಿ ನೀರು ನಿರ್ವಹಣಾ ಪ್ರಾಧಿಕಾರ (ಸಿಡಬ್ಲ್ಯುಎಂಎ) ಹಾಗೂ ಕಾವೇರಿ ನೀರು ನಿಯಂತ್ರಣಾ ಸಮಿತಿ (ಸಿಡಬ್ಲ್ಯುಆರ್‌ಸಿ) ಎರಡೂ ಕಡೆಯಿಂದ 15 ದಿನ ತಮಿಳುನಾಡಿಗೆ ದಿನವೂ ತಲಾ 12,000 ಕ್ಯೂಸೆಕ್ ನೀರನ್ನು ತಮಿಳುನಾಡಿಗೆ ಹರಿಸಬೇಕು ಎಂಬ ಆದೇಶ ಬಂದಿದೆ. ಕಾವೇರಿ ನೀರು ಬಿಡುವ ವಿಚಾರದಲ್ಲಿ ಕರ್ನಾಟಕದ ಸಿದ್ಧತೆಗಳಿಗಿಂತ ತಮಿಳುನಾಡಿನ ಸಿದ್ಧತೆಗಳು ಬಿರುಸಾಗಿವೆ. ಕರ್ನಾಟಕವು ಜೂನ್ ತಿಂಗಳಿಂದ ನೀರು ಬಿಡಬೇಕಿತ್ತು. ಆದರೆ ತಮಿಳುನಾಡು ಮೇ ತಿಂಗಳಲ್ಲೇ ಪ್ರಾಧಿಕಾರದ ಮುಂದೆ ಹೋಯಿತು. ಆದರೆ, ಕಾನೂನು ಹೋರಾಟಕ್ಕೆ ನಮ್ಮ ತಂಡಕ್ಕೆ ಶಕ್ತಿ ತುಂಬುವುದು ಬಿಟ್ಟು ನಮ್ಮ ಮುಖ್ಯಮಂತ್ರಿ ಕಾವೇರಿ, ಕೃಷ್ಣಾ ನದಿಭಾಗದ ರೈತರು ಬೆಳೆ ಹಾಕಬೇಡಿ ಎಂದು ಉಪದೇಶ ಮಾಡಿದರು. ಅದರಿಂದ ನಷ್ಟ ಆಗಿದ್ದು ನಮ್ಮ ರೈತರಿಗೆ. ಬೆಳೆದಿದ್ದ ಬೆಳೆಯನ್ನು ಕೂಡ ನೀರಿಲ್ಲದೆ ಕಳೆದುಕೊಳ್ಳಬೇಕಾಯಿತು ಎಂದು ಸಚಿವ ಕುಮಾರಸ್ವಾಮಿ ಬೇಸರ ವ್ಯಕ್ತಪಡಿಸಿದರು.

ಸಂಸತ್ ಸದಸ್ಯ ಎಂ.ಮಲ್ಲೇಶ್ ಬಾಬು, ಶಾಸಕ ಸಮೃದ್ಧಿ ಮಂಜುನಾಥ್ ಹಾಗೂ ವಿಜಯಪುರ ಜಿಲ್ಲೆಯ ಜೆಡಿಎಸ್ ಪಕ್ಷದ ಹಿರಿಯ ಮುಖಂಡ ಬಿ.ಡಿ.ಪಾಟೀಲ್ ಮುಂತಾದವರು ಉಪಸ್ಥಿತರಿದ್ದರು.

### ಕಾವೇರಿ ವಿಷಯ ಬಿಟ್ಟು ಖರ್ಗೆ, ವೇಣುಗೋಪಾಲ್, ಸುರ್ಜೇವಾಲಾ ಮನೆ ಗೇಟ್ ಕಾಯುತ್ತಿದ್ದಾರೆ!!

ಇವರ ಹಣೆಬರಹ ಎಲ್ಲಿಗೆ ಬಂದು ನಿಂತಿದೆ ಎಂದರೆ, ಮೂರು ವರ್ಷಗಳ ಕಾಲ ಮುಖ್ಯಮಂತ್ರಿ ಕುರ್ಚಿಗಾಗಿ ಕಾದಾಟ ನಡೆಸಿದರು. ಇವರು ಮುಖ್ಯಮಂತ್ರಿಯಾದ ಮೇಲೆ ಸಂಪುಟ ವಿಸ್ತರಣೆ, ಖಾತೆ ಹಂಚಿಕೆ ಬಗ್ಗೆಯೇ ಸಮಯ ವ್ಯರ್ಥವಾಯಿತು. ಇವರ ಆದ್ಯತೆ ಕಾವೇರಿಗಿಂತ ಕ್ಯಾಬಿನೆಟ್ ಮೇಲೆ ಜಾಸ್ತಿಯಾಗಿದೆ. ದಿನ ಬೆಳಗಾದರೆ ಮಲ್ಲಿಕಾರ್ಜುನ ಖರ್ಗೆ, ಕೆ.ಸಿ.ವೇಣುಗೋಪಾಲ್ ಮತ್ತು ರಣದೀಪ್ ಸಿಂಗ್ ಸುರ್ಜೇವಾಲ ಅವರ ಮನೆಗಳ ಗೇಟುಗಳನ್ನು ಕಾಯುವುದೇ ಇವರ ಕೆಲಸ ಆಗಿದೆ ಎಂದು ಎಚ್.ಡಿ. ಕುಮಾರಸ್ವಾಮಿ ಆಕ್ರೋಶ ವ್ಯಕ್ತಪಡಿಸಿದರು.

### ಸಾವಿರ ಕೋಟಿ ಯಾರಪ್ಪನ ದುಡ್ಡು?

ಅನಗತ್ಯ ವಿಷಯಗಳಿಗೆ ಖರ್ಚು ಮಾಡುತ್ತಿದ್ದೀರಿ. ಯಾರಪ್ಪನ ಮನೆಯ ದುಡ್ಡು ಅಂತಾ ಭಾರತ ಜೋಡೋ ಸಂಘಗಳಿಗೆ ಸಾವಿರ ಕೋಟಿ ರೂ. ಕೊಡುತ್ತಿದ್ದೀರಿ. ಕಾವೇರಿ ಕಣಿವೆ ಪ್ರದೇಶದಲ್ಲಿ ರೈತರು ಬೆಳೆ ಹಾಕಿಲ್ಲ. ಅವರಿಗೆ ಸಕಾಲಕ್ಕೆ ನೆರವಾಗಲು ನಿಮಗೆ ಯೋಗ್ಯತೆ ಇಲ್ಲ. ದೆಹಲಿಯ ನಿಮ್ಮ ಪಕ್ಷದ ನಾಯಕರ ಮನೆಗಳ ಗೇಟ್ ಕಾಯಲು ಬರುತ್ತೀರಿ. ಹಿರಿಯ ವಕೀಲರ ಜತೆ ಚರ್ಚೆ ಮಾಡುವುದಕ್ಕೆ ನಿಮಗೆ ಸಮಯ ಇಲ್ಲ, ಕಾವೇರಿ ಸಂಕಷ್ಟ ಸೂತ್ರ ರೂಪಿಸುವುದಕ್ಕೆ ನಿಮ್ಮ ಪ್ರಯತ್ನ ಏನಿದೆ ವರ್ಷಕ್ಕೆ ತಮಿಳುನಾಡು ರೈತರು ಮೂರು ಬೆಳೆ ಬೆಳೆಯುತ್ತಾರೆ. ನಾವು ಒಂದು ಬೆಳೆಯನ್ನೂ ಬೆಳೆಯುತ್ತಿಲ್ಲ. ರಾಜಕೀಯ ಮಾಡುವುದಕ್ಕೆ ಹಾಗೂ ರೈತರ ಭೂಮಿಯನ್ನು ಕೊಳ್ಳೆ ಹೊಡೆಯುವುದಕ್ಕೆ ಸಮಯವಿದೆ, ಕಾವೇರಿ ವಿಷಯಕ್ಕೆ ಮಾತ್ರ ನಿಮಗೆ ಪುರುಸೊತ್ತೇ ಇಲ್ಲ ಎಂದು ಕುಮಾರಸ್ವಾಮಿ ಅವರು ಎಚ್.ಡಿ. ಕುಮಾರಸ್ವಾಮಿ ಕಿಡಿಕಾರಿದರು.

# ಪರಪ್ಪನ ಅಗ್ರಹಾರ ಕಾರಾಗೃಹದ ಸುತ್ತಮುತ್ತಲ ಪ್ರದೇಶ ಮೊಬೈಲ್ ಸೇವೆ-ಇಂಟರ್‌ನೆಟ್ ಪರಿಶೀಲನೆಗೆ ಸಂಸದ ಡಾ. ಸಿ.ಎನ್. ಮಂಜುನಾಥ್ ಸೂಚನೆ

**ನವದೆಹಲಿ, ಆ.12:** ಸಂಸದ ಡಾ.ಸಿ.ಎನ್.ಮಂಜುನಾಥ್ ಅವರು ದೂರಸಂಪರ್ಕ ಇಲಾಖೆಯ ಕಾರ್ಯದರ್ಶಿ ಅಮಿತ್ ಅಗರ್ವಾಲ್ ಅವರನ್ನು ಭೇಟಿ ಮಾಡಿ, ಟವರ್ ಹಾರ್ಮೋನಿಯಸ್ ಕಾಲ್ ಬ್ಲಾಕಿಂಗ್ ಸಿಸ್ಟಮ್ (ಟಿ–ಎಚ್‌ಸಿಬಿಎಸ್) ಮತ್ತು ಹೈ–ಫ್ರೀಕ್ವೆನ್ಸಿ ವೈ–ಫೈ ಜಾಮರ್‌ಗಳ ಅಳವಡಿಕೆಯಿಂದಾಗಿ ಪರಪ್ಪನ ಅಗ್ರಹಾರ ಕೇಂದ್ರ ಕಾರಾಗೃಹದ ಸುತ್ತಮುತ್ತಲಿನ ಪ್ರದೇಶಗಳಲ್ಲಿ ಮೊಬೈಲ್ ಸಂವಹನ ಮತ್ತು ಇಂಟರ್‌ನೆಟ್ ಸೇವೆಗಳ ಗಂಭೀರ ಅಡಚಣೆಯ ಬಗ್ಗೆ ಅವರ ಗಮನಕ್ಕೆ ತಂದರು. ಸುತ್ತಮುತ್ತಲಿನ ನಿವಾಸಿಗಳು ತಮ್ಮ ದೈನಂದಿನ ಜೀವನದಲ್ಲಿ ಗಣನೀಯ ತೊಂದರೆಗಳನ್ನು ಎದುರಿಸುತ್ತಿದ್ದಾರೆ. ವೈದ್ಯಕೀಯ ತುರ್ತು ಸಂದರ್ಭಗಳಲ್ಲಿ, ಆನ್‌ಲೈನ್ ತರಗತಿಗಳಿಗೆ ಹಾಜರಾಗುವ ವಿದ್ಯಾರ್ಥಿಗಳಿಗೆ ಮತ್ತು ಮನೆಯಿಂದ ಕೆಲಸ ಮಾಡುವ ಉದ್ಯೋಗಿಗಳಿಗೆ ಈ ಅಡಚಣೆಯು ವಿಶೇಷವಾಗಿ ಸವಾಲಿನದಾಗಿದೆ. ಪ್ರಮುಖ ಕಾರ್ಪೊರೇಟ್ ಕೇಂದ್ರವಾದ ಎಲೆಕ್ಟ್ರಾನಿಕ್ ಸಿಟಿಯ ಸಾಮೀಪ್ಯವು ಈ ಪ್ರದೇಶದ ಅನೇಕ ನಿವಾಸಿಗಳು ಮತ್ತು ವೃತ್ತಿಪರರಿಗೆ ವಿಶ್ವಾಸಾರ್ಹ ಸಂಪರ್ಕವನ್ನು ಇನ್ನಷ್ಟು ಅಗತ್ಯವಾಗಿಸುತ್ತದೆ. ಜೈಲು ಭದ್ರತೆ ಮತ್ತು ಕೈದಿಗಳಿಂದ ಅನಧಿಕೃತ ಸಂವಹನವನ್ನು ತಡೆಗಟ್ಟುವುದು ಅತ್ಯಂತ ಮುಖ್ಯವಾದರೂ, ಸುತ್ತಮುತ್ತಲಿನ ನಿವಾಸಿಗಳ ಕಾನೂನುಬದ್ಧ ಸಂವಹನ ಅಗತ್ಯಗಳ ಮೇಲೆ ಪ್ರತಿಕೂಲ ಪರಿಣಾಮ ಬೀರದಂತೆ ನೋಡಿಕೊಳ್ಳುವುದು ಅಷ್ಟೇ ಅವಶ್ಯಕ.

> ಸುತ್ತಮುತ್ತಲಿನ ಪ್ರದೇಶಗಳ ನಿವಾಸಿಗಳು ತಮ್ಮ ದೈನಂದಿನ ಸಂವಹನದಲ್ಲಿ ಅನಗತ್ಯ ತೊಂದರೆಗಳನ್ನು ಎದುರಿಸದಂತೆ ನೋಡಿಕೊಳ್ಳಲು ಈ ವಿಷಯದ ಬಗ್ಗೆ ಅನುಸರಣೆಯನ್ನು ಮುಂದುವರಿಸುತ್ತೇವೆ – ಸಂಸದ ಡಾ. ಸಿ.ಎನ್. ಮಂಜುನಾಥ್

ಡಾ. ಸಿ.ಎನ್. ಮಂಜುನಾಥ್, ಅಮಿತ್ ಅಗರ್ವಾಲ್ ಅವರನ್ನು ಈ ವಿಷಯವನ್ನು ಪರಿಶೀಲಿಸುವಂತೆ ಮತ್ತು ಸ್ಥಳೀಯ ಸಮುದಾಯಕ್ಕೆ ವಿಶ್ವಾಸಾರ್ಹ ಮೊಬೈಲ್ ಮತ್ತು ಇಂಟರ್ನೆಟ್ ಸಂಪರ್ಕವನ್ನು ಮರುಸ್ಥಾಪಿಸುವ ಜೊತೆಗೆ ಜೈಲು ಭದ್ರತೆಯನ್ನು ಕಾಪಾಡುವ ಸೂಕ್ತ ತಾಂತ್ರಿಕ ಪರಿಹಾರವನ್ನು ಅನ್ವೇಷಿಸುವಂತೆ ವಿನಂತಿಸಿದರು. ಅಮಿತ್ ಅಗರ್ವಾಲ್ ಸಕಾರಾತ್ಮಕವಾಗಿ ಪ್ರತಿಕ್ರಿಯಿಸಿದರು ಮತ್ತು ಸಂಬಂಧಪಟ್ಟ ಅಧಿಕಾರಿಗಳಿಗೆ ಸಮಸ್ಯೆಯನ್ನು ಪರಿಶೀಲಿಸಲು ಮತ್ತು ಅದನ್ನು ಆದಷ್ಟು ಬೇಗ ಪರಿಹರಿಸಲು ಅಗತ್ಯ ಕ್ರಮಗಳನ್ನು ತೆಗೆದುಕೊಳ್ಳುವಂತೆ ನಿರ್ದೇಶಿಸಿದರು.

# ಇಂಧನ ಬೇಡಿಕೆ ಪೂರೈಸಲು ಪರಮಾಣು ವಿದ್ಯುತ್ ಸಾಮರ್ಥ್ಯ ವಿಸ್ತರಣೆಗೆ ಆದ್ಯತೆ

## ಸಂಸದೆ ಡಾ. ಪ್ರಭಾ ಮಲ್ಲಿಕಾರ್ಜುನ್‌ಪ್ರಶ್ನೆಗೆ ಕೇಂದ್ರ ಸರ್ಕಾರ ಮಾಹಿತಿ



**ನವದೆಹಲಿ, ಆ.12:** ದೇಶದ ಹೆಚ್ಚುತ್ತಿರುವ ಇಂಧನ ಬೇಡಿಕೆಯನ್ನು ಪೂರೈಸಲು ಹಾಗೂ ಸ್ವಚ್ಛ ಇಂಧನ ಪರಿವರ್ತನೆಗೆ ಉತ್ತೇಜನ ನೀಡಲು ಪರಮಾಣು ವಿದ್ಯುತ್ ಉತ್ಪಾದನಾ ಸಾಮರ್ಥ್ಯವನ್ನು ಹಂತ ಹಂತವಾಗಿ ವಿಸ್ತರಿಸಲಾಗುತ್ತಿದೆ ಎಂದು ಕೇಂದ್ರ ಸರ್ಕಾರ ತಿಳಿಸಿದೆ. ದಾವಣಗೆರೆ ಸಂಸದೆ ಡಾ. ಪ್ರಭಾ ಮಲ್ಲಿಕಾರ್ಜುನ್ ಅವರು ಅಣುಶಕ್ತಿ ಕಾರ್ಯಕ್ರಮದಡಿ ಪರಮಾಣು ವಿದ್ಯುತ್ ಉತ್ಪಾದನೆ ಕುರಿತು ಕೇಳಿದ ಪ್ರಶ್ನೆಗೆ ಕೇಂದ್ರ ಸರ್ಕಾರ ಈ ಮಾಹಿತಿ ನೀಡಿದೆ.

ಕರ್ನಾಟಕ ಸೇರಿದಂತೆ ದೇಶದಲ್ಲಿ ಪರಮಾಣು ವಿದ್ಯುತ್ ಉತ್ಪಾದನೆ ವಿಸ್ತರಣೆಗೆ ಕೈಗೊಂಡ ಕ್ರಮಗಳು, ಪ್ರಸ್ತುತ ಸ್ಥಾಪಿತ ಸಾಮರ್ಥ್ಯ, ಒಟ್ಟು ವಿದ್ಯುತ್ ಉತ್ಪಾದನೆಯಲ್ಲಿ ಪರಮಾಣು ಶಕ್ತಿಯ ಪಾಲು, ನಿರ್ಮಾಣ ಮತ್ತು ಪ್ರಸ್ತಾವಿತ ಹಂತದಲ್ಲಿರುವ ಯೋಜನೆಗಳು, ಸುರಕ್ಷತಾ ಕ್ರಮಗಳು ಹಾಗೂ ಭವಿಷ್ಯದ ಮಾರ್ಗಸೂಚಿ ಕುರಿತು ಡಾ. ಪ್ರಭಾ ಮಲ್ಲಿಕಾರ್ಜುನ್ ಮಾಹಿತಿ ಕೇಳಿದ್ದರು.

ದೇಶದಲ್ಲಿ ಪ್ರಸ್ತುತ 24 ಪರಮಾಣು ವಿದ್ಯುತ್ ಸ್ಥಾವರಗಳಿದ್ದು, ಒಟ್ಟು 8,780 ಮೆಗಾವ್ಯಾಟ್ ಸ್ಥಾಪಿತ ಸಾಮರ್ಥ್ಯ ಹೊಂದಿವೆ. 2025–26ರಲ್ಲಿ ದೇಶದ ಒಟ್ಟು ವಿದ್ಯುತ್ ಉತ್ಪಾದನೆಯಲ್ಲಿ ಪರಮಾಣು ಶಕ್ತಿಯ ಪಾಲು ಶೇ 3.1ರಷ್ಟಿತ್ತು ಎಂದು ಸರ್ಕಾರ ತಿಳಿಸಿದೆ. ಕರ್ನಾಟಕದ ಕೈಗಾ ಪರಮಾಣು ವಿದ್ಯುತ್ ಸ್ಥಾವರದ 1ರಿಂದ 4ನೇ ಘಟಕಗಳು ತಲಾ 220 ಮೆಗಾವ್ಯಾಟ್ ಸಾಮರ್ಥ್ಯದೊಂದಿಗೆ ಕಾರ್ಯನಿರ್ವಹಿಸುತ್ತಿವೆ. ತಲಾ 700 ಮೆಗಾವ್ಯಾಟ್ ಸಾಮರ್ಥ್ಯದ ಕೈಗಾ 5 ಮತ್ತು 6ನೇ ಘಟಕಗಳು ನಿರ್ಮಾಣ ಹಂತದಲ್ಲಿವೆ ಎಂದು ಉತ್ತರದಲ್ಲಿ ತಿಳಿಸಲಾಗಿದೆ.

# ಯುಡಿಐಡಿ ಯೋಜನೆಯ ಅನುಷ್ಠಾನ: ಅಂಕಿ–ಅಂಶಗಳ ಗೊಂದಲಕ್ಕೆ ಸ್ಪಷ್ಟನೆ

**ನವದೆಹಲಿ, ಆ.12:** ಕೇಂದ್ರ ಸರ್ಕಾರದ ಯುನಿಕ್ ಡಿಸೆಬಿಲಿಟಿ ಐಡಿ ಯೋಜನೆಯಡಿ ಸಲ್ಲಿಕೆಯಾಗಿರುವ 10.12 ಲಕ್ಷಕ್ಕೂ ಅಧಿಕ ಅರ್ಜಿಗಳ ವಿವರಗಳು ಸರ್ಕಾರದ ಅಧಿಕೃತ ಅಂಕಿಅಂಶಗಳಲ್ಲಿ ಸ್ಪಷ್ಟವಾಗಿ ಪ್ರತಿಫಲಿಸದಿರುವುದು ಬೆಳಕಿಗೆ ಬಂದಿದೆ. ಜೊತೆಗೆ, ದೇಶದ ಹಲವು ರಾಜ್ಯಗಳು ಮತ್ತು ಕೇಂದ್ರಾಡಳಿತ ಪ್ರದೇಶಗಳಲ್ಲಿ ಅಂಗವಿಕಲರು ಯುಡಿಐಡಿ ಕಾರ್ಡ್‌ಗಾಗಿ ಹಲವು ತಿಂಗಳುಗಳಿಂದ, ಕೆಲವೆಡೆ ಒಂದು ವರ್ಷಕ್ಕೂ ಅಧಿಕ ಅವಧಿಯಿಂದ ಕಾಯುತ್ತಿರುವುದು ಬಹಿರಂಗವಾಗಿದೆ.

ರಾಜ್ಯಸಭಾ ಸದಸ್ಯ ಮನ್ಸೂರ್ ಅಲಿ ಖಾನ್ ಅವರು ಯುಡಿಐಡಿ ಯೋಜನೆಯ ಅನುಷ್ಠಾನಕ್ಕೆ ಸಂಬಂಧಿಸಿದಂತೆ ರಾಜ್ಯಸಭೆಯಲ್ಲಿ ಕೇಳಿದ ಪ್ರಶ್ನೆಗೆ ಕೇಂದ್ರ ಸಾಮಾಜಿಕ ನ್ಯಾಯ ಮತ್ತು ಸಬಲೀಕರಣ ಸಚಿವಾಲಯ ನೀಡಿರುವ ಉತ್ತರದಲ್ಲಿ ಈ ಅಂಶಗಳು ಬಹಿರಂಗಗೊಂಡಿವೆ.

ಮನ್ಸೂರ್ ಅಲಿಖಾನ್ 2021ರಿಂದ ರಾಜ್ಯವಾರು ಹಾಗೂ ಕೇಂದ್ರಾಡಳಿತ ಪ್ರದೇಶವಾರು ಸ್ವೀಕರಿಸಲಾದ ಅರ್ಜಿಗಳು, ವಿತರಿಸಲಾದ ಕಾರ್ಡ್‌ಗಳು, ತಿರಸ್ಕೃತ ಅರ್ಜಿಗಳು ಮತ್ತು ಬಾಕಿ ಉಳಿದಿರುವ ಅರ್ಜಿಗಳ ವಿವರಗಳನ್ನು ಸರ್ಕಾರದಿಂದ ಕೇಳಿದ್ದರು.

**10.12 ಲಕ್ಷ ಅರ್ಜಿಗಳ ಲೆಕ್ಕ ಎಲ್ಲಿದೆ?**

**ಸರ್ಕಾರದ ಅಂಕಿ–ಅಂಶಗಳ ಪ್ರಕಾರ, 2021ರಿಂದ ದೇಶಾದ್ಯಂತ ಒಟ್ಟು 1,15,63,288 ಯುಡಿಐಡಿ ಅರ್ಜಿಗಳು ಸ್ವೀಕರಿಸಲಾಗಿದೆ. ಈ ಪೈಕಿ:**

**– 87,62,115 ಯುಡಿಐಡಿ ಕಾರ್ಡ್‌ಗಳನ್ನು ಸೃಜಿಸಲಾಗಿದೆ**

**–8,24,951 ಅರ್ಜಿಗಳನ್ನು ತಿರಸ್ಕರಿಸಲಾಗಿದೆ**

**–9,63,606 ಅರ್ಜಿಗಳು ಬಾಕಿ ಉಳಿದಿವೆ**

**ಈ ಮೂರು ವರ್ಗಗಳ ಒಟ್ಟು ಸಂಖ್ಯೆ 1,05,50,672 ಆಗಿದೆ. ಅಂದರೆ, ಸ್ವೀಕರಿಸಲಾದ ಒಟ್ಟು ಅರ್ಜಿಗಳಿಗಿಂತ 10,12,616 ಅರ್ಜಿಗಳು 10.12 ಲಕ್ಷಕ್ಕೂ ಅಧಿಕ ಲೆಕ್ಕದಲ್ಲಿ ಸ್ಪಷ್ಟವಾಗಿ ಹೊಂದಿಕೆಯಾಗುತ್ತಿಲ್ಲ.**

ಈ ಅರ್ಜಿಗಳು ರದ್ದಾಗಿವೆಯೇ, ಅರ್ಜಿದಾರರು ಹಿಂಪಡೆದಿದ್ದಾರೆಯೇ, ನಕಲಿ ಅರ್ಜಿಗಳೆಂದು ಗುರುತಿಸಲಾಗಿದೆಯೇ, ಬೇರೆಡೆಗೆ ವರ್ಗಾಯಿಸಲಾಗಿದೆಯೇ ಅಥವಾ ಬೇರೆ ರೀತಿಯಲ್ಲಿ ವಿಲೇವಾರಿ ಮಾಡಲಾಗಿದೆಯೇ ಎಂಬ ಕುರಿತು ಸರ್ಕಾರದ ಉತ್ತರದಲ್ಲಿ ಯಾವುದೇ ಪ್ರತ್ಯೇಕ ವರ್ಗೀಕರಣ ನೀಡಲಾಗಿಲ್ಲ.

ಅಂಗವಿಕಲರಿಗೆ ಸಂಬಂಧಿಸಿದ 10 ಲಕ್ಷಕ್ಕೂ ಅಧಿಕ ಅರ್ಜಿಗಳ ಸ್ಥಿತಿ ಅಂಕಿ–ಅಂಶಗಳಲ್ಲಿ ಸ್ಪಷ್ಟವಾಗಿಲ್ಲ. ಎಷ್ಟು ಅರ್ಜಿಗಳು ಸ್ವೀಕರಿಸಲಾಗಿದೆ, ಎಷ್ಟು ಕಾರ್ಡ್‌ಗಳನ್ನು ವಿತರಿಸಲಾಗಿದೆ, ಎಷ್ಟು ತಿರಸ್ಕರಿಸಲಾಗಿದೆ ಮತ್ತು ಎಷ್ಟು ಬಾಕಿಯಿವೆ ಎಂಬುದನ್ನು ನಾನು ಸ್ಪಷ್ಟವಾಗಿ ಕೇಳಿದ್ದೆ. ಆದರೆ ಕೇಂದ್ರ ಸರ್ಕಾರ ನೀಡಿರುವ ಅಂಕಿಅಂಶಗಳಲ್ಲೇ ಅಸ್ಪಷ್ಟತೆ ಕಂಡುಬರುತ್ತಿದೆ. 10.12 ಲಕ್ಷಕ್ಕೂ ಅಧಿಕ ಅರ್ಜಿಗಳ ಪ್ರಸ್ತುತ ಸ್ಥಿತಿಗೆ ಸಚಿವಾಲಯ ತಕ್ಷಣ ಸ್ಪಷ್ಟನೆ ನೀಡಬೇಕಾಗಿದೆ ಎಂದು ಆಗ್ರಹಿಸಿದ್ದಾರೆ.



**ಹೊಸ ಪೋರ್ಟಲ್ ಬಂದರೂ ಕಾಯುವಿಕೆ ಮಾತ್ರ ಕಡಿಮೆಯಾಗಿಲ್ಲ:**

2024ರ ಮೇ 6ರಂದು ಯುಡಿಐಡಿ ಪೋರ್ಟಲ್‌ನ ನವೀಕೃತ ಆವೃತ್ತಿಯನ್ನು ಆರಂಭಿಸಲಾಗಿದ್ದು, ಹೆಚ್ಚಿನ ಭದ್ರತೆ, ಸುಧಾರಿತ ಬಳಕೆದಾರ ಅನುಭವ ಹಾಗೂ ಹೆಚ್ಚುವರಿ ಸ್ವಯಂ ಸೇವಾ ಸೌಲಭ್ಯಗಳನ್ನು ಒದಗಿಸಲಾಗಿದೆ ಎಂದು ಸರ್ಕಾರ ತಿಳಿಸಿದೆ.

ಆಧಾರ್ ಸಂಯೋಜನೆ, ಒಟಿಪಿ ಆಧಾರಿತ ದೃಢೀಕರಣ ಹಾಗೂ ಪರಿಷ್ಕೃತ ಅಂಗವೈಕಲ್ಯ ಮೌಲ್ಯಮಾಪನ ಮಾರ್ಗಸೂಚಿಗಳನ್ನು ಜಾರಿಗೆ ತಂದಿರುವುದನ್ನೂ ಸರ್ಕಾರ ತನ್ನ ಉತ್ತರದಲ್ಲಿ ಉಲ್ಲೇಖಿಸಿದೆ.

ಆದರೆ, ಪೋರ್ಟಲ್ ಸುಧಾರಣೆಗಳಿದ್ದರೂ ಯುಡಿಐಡಿ ಕಾರ್ಡ್ ಪಡೆಯಲು ಅಂಗವಿಕಲರು ಎದುರಿಸುತ್ತಿರುವ ಕಾಯುವಿಕೆಯ ಅವಧಿಯಲ್ಲಿ ಗಮನಾರ್ಹ ಸುಧಾರಣೆ ಕಂಡುಬಂದಿಲ್ಲ ಎಂಬುದು ಕೇಂದ್ರ ಸರ್ಕಾರದ ಅಂಕಿ ಅಂಶಗಳಿಂದಲೇ ಸ್ಪಷ್ಟವಾಗಿದೆ.

**ಯುಡಿಐಡಿ ಕಾರ್ಡ್ ವಿತರಿಸಲು ಸರಾಸರಿ ತೆಗೆದುಕೊಳ್ಳುತ್ತಿರುವ ಸಮಯ:**

**– ಅಂಡಮಾನ್ ಮತ್ತು ನಿಕೋಬಾರ್ ದ್ವೀಪಗಳು – 635 ದಿನಗಳು**

**– ಲಕ್ಷದ್ವೀಪ – 431 ದಿನಗಳು**

**– ಕೇರಳ – 360 ದಿನಗಳು**

**– ದೆಹಲಿ – 263 ದಿನಗಳು**

**– ತಮಿಳುನಾಡು – 259 ದಿನಗಳು**

ಡಿಜಿಟಲ್ ಪೋರ್ಟಲ್ ಸುಧಾರಣೆ ಮಾತ್ರದಿಂದ ವ್ಯವಸ್ಥೆಯ ಪರಿಣಾಮಕಾರಿತ್ವವನ್ನು ಅಳೆಯಲು ಸಾಧ್ಯವಿಲ್ಲ. ಅಂಗವಿಕಲರು ಯಾವುದೇ ಅನಗತ್ಯ ತೊಂದರೆ ಇಲ್ಲದೆ, ತ್ವರಿತವಾಗಿ ತಮ್ಮ ಅಗತ್ಯ ದಾಖಲೆಗಳನ್ನು ಪಡೆಯುವಂತಾಗಿರುವುದೇ ನಿಜವಾದ ಯಶಸ್ಸಿನ ಮಾನದಂಡ. ಕಾಯಬೇಕಾದ ಪರಿಸ್ಥಿತಿ ಅಸಮರ್ಥನೀಯವಾಗಿದೆ. ಯುಡಿಐಡಿ ಕಾರ್ಡ್ ಅಂಗವಿಕಲರಿಗೆ ವಿವಿಧ ಸರ್ಕಾರಿ ಸೌಲಭ್ಯಗಳು ಮತ್ತು ಹಕ್ಕುಗಳನ್ನು ಪಡೆಯಲು ಅತ್ಯಂತ ಪ್ರಮುಖ ದಾಖಲೆ. ಇಷ್ಟೊಂದು ವಿಳಂಬವು ಅವರ ಜೀವನದ ಮೇಲೆ ನೇರ ಪರಿಣಾಮ ಬೀರುತ್ತದೆ ಮನ್ಸೂರ್ ಅಲಿಖಾನ್ ಪ್ರತಿಕ್ರಿಯಿಸಿದ್ದಾರೆ.

**ಕರ್ನಾಟಕದಲ್ಲೇ 50 ಸಾವಿರಕ್ಕೂ ಅಧಿಕ ಅರ್ಜಿಗಳು ಬಾಕಿ:**

**ಕರ್ನಾಟಕದ ಪರಿಸ್ಥಿತಿಯೂ ಆತಂಕಕಾರಿ. 2021ರಿಂದ ರಾಜ್ಯದಲ್ಲಿ ಒಟ್ಟು 7,28,300 ಯುಡಿಐಡಿ ಅರ್ಜಿಗಳು ಸ್ವೀಕರಿಸಲಾಗಿದೆ. ಈ ಪೈಕಿ:**

**– 5,42,987 ಯುಡಿಐಡಿ ಕಾರ್ಡ್‌ಗಳನ್ನು ಸೃಜಿಸಲಾಗಿದೆ**

**– 77,764 ಅರ್ಜಿಗಳನ್ನು ತಿರಸ್ಕರಿಸಲಾಗಿದೆ**

**– 50,654 ಅರ್ಜಿಗಳು ಇನ್ನೂ ಬಾಕಿ ಉಳಿದಿವೆ**

**ಕರ್ನಾಟಕದಲ್ಲಿ ಯುಡಿಐಡಿ ಅರ್ಜಿಗಳ ವಿಲೇವಾರಿಗೆ ಸರಾಸರಿ 232 ದಿನಗಳು, ಅಂದರೆ ಏಳು ತಿಂಗಳಿಗಿಂತಲೂ ಹೆಚ್ಚು ಸಮಯ ತೆಗೆದುಕೊಳ್ಳುತ್ತಿದೆ.**

ಈ ಹಿನ್ನೆಲೆಯಲ್ಲಿ ಕೇಂದ್ರ ಸಾಮಾಜಿಕ ನ್ಯಾಯ ಮತ್ತು ಸಬಲೀಕರಣ ಸಚಿವಾಲಯವು ತಕ್ಷಣವೇ 10.12 ಲಕ್ಷಕ್ಕೂ ಅಧಿಕ ಲೆಕ್ಕಕ್ಕೆ ಸಿಗದ ಅರ್ಜಿಗಳ ಕುರಿತು ಸಮಗ್ರ ಪರಿಶೀಲನೆ ನಡೆಸಬೇಕು, ವಿತರಿಸಲಾದ, ತಿರಸ್ಕರಿಸಲಾದ ಅಥವಾ ಬಾಕಿ ಇರುವ ಅರ್ಜಿಗಳ ಹೊರತಾಗಿ ಉಳಿದಿರುವ ಪ್ರತಿಯೊಂದು ಅರ್ಜಿಯ ಪ್ರಸ್ತುತ ಸ್ಥಿತಿಯನ್ನು ಸಾರ್ವಜನಿಕಗೊಳಿಸಬೇಕು ಹಾಗೂ ದೇಶಾದ್ಯಂತ ಯುಡಿಐಡಿ ಅರ್ಜಿಗಳ ವಿಲೇವಾರಿಗೆ ಸ್ಪಷ್ಟ ಮತ್ತು ಕಾಲಮಿತಿಯ ಮಾನದಂಡಗಳನ್ನು ನಿಗದಿಪಡಿಸಬೇಕು ಎಂದು ಮನ್ಸೂರ್ ಅಲಿಖಾನ್ ಒತ್ತಾಯಿಸಿದ್ದಾರೆ.

# ನಿಮ್ಮಂತೆ ಬಾಯಿ ಮುಚ್ಚಿಕೊಂಡಿರಬೇಕೆ? ಮಾಧ್ಯಮಗಳಿಗೆ ಪ್ರಿಯಾಂಕಾ ತರಾಟೆ



**ನವದೆಹಲಿ, ಆ. 12:** ಸಂಸತ್ ಕಲಾಪದಲ್ಲಿ ಉಂಟಾಗಿರುವ ನಿರಂತರ ಅಡಚಣೆಗಳ ಕುರಿತು ಪ್ರಶ್ನಿಸಿದ ಮಾಧ್ಯಮಗಳ ವಿರುದ್ಧ ಕಾಂಗ್ರೆಸ್ ಸಂಸದೆ ಪ್ರಿಯಾಂಕಾ ಗಾಂಧಿ ವಾದ್ರಾ ತೀವ್ರ ವಾಗ್ದಾಳಿ ನಡೆಸಿದ್ದಾರೆ. ಜುಲೈ 20ರಂದು ಕಾಕ್ರೋಚ್ ಜನತಾ ಪಾರ್ಟಿ ನಡೆಸಿದ್ದ ಸಂಸತ್ ಚಲೋ ಪ್ರತಿಭಟನಾ ಮೆರವಣಿಗೆಯ ವೇಳೆ ವಿದ್ಯಾರ್ಥಿಗಳ ಮೇಲಿನ ಪೊಲೀಸ್ ದೌರ್ಜನ್ಯದ ಬಗ್ಗೆ ಮಾಧ್ಯಮಗಳ ಮೌನವನ್ನು ಅವರು ಕಟುವಾಗಿ ಪ್ರಶ್ನಿಸಿದ್ದಾರೆ.

ಸಂಸತ್ ಭವನದ ಹೊರಗೆ ಸುದ್ದಿಗಾರರೊಂದಿಗೆ ಮಾತನಾಡಿದ ವಯನಾಡು ಸಂಸದೆ ಪ್ರಿಯಾಂಕಾ ಗಾಂಧಿ, ನೀವು (ಮಾಧ್ಯಮಗಳು) ಮೌನವಾಗಿರುವ ರೀತಿಯಲ್ಲೇ ನಾವೂ ಮೌನವಾಗಿರಬೇಕೆ ಎಂದು ಕಿಡಿಕಾರಿದರು. ವಿದ್ಯಾರ್ಥಿಗಳ ಮೇಲೆ ಲಾಠಿಚಾರ್ಜ್ ನಡೆಸಿದಾಗ, ಪೆಲೆಟ್ ಗನ್ ಬಳಸಿದಾಗ, ಹಾಗೂ ಅವರ ಮೇಲೆ ಎಕೆ-47 ಬಳಸಿದಾಗ ನೀವು ಸಾರ್ವಜನಿಕರಿಗೆ ಉತ್ತರದಾಯಿಗಳಲ್ಲವೇ ನಾವೂ ನಿಮ್ಮಂತೆಯೇ ಸುಮ್ಮನೆ ಕೂರಬೇಕೆ ಎಂದು ಅವರು ಹರಿಹಾಯ್ದರು.

ಗೃಹ ಸಚಿವ ಅಮಿತ್ ಶಾ ಅವರು ಸಂಸತ್ತಿನಲ್ಲಿ ಹೇಳಿಕೆ ನೀಡುವವರೆಗೂ ಕಲಾಪದ ಬಿಕ್ಕಟ್ಟು ಮುಂದುವರಿಯಲಿದೆ ಎಂದು ಪ್ರಿಯಾಂಕಾ ಈ ಹಿಂದೆಯಷ್ಟೇ ಸ್ಪಷ್ಟಪಡಿಸಿದ್ದರು.

ರಾಮಮಂದಿರ ದೇಣಿಗೆ ಕಳ್ಳತನ, ಜಂತರ್ ಮಂತರ್‌ನಲ್ಲಿ ವಿದ್ಯಾರ್ಥಿಗಳ ಮೇಲಿನ ಪೊಲೀಸ್ ದೌರ್ಜನ್ಯ ಮತ್ತು ಇತ್ತೀಚಿನ ಎಫ್ಸಿಆರ್‌ಎ ಮಸೂದೆ ಸೇರಿದಂತೆ ಹಲವು ವಿಷಯಗಳ ಬಗ್ಗೆ ಸಂಸತ್ತಿನಲ್ಲಿ ತೀವ್ರ ಗದ್ದಲ ಮುಂದುವರಿದಿದೆ.

ಸಂಸತ್ತಿನ ಬಿಕ್ಕಟ್ಟಿನ ನಡುವೆ ವಿರೋಧ ಪಕ್ಷಗಳ ನಿಲುವನ್ನು ಕಾಂಗ್ರೆಸ್ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಮಂಗಳವಾರ ಪುನರುಚ್ಚರಿಸಿದ್ದಾರೆ. ನಾವು ನಮ್ಮ ಗುರಿಯನ್ನು ಬದಲಾಯಿಸುತ್ತಿಲ್ಲ. ಆರಂಭದಿಂದಲೂ ನಮ್ಮ ನಿಲುವು ಒಂದೇ ಆಗಿದ್ದು, ಬಿಕ್ಕಟ್ಟು ಅಂತ್ಯಗೊಳಿಸಲು ನಮಗೆ ಮೂರು ನಿರ್ದಿಷ್ಟ ಬೇಡಿಕೆಗಳಿವೆ ಎಂದು ಅವರು ಸ್ಪಷ್ಟಪಡಿಸಿದ್ದಾರೆ.

ವಿದ್ಯಾರ್ಥಿಗಳ ಮೇಲಿನ ಲಾಠಿಚಾರ್ಜ್ ಮತ್ತು ಗುಂಡಿನ ದಾಳಿಗೆ ಯಾರು ಆದೇಶ ನೀಡಿದರು ಎಂಬುದರ ಕುರಿತು ಗೃಹ ಸಚಿವರು ಸದನದಲ್ಲಿ ಹೇಳಿಕೆ ನೀಡಬೇಕು.

ಲಾಠಿಚಾರ್ಜ್‌ನಿಂದಾಗಿ ನೂರಕ್ಕೂ ಹೆಚ್ಚು ವಿದ್ಯಾರ್ಥಿಗಳು ಗಾಯಗೊಂಡಿದ್ದಾರೆ ಹಾಗೂ ಪೆಲೆಟ್ ಗನ್ ದಾಳಿಯಿಂದ ಹಲವರು ಆಸ್ಪತ್ರೆಗೆ ದಾಖಲಾಗಿದ್ದಾರೆ. ಈ ಬಗ್ಗೆಯೂ ಸ್ಪಷ್ಟನೆ ಬೇಕು. 18 ದಿನಗಳಾದರೂ ಸರ್ಕಾರದ ಕಡೆಯಿಂದ ಉತ್ತರಿಸುವ ಇಚ್ಛಾಶಕ್ತಿ ವ್ಯಕ್ತವಾಗಿಲ್ಲ ಎಂದು ಖರ್ಗೆ ಸಂಸತ್ ಭವನದ ಆವರಣದಲ್ಲಿ ತಿಳಿಸಿದರು. ಅಲ್ಲದೆ, ದೇಣಿಗೆ ಕಳ್ಳತನ ವಿಚಾರವಾಗಿಯೂ ಸರ್ಕಾರ ಉತ್ತರಿಸಬೇಕು ಹಾಗೂ ಕ್ಷಮೆಯಾಚಿಸಬೇಕು ಎಂದು ಅವರು ಆಗ್ರಹಿಸಿದರು.

# ಅದಾನಿ ಯೋಜನೆಗೆ ಅರಣ್ಯಭೂಮಿ ನೀಡಲು ಮಹಾರಾಷ್ಟ್ರ ಸರ್ಕಾರ ಅಸ್ತು

- 87 ಸಾವಿರ ಚದರ ಅಡಿ ಹಸ್ತಾಂತರಿಸಲು ಅಧಿಕೃತ ಅನುಮೋದನೆ
- ಮಹಾರಾಷ್ಟ್ರ ಕಂದಾಯ ಮತ್ತು ಅರಣ್ಯ ಇಲಾಖೆ ಒಪ್ಪಿಗೆ

**ಮುಂಬೈ, ಆ. 12:** ಅದಾನಿ ಸಮೂಹಕ್ಕೆ ಸೇರಿದ ಕಂಪನಿಗಳ ಎರಡು ವಿಭಿನ್ನ ಯೋಜನೆಗಳಿಗಾಗಿ ಸುಮಾರು 83,700 ಚದರ ಅಡಿ ಅರಣ್ಯ ಭೂಮಿಯನ್ನು ಹಸ್ತಾಂತರಿಸಲು ಮಹಾರಾಷ್ಟ್ರ ಸರ್ಕಾರ ಅಧಿಕೃತ ಅನುಮೋದನೆ ನೀಡಿದೆ. ರಾಯಗಢ ಮತ್ತು ಅಮರಾವತಿ ಜಿಲ್ಲೆಗಳಲ್ಲಿರುವ ಮೀಸಲು ಅರಣ್ಯ ಮತ್ತು ಪ್ರಮುಖ ಕಂಡ್ಲಾ ಅರಣ್ಯ ಪ್ರದೇಶವನ್ನು ಅದಾನಿ ಸಿಮೆಂಟೇಶನ್ ಮತ್ತು ಅದಾನಿ ಟೋಟಲ್ ಗ್ಯಾಸ್ ಸಂಸ್ಥೆಗಳಿಗೆ ಒದಗಿಸಲು ಮಹಾರಾಷ್ಟ್ರ ಕಂದಾಯ ಮತ್ತು ಅರಣ್ಯ ಇಲಾಖೆ ಒಪ್ಪಿಕೊಂಡಿವೆ.

ರಾಯಗಢ ಜಿಲ್ಲೆಯ ಅಲಿಬಾಗ್ ತಾಲೂಕಿನ ಶಹಾಪುರ ಮತ್ತು ಶಹಾಬಾಜ್ ಗ್ರಾಮಗಳಲ್ಲಿರುವ ಸುಮಾರು 69,933 ಚದರ ಅಡಿ ಭೂಮಿಯನ್ನು ಅದಾನಿ ಗ್ರೂಪ್ನ 'ರಾಯಗಢ ಸಿಮೆಂಟ್ ಬಲ್ಕ್ ಟರ್ಮಿನಲ್' ಯೋಜನೆಗಾಗಿ ಹಡಗು ನಿಲ್ಲುವ ತಾಣ, ಕನ್ವೇಯರ್ ಕಾಲಿಡಾರ್ ಹಾಗೂ ಜೋಡು ರಸ್ತೆ ನಿರ್ಮಾಣಕ್ಕಾಗಿ ನೀಡಲಾಗಿದೆ. ಈ ಭೂಮಿಯಲ್ಲಿ ಪರಿಸರ ಸೂಕ್ಷ್ಮ ಪ್ರದೇಶಗಳಾದ ಮೀಸಲು ಅರಣ್ಯ ಮತ್ತು ಮ್ಯಾಂಗ್ರೋವ್ ಕಾಡುಗಳು ಸೇರಿವೆ.

ಈ ಭೂಮಿ ಬಳಕೆಗೆ ಸರ್ಕಾರವು ಅದಾನಿ ಗ್ರೂಪ್‌ಗೆ ಷರತ್ತನ್ನು ವಿಧಿಸಿದೆ. ಅರಣ್ಯ ಇಲಾಖೆಯ ಅಧಿಕಾರಿಗಳು ಈ ಪ್ರದೇಶಕ್ಕೆ ಪರಿಶೀಲನೆಗೆ ಬಂದಾಗ ಕಂಪನಿಯು ಯಾವುದೇ ಅಡ್ಡಿಪಡಿಸಬಾರದು; ಒಂದು ವೇಳೆ ಅಧಿಕಾರಿಗಳ ಪ್ರವೇಶವನ್ನು ತಡೆದರೆ ನೀಡಲಾದ ಅನುಮತಿಯನ್ನು ತಕ್ಷಣವೇ ಹಿಂಪಡೆಯಲಾಗುವುದು ಎಂದು ಎಚ್ಚರಿಕೆ ನೀಡಿದೆ.

ಇನ್ನೊಂದೆಡೆ, ಅಮರಾವತಿ ನಗರ ಮತ್ತು ಸುತ್ತಮುತ್ತಲಿನ ಪ್ರದೇಶಗಳಲ್ಲಿ ನೈಸರ್ಗಿಕ ಅನಿಲ ವಿತರಣಾ ಜಾಲವನ್ನು ಸ್ಥಾಪಿಸಲು ಅದಾನಿ ಟೋಟಲ್ ಗ್ಯಾಸ್ ಸಂಸ್ಥೆಗೆ 13,788 ಚದರ ಅಡಿ ಮೀಸಲು ಅರಣ್ಯ ಭೂಮಿಯನ್ನು ಹಸ್ತಾಂತರಿಸಲಾಗಿದೆ. ಕಂಪನಿಯು ಭೂಗತ ಸ್ಟೀಲ್ ಪೈಪ್‌ಲೈನ್ ಅಳವಡಿಸಲು ಈ ಭೂಮಿಯನ್ನು ಬಳಸಿಕೊಳ್ಳಲಿದೆ.

ಈ ಎರಡೂ ಯೋಜನೆಗಳಿಗೆ ಅರಣ್ಯ ಭೂಮಿಯನ್ನು ಸರ್ಕಾರ ನೀಡಿದೆ. ಆದರೆ, ಅರಣ್ಯನಾಶಕ್ಕೆ ಪ್ರತಿಯಾಗಿ ಕೈಗೊಳ್ಳಬೇಕಾದ ಪರ್ಯಾಯ ಮರ ನೆಡುವಿಕೆಯಂತಹ ಪರಿಹಾರಾತ್ಮಕ ಅರಣ್ಯೀಕರಣ ಕ್ರಮಗಳ ಕುರಿತು ಸರ್ಕಾರಿ ಆದೇಶದಲ್ಲಿ ಯಾವುದೇ ವಿವರ ನೀಡಲಾಗಿಲ್ಲ ಎಂದು ತಿಳಿದುಬಂದಿದೆ.

# ಟಾಟಾ ಸನ್ಸ್ ಅಧ್ಯಕ್ಷ ಸ್ಥಾನಕ್ಕೆ ಚಂದ್ರಶೇಖರನ್ ರಾಜೀನಾಮೆ



**ನವದೆಹಲಿ, ಆ. 12:** ಟಾಟಾ ಸಮೂಹದ ನಾಯಕತ್ವದಲ್ಲಿನ ಆಂತರಿಕ ಭಿನ್ನಾಭಿಪ್ರಾಯಗಳ ಬೆನ್ನಲ್ಲೇ, ಟಾಟಾ ಸನ್ಸ್ ಅಧ್ಯಕ್ಷ ಎನ್. ಚಂದ್ರಶೇಖರನ್ ಅವರು ತಮ್ಮ ಹುದ್ದೆಗೆ ರಾಜೀನಾಮೆ ನೀಡಿದ್ದಾರೆ. ಟಾಟಾ ಸಮೂಹವು ಪ್ರಸ್ತುತ ತನ್ನ ವಿವಿಧ ಉದ್ಯಮಗಳಲ್ಲಿ ಹಲವು ಸವಾಲುಗಳನ್ನು ಎದುರಿಸುತ್ತಿರುವ ಸಂದರ್ಭದಲ್ಲೇ ಈ ಮಹತ್ವದ ಬೆಳವಣಿಗೆ ನಡೆದಿದೆ. ಚಂದ್ರಶೇಖರನ್ ಅವರ ಮರುನೇಮಕದ ವಿಚಾರವಾಗಿ ಟಾಟಾ ಸನ್ಸ್ ಮತ್ತು ಟಾಟಾ ಟ್ರಸ್ಟ್ ನಡುವೆ ಉಂಟಾದ ಭಿನ್ನಮತವೇ ಈ ರಾಜೀನಾಮೆಗೆ ಪ್ರಮುಖ ಕಾರಣ ಎನ್ನಲಾಗಿದೆ. ಎನ್. ಚಂದ್ರಶೇಖರನ್ ಅವರ ಅಧಿಕಾರಾವಧಿಯು ಫೆಬ್ರವರಿಯಲ್ಲಿ ಅಂತ್ಯಗೊಳ್ಳಲಿದೆ. ಅವರ ಅಧಿಕಾರಾವಧಿಯನ್ನು ವಿಸ್ತರಿಸುವ ನಿರ್ಧಾರವನ್ನು ಟಾಟಾ ಟ್ರಸ್ಟ್ ಅಧ್ಯಕ್ಷ ನೋಯೆಲ್ ಟಾಟಾ ಅವರು ತೀವ್ರವಾಗಿ ವಿರೋಧಿಸಿದ ಹಿನ್ನೆಲೆಯಲ್ಲಿ, ಈ ಹಿಂದೆಯೇ (ಫೆಬ್ರವರಿಯಲ್ಲಿ) ಈ ಕುರಿತ ನಿರ್ಧಾರವನ್ನು ಮುಂದೂಡಲಾಗಿತ್ತು.

ಮೂಲಗಳ ಪ್ರಕಾರ, ಟಾಟಾ ಸನ್ಸ್ ಕಂಪನಿಯನ್ನು ಷೇರುಪೇಟೆಯಲ್ಲಿ ಎಂದಿಗೂ ಲಿಸ್ಟ್ ಮಾಡಬಾರದು ಎಂಬುದು ಸೇರಿ ನೋಯೆಲ್ ಟಾಟಾ ಅವರು ಹಲವು ಕಠಿಣ ಷರತ್ತುಗಳನ್ನು ಮುಂದಿಟ್ಟಿದ್ದರು. ಆದರೆ, ಇಂತಹ ಭರವಸೆ ನೀಡಲು ಚಂದ್ರಶೇಖರನ್ ಒಪ್ಪಿರಲಿಲ್ಲ ಎನ್ನಲಾಗಿದೆ. ಅಲ್ಲದೆ, ಆಡಳಿತ ಮಂಡಳಿಯಲ್ಲಿನ (ಬೋರ್ಡ್) ಪ್ರಾತಿನಿಧ್ಯದ ವಿಚಾರದಲ್ಲೂ ಉಭಯ ಬಣಗಳ ನಡುವೆ ಒಮ್ಮತ ಮೂಡಿರಲಿಲ್ಲ. ಸೂಕ್ಷ್ಮ ವಿಚಾರವಾಗಿರುವುದರಿಂದ ಅನಾಮಧೇಯತೆಯ ಷರತ್ತಿನ ಮೇರೆಗೆ ಮಾಹಿತಿ ನೀಡಿರುವ ಮೂಲಗಳು, ಅವರು ರಾಜೀನಾಮೆ ನೀಡಿದ್ದಾರೆ, ಆದರೆ ತಮ್ಮ ಅವಧಿಯನ್ನು ಪೂರ್ಣಗೊಳಿಸಲಿದ್ದಾರೆ ಎಂದು ಸ್ಪಷ್ಟಪಡಿಸಿವೆ.

# ದೆಹಲಿ ಅಸೆಂಬ್ಲಿಯಲ್ಲಿ ಅಕ್ಕಿ ಹಗರಣ ಗದ್ದಲ: 8 ಎಎಪಿ ಶಾಸಕರು ಹೊರಕ್ಕೆ



**ನವದೆಹಲಿ, ಆ. 12:** ದೆಹಲಿ ವಿಧಾನಸಭೆಯ ಮುಂಗಾರು ಅಧಿವೇಶನದ ಕೊನೆಯ ದಿನವಾದ ಮಂಗಳವಾರ, ದೆಹಲಿ ಸರ್ಕಾರದ ಆಹಾರ ಮತ್ತು ನಾಗರಿಕ ಸರಬರಾಜು ಇಲಾಖೆಯಲ್ಲಿ ಬೃಹತ್ ?ಅಕ್ಕಿ ಹಗರಣ? ನಡೆದಿದೆ ಎಂದು ಆರೋಪಿಸಿ ಆಮ್ ಆದ್ಮಿ ಪಾರ್ಟಿ (ಎಎಪಿ) ಶಾಸಕರು ಭಾರಿ ಪ್ರತಿಭಟನೆ ನಡೆಸಿದರು. ಸದನದ ಕಲಾಪಕ್ಕೆ ಅಡ್ಡಿಪಡಿಸಿದ ಹಿನ್ನೆಲೆಯಲ್ಲಿ ಸ್ಪೀಕರ್ ವಿಜೇಂದರ್ ಗುಪ್ತಾ ಅವರ ಆದೇಶದಂತೆ ಎಎಪಿಯ 8 ಶಾಸಕರನ್ನು ಮಾರ್ಷಲ್ಗಳ ಮೂಲಕ ಹೊರಹಾಕಲಾಯಿತು.

ಅಧಿವೇಶನ ಆರಂಭಕ್ಕೂ ಮುನ್ನ, ಎಎಪಿ ಶಾಸಕರು ವಿಧಾನಸಭೆ ಆವರಣದಲ್ಲಿ ವಿರೋಧ ಪಕ್ಷದ ನಾಯಕಿ ಅತಿಶಿ ಅವರ ಕಚೇರಿಯ ಮುಂದೆ ದೊಡ್ಡ ಅಕ್ಕಿ ಚೀಲಗಳನ್ನು ಇಟ್ಟುಕೊಂಡು ಕುಳಿತು ಪ್ರತಿಭಟಿಸಿದರು. ?ಬಡವರ ಅಕ್ಕಿ ಎಲ್ಲಿ ಹೋಯಿತು?? (ಗರೀಬ್ ಕಾ ಚಾವಲ್ ಕಹಾ ಗಯಾ?) ಎಂದು ಘೋಷಣೆಗಳನ್ನು ಕೂಗಿದರು. ಮಧ್ಯಾಹ್ನದ ಉಪಾಹಾರದ ನಂತರ ಕಲಾಪ ಪುನರಾರಂಭಗೊಳ್ಳುತ್ತಿದ್ದಂತೆ, ಶಾಸಕರು ಪ್ಲೇಕಾರ್ಡ್ ಹಿಡಿದು ಸದನದ ಬಾವಿಕಿಳಿದು ಆಹಾರ ಸಚಿವ ಮಂಜಿಂದರ್ ಸಿಂಗ್ ಸಿರ್ಸಾ ಅವರ ರಾಜೀನಾಮೆಗೆ ಪಟ್ಟು ಹಿಡಿದರು.

ಎಎಪಿ ನಾಯಕರಾದ ಸೌರಭ್ ಭಾರದ್ವಾಜ್ ಮತ್ತು ಸಂಜೀವ್ ಝಾ ಅವರ ಆರೋಪದಂತೆ, ದೆಹಲಿಯ ಬಡವರು ಹಾಗೂ ವಲಸಿಗರಿಗೆ ವಿತರಿಸಲು ಭಾರತೀಯ ಆಹಾರ ನಿಗಮದಿಂದ ರಿಯಾಯಿತಿ ದರದಲ್ಲಿ ಪಡೆಯಬೇಕಿದ್ದ ಅಕ್ಕಿಯನ್ನು ಹರ್ಯಾಣದ ಖಾಸಗಿ ಕಂಪನಿಯೊಂದಕ್ಕೆ ಅಕ್ರಮವಾಗಿ ಕಾಳಸಂತೆಯಲ್ಲಿ ಮಾರಾಟ ಮಾಡಲಾಗಿದೆ. ಪ್ರತಿ ವಾರ 31,000 ಮೆಟ್ರಿಕ್ ಟನ್ ಅಕ್ಕಿಯನ್ನು ಡೈವರ್ಟ್ ಮಾಡುವ ಮೂಲಕ 3 ವರ್ಷಗಳಲ್ಲಿ ಸುಮಾರು ?22,000 ಕೋಟಿ ಮೌಲ್ಯದ ಭ್ರಷ್ಟಾಚಾರ ನಡೆಸಲು ಸಂಚು ರೂಪಿಸಲಾಗಿತ್ತು ಎಂದು ಎಎಪಿ ಆರೋಪಿಸಿದೆ.

ಸದನದ ಮುನ್ನಡೆಗೆ ನಿರಂತರ ಅಡ್ಡಿಪಡಿಸಿದ ಕಾರಣ ಸ್ಪೀಕರ್ ವಿಜೇಂದರ್ ಗುಪ್ತಾ ಅವರು ಮಾರ್ಷಲ್ಗಳಿಗೆ ಶಾಸಕರನ್ನು ಹೊರಹಾಕಲು ಸೂಚಿಸಿದರು. ಸಂಜೀವ್ ಝಾ, ಜರ್ನೈಲ್ ಸಿಂಗ್, ಕುಲದೀಪ್ ಕುಮಾರ್, ಸೋಮ್ ದತ್, ಅಜಯ್ ದತ್, ವೀರೇಂದ್ರ ಕಡ್ಯಾನ್, ಸುರೇಂದ್ರ ಕುಮಾರ್ ಮತ್ತು ಚೌಧರಿ ಜುಬೇರ್ ಅಹಮದ್.

ಆರೋಪಗಳನ್ನು ಸಂಪೂರ್ಣವಾಗಿ ನಿರಾಕರಿಸಿದ ಸಚಿವ ಮಂಜಿಂದರ್ ಸಿಂಗ್ ಸಿರ್ಸಾ, ?ದೆಹಲಿ ಸರ್ಕಾರ ಯಾವುದೇ ಅಕ್ಕಿಯನ್ನು ಖರೀದಿಸಿಯೂ ಇಲ್ಲ, ಮಾರಾಟವನ್ನೂ ಮಾಡಿಲ್ಲ? ಎಂದು ಹೇಳಿಕೊಂಡಿದ್ದಾರೆ.

# 17 ದಿನಗಳಿಂದ ಸಂಸತ್ತಿಗೆ ಗೃಹಸಚಿವ ಅಮಿತ್ ಶಾ ಗೈರು

**ನವದೆಹಲಿ, ಆ. 12:** ಕೇಂದ್ರ ಗೃಹ ಸಚಿವ ಅಮಿತ್ ಶಾ ಅವರು ಮುಂಗಾರು ಅಧಿವೇಶನದಲ್ಲಿ ಸತತ 17 ದಿನಗಳಿಂದ ನಿರಂತರವಾಗಿ ಗೈರು ಹಾಜರಾಗಿದ್ದಾರೆ. ನಾಳೆಯೇ(ಆ.13) ಈ ಮಹತ್ವದ ಅಧಿವೇಶನದ ಅಂತಿಮ ದಿನವಾಗಿದೆ. ದೇಶದ ಅತ್ಯಂತ ಸೂಕ್ಷ್ಮ ಹಾಗೂ ಪ್ರಮುಖ ಖಾತೆಯನ್ನು ನಿಭಾಯಿಸುವ ಹಿರಿಯ ಸಚಿವರು ಇಷ್ಟು ದೀರ್ಘಕಾಲ ಸದನದತ್ತ ಸುಳಿಯದಿರುವುದು ಈಗ ರಾಷ್ಟ್ರಮಟ್ಟದಲ್ಲಿ ತೀವ್ರ ಚರ್ಚೆಗೆ ಹಾಗೂ ಅನುಮಾನಗಳಿಗೆ ಗ್ರಾಸವಾಗಿದೆ.

ದೇಶವು ಹಲವು ಜ್ವಲಂತ ಆಂತರಿಕ ಬಿಕ್ಕಟ್ಟುಗಳು ಹಾಗೂ ಗಂಭೀರ ಸಮಸ್ಯೆಗಳನ್ನು ಎದುರಿಸುತ್ತಿರುವ ಈ ವಿಷಮ ಸಂದರ್ಭದಲ್ಲಿ, ಗೃಹ ಸಚಿವರು ದೇಶಕ್ಕೆ ಉತ್ತರಿಸಲಾಗದೆ ಹೇಡಿಯಂತೆ ಅಡಗಿಕುಳಿತಿದ್ದಾರೆಯೇ ಎಂಬ ಕಠಿಣ ಪ್ರಶ್ನೆಗಳು ಸಾರ್ವಜನಿಕ ವಲಯದಲ್ಲಿ ಎದ್ದಿವೆ. ಅತ್ಯಂತ ಜವಾಬ್ದಾರಿಯುತ ಸ್ಥಾನದಲ್ಲಿರುವವರು ಹೀಗೆ ದೇಶದ ಜನತೆಗೆ ಮುಖ ತೋರಿಸಲಾಗದೆ ಕೌಚಿಕೊಂಡು ಕೂರುವುದು ಪ್ರಜಾಪ್ರಭುತ್ವ ವ್ಯವಸ್ಥೆಯ ಅತಿ ದೊಡ್ಡ ವಿಡಂಬನೆ.

ಸಂಸತ್ತು ಎಂದರೆ ಕೇವಲ ಒಂದು ಕಟ್ಟಡವಲ್ಲ, ಅದು ಜನರ ಪ್ರಶ್ನೆಗಳಿಗೆ ಉತ್ತರಿಸುವ ಮತ್ತು ಆಡಳಿತದ ಪಾರದರ್ಶಕತೆಯನ್ನು ಪ್ರದರ್ಶಿಸುವ ಪವಿತ್ರ ವೇದಿಕೆಯಾಗಿದೆ. ಆದರೆ, ಕಳೆದ ಹದಿನೇಳು ದಿನಗಳಿಂದ ಕಲಾಪದಿಂದ ಸಂಪೂರ್ಣವಾಗಿ ದೂರ ಉಳಿಯುವ ಮೂಲಕ ಗೃಹ ಸಚಿವರು ತಮ್ಮ ಮೇಲಿನ ಸಾಂವಿಧಾನಿಕ ಹಾಗೂ ಪ್ರಜಾಸತ್ತಾತ್ಮಕ ಹೊಣೆಗಾರಿಕೆಯಿಂದ ಉದ್ದೇಶಪೂರ್ವಕವಾಗಿಯೇ ನುಣುಚಿಕೊಳ್ಳುತ್ತಿದ್ದಾರೆ ಎಂಬ ಆರೋಪಗಳು ಎಲ್ಲೆಡೆ ದಟ್ಟವಾಗಿ ಕೇಳಿಬರುತ್ತಿವೆ. ಪ್ರತಿಪಕ್ಷಗಳಂತೂ ಸಚಿವರ ಈ ಪಲಾಯನವಾದಿ ನಡೆಯನ್ನು ತೀವ್ರವಾಗಿ ಖಂಡಿಸಿವೆ. ದೇಶದ ಭದ್ರತೆ, ಕಾನೂನು ಸುವ್ಯವಸ್ಥೆ ಹಾಗೂ ವಿರೋಧ ಪಕ್ಷಗಳ ಚೂಪಾದ ಪ್ರಶ್ನೆಗಳನ್ನು ನೇರವಾಗಿ ಎದುರಿಸಲು ಸಾಧ್ಯವಾಗದೆ, ಅವರು ಅಧಿವೇಶನದಿಂದ ಓಡಿಹೋಗಿದ್ದಾರೆ. ಜನರ ಪರವಾಗಿ ಕೇಳುವ ಕಠಿಣ ಪ್ರಶ್ನೆಗಳಿಗೆ ಉತ್ತರಿಸಲು ಧೈರ್ಯವಿಲ್ಲದೆ ಹೇಡಿಯಂತೆ ಅಡಗಿದ್ದಾರೆ ಎಂದು ನಾಯಕರು ತೀವ್ರ ಆಕ್ರೋಶ ವ್ಯಕ್ತಪಡಿಸುತ್ತಿದ್ದಾರೆ. ಗೃಹ ಇಲಾಖೆಯಂತಹ ಮಹತ್ವದ ಜವಾಬ್ದಾರಿ ಹೊತ್ತವರು ಯಾವುದೇ ಸ್ಪಷ್ಟನೆ ನೀಡದೆ ಇಷ್ಟು ದೀರ್ಘಕಾಲ ಸದನಕ್ಕೆ ಬಾರದಿರುವುದು ಸಾಮಾನ್ಯ ವಿಷಯವಲ್ಲ. ಇದು ಸರ್ಕಾರದ ಪಾರದರ್ಶಕತೆಯ ಕೊರತೆಯನ್ನು ಸ್ಪಷ್ಟವಾಗಿ ಎತ್ತಿತೋರಿಸುತ್ತಿದ್ದು, ಸದನದಲ್ಲಿ ಎದುರಾಗಬಹುದಾದ ಮುಜುಗರ ಹಾಗೂ ಟೀಕಾಸ್ತ್ರಗಳನ್ನು ತಪ್ಪಿಸಿಕೊಳ್ಳಲು ಸಚಿವರು ಬೇಕಂತಲೇ ಕಣ್ಮರೆಯಾಗಿದ್ದಾರೆ ಎಂಬ ಮಾತುಗಳು ಈಗ ರಾಜಕೀಯ ಪಡಸಾಲೆಯಲ್ಲಿ ವ್ಯಾಪಕವಾಗಿ ಗುನುಗುತ್ತಿವೆ. ನಾಳೆಗೆ ಈ ಮುಂಗಾರು ಅಧಿವೇಶನದ ಕಲಾಪಗಳು ಸಂಪೂರ್ಣವಾಗಿ ಮುಕ್ತಾಯಗೊಳ್ಳಲಿವೆ. ಕನಿಷ್ಠ ಪಕ್ಷ ಕೊನೆಯ ದಿನವಾದರೂ ಗೃಹ ಸಚಿವರು ಸದನಕ್ಕೆ ಆಗಮಿಸಿ ದೇಶದ ಜನತೆಗೆ ನೇರವಾಗಿ ಉತ್ತರ ನೀಡುವ ಧೈರ್ಯ ತೋರುತ್ತಾರೆಯೇ? ಅಥವಾ ಅದೇ ಹಳೆಯ ಶೈಲಿಯಲ್ಲಿ ಪ್ರಶ್ನೆಗಳಿಗೆ ಬೆನ್ನುತೋರಿಸಿ, ಮುಖ ಮುಚ್ಚಿಕೊಂಡು ಪಲಾಯನವಾದಿಯಂತೆ ಈ ಅಧಿವೇಶನವನ್ನು ಅಂತ್ಯಗೊಳಿಸುತ್ತಾರೆಯೇ ಎಂಬುದನ್ನು ಇಡೀ ದೇಶವೇ ಕಾದುನೋಡಬೇಕಿದೆ.



ಅಯೋಧ್ಯೆ ರಾಮಮಂದಿರ ದೇಣಿಗೆ ದುರುಪಯೋಗ ವಿರೋಧಿಸಿ ಸಂಸತ್ ಭವನದ ಬಳಿ ಬುಧವಾರ ವಿರೋಧ ಪಕ್ಷಗಳ ಸದಸ್ಯರು ಪ್ರತಿಭಟನೆ ನಡೆಸಿದರು. ಎಐಸಿಸಿ ಅಧ್ಯಕ್ಷ ಹಾಗೂ ರಾಜ್ಯಸಭೆ ಪ್ರತಿಪಕ್ಷ ನಾಯಕ ಮಲ್ಲಿಕಾರ್ಜುನ ಖರ್ಗೆ, ಸಂಸದೆ ಪ್ರಿಯಾಂಕ ಖರ್ಗೆ ಮತ್ತಿತರ ಸದಸ್ಯರು ಭಾಗವಹಿಸಿದ್ದರು.

# ಅಸ್ಸಾಂನಲ್ಲಿ ಪ್ರವಾಹ ಪರಿಸ್ಥಿತಿ ಗಂಭೀರ; 1.12 ಲಕ್ಷಕ್ಕೂ ಹೆಚ್ಚು ಮಂದಿ ಬಾಧಿತ



**ನವದೆಹಲಿ, ಆ.12:** ಅಸ್ಸಾಂನಲ್ಲಿ ಪ್ರವಾಹದ ಪರಿಸ್ಥಿತಿ ಮತ್ತಷ್ಟು ಗಂಭೀರವಾಗಿದ್ದು, ಹಲವು ನದಿಗಳು ಅಪಾಯದ ಮಟ್ಟ ಮೀರಿ ಹರಿಯುತ್ತಿವೆ. ನಾಲ್ಕು ಜಿಲ್ಲೆಗಳಲ್ಲಿ 1.12 ಲಕ್ಷಕ್ಕೂ ಹೆಚ್ಚು ಜನರು ಪ್ರವಾಹದಿಂದ ಬಾಧಿತರಾಗಿದ್ದಾರೆ. ಮುಂದಿನ ದಿನಗಳಲ್ಲೂ ಮಳೆಯ ಮುನ್ಸೂಚನೆ ಇರುವುದರಿಂದ ಹೊಸ ಪ್ರದೇಶಗಳಿಗೆ ಪ್ರವಾಹ ವ್ಯಾಪಿಸುವ ಆತಂಕ ಎದುರಾಗಿದೆ.

ಗೋಲಾಘಾಟ್, ಜೋರ್ಹಾಟ್, ನಾಗಾಂವ್ ಮತ್ತು ಶಿವಸಾಗರ್ ಜಿಲ್ಲೆಗಳು ಹೆಚ್ಚು ಬಾಧಿತವಾಗಿವೆ. ಗೋಲಾಘಾಟ್ನಲ್ಲಿ 65 ಸಾವಿರಕ್ಕೂ ಹೆಚ್ಚು, ಶಿವಸಾಗರ್ನಲ್ಲಿ ಸುಮಾರು 20 ಸಾವಿರ ಹಾಗೂ ನಾಗಾಂವ್ನಲ್ಲಿ 16 ಸಾವಿರಕ್ಕೂ ಅಧಿಕ ಮಂದಿ ಸಂಕಷ್ಟಕ್ಕೆ ಸಿಲುಕಿದ್ದಾರೆ. ರಾಜ್ಯದ 441 ಗ್ರಾಮಗಳು ಇನ್ನೂ ಜಲಾವೃತವಾಗಿವೆ.

ಪ್ರವಾಹದಿಂದ 10,879 ಹೆಕ್ಟೇರ್ಗೂ ಹೆಚ್ಚು ಕೃಷಿ ಭೂಮಿ ಹಾನಿಗೊಳಗಾಗಿದ್ದು, ರಸ್ತೆ, ಸೇತುವೆ, ತಡೆಗೋಡೆ ಸೇರಿದಂತೆ ಮೂಲಸೌಕರ್ಯಕ್ಕೂ ಹಾನಿಯಾಗಿದೆ. 31,650ಕ್ಕೂ ಹೆಚ್ಚು ಜಾನುವಾರು ಮತ್ತು ಕೋಳಿ ಸಾಕಾಣಿಕೆ ಮೇಲೂ ಪರಿಣಾಮ ಬೀರಿದೆ. ಐದು ಜಿಲ್ಲೆಗಳಲ್ಲಿ 92 ಪರಿಹಾರ ಶಿಬಿರ ಹಾಗೂ ಪರಿಹಾರ ವಿತರಣಾ ಕೇಂದ್ರಗಳನ್ನು ತೆರೆಯಲಾಗಿದ್ದು, 30,205 ಮಂದಿಗೆ ನೆರವು ನೀಡಲಾಗುತ್ತಿದೆ.

**101ಕ್ಕೆ ಏರಿದ ಸಾವಿನ ಸಂಖ್ಯೆ:** ಅಸ್ಸಾಂನಲ್ಲಿ ಈ ವರ್ಷದ ಪ್ರವಾಹದಿಂದ ಮೃತಪಟ್ಟವರ ಸಂಖ್ಯೆ 101ಕ್ಕೆ ತಲುಪಿದೆ. ಗೋಲಾಘಾಟ್ ಜಿಲ್ಲೆಯ ನುಮಾಲಿಗಢದಲ್ಲಿ ಧನಸಿರಿ ನದಿ ಅಪಾಯಕಾರಿಯಾಗಿ ಉಕ್ಕಿ ಹರಿಯುತ್ತಿದ್ದು, ನೀರಿನ ಮಟ್ಟ ಮತ್ತಷ್ಟು ಏರಿಕೆಯಾಗುತ್ತಿರುವ ಹಿನ್ನೆಲೆಯಲ್ಲಿ ನದಿ ಸಮೀಪಕ್ಕೆ ತೆರಳದಂತೆ ಅಧಿಕಾರಿಗಳು ಜನರಿಗೆ ಎಚ್ಚರಿಕೆ ನೀಡಿದ್ದಾರೆ.

**ಮತ್ತಷ್ಟು ಮಳೆಯ ಮುನ್ಸೂಚನೆ:** ಭಾರತೀಯ ಹವಾಮಾನ ಇಲಾಖೆ ಚರೈದೇವ್, ಡಿಬ್ರುಗಢ, ಜೋರ್ಹಾಟ್, ಶಿವಸಾಗರ್ ಮತ್ತು ತಿನ್ಸುಕಿಯಾ ಜಿಲ್ಲೆಗಳ ಕೆಲವು ಭಾಗಗಳಲ್ಲಿ ಗುಡುಗು, ಸಿಡಿಲು ಸಹಿತ ಸಾಧಾರಣದಿಂದ ಭಾರಿ ಮಳೆಯಾಗುವ ಮುನ್ಸೂಚನೆ ನೀಡಿದೆ. ಈಗಾಗಲೇ ಪ್ರವಾಹಪೀಡಿತ ಪ್ರದೇಶಗಳಲ್ಲಿ ಮತ್ತಷ್ಟು ಮಳೆಯಾದರೆ ಪರಿಸ್ಥಿತಿ ಇನ್ನಷ್ಟು ಹದಗೆಡುವ ಸಾಧ್ಯತೆ ಇದೆ.

## 1,000 ಕೋಟಿ ರೂ. ಪರಿಹಾರದ ಅಗತ್ಯ



**ಪ್ರವಾಹದಿಂದ ಹಾನಿಗೊಳಗಾದ ಆಸ್ತಿಗಳ ದುರಸ್ತಿ ಹಾಗೂ ಸಂತ್ರಸ್ತರ ಪುನರ್ವಸತಿಗೆ ಕನಿಷ್ಠ ?1,000 ಕೋಟಿ ಅಗತ್ಯವಿದೆ ಎಂದು ಅಸ್ಸಾಂ ಮುಖ್ಯಮಂತ್ರಿ ಹಿಮಂತ ಬಿಸ್ವ ಶರ್ಮಾ ತಿಳಿಸಿದ್ದಾರೆ. ಪ್ರಧಾನಿ ನರೇಂದ್ರ ಮೋದಿ ಅವರು ಪುನರ್ವಸತಿ ಕಾರ್ಯಕ್ಕೆ ಸಂಪೂರ್ಣ ನೆರವು ನೀಡುವ ಭರವಸೆ ನೀಡಿದ್ದಾರೆ ಎಂದು ಅವರು ಹೇಳಿದ್ದಾರೆ. ಆಗಸ್ಟ್ 9ರಿಂದ ಹಾನಿ-ನಷ್ಟದ ಸಮೀಕ್ಷೆ ಆರಂಭಿಸಲಾಗಿದ್ದು, ಈಗಾಗಲೇ 8 ಸಾವಿರಕ್ಕೂ ಹೆಚ್ಚು ಕುಟುಂಬಗಳ ಸಮೀಕ್ಷೆ ಪೂರ್ಣಗೊಂಡಿದೆ. ಆರಂಭಿಕ ಅಂದಾಜಿನ ಪ್ರಕಾರ 150 ಕೋಟಿಯಷ್ಟು ನಷ್ಟ ಸಂಭವಿಸಿದೆ. ಸಮೀಕ್ಷೆ ಆಗಸ್ಟ್ 30ರವರೆಗೆ ಮುಂದುವರಿಯಲಿದ್ದು, ಮೇಲ್ಭಾಗದ ಜಿಲ್ಲೆಗಳ 50ರಿಂದ 60 ಸಾವಿರ ಕುಟುಂಬಗಳನ್ನು ಒಳಗೊಳ್ಳುವ ನಿರೀಕ್ಷೆಯಿದೆ.**

## ಹಿಮಾಚಲದಲ್ಲಿ ಮಳೆ ಅಬ್ಬರ: 288 ರಸ್ತೆಗಳು ಬಂದ್; 112 ಟ್ರಾನ್ಸ್‌ಫಾರ್ಮರ್‌ಗಳು ಸ್ಥಗಿತ

**ಶಿಮ್ಲಾ, ಆ.12:** ಹಿಮಾಚಲ ಪ್ರದೇಶದಲ್ಲಿ ಮುಂದುವರಿದಿರುವ ಭಾರಿ ಮಳೆ ಹಾಗೂ ಕೆಲವೆಡೆ ಹಿಮಪಾತದಿಂದ ಜನಜೀವನ ಅಸ್ತವ್ಯಸ್ತಗೊಂಡಿದೆ. ರಾಜ್ಯ ತುರ್ತು ಕಾರ್ಯಾಚರಣೆ ಕೇಂದ್ರ ಬಿಡುಗಡೆ ಮಾಡಿದ ವರದಿ ಪ್ರಕಾರ, ರಾಜ್ಯದಾದ್ಯಂತ 288 ರಸ್ತೆಗಳು ಸಂಚಾರಕ್ಕೆ ಬಂದ್ ಆಗಿದ್ದು, 112 ವಿದ್ಯುತ್ ಟ್ರಾನ್ಸ್ಫಾರ್ಮರ್ಗಳು ಹಾಗೂ 55 ಕುಡಿಯುವ ನೀರಿನ ಯೋಜನೆಗಳು ಹಾನಿಗೊಳಗಾಗಿವೆ.

ಮಂಡಿ ಜಿಲ್ಲೆ ಮಳೆಯಿಂದ ಅತಿ ಹೆಚ್ಚು ಬಾಧಿತವಾಗಿದ್ದು, 117 ರಸ್ತೆಗಳು ಬಂದ್ ಆಗಿವೆ. ಸರಾಜ್ ಮತ್ತು ಥಲೌಟ್ ಪ್ರದೇಶಗಳಲ್ಲಿ ತಲಾ 45 ರಸ್ತೆಗಳು, ಪಧರ್ನಲ್ಲಿ 18 ಹಾಗೂ ಧರ್ಮಪುರದಲ್ಲಿ ನಾಲ್ಕು ರಸ್ತೆಗಳು ಬಂದ್ ಆಗಿವೆ. ಜಿಲ್ಲೆಯಲ್ಲಿ 61 ಟ್ರಾನ್ಸ್ಫಾರ್ಮರ್ಗಳು ಮತ್ತು ಎಂಟು ಕುಡಿಯುವ ನೀರಿನ ಯೋಜನೆಗಳ ಮೇಲೂ ಪರಿಣಾಮ ಬೀರಿದೆ.

ಚಂಬಾ ಜಿಲ್ಲೆಯಲ್ಲಿ 74 ರಸ್ತೆಗಳು ಬಂದ್ ಆಗಿದ್ದು, 12 ಟ್ರಾನ್ಸ್ಫಾರ್ಮರ್ಗಳು ಹಾಗೂ 16 ಕುಡಿಯುವ ನೀರಿನ ಯೋಜನೆಗಳು ಬಾಧಿತವಾಗಿವೆ. ಕುಲ್ಲು ಜಿಲ್ಲೆಯಲ್ಲಿ 56 ರಸ್ತೆಗಳು ಬಂದ್ ಆಗಿದ್ದು, ಬಂಜಾರ್ನಲ್ಲಿ 34 ವಿದ್ಯುತ್ ಟ್ರಾನ್ಸ್ಫಾರ್ಮರ್ಗಳು ಸ್ಥಗಿತಗೊಂಡಿವೆ.

ಶಿಮ್ಲಾ ಜಿಲ್ಲೆಯಲ್ಲಿ 14 ರಸ್ತೆಗಳು ಬಂದ್ ಆಗಿವೆ. ರಾಮಪುರದಲ್ಲಿ ಎಂಟು, ಚೌಪಾಲ್ನಲ್ಲಿ ನಾಲ್ಕು, ಥಿಯೋಗ್ ಮತ್ತು ಸುನ್ನಿಯಲ್ಲಿ ತಲಾ ಒಂದು ರಸ್ತೆ ಬಾಧಿತವಾಗಿದೆ. ಜಿಲ್ಲೆಯಲ್ಲಿ ಐದು ಟ್ರಾನ್ಸ್ಫಾರ್ಮರ್ಗಳು ಹಾಗೂ 26 ಕುಡಿಯುವ ನೀರಿನ ಯೋಜನೆಗಳು ಪರಿಣಾಮಕ್ಕೊಳಗಾಗಿವೆ. ಸಿರ್ಮೌರ್ನಲ್ಲಿ 13, ಹಮೀರ್ಪುರ ಮತ್ತು ಕಾಂಗ್ರಾದಲ್ಲಿ ತಲಾ ಐದು, ಊನಾದಲ್ಲಿ ನಾಲ್ಕು ರಸ್ತೆಗಳು ಬಂದ್ ಆಗಿವೆ.

ಕಿನ್ನೌರ್‌ನಲ್ಲಿ ಎರಡು ಹಾಗೂ ಲಾಹೌಲ್-ಸ್ಪಿತಿಯಲ್ಲಿ ಮೂರು ರಸ್ತೆಗಳು ಬಂದ್ ಆಗಿವೆ. ಕಿನ್ನೌರ್ನಲ್ಲಿ ನೀರಿನ ಮಟ್ಟ ಏರಿಕೆ ಮತ್ತು ಫ್ಲ್ಯಾಷ್‌ಫ್ಲಡ್‌ನಿಂದ ಸಂಪರ್ಕ ರಸ್ತೆಗಳು ಬಂದ್ ಆಗಿವೆ. ಒಂದೇ ದಿನದಲ್ಲಿ ಪರಿಸ್ಥಿತಿ ಹದಗೆಟ್ಟಿದ್ದು, ಆಗಸ್ಟ್ 11ರ ಸಂಜೆ 204 ರಸ್ತೆಗಳು ಮತ್ತು 45 ಟ್ರಾನ್ಸ್ಫಾರ್ಮರ್ಗಳು ಬಾಧಿತವಾಗಿದ್ದರೆ, ಆಗಸ್ಟ್ 12ರ ಬೆಳಗ್ಗೆ ಈ ಸಂಖ್ಯೆ ಕ್ರಮವಾಗಿ 288 ಮತ್ತು 112ಕ್ಕೆ ಏರಿದೆ. ಇದೇ ವೇಳೆ ಕುಡಿಯುವ ನೀರಿನ ಯೋಜನೆಗಳ ಸಂಖ್ಯೆ 82ರಿಂದ 55ಕ್ಕೆ ಇಳಿಕೆಯಾಗಿದೆ.

# ಎಸ್‌ಐಆರ್ ಸಂಬಂಧಿತ ಮೇಲ್ಮನವಿಗಳ ತ್ವರಿತ ವಿಲೇವಾರಿಗೆ ಸುಪ್ರೀಂ ಕೋರ್ಟ್ ಸೂಚನೆ

- ಸುಮಾರು 34 ಲಕ್ಷ ಮನವಿ ಇತ್ಯರ್ಥಕ್ಕೆ ಬಾಕಿ
- ವಿಚಾರಣೆ ಪ್ರಕ್ರಿಯೆ ಚುರುಕುಗೊಳಿಸುವಂತೆ ನ್ಯಾಯಮಂಡಳಿಗಳಿಗೆ ಸೂಚನೆ
- ಆ.25ರೊಳಗೆ ಬಾಕಿ ಇರುವ ಹಾಗೂ ಇತ್ಯರ್ಥಗೊಂಡ ಪ್ರಕರಣಗಳ ವಿವರ ನೀಡುವಂತೆ ಚುನಾವಣಾ ಆಯೋಗಕ್ಕೆ ಸೂಚನೆ

**ನವದೆಹಲಿ, ಆ. 12:** ಪಶ್ಚಿಮ ಬಂಗಾಳದಲ್ಲಿ ಮತದಾರರ ಪಟ್ಟಿಯಿಂದ ಹೆಸರು ಕೈಬಿಟ್ಟಿರುವುದನ್ನು ಪ್ರಶ್ನಿಸಿ ಎಸ್‌ಐಆರ್ ಮೇಲ್ಮನವಿ ನ್ಯಾಯಮಂಡಳಿಗಳಿಗೆ ಸಲ್ಲಿಕೆಯಾಗಿರುವ 34 ಲಕ್ಷ ಮೇಲ್ಮನವಿಗಳು ಇತ್ಯರ್ಥಕ್ಕೆ ಬಾಕಿ ಇವೆ. ಈ ಕುರಿತು ತೀವ್ರ ಕಳವಳ ವ್ಯಕ್ತಪಡಿಸಿರುವ ಸುಪ್ರೀಂ ಕೋರ್ಟ್, ವಿಚಾರಣಾ ಪ್ರಕ್ರಿಯೆಯನ್ನು ತಕ್ಷಣವೇ ಚುರುಕುಗೊಳಿಸುವಂತೆ ಸೂಚಿಸಿದೆ.

ಮುಂದಿನ ವಿಧಾನಸಭಾ ಚುನಾವಣೆ ಬರುವಷ್ಟರಲ್ಲಿಯೂ ಈ ಮೇಲ್ಮನವಿಗಳ ವಿಚಾರಣೆ ಮುಗಿಯದಷ್ಟು ನ್ಯಾಯಮಂಡಳಿಯ ಪ್ರಕ್ರಿಯೆ ನಿಧಾನವಾಗಿರಬಾರದು. ಇದು ಸುದೀರ್ಘ ಕಾಲದವರೆಗೆ ಸಾಗುವಂತಿಲ್ಲ ಎಂದು ಸುಪ್ರೀಂ ಕೋರ್ಟ್ ಮುಖ್ಯ ನ್ಯಾಯಮೂರ್ತಿ ಸೂರ್ಯಕಾಂತ್ ಅವರು ಕಟ್ಟುನಿಟ್ಟಿನ ಎಚ್ಚರಿಕೆ ನೀಡಿದ್ದಾರೆ.

ಅರ್ಜಿದಾರ ಹಾಗೂ ಕಾಂಗ್ರೆಸ್ ನಾಯಕ ಅಧೀರ್ ರಂಜನ್ ಚೌಧರಿ ಅವರ ಪರವಾಗಿ ಹಿರಿಯ ವಕೀಲ ರೌಫ್ ರಹೀಮ್ ಅವರು ವಾದ ಮಂಡಿಸಿದರು. ವಿಶೇಷ ಪರಿಷ್ಕರಣೆ ವೇಳೆ ಮುರ್ಷಿದಾಬಾದ್ನಲ್ಲಿ ಲಕ್ಷಾಂತರ ಬಡವರ ಹೆಸರುಗಳನ್ನು ಪಟ್ಟಿಯಿಂದ ಅಳಿಸಲಾಗಿದೆ. ಅವರು ಸುಪ್ರೀಂ ಕೋರ್ಟ್ ಮೆಟ್ಟಿಲೇರಲು ಆರ್ಥಿಕವಾಗಿ ಅಸಹಾಯಕರಾಗಿದ್ದಾರೆ. ಅಲ್ಲದೆ, ವಿಚಾರಣೆಗಾಗಿ ರಚಿಸಲಾಗಿರುವ ನ್ಯಾಯಮಂಡಳಿಗಳ ಕಾರ್ಯವೈಖರಿ ತೀರಾ ನಿಧಾನಗತಿಯಲ್ಲಿದೆ. ಹೀಗಾಗಿ ಪ್ರಕರಣಗಳ ತ್ವರಿತ ವಿಲೇವಾರಿಗೆ ವೇಗ ನೀಡಲು ಸೂಕ್ತ ನಿರ್ದೇಶನ ನೀಡಬೇಕು ಎಂದು ಅವರು ನ್ಯಾಯಾಲಯವನ್ನು ಕೋರಿದರು.

ಮುಖ್ಯ ನ್ಯಾಯಮೂರ್ತಿ ಸೂರ್ಯಕಾಂತ್, ನ್ಯಾಯಮೂರ್ತಿಗಳಾದ ಜೋಯ್‌ಮಾಲ್ಯ ಬಾಗ್ಚಿ ಮತ್ತು ವಿ. ಮೋಹನ ಅವರ ತ್ರಿಸದಸ್ಯ ಪೀಠವು ಈ ಅರ್ಜಿ ವಿಚಾರಣೆ ನಡೆಸಿತು. ನಮ್ಮ ಆದೇಶದ ಮೇರೆಗೆ ರಚನೆಯಾದ ನ್ಯಾಯಮಂಡಳಿಗಳ ಕಾರ್ಯಕ್ಷಮತೆಯನ್ನು ಈಗ ಪರಿಶೀಲಿಸಬೇಕಿದೆ ಎಂದು ಪೀಠ ಹೇಳಿತು. ಆಗಸ್ಟ್ 25ರೊಳಗೆ ಬಾಕಿ ಇರುವ ಹಾಗೂ ಇತ್ಯರ್ಥಗೊಂಡ ಪ್ರಕರಣಗಳ ಸಂಪೂರ್ಣ ವಿವರ ನೀಡುವಂತೆ ಚುನಾವಣಾ ಆಯೋಗಕ್ಕೆ ಸೂಚಿಸಲಾಯಿತು. ನಿಖರ ಅಂಕಿ-ಅಂಶ ಸಿಕ್ಕ ಬಳಿಕ ಪ್ರಕ್ರಿಯೆ ವೇಗಗೊಳಿಸಲು ಮಾಹಿತಿ ತಂತ್ರಜ್ಞಾನದ ನೆರವು ಒದಗಿಸುವುದಾಗಿ ನ್ಯಾಯಮೂರ್ತಿ ಬಾಗ್ಚಿ ಭರವಸೆ ನೀಡಿದರು.



ಮತದಾರರ ಪಟ್ಟಿಯಿಂದ ಕೈಬಿಟ್ಟ ಕಾರಣ ಬಡವರಿಗೆ ಪಶ್ಚಿಮ ಬಂಗಾಳ ಸರ್ಕಾರದ ಕಲ್ಯಾಣ ಯೋಜನೆಗಳ ಸೌಲಭ್ಯಗಳನ್ನು ಉದ್ದೇಶಪೂರ್ವಕವಾಗಿ ನಿರಾಕರಿಸಲಾಗುತ್ತಿದೆ ಎಂಬ ಮಹತ್ವದ ವಿಚಾರವನ್ನು ವಕೀಲರು ಪ್ರಸ್ತಾಪಿಸಿದರು. ಇದಕ್ಕೆ ಪ್ರತಿಕ್ರಿಯಿಸಿದ ಸುಪ್ರೀಂ ಕೋರ್ಟ್, ಇದು ಸಂಪೂರ್ಣವಾಗಿ ಪ್ರತ್ಯೇಕ ವಿಚಾರ. ಈ ಕುರಿತು ಕಲ್ಕತ್ತಾ ಹೈಕೋರ್ಟ್‌ಗೆ ಅರ್ಜಿ ಸಲ್ಲಿಸಿ ಅಲ್ಲಿಯೇ ಸೂಕ್ತ ಪರಿಹಾರ ಕಂಡುಕೊಳ್ಳಬೇಕು ಎಂದು ಸ್ಪಷ್ಟಪಡಿಸಿತು. ಅಲ್ಲದೆ, ಮೇಲ್ಮನವಿಗಳ ಸಂಪೂರ್ಣ ವಿಲೇವಾರಿಗೆ ಯಾವುದೇ ನಿರ್ದಿಷ್ಟ ಗಡುವು ವಿಧಿಸಲು ನ್ಯಾಯಾಲಯವು ಇದೇ ವೇಳೆ ಸ್ಪಷ್ಟವಾಗಿ ನಿರಾಕರಿಸಿತು.

ಕಳೆದ 100 ದಿನಗಳಲ್ಲಿ ಕೇವಲ ಶೇ.1ರಷ್ಟು ಮೇಲ್ಮನವಿಗಳು ಮಾತ್ರ ವಿಲೇವಾರಿಯಾಗಿವೆ. ಮತದಾರರ ಪಟ್ಟಿಯಿಂದ ಕೈಬಿಡಲಾದ ಲಕ್ಷಾಂತರ ಜನರು ನ್ಯಾಯಮಂಡಳಿಗಳ ಮೆಟ್ಟಿಲೇರಿ ತಮ್ಮ ಪ್ರಕರಣಗಳ ಭವಿಷ್ಯಕ್ಕಾಗಿ ಅತ್ಯಂತ ಕಾತರದಿಂದ ಕಾಯುತ್ತಿದ್ದಾರೆ. ಆದರೆ, ಇಷ್ಟು ದೊಡ್ಡ ಸಂಖ್ಯೆಯ ಪ್ರಕರಣಗಳನ್ನು ತ್ವರಿತವಾಗಿ ವಿಚಾರಣೆ ನಡೆಸಿ, ಸೂಕ್ತ ಅವಕಾಶ ನೀಡಿ ತೀರ್ಪು ನೀಡಲು ನ್ಯಾಯಮಂಡಳಿಗಳಲ್ಲಿ ಅಗತ್ಯ ಮೂಲಸೌಕರ್ಯಗಳ ಕೊರತೆಯಿದೆ. ಪ್ರಕ್ರಿಯೆಯ ಈ ಅಪೂರ್ಣತೆಯೇ ವಿಳಂಬಕ್ಕೆ ಪ್ರಮುಖ ಕಾರಣ ಎಂದು ಅರ್ಜಿದಾರರಾದ ಚೌಧರಿ ಅವರು ತೀವ್ರ ಅಸಮಾಧಾನ ವ್ಯಕ್ತಪಡಿಸಿದ್ದಾರೆ.

# ಸ್ವಾತಂತ್ರ್ಯೋತ್ಸವ ಹಿನ್ನೆಲೆ: ಭದ್ರತೆ, ಸಂಚಾರ ನಿರ್ವಹಣೆಗೆ ಖರ್ಗೆ ಸೂಚನೆ

**ಬೆಂಗಳೂರು, ಆ.12:** ಆಗಸ್ಟ್ 15ರಂದು ಬೆಂಗಳೂರಿನ ಐತಿಹಾಸಿಕ ವಿಧಾನಸೌಧದ ಆವರಣದಲ್ಲಿ ನಡೆಯಲಿರುವ ರಾಜ್ಯದ ಮೊದಲ ಸಾರ್ವಜನಿಕ ಸ್ವಾತಂತ್ರ್ಯ ಹಬ್ಬ 2026 ಕಾರ್ಯಕ್ರಮದ ಹಿನ್ನೆಲೆಯಲ್ಲಿ ಗೃಹ, ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಹಾಗೂ ಇ-ಆಡಳಿತ ಸಚಿವ ಪ್ರಿಯಾಂಕ್ ಖರ್ಗೆ ಅವರು ಪೊಲೀಸ್ ಹಾಗೂ ಗ್ರೇಟರ್ ಬೆಂಗಳೂರು ಪ್ರಾಧಿಕಾರ (ಜಿಬಿಎ)ದ ಹಿರಿಯ ಅಧಿಕಾರಿಗಳೊಂದಿಗೆ ಸಭೆ ನಡೆಸಿದರು.

ಸ್ವಾತಂತ್ರ್ಯ ಹಬ್ಬದಲ್ಲಿ ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸುವ ನಿರೀಕ್ಷೆಯಿರುವ ಹಿನ್ನೆಲೆಯಲ್ಲಿ ಭದ್ರತೆ, ಸಂಚಾರ ವ್ಯವಸ್ಥೆ, ಸಾರ್ವಜನಿಕರ ಪ್ರವೇಶ ಮತ್ತು ನಿರ್ಗಮನ, ವಾಹನ ನಿಲುಗಡೆ ಹಾಗೂ ಜನದಟ್ಟಣೆ ನಿರ್ವಹಣೆ ಸೇರಿದಂತೆ ಎಲ್ಲ ಅಗತ್ಯ ಮುಂಜಾಗ್ರತಾ ಕ್ರಮಗಳನ್ನು ಕೈಗೊಳ್ಳುವಂತೆ ಸಚಿವ ಪ್ರಿಯಾಂಕ್ ಖರ್ಗೆ ಅಧಿಕಾರಿಗಳಿಗೆ ಸೂಚಿಸಿದರು.



ವಿಧಾನಸೌಧದಲ್ಲಿ ಬೆಳಿಗ್ಗೆ 11 ಗಂಟೆಯಿಂದ ರಾತ್ರಿ 10ರವರೆಗೆ ನಡೆಯಲಿರುವ ಕಾರ್ಯಕ್ರಮದಲ್ಲಿ 'ದಿ ಪೀಪಲ್ಸ್ ಇಂಡಿಯಾ ಪರೇಡ್', ವಿಧಾನ ಸೌಧದ ವಿಶೇಷ ಪ್ರವಾಸ, ಮಕ್ಕಳಿಗಾಗಿ 'ಮಕ್ಕಳ ಮೇಳ', ರಸಪ್ರಶ್ನೆ, ಸಾಂಸ್ಕೃತಿಕ ಕಾರ್ಯಕ್ರಮಗಳು, ಸಂಗೀತ ಕಛೇರಿ, ವಿವಿಧ ಜಿಲ್ಲೆಗಳ ಆಹಾರ ಮತ್ತು ಕರಕುಶಲ ಪ್ರದರ್ಶನಗಳು ಸೇರಿದಂತೆ ಹಲವು ಕಾರ್ಯಕ್ರಮಗಳು ನಡೆಯಲಿವೆ.

ಸಂಜೆ ಸಂಗೀತ ಕಾರ್ಯಕ್ರಮ ಹಾಗೂ ರಾತ್ರಿ ಸಿಡಿಮದ್ದಿನ ಪ್ರದರ್ಶನಕ್ಕೆ ಹೆಚ್ಚಿನ ಸಂಖ್ಯೆಯಲ್ಲಿ ಜನರು ಆಗಮಿಸುವ ಸಾಧ್ಯತೆ ಇರುವುದರಿಂದ ವಿಶೇಷ ಗಮನಹರಿಸುವಂತೆ ಸಚಿವ ಪ್ರಿಯಾಂಕ್ ಖರ್ಗೆ ಅಧಿಕಾರಿಗಳಿಗೆ ನಿರ್ದೇಶನ ನೀಡಿದರು.

ಕಾರ್ಯಕ್ರಮಕ್ಕೆ ಆಗಮಿಸುವ ಸಾರ್ವಜನಿಕರಿಗೆ ಯಾವುದೇ ರೀತಿಯ ಅನಾನುಕೂಲವಾಗದಂತೆ ಸುಗಮ ಸಂಚಾರ ವ್ಯವಸ್ಥೆ, ಪಾದಚಾರಿಗಳ ಸುರಕ್ಷತೆ, ತುರ್ತು ಸೇವೆಗಳಿಗೆ ಅಗತ್ಯ ವ್ಯವಸ್ಥೆ ಹಾಗೂ ಜನದಟ್ಟಣೆ ನಿಯಂತ್ರಣಕ್ಕೆ ಸಮರ್ಪಕ ಕ್ರಮಗಳನ್ನು ಕೈಗೊಳ್ಳಬೇಕು ಎಂದು ಹೇಳಿದ ಸಚಿವರು, ಕಾರ್ಯಕ್ರಮದ ವೇಳೆ ಸಾರ್ವಜನಿಕರ ಸುರಕ್ಷತೆಗೆ ಯಾವುದೇ ರೀತಿಯ ಲೋಪವಾಗದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು ಪರಸ್ಪರ ಸಮನ್ವಯದಿಂದ ಕಾರ್ಯನಿರ್ವಹಿಸಬೇಕು ಎಂದು ನಿರ್ದೇಶಿಸಿದರು.

ಸಭೆಯಲ್ಲಿ ಜಿಬಿಎ ಮುಖ್ಯ ಆಯುಕ್ತ ಎಂ. ಮಹೇಶ್ವರರಾವ್, ಬೆಂಗಳೂರು ನಗರ ಪೊಲೀಸ್ ಆಯುಕ್ತ ಸೀಮಂತ್ ಕುಮಾರ್ ಸಿಂಗ್ ಸೇರಿದಂತೆ ಪೊಲೀಸ್ ಇಲಾಖೆ, ಜಿಬಿಎ ಹಾಗೂ ಸಂಬಂಧಿತ ಇಲಾಖೆಗಳ ಹಿರಿಯ ಅಧಿಕಾರಿಗಳು ಪಾಲ್ಗೊಂಡಿದ್ದರು.



ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಬುಧವಾರ ತಮ್ಮ ಗೃಹ ಕಚೇರಿ 'ಕೃಷ್ಣಾ'ದಲ್ಲಿ ತಮ್ಮ ಸಂಪುಟ ಸಹೋದ್ಯೋಗಿಗಳು ಮತ್ತು ಕಾಂಗ್ರೆಸ್ ಹಿರಿಯ ನಾಯಕರೊಂದಿಗೆ ಸಭೆ ನಡೆಸಿದರು.

### ಎಎಸ್‌ಡಿಡಿಒ ವರ್ಗಕ್ಕೆ 1.08 ಕೋಟಿಗೂ ಅಧಿಕ ಮತದಾರರ ಸೇರ್ಪಡೆ

## ವಲಸೆ ಹೋದವರು 65 ಲಕ್ಷಕ್ಕೂ ಹೆಚ್ಚು, ಒಂದಕ್ಕಿಂತ ಹೆಚ್ಚು ಕಡೆ ಹೆಸರು ಹೊಂದಿದ್ದ 7 ಲಕ್ಷ ನಕಲಿ ಹೆಸರುಗಳು ಪತ್ತೆ

**ಬೆಂಗಳೂರು, ಆ.12:** ರಾಜ್ಯದಲ್ಲಿ ಪ್ರಸ್ತುತ ಚಾಲ್ತಿಯಲ್ಲಿರುವ ಮತದಾರರ ಪಟ್ಟಿಯ ವಿಶೇಷ ಸಮಗ್ರ ಪರಿಷ್ಕರಣೆ ಪ್ರಕ್ರಿಯೆಯ ವೇಳೆ ಬರೋಬ್ಬರಿ 1.08 ಕೋಟಿಗಿಂತಲೂ ಅಧಿಕ (ಸುಮಾರು ಶೇ.19ರಷ್ಟು) ವೋಟರ್ಸ್‌ಗಳನ್ನು ಎಎಸ್‌ಡಿಡಿಒ – ಗೈರು ಹಾಜರು, ಸ್ಥಳಾಂತರ, ಮೃತ, ನಕಲಿ ಹಾಗೂ ಇತರೆ) ವರ್ಗಕ್ಕೆ ಸೇರಿಸಲಾಗಿದೆ ಎಂದು ರಾಜ್ಯ ಮುಖ್ಯ ಚುನಾವಣಾಧಿಕಾರಿ ಅನ್ಬುಕುಮಾರ್ ತಿಳಿಸಿದ್ದಾರೆ.

ಸುದ್ದಿಗೋಷ್ಠಿಯಲ್ಲಿ ಈ ಕುರಿತು ವಿಸ್ತೃತ ವಿವರಣೆ ನೀಡಿದ ಅವರು, ಬೂತ್ ಮಟ್ಟದ ಸಿಬ್ಬಂದಿ (ಬಿಎಲ್‌ಒ) ಪ್ರತಿಯೊಂದು ಮನೆಗೂ ತೆರಳಿ ಪರಿಶೀಲನೆ ನಡೆಸುವ ಸಂದರ್ಭದಲ್ಲಿ ಸಿಗದವರನ್ನು ಗೈರುಹಾಜರು, ವಾಸಸ್ಥಳ ಬದಲಾಯಿಸಿದವರನ್ನು 'ಸ್ಥಳಾಂತರ' ಮತ್ತು ಮರಣ ಹೊಂದಿದವರನ್ನು 'ಮೃತ' ಎಂಬುದಾಗಿ ದಾಖಲಿಸುತ್ತಿದ್ದಾರೆ ಎಂದು ಸ್ಪಷ್ಟಪಡಿಸಿದರು.

**65 ಲಕ್ಷಕ್ಕೂ ಹೆಚ್ಚು ವೋಟರ್ಸ್ ವಲಸೆ:** ರಾಜ್ಯದಲ್ಲಿ ನೋಂದಾಯಿತವಾಗಿರುವ ಒಟ್ಟು 5.54 ಕೋಟಿ ಮತದಾರರ ಪೈಕಿ 1,08,75,304 ಜನರನ್ನು ಎಎಸ್‌ಡಿಡಿಒ ವ್ಯಾಪ್ತಿಗೆ ಗುರುತಿಸಲಾಗಿದೆ. ಈ ಪೈಕಿ ಸಿಂಹಪಾಲು ಅಂದರೆ ಸುಮಾರು



65,73,976 ಜನರು ಕಾಯಂ ಆಗಿ ಬೇರೆಡೆಗೆ ವಲಸೆ ಹೋಗಿರುವುದು ಕಂಡುಬಂದಿದೆ. ಇದಲ್ಲದೆ, 16,36,673 ಮೃತಪಟ್ಟ ಮತದಾರರು ಹಾಗೂ ಒಂದಕ್ಕಿಂತ ಹೆಚ್ಚು ಕಡೆ ಹೆಸರು ಹೊಂದಿದ್ದ 7,01,412 ನಕಲಿ ಮತದಾರರನ್ನು ಪತ್ತೆ ಹಚ್ಚಲಾಗಿದೆ. ಉಳಿದಂತೆ 4,14,486 ಜನರನ್ನು ಇತರೆ ವಿಭಾಗಗಳಲ್ಲಿ ಸೇರಿಸಲಾಗಿದೆ.

**ಡಿಜಿಟಲೀಕರಣ ಕಾರ್ಯ ಭರದಿಂದ ಸಾಗಿದೆ:** ರಾಜ್ಯಾದ್ಯಂತ ಒಟ್ಟು 5,54,32,314 ಗಣತಿ ಅರ್ಜಿಗಳನ್ನು ವಿತರಿಸಲಾಗಿದ್ದು, ಶೇ.100 ರಷ್ಟು ವಿತರಣೆ ಪೂರ್ಣಗೊಂಡಿದೆ. ಇವುಗಳಲ್ಲಿ ಈಗಾಗಲೇ 4.45 ಕೋಟಿಗೂ ಹೆಚ್ಚಿನ ಅರ್ಜಿಗಳನ್ನು ಕಂಪ್ಯೂಟರ್ಗೆ ಅಳವಡಿಸಲಾಗಿದ್ದು, ಒಟ್ಟು ಶೇ. 80.38 ರಷ್ಟು ಡಿಜಿಟಲೀಕರಣ ಪ್ರಕ್ರಿಯೆ ಮುಕ್ತಾಯಗೊಂಡಿದೆ.

ಜೂನ್ 16, 2026ರ ವರದಿಯ ಆಧಾರದ ಮೇಲೆ ವಾಸವಿಲ್ಲದವರ ವಿವರಗಳನ್ನು 'ಗೈರುಹಾಜರಿ' ಮತ್ತು 'ವರ್ಗಾವಣೆ' ಪಟ್ಟಿಗೆ ಸೇರ್ಪಡೆಗೊಳಿಸಲಾಗಿದೆ.

ಮತದಾರರ ಪಟ್ಟಿಯಲ್ಲಿ ಹೆಸರು ಬಿಟ್ಟುಹೋಗಿದ್ದರೆ ಅಥವಾ ಲೋಪದೋಷಗಳಿದ್ದರೆ ಸಾರ್ವಜನಿಕರು ತಕ್ಷಣವೇ ಸಂಬಂಧಪಟ್ಟ ಬಿಎಲ್‌ಒಗಳನ್ನು ಸಂಪರ್ಕಿಸಿ ಸರಿಪಡಿಸಿಕೊಳ್ಳಬಹುದು.

ಹೆಸರು ಸೇರ್ಪಡೆಗೆ ಫಾರಂ–6 ಸಲ್ಲಿಸಲು ಅವಕಾಶ ನೀಡಲಾಗಿದೆ. ಮುಂದಿನ ಆಗಸ್ಟ್ 24 ರಂದು ಪ್ರಥಮ ಹಂತದ ಮತದಾರರ ಪಟ್ಟಿಯನ್ನು ಅಧಿಕೃತವಾಗಿ ಬಿಡುಗಡೆಗೊಳಿಸಲಾಗುವುದು.

ಹೊಸದಾಗಿ ಮತದಾನದ ಹಕ್ಕು ಪಡೆಯಬಯಸುವವರು ಜಾಲತಾಣದ ಮೂಲಕವೂ ಫಾರಂ–6 ಭರ್ತಿ ಮಾಡಿ ಅರ್ಜಿ ಸಲ್ಲಿಸಬಹುದಾಗಿದ್ದು, ಇವುಗಳ ಪರಿಶೀಲನೆಯನ್ನು ಆಗಸ್ಟ್ 24ರ ನಂತರ ನಡೆಸಲಾಗುತ್ತದೆ. ಮುಖ್ಯವಾಗಿ ಅಕ್ಟೋಬರ್ 1, 2026ರ ವೇಳೆಗೆ 18 ವರ್ಷ ಪೂರೈಸುವ ಎಲ್ಲಾ ಯುವಕ–ಯುವತಿಯರು ಕಡ್ಡಾಯವಾಗಿ ನಮೂನೆ–6 ರ ಮೂಲಕ ಹೆಸರು ನೋಂದಾಯಿಸಿಕೊಳ್ಳಬೇಕೆಂದು ಅನ್ಬುಕುಮಾರ್ ವಿನಂತಿಸಿದ್ದಾರೆ.

# ಬ್ರಾಹ್ಮಣ ಅಭಿವೃದ್ಧಿ ಮಂಡಳಿಗೆ 100 ಕೋಟಿ ರೂ. ಅನುದಾನಕ್ಕೆ ದಿನೇಶ್ ಗುಂಡೂರಾವ್ ಆಗ್ರಹ

**ಬೆಂಗಳೂರು, ಆ.12:** ಬ್ರಾಹ್ಮಣ ಸಮುದಾಯದ ಸಮಗ್ರ ಅಭಿವೃದ್ಧಿಗಾಗಿ ನೂರು ಕೋಟಿ ಬೀಜಧನ ನೀಡಬೇಕೆಂದು ಮಾಜಿ ಸಚಿವ ದಿನೇಶ್ ಗುಂಡೂರಾವ್ ರಾಜ್ಯ ಸರ್ಕಾರವನ್ನು ಒತ್ತಾಯಿಸಿದ್ದಾರೆ. ಕರ್ನಾಟಕ ರಾಜ್ಯ ಬ್ರಾಹ್ಮಣ ಅಭಿವೃದ್ಧಿ ಮಂಡಳಿಯಲ್ಲಿ ಏರ್ಪಡಿಸಿದ್ದ 26–27ನೇ ಸಾಲಿನ ಸಾಂದೀಪನಿ ಶಿಷ್ಯವೇತನ ಯೋಜನೆಗೆ ಚಾಲನೆ ನೀಡಿ, ಬಡಬ್ರಾಹ್ಮಣರ ಅಭಿವೃದ್ಧಿಗೆ ಮಂಡಳಿಯ ಹಲವಾರು ಯೋಜನೆಗಳು ಪ್ರಯೋಜನಕಾರಿಯಾಗಿವೆ. ಈ ಯೋಜನೆಯಿಂದ ಹೆಚ್ಚು ಜನ ಲಾಭ ಪಡೆಯುತ್ತಿರುವುದು ಉತ್ತಮ ಬೆಳವಣಿಗೆ. ಮೇಲಾಗಿ ಮಂಡಳಿಯ ಸಾಲ ವಸೂಲಾತಿ ಪ್ರಮಾಣ ಶೇ.98 ಕ್ಕಿಂತ ಹೆಚ್ಚಾಗಿರುವುದು ಶ್ಲಾಘನೀಯ ಎಂದು ದಿನೇಶ್ ಗುಂಡೂರಾವ್ ಹೇಳಿದರು. ಕರ್ನಾಟಕ ರಾಜ್ಯ ಬ್ರಾಹ್ಮಣ ಅಭಿವೃದ್ಧಿ ಮಂಡಳಿಯ ಅಧ್ಯಕ್ಷ ಅಸಗೋಡು ಜಯಸಿಂಹ ಮಾತನಾಡಿ, ಆರ್ಥಿಕವಾಗಿ ಹಿಂದುಳಿದ ಸಮುದಾಯದ ಬ್ರಾಹ್ಮಣ ವಿದ್ಯಾರ್ಥಿಗಳು ಉತ್ತಮ ಶಿಕ್ಷಣ ಪಡೆಯುವ ಉದ್ದೇಶದಿಂದ ಸಾಂದೀಪನಿ ಶಿಷ್ಯವೇತನ ಜಾರಿಗೊಳಿಸಲಾಗಿದೆ. ಪ್ರಥಮ ಮತ್ತು ದ್ವಿತೀಯ ಪಿಯುಸಿ ಹಾಗೂ ಸಾಮಾನ್ಯ ಪದವಿ ಕೋರ್ಸ್ ವಿದ್ಯಾರ್ಥಿಗಳಿಗೆ ವಾರ್ಷಿಕ 15,000 ನಿರ್ವಹಣಾ ವೆಚ್ಚ ಹಾಗೂ ಸಿಇಟಿ, ನೀಟ್ ಮತ್ತಿತರ ವೃತ್ತಿಪರ ಕೋರ್ಸ್ ಗಳ ಪ್ರವೇಶ ಶುಲ್ಕದ ಎರಡನೇ ಮೂರು ಭಾಗದಷ್ಟು ಹಣವನ್ನು ಮರುಪಾವತಿ ಮಾಡಲಾಗುವುದು ಎಂದು ಹೇಳಿದರು. ಸಾಂದೀಪನಿ ಯೋಜನೆಯ ವಿವರಗಳನ್ನು ಮಂಡಳಿಯ ವ್ಯವಸ್ಥಾಪಕ ನಿರ್ದೇಶಕಿ ದೀಪಶ್ರೀ ವಿವರಿಸಿದರು.

ಈ ಸಂದರ್ಭದಲ್ಲಿ ಮಂಡಳಿಯ ಅಧಿಕಾರೇತರ ನಿರ್ದೇಶಕರಾದ ಪಿ ಎಂ ಮಾಲತೇಶ್, ಸಿ.ಎನ್.ನಾಗೇಶ್, ಕಶ್ಯಪ್ ನಂದನ್, ಅಧಿಕಾರಿ ನಿರ್ದೇಶಕಿ ಶೋಭ ಎಚ್.ಎ.ಹಾಗೂ ಕಲಾವತಿ ಎಸ್ ಎನ್ ಹಾಜರಿದ್ದರು. ಶಿಷ್ಯವೇತನ ಸೌಲಭ್ಯ ಪಡೆಯುವ ವಿದ್ಯಾರ್ಥಿಗಳು ರಾಜ್ಯದ ಕಾಯಂ ನಿವಾಸಿ ಆಗಿರಬೇಕು. ಆರ್ಥಿಕವಾಗಿ ಹಿಂದುಳಿದ ಪ್ರಮಾಣಪತ್ರವನ್ನು ಕಡ್ಡಾಯವಾಗಿ ಹೊಂದಿರಬೇಕು. ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸಲು ಡಿಸೆಂಬರ್ 31 ಕೊನೆಯ ದಿನವಾಗಿರುತ್ತದೆ ಹೆಚ್ಚಿನ



ಮಾಹಿತಿಗೆ ಮಂಡಳಿಯ ಜಾಲತಾಣವನ್ನು ಸಂಪರ್ಕಿಸಬಹುದು. ಹೆಚ್ಚಿನ ಮಾಹಿತಿಗಾಗಿ ಅರ್ಜಿದಾರರು ಮಂಡಳಿಯ ಜಾಲತಾಣ: Ksbdb.Karnataka.gov.in ಹಾಗೂ ಸಹಾಯವಾಣಿ: 080–29605888 ಅಥವಾ 8762249230 ಸಂಪರ್ಕಿಸಬಹುದು.

## ಕಾವೇರಿ ವಿವಾದ: ವಾಟಾಳ್ ಕರೆ ನೀಡಿದ ಬಂದ್‌ಗೆ ಸಿಗದ ಸಂಪೂರ್ಣ ಬೆಂಬಲ



**ಬೆಂಗಳೂರು, ಆ.12:** ಕಾವೇರಿ ನೀರು ಹಂಚಿಕೆ ವಿಚಾರವಾಗಿ ಕನ್ನಡಪರ ಹೋರಾಟಗಾರ ವಾಟಾಳ್ ನಾಗರಾಜ್ ಗುರುವಾರ ಕರೆ ನೀಡಿರುವ ರಾಜ್ಯ ಬಂದ್‌ಗೆ ಅಪಸ್ವರ ಕೇಳಿ ಬಂದಿದೆ. ಬಂದ್‌ಗೆ ಕನ್ನಡಪರ ಸಂಘಟನೆಗಳ ನಡುವೆ ಒಗ್ಗಟ್ಟಿನ ಕೊರತೆ ಎದ್ದುಕಾಣುತ್ತಿದೆ. ಕೆಲ ಸಂಘಟನೆಗಳು ನೇರ ಬೆಂಬಲ ಘೋಷಿಸಿದ್ದರೆ, ಇನ್ನೂ ಕೆಲವರು ನೈತಿಕ ಬೆಂಬಲಕ್ಕೆ ಸೀಮಿತವಾಗಿದ್ದಾರೆ. ಮತ್ತೊಂದೆಡೆ ಪ್ರಮುಖ ಸಂಘಟನೆಗಳು ಬಂದ್‌ಗೆ ವಿರೋಧ ವ್ಯಕ್ತಪಡಿಸಿರುವುದು ಗೊಂದಲಕ್ಕೆ ಕಾರಣವಾಗಿದೆ.

ಕನ್ನಡಪರ ಸಂಘಟನೆ ಮುಖಂಡರಾದ ಸಾ.ರಾ.ಗೋವಿಂದುರವರು ಮಂಡ್ಯದಲ್ಲಿ ಮಾತನಾಡಿ, ನಾಳಿನ ಬಂದ್‌ಗೆ ನಮ್ಮ ಬೆಂಬಲವಿಲ್ಲ. ಬಂದ್ ಮಾಡುವವರು ಮಾಡಲಿ, ನಮದೇನೂ ಅಭ್ಯಂತರವಿಲ್ಲ. ನಾಡಿನಲ್ಲಿ ಉತ್ತಮ ಮಳೆಯಾಗಿ ಜಲಾಶಯಗಳಿಗೆ ನೀರು ಬಂದಿದೆ. ಹಾಗಾಗಿ ಬಂದ್ ಮಾಡುವ ಅಗತ್ಯವಿಲ್ಲ. ಬಂದ್‌ಗೆ ಬೆಂಬಲ ನೀಡುವುದಿಲ್ಲ ಎಂದು ಹೇಳಿದರು. ಹೋಟೆಲ್ ಮಾಲೀಕರ ಸಂಘ, ಖಾಸಗಿ ಸಾರಿಗೆ ಸಂಘಟನೆಗಳು ಹಾಗೂ ಖಾಸಗಿ ಶಾಲೆಗಳ ಒಕ್ಕೂಟ ಬಂದ್‌ಗೆ ನೈತಿಕ ಬೆಂಬಲ ನೀಡುವುದಾಗಿ ಹೇಳಿವೆ. ಆದರೆ ತಮ್ಮ ಸೇವೆಗಳನ್ನು ಸ್ಥಗಿತಗೊಳಿಸು ವುದಿಲ್ಲ ಎಂದು ಸ್ಪಷ್ಟಪಡಿಸಿವೆ. ಖಾಸಗಿ ಶಾಲೆಗಳ ಒಕ್ಕೂಟದ ಅಧ್ಯಕ್ಷ ಶಶಿಕುಮಾರ್ ಅವರು, ಸುಪ್ರೀಂ ಕೋರ್ಟ್ ಆದೇಶ ಹಾಗೂ ರಾಜ್ಯ ಸರ್ಕಾರದ ಬಂದ್ ಬೇಡ ಎಂಬ ಮನವಿಯ ಹಿನ್ನೆಲೆಯಲ್ಲಿ ನೈತಿಕ ಬೆಂಬಲ ನೀಡುವುದಾಗಿ ತಿಳಿಸಿದ್ದಾರೆ. ಖಾಸಗಿ ಶಾಲೆಗಳು ಎಂದಿನಂತೆ ಕಾರ್ಯ ನಿರ್ವಹಿಸಲಿವೆ ಎಂದಿದ್ದಾರೆ. ಖಾಸಗಿ ಬಸ್ ಮಾಲೀಕರ ಸಂಘಟನೆಗಳೂ ಇದೇ ನಿಲುವು ತಳೆದಿವೆ. ಬಂದ್ ವಿಚಾರದಲ್ಲಿ ಕನ್ನಡಪರ ಸಂಘಟನೆಗಳ ನಡುವಿನ ಭಿನ್ನಾಭಿಪ್ರಾಯವೂ ಬಹಿರಂಗವಾಗಿದೆ. ಕರ್ನಾಟಕ ರಕ್ಷಣಾ ವೇದಿಕೆಯ ಪ್ರವೀಣ್ ಶೆಟ್ಟಿ ಬಣ ಬಂದ್‌ಗೆ ಬೆಂಬಲ ಇಲ್ಲ ಎಂದು ಸ್ಪಷ್ಟಪಡಿಸಿದೆ. ಈ ಹಂತದಲ್ಲಿ ಬಂದ್ ನಡೆಸುವುದು ಬೇಡ. ಪ್ರಧಾನಿ ಮಧ್ಯಪ್ರವೇಶ ಮಾಡಬೇಕು.

ಬಂದ್ ನಿರ್ಧಾರದಿಂದ ಹಿಂದೆ ಸರಿಯುವಂತೆ ವಾಟಾಳ್ ನಾಗರಾಜ್ ಅವರನ್ನು ಮನವೊಲಿಸುತ್ತೇವೆ ಎಂದು ಪ್ರವೀಣ್ ಶೆಟ್ಟಿ ತಿಳಿಸಿದ್ದಾರೆ. ಇನ್ನೊಂದೆಡೆ, ವಾಟಾಳ್ ನಾಗರಾಜ್ ಮಾತ್ರ ಯಾವುದೇ ಕಾರಣಕ್ಕೂ ಬಂದ್‌ನಿಂದ ಹಿಂದೆಸರಿಯುವುದಿಲ್ಲ ಎಂಬ ನಿಲುವು ತಳೆದಿದ್ದಾರೆ. ರೈತರ ಹಿತಾಸಕ್ತಿಗಾಗಿ ಬಂದ್ ನಡೆಸಿಯೇ ತೀರುತ್ತೇವೆ ಎಂದು ಹೇಳಿದ್ದು, ನಗರದ ಹಲವು ಪ್ರದೇಶಗಳಲ್ಲಿ ಸಂಚರಿಸಿ ಸಾರ್ವಜನಿಕರಲ್ಲಿ ಬಂದ್‌ಗೆ ಬೆಂಬಲಿಸುವಂತೆ ಮನವಿ ಮಾಡಿದ್ದಾರೆ.

## ರಾಜ್ಯದಲ್ಲಿ ಒಂದು ವರ್ಷ ಗುಟ್ಕಾ, ಪಾನ್‌ಮಸಾಲ ನಿಷೇಧ

**ಬೆಂಗಳೂರು, ಆ.12:** ಸಾರ್ವಜನಿಕ ಆರೋಗ್ಯದ ಹಿತದೃಷ್ಟಿಯಿಂದ ರಾಜ್ಯ ಸರ್ಕಾರ ಗುಟ್ಕಾ ಹಾಗೂ ತಂಬಾಕು, ನಿಕೋಟಿನ್ ಒಳಗೊಂಡ ಪಾನ್ ಮಸಾಲಾ ಉತ್ಪನ್ನಗಳ ವಿರುದ್ಧ ಮತ್ತಷ್ಟು ಕಠಿಣ ಕ್ರಮಕ್ಕೆ ಮುಂದಾಗಿದೆ.




ರಾಜ್ಯಾದ್ಯಂತ ಇಂತಹ ಉತ್ಪನ್ನಗಳ ತಯಾರಿಕೆ, ದಾಸ್ತಾನು, ಸಾಗಣೆ, ವಿತರಣೆ ಹಾಗೂ ಮಾರಾಟವನ್ನು ಒಂದು ವರ್ಷದ ಅವಧಿಗೆ ನಿಷೇಧಿಸಿ ಆಹಾರ ಸುರಕ್ಷತೆ ಮತ್ತು ಔಷಧ ಆಡಳಿತ ಇಲಾಖೆ ಅಧಿಸೂಚನೆ ಹೊರಡಿಸಿದೆ.

ಆಗಸ್ಟ್ 10ರಂದು ಹೊರಡಿಸಿರುವ ಅಧಿಸೂಚನೆಯು ಜಾರಿಯಾದ ದಿನದಿಂದ ಒಂದು ವರ್ಷದವರೆಗೆ ಅನ್ವಯವಾಗಲಿದೆ. ಪಾನ್ ಮಸಾಲಾ ದೊಂದಿಗೆ ಬೆರೆಸಿ ಬಳಸುವ ಉದ್ದೇಶ ದಿಂದ ಪ್ರತ್ಯೇಕವಾಗಿ ಪ್ಯಾಕ್ ಮಾಡಿ ಮಾರಾಟ ಮಾಡುವ ತಂಬಾಕು ಉತ್ಪನ್ನಗಳಿಗೂ ಈ ನಿಷೇಧ ಅನ್ವಯವಾಗಲಿದೆ ಎಂದು ಇಲಾಖೆ ಸ್ಪಷ್ಟಪಡಿಸಿದೆ.

ಆಹಾರ ಸುರಕ್ಷತೆ ಮತ್ತು ಗುಣಮಟ್ಟ ಕಾಯ್ದೆ, 2006ರ ಸೆಕ್ಷನ್ 30(2)(ಎ) ಹಾಗೂ ಆಹಾರ ಸುರಕ್ಷತೆ ಮತ್ತು ಗುಣಮಟ್ಟ (ಮಾರಾಟದ ಮೇಲಿನ ನಿಷೇಧ ಮತ್ತು ನಿರ್ಬಂಧಗಳು) ನಿಯಮಾವಳಿ, 2011ರ ನಿಯಮ 2.3.4ರ ಅಡಿಯಲ್ಲಿ ನೀಡಲಾಗಿರುವ ಅಧಿಕಾರವನ್ನು ಬಳಸಿಕೊಂಡು ಈ ಅಧಿಸೂಚನೆ ಹೊರಡಿಸಲಾಗಿದೆ ಎಂದು ಆಹಾರ ಸುರಕ್ಷತೆ ಮತ್ತು ಔಷಧ ಆಡಳಿತ ಇಲಾಖೆಯ ಆಯುಕ್ತ ಕೆ ಶ್ರೀನಿವಾಸ್ ತಿಳಿಸಿದ್ದಾರೆ.

ತಂಬಾಕು ಮತ್ತು ನಿಕೋಟಿನ್ ಒಳಗೊಂಡ ಉತ್ಪನ್ನಗಳ ಬಳಕೆಯಿಂದ ಉಂಟಾಗುವ ಗಂಭೀರ ಆರೋಗ್ಯ ಸಮಸ್ಯೆಗಳನ್ನು ಗಮನದಲ್ಲಿಟ್ಟುಕೊಂಡು ಸಾರ್ವಜನಿಕ ಆರೋಗ್ಯದ ಹಿತದೃಷ್ಟಿಯಿಂದ ಈ ನಿರ್ಧಾರ ಕೈಗೊಳ್ಳಲಾಗಿದೆ ಎಂದು ಇಲಾಖೆ ತಿಳಿಸಿದೆ.

ನಿಷೇಧದ ವ್ಯಾಪ್ತಿಗೆ ಕೇವಲ ಅಂಗಡಿಗಳಲ್ಲಿ ನಡೆಯುವ ಮಾರಾಟ ಮಾತ್ರ ಸೀಮಿತವಾಗಿಲ್ಲ. ಗುಟ್ಕಾ, ಪಾನ್ ಮಸಾಲಾ ಹಾಗೂ ತಂಬಾಕು ಅಥವಾ ನಿಕೋಟಿನ್ ಹೊಂದಿರುವ ಇತರ ನಿಷೇಧಿತ ಉತ್ಪನ್ನಗಳ ತಯಾರಿಕೆ, ದಾಸ್ತಾನು, ಸಾಗಣೆ, ವಿತರಣೆ ಮತ್ತು ಮಾರಾಟ ಎಲ್ಲವೂ ನಿಷೇಧಕ್ಕೆ ಒಳಪಡಲಿವೆ. ನಿಷೇಧಿತ ಉತ್ಪನ್ನಗಳ ವಿರುದ್ಧ ರಾಜ್ಯಾದ್ಯಂತ ವಿಶೇಷ ತಪಾಸಣೆ ಮತ್ತು ಜಾರಿ ಕಾರ್ಯಾಚರಣೆಗಳನ್ನು ನಡೆಸಲಾಗುತ್ತಿದೆ.

ಆಹಾರ ಸುರಕ್ಷತಾ ಅಧಿಕಾರಿಗಳ ನೇತೃತ್ವದಲ್ಲಿ ನಡೆಯುತ್ತಿ ರುವ ಕಾರ್ಯಾಚರಣೆಯಲ್ಲಿ ಇಂತಹ ಉತ್ಪನ್ನಗಳ ತಯಾರಿಕೆ ಮತ್ತು ಪೂರೈಕೆ ಸರಪಳಿಯ ಮೇಲೂ ನಿಗಾ ವಹಿಸಲಾಗುತ್ತಿದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ.

ನಿಷೇಧ ಜಾರಿಯಾದ ಬಳಿಕವೂ ಉತ್ಪನ್ನಗಳ ತಯಾರಿಕೆ ಅಥವಾ ಮಾರಾಟ ಮುಂದುವರಿಸುವವರ ವಿರುದ್ಧ ಕಾನೂನುಬದ್ಧ ಕ್ರಮ ಕೈಗೊಳ್ಳಲಾಗುವುದು. ತಯಾರಕರು, ವಿತರಕರು ಮತ್ತು ಚಿಲ್ಲರೆ ವ್ಯಾಪಾರಿಗಳ ಮಟ್ಟದಲ್ಲೂ ತಪಾಸಣೆ ನಡೆಸಿ ಉಲ್ಲಂಘನೆ ಕಂಡುಬಂದರೆ ಕ್ರಮ ಜರುಗಿಸುವುದಾಗಿ ಇಲಾಖೆ ತಿಳಿಸಿದೆ.

ನಿಷೇಧಿತ ತಂಬಾಕು ಮತ್ತು ನಿಕೋಟಿನ್ ಉತ್ಪನ್ನಗಳ ತಯಾರಿಕೆ, ದಾಸ್ತಾನು, ಸಾಗಣೆ, ವಿತರಣೆ ಅಥವಾ ಮಾರಾಟ ನಡೆಯುತ್ತಿರುವುದು ಕಂಡುಬಂದರೆ ಸಂಬಂಧಪಟ್ಟ ಅಧಿಕಾರಿಗಳಿಗೆ ಮಾಹಿತಿ ನೀಡುವಂತೆ ಆಹಾರ ಸುರಕ್ಷತೆ ಮತ್ತು ಔಷಧ ಆಡಳಿತ ಇಲಾಖೆ ಸಾರ್ವಜನಿಕರಲ್ಲಿ ಮನವಿ ಮಾಡಿದೆ.

ತಂಬಾಕು ಹಾಗೂ ನಿಕೋಟಿನ್ ಉತ್ಪನ್ನಗಳ ಬಳಕೆಯನ್ನು ನಿಯಂತ್ರಿ ಸುವ ಮೂಲಕ ಆರೋಗ್ಯಕರ ಮತ್ತು ವ್ಯಸನಮುಕ್ತ ಕರ್ನಾಟಕ ನಿರ್ಮಾಣಕ್ಕೆ ಸಾರ್ವಜನಿಕರು ಸಹಕರಿಸಬೇಕು ಎಂದು ಇಲಾಖೆ ಮನವಿ ಮಾಡಿದೆ.

ಒಂದು ವರ್ಷದ ಈ ನಿಷೇಧ ಎಷ್ಟು ಪರಿಣಾಮಕಾರಿಯಾಗಿ ಜಾರಿ ಯಾಗಲಿದೆ ಎಂಬುದು ಮುಂದಿನ ದಿನಗಳಲ್ಲಿ ನಡೆಯುವ ತಪಾಸಣೆ ಮತ್ತು ಜಾರಿ ಕಾರ್ಯಾಚರಣೆಗಳ ಮೇಲೆ ಅವಲಂಬಿತವಾಗಿದ್ದು, ನಿಷೇಧಿತ ಉತ್ಪನ್ನಗಳ ಅಕ್ರಮ ಮಾರಾಟದ ಮೇಲೂ ಅಧಿಕಾರಿಗಳು ನಿಗಾ ವಹಿಸುವ ಅಗತ್ಯವಿದೆ.

## ಪ್ರಜ್ವಲ್ ಬ್ಯಾರಕ್‌ನಲ್ಲಿ ಮೊಬೈಲ್ ಪತ್ತೆ ತನಿಖೆ ಆರಂಭ: ಡಿಜಿಪಿ ಅಲೋಕ್

**ಬೆಂಗಳೂರು, ಆ.12:** ಅತ್ಯಾಚಾರ ಪ್ರಕರಣದಲ್ಲಿ ಜೀವಾವಧಿ ಶಿಕ್ಷೆಗೆ ಗುರಿಯಾಗಿರುವ ಮಾಜಿ ಸಂಸದ ಪ್ರಜ್ವಲ್ ರೇವಣ್ಣ ಅವರ ಬ್ಯಾರಕ್‌ನಲ್ಲಿ ಆಂಡ್ರಾಯ್ಡ್ ಮೊಬೈಲ್‌ಫೋನ್ ಪತ್ತೆಯಾಗಿದೆ. ಪರಪ್ಪನ ಅಗ್ರಹಾರ ಕೇಂದ್ರ ಕಾರಾಗೃಹದಲ್ಲಿ ಕೇಂದ್ರ ಅಪರಾಧ ವಿಭಾಗ (ಸಿಸಿಬಿ) ನಡೆಸಿದ ದಾಳಿಯ ವೇಳೆ ಫೋನ್ ವಶಪಡಿಸಿಕೊಳ್ಳಲಾಗಿದೆ ಎಂದು ಕಾರಾಗೃಹ ಮತ್ತು ಸುಧಾರಣಾ ಸೇವೆಗಳ ಡಿಜಿಪಿ ಅಲೋಕ್ ಕುಮಾರ್ ತಿಳಿಸಿದ್ದಾರೆ. ಹೈ ಸೆಕ್ಯುರಿಟಿ ಜೈಲಿನಲ್ಲಿರುವ ಹೈಪ್ರೊಫೈಲ್ ಕೈದಿಗಳು ಹಾಗೂ ಇತರ ಕೈದಿಗಳನ್ನು ಗುರಿಯಾಗಿಸಿ ಕೊಂಡು ಸಿಸಿಬಿ ನಾಲ್ಕರಿಂದ ಐದು ಗಂಟೆಗಳ ಕಾಲ ತಪಾಸಣೆನಡೆಸಿತ್ತು. ಈ ವೇಳೆ ಪ್ರಜ್ವಲ್ ರೇವಣ್ಣ ಅವರ ಬ್ಯಾರಕ್‌ನಿಂದ ಒಂದು ಆಂಡ್ರಾಯ್ಡ್ ಫೋನ್




ವಶಪಡಿಸಿಕೊಳ್ಳಲಾಗಿದೆ ಎಂದು ಡಿಜಿಪಿ ಹೇಳಿದ್ದಾರೆ. ಈ ಸಂಬಂಧ ಸಿಸಿಬಿ ಪರಪ್ಪನ ಅಗ್ರಹಾರ ಪೊಲೀಸ್ ಠಾಣೆಗೆ ದೂರು ನೀಡಿದ್ದು, ಎಫ್‌ಐಆರ್ ದಾಖಲಿಸುವ ಪ್ರಕ್ರಿಯೆ ನಡೆಯುತ್ತಿದೆ ಎಂದು ಅವರು ತಿಳಿಸಿದ್ದಾರೆ. ಕರ್ತವ್ಯಲೋಪದ ಆರೋಪದ ಹಿನ್ನೆಲೆಯಲ್ಲಿ ದಕ್ಷಿಣ ವಿಭಾಗದ ಡಿಐಜಿ ನೀಡಿದ ವರದಿ ಆಧರಿಸಿ ಸಹಾಯಕ ಅಧೀಕ್ಷಕ ಈರಣ್ಣ ರಂಗಾಪುರ ಅವರನ್ನು ಅಮಾನತುಗೊಳಿಸಲಾಗಿದೆ ಅಲ್ಲದೆ ಬೆಂಗಳೂರು ಕೇಂದ್ರ ಕಾರಾಗೃಹದ ಅಧೀಕ್ಷಕರಿಗೆ ಕಾರಣ ಕೇಳಿ ನೋಟಿಸ್ ಜಾರಿ ಮಾಡಲಾಗಿದೆ. ಈ ಘಟನೆ ಕುರಿತು ಸಮಗ್ರ ವಿಚಾರಣೆ ನಡೆಸಲಾಗುತ್ತಿದೆ ಎಂದು ಡಿಜಿಪಿ ತಿಳಿಸಿದ್ದಾರೆ. ತಪಾಸಣೆಯಲ್ಲಿ ಮೊಬೈಲ್ ಹೊರತುಪಡಿಸಿ ಯಾವುದೇ ಇತರ ನಿಷೇಧಿತ ವಸ್ತು ಪತ್ತೆಯಾಗಿಲ್ಲ ಎಂದು ಸ್ಪಷ್ಟಪಡಿಸಿದ್ದಾರೆ.



## ಇಳಕಲ್ ಸೀರೆ ಸೇರಿದಂತೆ 4 ಜನಪ್ರಿಯ ಸೀರೆಗಳ ಅಂಚೆಚೀಟಿ ಬಿಡುಗಡೆ

**ಬೆಂಗಳೂರು, ಆ.12:** ಕರ್ನಾಟಕದ ಹೆಮ್ಮೆಯ, ಜಾಗತಿಕ ಮೌಲ್ಯ ಹೊಂದಿರುವ ಇಳಕಲ್ ಸೀರೆ ಸೇರಿದಂತೆ ದೇಶದ ನಾಲ್ಕು ಜನಪ್ರಿಯ ಸೀರೆಗಳಿಗೆ ಅಂಚೆ ಇಲಾಖೆಯ ಗೌರವ ದೊರೆತಿದೆ. ಇಳಕಲ್, ಪೈತಾನಿ, ಮೊಯಿರಂಗ್ ಸಹಿತ ಪ್ರಮುಖ ಬ್ರ್ಯಾಂಡ್ ಗಳ ವಿಶೇಷ ಅಂಚೆ ಚೀಟಿಗಳನ್ನು ಬಿಡುಗಡೆ ಮಾಡಲಾಗಿದೆ.

**ಇಳಕಲ್ ಸೀರೆ ವಿಶೇಷ :**

ಇಳಕಲ್ ಸೀರೆ ಕರ್ನಾಟಕದ ಪ್ರಸಿದ್ಧ ಸಾಂಪ್ರದಾಯಿಕ ಕೈಮಗ್ಗ ಸೀರೆಗಳಲ್ಲಿ ಒಂದಾಗಿದೆ. ಇದರ ಮೂಲಸ್ಥಳ ಬಾಗಲಕೋಟೆ ಜಿಲ್ಲೆಯ ಇಳಕಲ್ ಪಟ್ಟಣ . ಈ ಸೀರೆಯನ್ನು ಹಲವು ಶತಮಾನಗಳಿಂದ ನೇಕಾರರು ಕೈಮಗ್ಗದಲ್ಲಿ ನೆಯ್ದು ತಯಾರಿಸುತ್ತಿದ್ದಾರೆ.

ಇಳಕಲ್ ಸೀರೆಯ ವಿಶೇಷ ಎಂದರೆ ಇದರ 'ಟೋಪೆ ತೇನಿ' ಎಂಬ ವೈಶಿಷ್ಟ್ಯ ನೇಯುವ ತಂತ್ರ. ಇದರಲ್ಲಿ ಸೀರೆಯ ಮೈಭಾಗ ಮತ್ತು ಪಲ್ಲುವನ್ನು ಪ್ರತ್ಯೇಕವಾಗಿ ನೇಯ್ದು ನಂತರ ಜೋಡಿಸಲಾಗುತ್ತದೆ. ಕೆಂಪು ಬಣ್ಣದ ಪಲ್ಲು, ಬಿಳಿ ವಿನ್ಯಾಸಗಳು ಹಾಗೂ ದೇವಾಲಯದ ಗೋಪುರದ ಆಕಾರದ ಅಂಚುಗಳು ಇದರ ಪ್ರಮುಖ ಲಕ್ಷಣಗಳಾಗಿವೆ. ಇಳಕಲ್ ಸೀರೆಗಳನ್ನು ಹತ್ತಿ, ರೇಷ್ಮೆ ಅಥವಾ ಹತ್ತಿ?ರೇಷ್ಮೆ ಮಿಶ್ರಣದಿಂದ ತಯಾರಿಸಲಾಗುತ್ತದೆ. ಈ ಸೀರೆಗೆ ಭೌಗೋಳಿಕ




ಸೂಚ್ಯಂಕ (ಜಿಐ ಟ್ಯಾಗ್ ) ಮಾನ್ಯತೆ ದೊರೆತಿದ್ದು, ಕರ್ನಾಟಕದ ಕೈಮಗ್ಗ ಪರಂಪರೆ ಮತ್ತು ಸಾಂಸ್ಕೃತಿಕ ವೈಭವದ ಪ್ರತೀಕವಾಗಿದೆ. ಹಬ್ಬಗಳು, ಮದುವೆಗಳು ಹಾಗೂ ವಿಶೇಷ ಸಮಾರಂಭಗಳಲ್ಲಿ ಇಳಕಲ್ಲ ಸೀರೆಯನ್ನು ಹೆಚ್ಚಿನವರು ಧರಿಸುತ್ತಾರೆ.

## ಈಜಿಪುರ ಮೇಲ್ಸೇತುವೆ, ರಸ್ತೆ ಕಾಮಗಾರಿಗಳನ್ನು ಆದಷ್ಟು ಬೇಗ ಪೂರ್ಣಗೊಳಿಸಲು ಮಹೇಶ್ವರ್ ರಾವ್ ಸೂಚನೆ

**ಬೆಂಗಳೂರು, ಆ.12:** ಬೆಂಗಳೂರು ದಕ್ಷಿಣ ನಗರ ಪಾಲಿಕೆ ವ್ಯಾಪ್ತಿಯ ಈಜಿಪುರ ಬಳಿಯ ಬಫರ್ ರಸ್ತೆ (ಸಂಚಾರಯುಕ್ತ ರಸ್ತೆ) ಕಾಮಗಾರಿ ಯನ್ನು ತ್ವರಿತವಾಗಿ ಪೂರ್ಣಗೊಳಿಸು ವಂತೆ ಮುಖ್ಯ ಆಯುಕ್ತರಾದ ಮಹೇಶ್ವರ್ ರಾವ್ ಅವರು ಅಧಿಕಾರಿ ಗಳಿಗೆ ಸೂಚಿಸಿದರು. ಜಿಬಿಎ ವ್ಯಾಪ್ತಿಯ ದಕ್ಷಿಣ ನಗರ ಪಾಲಿಕೆ ವ್ಯಾಪ್ತಿಯಲ್ಲಿ ನಡೆಯುತ್ತಿರುವ ವಿವಿಧ ಅಭಿವೃದ್ಧಿ ಕಾಮಗಾರಿಗಳ ಪ್ರಗತಿ ಪರಿಶೀಲನೆ ನಡೆಸಿದ ಸಂದರ್ಭದಲ್ಲಿ ಮಾತನಾಡಿದ ಅವರು, ಲೋವರ್ ಅಗರಂ ಜಂಕ್ಷನ್‌ನಿಂದ ಈಜಿಪುರ ರಸ್ತೆಯವರೆಗೆ ಪ್ರಗತಿ ಯಲ್ಲಿರುವ 5.45 ಕಿ.ಮೀ. ಉದ್ದದ ಬಫರ್ ರಸ್ತೆ ಕಾಮಗಾರಿಗೆ ವೇಗ ನೀಡಿ, ತ್ವರಿತವಾಗಿ ಪೂರ್ಣಗೊಳಿಸಲು ಕ್ರಮ ಕೈಗೊಳ್ಳುವಂತೆ ಅಧಿಕಾರಿಗಳಿಗೆ ಸೂಚಿಸಿದರು.

ಲೋವರ್ ಅಗರಂ ರಸ್ತೆಯಿಂದ ಈಜಿಪುರ ರಸ್ತೆಯವರೆಗೆ 2.45 ಕಿ.ಮೀ. ಹಾಗೂ ಈಜಿಪುರ ರಸ್ತೆಯಿಂದ ಸರ್ಜಾಪುರ ರಸ್ತೆಯವರೆಗೆ 3 ಕಿ.ಮೀ. ಸೇರಿದಂತೆ ಒಟ್ಟು 5.45 ಕಿ.ಮೀ. ಉದ್ದದ ಬಫರ್ ರಸ್ತೆ ನಿರ್ಮಿಸಲಾಗುತ್ತಿದೆ. ಈ ಸಂಬಂಧ ಈಜಿಪುರ ಬಳಿ ಬಫರ್ ರಸ್ತೆ ನಿರ್ಮಾಣಕ್ಕಾಗಿ ರಕ್ಷಣಾ ಇಲಾಖೆಯಿಂದ 5.34 ಎಕರೆ ಜಾಗವನ್ನು ಹಸ್ತಾಂತರಿಸಲಾಗಿದ್ದು, ಈ ಭಾಗದಲ್ಲಿ ಶೇ. 90ರಷ್ಟು ತಡೆಗೋಡೆ ಕಾಮಗಾರಿ ಪೂರ್ಣಗೊಂಡಿದೆ.

ಈಜಿಪುರ ಮೇಲ್ಸೇತುವೆಯ ಕೆಳಭಾಗದ ಸರ್ವಿಸ್ ರಸ್ತೆಯಲ್ಲಿರುವ ಪಾದಚಾರಿ ಮಾರ್ಗವು ಕಿರಿದಾಗಿರುವುದನ್ನು ಗಮನಿಸಿದ ಅವರು, ಮೇಲ್ಸೇತುವೆ ಕಾಮಗಾರಿ ಪೂರ್ಣಗೊಂಡ ತಕ್ಷಣ ಪಾದಚಾರಿ ಮಾರ್ಗ



ವನ್ನು ಅಗಲೀಕರಣ ಮಾಡುವಂತೆ ತಿಳಿಸಿದರು. ಪಾದಚಾರಿ ಮಾರ್ಗ ನಿರ್ಮಿಸುವ ಸಂದರ್ಭದಲ್ಲಿ ಸೈಕಲ್ ಟ್ರ್ಯಾಕ್ ಕೂಡಾ ನಿರ್ಮಾಣ ಮಾಡಬೇಕು.

## ರಾಷ್ಟ್ರೋತ್ಥಾನ ಸಾಹಿತ್ಯದ ಕ್ರಾಂತಿಯ ಕಿಡಿಗಳು ಕೃತಿ ಲೋಕಾರ್ಪಣೆ

**ಬೆಂಗಳೂರು, ಆ.12:** ರಾಷ್ಟ್ರೋತ್ಥಾನ ಸಾಹಿತ್ಯ ಪ್ರಕಟಿಸಿರುವ, ಹಿರಿಯ ಪತ್ರಕರ್ತ ಹಾಗೂ ಲೇಖಕ ದು. ಗು.ಲಕ್ಷ್ಮಣ ರಚಿಸಿದ 'ಕ್ರಾಂತಿಯ ಕಿಡಿಗಳು' ಕೃತಿಯನ್ನು ಚಾಮರಾಜಪೇಟೆಯ ಕೇಶವಕೃಪಾದಲ್ಲಿ ರಾಷ್ಟ್ರೀಯ ಸ್ವಯಂಸೇವಕ ಸಂಘದ ಸಹ ಸರಕಾರ್ಯವಾಹ ಮುಕುಂದ ಅವರು ಮಂಗಳವಾರ ಬಿಡುಗಡೆ ಮಾಡಿದರು. ಈ ವೇಳೆ ಮಾತನಾಡಿದ ಮುಕುಂದ, ಅಹಿಂಸೆ ಹಾಗೂ ಅಹಿಂಸಾ ಸತ್ಯಾಗ್ರಹಗಳಿಂದ ಮಾತ್ರ ನಮ್ಮ ದೇಶಕ್ಕೆ ಸ್ವಾತಂತ್ರ್ಯ ಸಿಕ್ಕಿದ್ದು ಎನ್ನುವ ಭಾವನೆ ಹಲವರಲ್ಲಿದೆ. ಆದರೆ ಕೇವಲ ಅಹಿಂಸೆಯಿಂದ ಮಾತ್ರವಲ್ಲ, ಅದೆಷ್ಟೋ ಕ್ರಾಂತಿಕಾರಿಗಳ ಕೆಚ್ಚೆದೆಯ ಹೋರಾಟವು ಸ್ವಾತಂತ್ರ್ಯ ಸಂಗ್ರಾಮದಲ್ಲಿ ಪ್ರಮುಖ ಪಾತ್ರ ವಹಿಸಿದೆ. ಈ ಕ್ರಾಂತಿಯ ಕಿಡಿಗಳು ಪುಸ್ತಕದಲ್ಲಿ 33 ಅಜ್ಞಾತ ಸ್ವಾತಂತ್ರ್ಯ ಹೋರಾಟಗಾರರ ಪರಿಚಯ ಇದೆ. ಇದು ನಮಗೆ ತಿಳಿದಿರದ, ನಾವು ಕೇಳಿರದ ಹಲವು ಕ್ರಾಂತಿಕಾರಿ ಸ್ವಾತಂತ್ರ್ಯ ಹೋರಾಟಗಾರರನ್ನು ನಮಗೆ ಪರಿಚಯಿಸುತ್ತದೆ ಎಂದು ಕೃತಿಯ ಬಗ್ಗೆ ಪ್ರಶಂಸಿದರು .

**ಕ್ರಾಂತಿಕಾರಿಗಳ ವಿವರ ಈ ಕೃತಿಯಲ್ಲಿದೆ :**

ಬ್ರಿಟಿಷರ ಬಳಿ ನಮಗೆ ಸ್ವಾತಂತ್ರ್ಯ ಕೊಡಿ ಎಂದು ಪ್ರಾರ್ಥಿಸುವ ಒಂದು ವರ್ಗವಿದ್ದರೆ, ಸ್ವಾತಂತ್ರ್ಯ ನಮ್ಮ ಹಕ್ಕು ಎಂದು ಬಲವಾಗಿ ಪ್ರತಿಪಾದಿಸಿದ್ದು ಇನ್ನೊಂದು ವರ್ಗ. ಮೂರನೇ ವರ್ಗ ಕ್ರಾಂತಿಕಾರಿಗಳದ್ದು. ಅವರು ಬ್ರಿಟಿಷರಿಗೆ ಬ್ರಿಟಿಷರದ್ದೇ ಮಾರ್ಗದಲ್ಲಿ ಸಾಗಿ ಬಂದೂಕು, ಮದ್ದು–ಗುಂಡುಗಳನ್ನು ಬಳಸಿ ಉತ್ತರ ನೀಡಿದ್ದರು. ಮತ್ತೊಂದು ವರ್ಗ ಸಮಾಜ ಸುಧಾರಣೆಯ ಮೂಲಕ ಸ್ವಾತಂತ್ರ್ಯಕ್ಕಾಗಿ ಹೋರಾಟ ನಡೆಸಿತ್ತು. ಮೊದಲ ಸ್ವಾತಂತ್ರ್ಯ ಸಂಗ್ರಾಮದಿಂದಲೇ ಕ್ರಾಂತಿಕಾರಿ ಹೋರಾಟಗಳು ನಡೆದಿದ್ದವು. ಕ್ರಾಂತಿಕಾರಿಗಳಾಗಿ ಸಶಸ್ತ್ರ ಹೋರಾಟಗಳಲ್ಲಿ ಭಾಗವಹಿಸಿದ ಹಲವರ ಕುರಿತು ಈ ಪುಸ್ತಕದಲ್ಲಿ ಉಲ್ಲೇಖವಿದೆ. ಸ್ವಾತಂತ್ರ್ಯೋತ್ಸವದ ಸಂದರ್ಭ ಅಂತಹ ಅಜ್ಞಾತ ವ್ಯಕ್ತಿಗಳ ಬಗ್ಗೆ ತಿಳಿದುಕೊಳ್ಳಲು ಇದು ಉತ್ತಮ ಆಕರ ಕೃತಿ ಎಂದು ಮುಕುಂದ ಶ್ಲಾಘಿಸಿದರು.



**ಮುಸಾಯ್ ಸಿಂಗ್ ಚಿತ್ರ ಸಿಕ್ಕಿಲ್ಲ :**

ಕ್ರಾಂತಿಯ ಕಿಡಿಗಳು ಪುಸ್ತಕದ ಲೇಖಕ ದು.ಗು.ಲಕ್ಷ್ಮಣ ಮಾತನಾಡಿ ?ಈ ಪುಸ್ತಕದಲ್ಲಿ 1857ರಲ್ಲಿಯೇ ಬಂಧನವಾಗಿ 50 ವರ್ಷ ಶಿಕ್ಷೆ ಅನುಭವಿಸಿದ ಮುಸಾಯ್ ಸಿಂಗ್ ಕಥೆಯಿದೆ. ಬಹುಶಃ ಆತನ ಹೆಸರು ಯಾರೂ ಕೇಳಿರಲಿಕ್ಕಿಲ್ಲ. ಆತ 50 ವರ್ಷಗಳ ಕಾಲ ಅಂಡಮಾನ್ ಜೈಲಿನಲ್ಲಿ ಶಿಕ್ಷೆ ಅನುಭವಿಸಬೇಕಾಗಿ ಬಂತು. ನಾವೆಲ್ಲರೂ ಅಂಡಮಾನ್‌ನಲ್ಲಿ ಶಿಕ್ಷೆ ಅನುಭವಿಸಿದ ಸಾವರ್ಕರ್ ಬಗ್ಗೆ ಕೇಳಿದ್ದೇವೆ. 13 ವರ್ಷ ಶಿಕ್ಷೆ ಅನುಭವಿಸಿ ಸಾವರ್ಕರ್ ವಾಪಸ್ ಬಂದ್ರು. ಆದರೆ, ಮುಸಾಯ್ ಸಿಂಗ್ 50 ವರ್ಷ ಶಿಕ್ಷೆ ಅನುಭವಿಸಿದ. ಆತನ ಕಥೆ ಎಲ್ಲೂ ಬಂದಿಲ್ಲ. ಇತಿಹಾಸಕಾರರೊಬ್ಬರು 1857 ಫ್ರೀಡಂ ಆಫ್ ಸೌತ್ ಇಂಡಿಯಾ ಪುಸ್ತಕದಲ್ಲಿ ಸಿಂಗ್ ಬಗ್ಗೆ ಬರೆದಿದ್ದರು. ಈ ಪುಸ್ತಕದಲ್ಲಿ ಆತನ ಬಗ್ಗೆ ವಿವರವಿದೆ, ಆದರೆ ಆತನ ಚಿತ್ರ ಎಲ್ಲೂ ಸಿಗುತ್ತಿಲ್ಲ ಎಂದರು. ರಾಷ್ಟ್ರೀಯ ಸ್ವಯಂಸೇವಕ ಸಂಘದ ಕಾರ್ಯಕರ್ತ ಹೇಮೂ ಕಲಾನಿ ಎಂಬಾತ ಕೂಡ ಸ್ವಾತಂತ್ರ್ಯಕ್ಕಾಗಿ ಹೋರಾಡಿ ತನ್ನ 19ನೇ ವಯಸ್ಸಿನಲ್ಲಿಯೇ ಗಲ್ಲು ಶಿಕ್ಷೆಗೆ ಗುರಿಯಾದ. ಮುರ್ಮು ಸಹೋದರರು ಎಂಬ ವನವಾಸಿ ಸಹೋದರರಿಬ್ಬರು ಕಾಡಿನ ನಡುವೆ ವಾಸಿಸುತ್ತಿದ್ದ ಎಲ್ಲರನ್ನೂ ಒಟ್ಟುಗೂಡಿಸಿ ಸ್ವಾತಂತ್ರ್ಯಕ್ಕಾಗಿ ಹೋರಾಟ ಮಾಡಿದ್ದರು. ಇಬ್ಬರನ್ನೂ ಬ್ರಿಟಿಷರು ನೇಣುಹಾಕಿ ಸಾಯಿಸಿದ್ದರು. ಈ ರೀತಿಯ ಒಂದಿಷ್ಟು ಯಾರೂ ಕೇಳರಿಯದ ಸ್ವಾತಂತ್ರ್ಯ ಹೋರಾಟಗಾರರ ಪರಿಚಯ ಈ ಪುಸ್ತಕದಲ್ಲಿದೆ. 33 ಅಜ್ಞಾತ ಮತ್ತು ಅನಾಮಿಕ ಹೋರಾಟಗಾರರ ಕಥೆ ಇದರಲ್ಲಿದೆ? ಎಂದು ಲಕ್ಷ್ಮಣ್ ನುಡಿದರು. ರಾಷ್ಟ್ರೋತ್ಥಾನ ಪರಿಷತ್‌ನ ಅಧ್ಯಕ್ಷ ಎಂ.ಪಿ. ಕುಮಾರ್, ಕಾರ್ಯದರ್ಶಿ ದಿನೇಶ್ ಹೆಗ್ಡೆ, ಖಜಾಂಜಿ ಕೆ.ಎಸ್. ನಾರಾಯಣ ಹಾಜರಿದ್ದರು.

# ವಿವಿಧ ಬೇಡಿಕೆಗಳಿಗೆ ಆಗ್ರಹಿಸಿ, ಬಿಜೆಪಿಯಿಂದ ಪಾದಯಾತ್ರೆ-ಡಿ.ಸಿ ಕಚೇರಿ ಮುತ್ತಿಗೆ ಯತ್ನ



**ಬೀದರ್, ಆ. 12:** ಬರಗಾಲ ಘೋಷಣೆ, ರೈತರ ಕೃಷಿ ಸಾಲ ಸಂಪೂರ್ಣ ಮನ್ನಾ ಮಾಡಬೇಕು ಎನ್ನುವುದು ಸೇರಿದಂತೆ ವಿವಿಧ ಬೇಡಿಕೆಗಳ ಈಡೇರಿಕೆಗೆ ಒತ್ತಾಯಿಸಿ ಬಿಜೆಪಿ ಕಾರ್ಯಕರ್ತರು ತಾಲ್ಲೂಕಿನ ಜನವಾಡದಿಂದ ಜಿಲ್ಲಾಧಿಕಾರಿ ಕಚೇರಿವರೆಗೆ ಪಾದಯಾತ್ರೆ ನಡೆಸಿ, ಜಿಲ್ಲಾಧಿಕಾರಿಗಳ ಕಚೇರಿ ಮುತ್ತಿಗಡೆ ಯತ್ನ ನಡೆಸಿದರು.

ಬಿಜೆಪಿ ಬೀದರ್ ಗ್ರಾಮಾಂತರ ಮಂಡಲ್ ಮುಂದಾಳತ್ವದಲ್ಲಿ ಬ್ಯಾಂಡ್, ಬಾಜಾದೊಂದಿಗೆ ಮರಕಲ್, ಚಿಕ್ಕಪೇಟೆ ಮಾರ್ಗವಾಗಿ ಜಿಲ್ಲಾಧಿಕಾರಿ ಕಚೇರಿಗೆ ತೆರಳಿ, ಅಲ್ಲಿ ಸರ್ಕಾರದ ವಿರುದ್ಧ ಘೋಷಣೆಗಳನ್ನು ಕೂಗಿದರು. ಕಾರ್ಯಕರ್ತರು ಡಿ.ಸಿ ಕಚೇರಿಗೆ ಮುತ್ತಿಗೆ ಹಾಕಲು ಯತ್ನಿಸಿದಾಗ, ಸ್ಥಳದಲ್ಲಿದ್ದ ಪೊಲೀಸರು ಅವರನ್ನು ತಡೆದರು. ಬಳಿಕ ಪಕ್ಷದ ಮುಖಂಡರು ಜಿಲ್ಲಾಧಿಕಾರಿಗೆ ಬರೆದ ಮನವಿ ಪತ್ರವನ್ನು ಹೆಚ್ಚುವರಿ ಜಿಲ್ಲಾಧಿಕಾರಿಗೆ ಸಲ್ಲಿಸಿದರು.

ಮಳೆ ಕೊರತೆ ಹಾಗೂ ಇತರ ಕಾರಣಗಳಿಂದ ರೈತರು ಸಂಕಷ್ಟದಲ್ಲಿದ್ದಾರೆ. ಹೀಗಾಗಿ ರೈತರನ್ನು ಕೃಷಿ ಸಾಲದಿಂದ ಮುಕ್ತಗೊಳಿಸಬೇಕು ಎಂದು ಬೇಡಿಕೆ ಮಂಡಿಸಿದರು. ಅರ್ಹ ಫಲಾನುಭವಿಗಳ ವಿಧವಾ, ವೃದ್ಧಾಪ್ಯ, ಅಂಗವಿಕಲರ ಮಾಸಾಶನ ಹಾಗೂ ಇತರ ಮಾಸಾಶನಗಳನ್ನು ಕೂಡಲೇ ಬಿಡುಗಡೆಗೊಳಿಸಬೇಕು. ವಿವಿಧ ಸರ್ಕಾರಿ ಯೋಜನೆಗಳಿಗೆ ?32 ಸಾವಿರ ಆದಾಯ ಮಿತಿ ನಿಗದಿ ರದ್ದುಪಡಿಸಬೇಕು. ಜಿಲ್ಲೆಯ ಗ್ರಾಮೀಣ ಪ್ರದೇಶದಲ್ಲಿ ಹಾಳಾದ ವಿದ್ಯುತ್ ಕಂಬ ಹಾಗೂ ತಂತಿಗಳನ್ನು ಬದಲಿಸಬೇಕು. ಕರಾರು, ಪೋಡಿ, ನಮೂನೆ 10, ಹದ್ದುಬಸ್ತ್ ಹಾಗೂ ಇತರ ಕಂದಾಯ ಸಂಬಂಧಿತ ಅರ್ಜಿಗಳನ್ನು ಕಾಲಮಿತಿಯಲ್ಲಿ ವಿಲೇವಾರಿ ಮಾಡಬೇಕು ಎಂದು ಆಗ್ರಹಿಸಿದರು.

ಜನವಾಡ ಠಾಣೆ ವ್ಯಾಪ್ತಿಯಲ್ಲಿ ಕಳ್ಳತನ ಪ್ರಕರಣಗಳ ಆರೋಪಿಗಳನ್ನು ಶೀಘ್ರ ಬಂಧಿಸಬೇಕು. ಜನವಾಡ ಸಮೀಪದ ನದಿಯ ನೀರು ಸರಬರಾಜು ಯೋಜನೆ ಪುನಃರಾರಂಭಿಸಿ, ಜನವಾಡ ಹಾಗೂ ಮಾಳೆಗಾಂವ್ ಹೋಬಳಿ ವ್ಯಾಪ್ತಿಯ ಎಲ್ಲ ಗ್ರಾಮಗಳಿಗೆ ನಿರಂತರ ಕುಡಿಯುವ ನೀರಿನ ಸೌಕರ್ಯ ಕಲ್ಪಿಸಬೇಕು. ಜನವಾಡದಿಂದ ಅಲಿಯಾಬಾದ್ (ಜೆ) ಗ್ರಾಮದ ವರೆಗಿನ ರಸ್ತೆ ನಿರ್ಮಿಸಬೇಕು. ಚಿಮಕೋಡ್-ಅಲ್ಲಾಪುರ ಹಾಗೂ ಚಿಮಕೋಡ್-ನ್ಯಾಮತಾಬಾದ್ ಸಂಪರ್ಕ ಸೇತುವೆಗಳ ಕಾಮಗಾರಿಯನ್ನು ತ್ವರಿತವಾಗಿ ಪೂರ್ಣಗೊಳಿಸಬೇಕು. ಕಾಮಗಾರಿ ಪೂರ್ಣಗೊಳ್ಳುವವರೆಗೆ ರೈತರು ಹಾಗೂ ಸಾರ್ವಜನಿಕರ ಅನುಕೂಲಕ್ಕಾಗಿ ತಾತ್ಕಾಲಿಕ ಕಚ್ಚಾ ರಸ್ತೆ ನಿರ್ಮಾಣ ಮಾಡಬೇಕು ಎಂದು ಒತ್ತಾಯಿಸಿದರು.

# ಇಎಸ್‌ಐ ಆಸ್ಪತ್ರೆ ಮಂಜೂರು ಮಾಡಿ: ಕೇಂದ್ರ ಸಚಿವೆ ಶೋಭಾ ಕರಂದ್ಲಾಜೆಗೆ ಬಿಜೆಪಿ ನಿಯೋಗದ ಮನವಿ



**ಬೀದರ್, ಆ. 12:** ಜಿಲ್ಲೆಯಲ್ಲಿ ಸಾವಿರಾರು ಕಾರ್ಮಿಕರು ಹಾಗೂ ನೌಕರರು ಕಾರ್ಯನಿರ್ವಹಿಸುತ್ತಿರುವ ಹಿನ್ನೆಲೆಯಲ್ಲಿ, ಕಾರ್ಮಿಕರು ಮತ್ತು ಅವರ ಕುಟುಂಬಗಳ ಆರೋಗ್ಯ ಹಿತದೃಷ್ಟಿಯಿಂದ ಜಿಲ್ಲೆಯಲ್ಲಿ ಸ್ವತಂತ್ರ ಹಾಗೂ ಸುಸಜ್ಜಿತ ಇಎಸ್‌ಐ ಆಸ್ಪತ್ರೆ ಸ್ಥಾಪಿಸುವಂತೆ ಕೇಂದ್ರ ಕಾರ್ಮಿಕ ಮತ್ತು ಉದ್ಯೋಗ ಖಾತೆಗಳ ಸಚಿವರಾದ ಕು.ಶೋಭಾ ಕರಂದ್ಲಾಜೆ ಅವರಿಗೆ ಬೀದರ್ ಬಿಜೆಪಿ ನಿಯೋಗ ಮನವಿ ಸಲ್ಲಿಸಿತು.

ನವದೆಹಲಿಯಲ್ಲಿ ಸಚಿವರನ್ನು ಭೇಟಿ ಮಾಡಿದ ನಿಯೋಗವು, ಬೀದರ್ ಜಿಲ್ಲೆಯಲ್ಲಿ ಕೈಗಾರಿಕಾ, ವಾಣಿಜ್ಯ ಹಾಗೂ ವಿವಿಧ ಕ್ಷೇತ್ರಗಳಲ್ಲಿ ದುಡಿಯುತ್ತಿರುವ ಕಾರ್ಮಿಕರು ಮತ್ತು ನೌಕರರ ಸಂಖ್ಯೆ ಗಣನೀಯವಾಗಿದ್ದು, ಅವರ ಆರೋಗ್ಯ ಸೇವೆಯ ಅಗತ್ಯತೆ ದಿನದಿಂದ ದಿನಕ್ಕೆ ಹೆಚ್ಚುತ್ತಿದೆ ಎಂದು ಸಚಿವರ ಗಮನಕ್ಕೆ ತಂದಿತು.

ಪ್ರಸ್ತುತ ಜಿಲ್ಲೆಯಲ್ಲಿ ಇಎಸ್‌ಐ ವ್ಯಾಪ್ತಿಗೆ ಒಳಪಡುವ ಕಾರ್ಮಿಕರು ಹಾಗೂ ಅವರ ಕುಟುಂಬ ಸದಸ್ಯರು ಹೆಚ್ಚಿನ ಚಿಕಿತ್ಸೆ, ತುರ್ತು ಚಿಕಿತ್ಸಾ ಸೇವೆ ಹಾಗೂ ವಿಶೇಷ ವೈದ್ಯಕೀಯ ಸೌಲಭ್ಯಗಳಿಗಾಗಿ ಕಲಬುರಗಿ, ಹೈದರಾಬಾದ್ ಸೇರಿದಂತೆ ದೂರದ ನಗರಗಳನ್ನು ಅವಲಂಬಿಸಬೇಕಾಗಿದೆ. ಇದರಿಂದ ಚಿಕಿತ್ಸೆ ಪಡೆಯುವ ಸಂದರ್ಭದಲ್ಲಿ ಸಮಯ ಹಾಗೂ ಆರ್ಥಿಕ ವೆಚ್ಚ ಹೆಚ್ಚಾಗುವುದರ ಜೊತೆಗೆ, ತುರ್ತು ಸಂದರ್ಭಗಳಲ್ಲಿ ರೋಗಿಗಳು ಹಾಗೂ ಅವರ ಕುಟುಂಬಸ್ಥರು ತೀವ್ರ ತೊಂದರೆ ಅನುಭವಿಸುತ್ತಿದ್ದಾರೆ ಎಂದು ನಿಯೋಗ ವಿವರಿಸಿತು.

ಬೀದರ್‌ನಲ್ಲಿಯೇ ಸುಸಜ್ಜಿತ ಇಎಸ್‌ಐ ಆಸ್ಪತ್ರೆ ಸ್ಥಾಪನೆ ಯಾದರೆ ಜಿಲ್ಲೆಯ ಕಾರ್ಮಿಕರು ಮತ್ತು ಅವರ ಕುಟುಂಬಗಳಿಗೆ ಗುಣ ಮಟ್ಟದ ಆರೋಗ್ಯ ಸೇವೆ ಸ್ಥಳೀಯ ವಾಗಿಯೇ ದೊರೆಯಲಿದೆ. ತಜ್ಞ ವೈದ್ಯರು, ಅಗತ್ಯ ವೈದ್ಯಕೀಯ ಉಪಕರಣಗಳು, ತುರ್ತು ಚಿಕಿತ್ಸಾ ವ್ಯವಸ್ಥೆ ಸೇರಿದಂತೆ ಸಮಗ್ರ ಆರೋಗ್ಯ ಸೇವೆಗಳನ್ನು ಒದಗಿಸಲು ಇದು ಸಹಕಾರಿಯಾಗಲಿದೆ ಎಂದು ನಿಯೋಗ ತಿಳಿಸಿತು.

ತಜ್ಞ ವೈದ್ಯಕೀಯ ಸೇವೆಗೆ ಮನವಿ: ಕಾರ್ಮಿಕರು ದೇಶದ ಆರ್ಥಿಕ ಅಭಿವೃದ್ಧಿಯ ಪ್ರಮುಖ ಶಕ್ತಿಯಾಗಿದ್ದು, ಅವರ ಆರೋಗ್ಯ ಮತ್ತು ಸಾಮಾಜಿಕ ಭದ್ರತೆಗೆ ಆದ್ಯತೆ ನೀಡುವುದು ಅಗತ್ಯವಾಗಿದೆ. ಈ ಹಿನ್ನೆಲೆಯಲ್ಲಿ ಬೀದರ್ ಜಿಲ್ಲೆಗೆ ಇಖಖ ಆಸ್ಪತ್ರೆ ಮಂಜೂರು ಮಾಡುವ ಕುರಿತು ಅಗತ್ಯ ಕ್ರಮ ಕೈಗೊಳ್ಳುವಂತೆ ಕೇಂದ್ರ ಸಚಿವರಿಗೆ ಮನವಿ ಮಾಡಲಾಯಿತು. ಕಾರ್ಮಿಕರು ಹಾಗೂ ಅವರ ಕುಟುಂಬಗಳಿಗೆ ಅನುಕೂಲವಾಗುವಂತೆ ನಗದುರಹಿತ ಚಿಕಿತ್ಸೆ ಸೇರಿದಂತೆ ESI ಯೋಜನೆ ಯಡಿ ಲಭ್ಯವಾಗುವ ವಿವಿಧ ವೈದ್ಯಕೀಯ ಸೌಲಭ್ಯಗಳು ಬೀದರ್ ನಲ್ಲಿಯೇ ದೊರೆಯುವಂತಾಗಬೇಕು. ಈ ನಿಟ್ಟಿನಲ್ಲಿ ಆಸ್ಪತ್ರೆ ಸ್ಥಾಪನೆಗೆ ಅಗತ್ಯವಾದ ಪ್ರಕ್ರಿಯೆಗಳನ್ನು ಶೀಘ್ರವಾಗಿ ಕೈಗೊಳ್ಳುವಂತೆ ಸಚಿವರ ಬಳಿ ಒತ್ತಾಯಿಸಲಾಯಿತು.ಸಚಿವರೊಂದಿಗೆ ಚರ್ಚೆ: ಮನವಿಯನ್ನು ಸ್ವೀಕರಿಸಿದ ಸಚಿವರು, ಬೀದರ್ ಜಿಲ್ಲೆಯ ಕಾರ್ಮಿಕರ ಸಮಸ್ಯೆಗಳು ಹಾಗೂ ಇಖಖ ಆಸ್ಪತ್ರೆಯ ಅಗತ್ಯತೆಯ ಕುರಿತು ನಿಯೋಗದೊಂದಿಗೆ ಚರ್ಚಿಸಿದರು.

ಇದೇ ಸಂದರ್ಭದಲ್ಲಿ ಜಿಲ್ಲೆಯ ಕಾರ್ಮಿಕರು ಎದುರಿಸುತ್ತಿರುವ ಇನ್ನಿತರ ಸಮಸ್ಯೆಗಳು, ಆರೋಗ್ಯ ಸೇವೆ ಹಾಗೂ ಕಾರ್ಮಿಕ ಕಲ್ಯಾಣಕ್ಕೆ ಸಂಬಂಧಿಸಿದ ವಿವಿಧ ವಿಚಾರಗಳ ಬಗ್ಗೆಯೂ ಚರ್ಚೆ ನಡೆಸಲಾಯಿತು.

ಬೀದರ್ ಜಿಲ್ಲೆಯಲ್ಲಿ ಇಎಸ್‌ಐ ಆಸ್ಪತ್ರೆ ಸ್ಥಾಪನೆಯಾದಲ್ಲಿ ಜಿಲ್ಲೆಯ ಸಾವಿರಾರು ಕಾರ್ಮಿಕರು ಹಾಗೂ ಅವರ ಕುಟುಂಬಗಳಿಗೆ ನೇರವಾಗಿ ಪ್ರಯೋಜನವಾಗಲಿದ್ದು, ತುರ್ತು ಸಂದರ್ಭದಲ್ಲಿ ದೂರದ ನಗರಗಳಿಗೆ ತೆರಳುವ ಅನಿವಾರ್ಯತೆ ಕಡಿಮೆಯಾಗಲಿದೆ. ಇದರಿಂದ ಕಾರ್ಮಿಕರ ಆರೋಗ್ಯ ರಕ್ಷಣೆಗೆ ಮತ್ತಷ್ಟು ಬಲ ದೊರೆಯಲಿದೆ ಎಂಬ ನಿರೀಕ್ಷೆ ವ್ಯಕ್ತವಾಗಿದೆ.

## ನಾಗೇಂದ್ರ ಸಚಿವ ಸ್ಥಾನಕ್ಕೆ ರಾಜೀನಾಮೆ ನೀಡಬೇಕು: ಎಂಎಲ್‌ಸಿ ಸತೀಶ್ ಒತ್ತಾಯ



**ಬಳ್ಳಾರಿ. ಆ. 12 :** ವಾಲ್ಮೀಕಿ ವಾಭಿವೃದ್ಧಿ ನಿಗಮದ ಹಣ ದುರ್ಬಳಕೆಯ ಆರೋಪದ ಹಿನ್ನೆಲೆಯಲ್ಲಿ ನಾಗೇಂದ್ರ ಈ ಹಿಂದೆ ಸಚಿವ ಸ್ಥಾನಕ್ಕೆ ರಾಜೀನಾಮೆ ನೀಡಿದ್ದರು. ಪ್ರಕರಣದ ಕುರಿತು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರೂ ಅಕ್ರಮ ನಡೆದಿರುವುದನ್ನು ಒಪ್ಪಿಕೊಂಡಿದ್ದರು ಹಾಗಿದ್ದರೂ ನಾಗೇಂದ್ರ ಅವರನ್ನು ಡಿಕೆ ಶಿವಕುಮಾರ್ ಸಚಿವ ಸಂಪುಟಕ್ಕೆ ಸೇರ್ಪಡೆ ಮಾಡಿರುವುದರ ಹಿಂದೆ ಮುಖ್ಯಮಂತ್ರಿಗಳಿಗೆ ಏನಾದರೂ ಅನಿವಾರ್ಯತೆ ಇತ್ತೇ ಕಾಂಗ್ರೆಸ್ ಹೈಕಮಾಂಡ್‌ನ ಒತ್ತಡವಿತ್ತೇ ಎಂದು ಭಾರತೀಯ ಜನತಾ ಪಕ್ಷದ ವಿಧಾನ ಪರಿಷತ್ ಸದಸ್ಯರಾದ ವೈ.ಎಂ.ಸತೀಶ್ ಪ್ರಶ್ನಿಸಿದ್ದಾರೆ.

ಮಹರ್ಷಿ ವಾಲ್ಮೀಕಿ ಪರಿಶಿಷ್ಟ ಪಂಗಡಗಳ ಅಭಿವೃದ್ಧಿ ನಿಗಮದಲ್ಲಿ ನಡೆದಿದೆ ಎನ್ನಲಾದ 187 ಕೋಟಿ ರೂಪಾಯಿ ಹಣದ ಅಕ್ರಮ ಪ್ರಕರಣದ ಹಿನ್ನೆಲೆಯಲ್ಲಿ ಸಚಿವ ಸ್ಥಾನಕ್ಕೆ ರಾಜೀನಾಮೆ ನೀಡಿದ್ದ ಬಿ. ನಾಗೇಂದ್ರ ಅವರನ್ನು ಮತ್ತೆ ಸಚಿವ ಸಂಪುಟಕ್ಕೆ ಸೇರ್ಪಡೆ ಮಾಡಿರುವುದಕ್ಕೆ ಎಂ.ವೈ. ಸತೀಶ್ ತೀವ್ರ ಆಕ್ಷೇಪ ವ್ಯಕ್ತಪಡಿಸಿ, ಮಹರ್ಷಿ ವಾಲ್ಮೀಕಿ ಅಭಿವೃದ್ಧಿ ನಿಗಮದ ಪರಿಶಿಷ್ಟ ಪಂಗಡದ ಜನರ ಕಲ್ಯಾಣಕ್ಕಾಗಿ ಮೀಸಲಿಟ್ಟ ಹಣವನ್ನು ದುರ್ಬಳಕೆ ಮಾಡಲಾಗಿದೆ ಎಂಬ ಆರೋಪವಿದೆ. ಸುಮಾರು187 ಕೋಟಿ ಮೊತ್ತದ ಅಕ್ರಮದ ಆರೋಪ ಕೇಳಿಬಂದಿದ್ದು, ನೂರಾರು ಬ್ಯಾಂಕ್ ಖಾತೆಗಳ ಮೂಲಕ ಹಣ ವರ್ಗಾವಣೆ ಮತ್ತು ವಿತ್‌ಡ್ರಾ ಮಾಡಲಾಗಿದೆ ಎಂಬ ವಿಚಾರ ತನಿಖೆಯಲ್ಲಿ ಬೆಳಕಿಗೆ ಬಂದಿದೆ.

ಈ ಪ್ರಕರಣದಲ್ಲಿ ಆರೋಪ ಪಟ್ಟಿಯೂ ಸಲ್ಲಿಕೆಯಾಗಿದೆ ಪ್ರಕರಣದ ತನಿಖೆ ಮುಗಿಯುವವರೆಗೆ ಬಿ ನಾಗೇಂದ್ರ ಅವರನ್ನು ಸಚಿವ ಸಂಪುಟಕ್ಕೆ ಸೇರಿಸಿಕೊಳ್ಳಬಾರದು ಎಂದು ಮುಖ್ಯಮಂತ್ರಿ ಅವರಲ್ಲಿ ಒತ್ತಾಯಿಸಿದರು.

ಎಸ್ ಟಿ ಮೋರ್ಚಾ ಅಧ್ಯಕ್ಷ ದರಪ್ಪ ನಾಯಕ ಅವರು ಮಾತನಾಡಿ ನಿಗಮದ ಹಣವನ್ನು ತೆಲಂಗಾಣದಲ್ಲಿನ ಬ್ಯಾಂಕ್ ಖಾತೆಗಳಿಗೆ ವರ್ಗಾಯಿಸಿ, ನಂತರ ಹಣವನ್ನು ಡ್ರಾ ಮಾಡಲಾಗಿತ್ತು ಎಂಬ ಆರೋಪವೂ ಪ್ರಕರಣಕ್ಕೆ ಸಂಬಂಧಿಸಿದ ದಾಖಲೆಗಳಲ್ಲಿ ಉಲ್ಲೇಖವಾಗಿದೆ ಎಂದು ಪ್ರಕರಣದ ಬೆಳವಣಿಗೆಗಳಿಂದ ನಿಗಮದ ಅಧಿಕಾರಿ ಚಂದ್ರಶೇಖರ್ ಆತ್ಮಹತ್ಯೆ ಮಾಡಿಕೊಂಡಿರುವುದು ಅತ್ಯಂತ ನೋವಿನ ಸಂಗತಿ ನಾವು ವಾಲ್ಮೀಕಿ ಸಮುದಾಯದವರು. ಸಮುದಾಯದ ವ್ಯಕ್ತಿಯಾಗಿ ಈ ವಿಚಾರವನ್ನು ಮಾತನಾಡುತ್ತಿದ್ದೇನೆ. ಸಿದ್ದರಾಮಯ್ಯ ಅವರಿಗೆ ಬಡವರ ಬಗ್ಗೆ ಕಾಳಜಿ ಇದೆ ಎಂಬುದನ್ನು ನಾವು ಒಪ್ಪುತ್ತೇವೆ. ಆದರೆ ಪರಿಶಿಷ್ಟ ಪಂಗಡದ ಜನರ ಆರ್ಥಿಕ ಮತ್ತು ಸಾಮಾಜಿಕ ಅಭಿವೃದ್ಧಿಗಾಗಿ ಮೀಸಲಿಟ್ಟ ಹಣದ ದುರ್ಬಳಕೆ ಆರೋಪ ಎದುರಿಸುತ್ತಿರುವ ವ್ಯಕ್ತಿಯನ್ನು ಪ್ರಭಾವಿ ಸಚಿವ ಸ್ಥಾನದಲ್ಲಿ ಮುಂದುವರಿಸುವುದು ಸರಿಯಲ್ಲ ನಾಗೇಂದ್ರ ಅವರು ಸಚಿವ ಸ್ಥಾನಕ್ಕೆ ರಾಜೀನಾಮೆ ನೀಡುವವರೆಗೆ ನಮ್ಮ ಹೋರಾಟ ಮುಂದುವರಿಯಲಿದೆ? ಎಂದು ಎಚ್ಚರಿಸಿದರು.

ಬರಗಾಲದ ಸಂದರ್ಭದಲ್ಲಿ ಜನರ ಸಮಸ್ಯೆಗಳಿಗೆ ಸ್ಪಂದಿಸುವ ಬದಲು ಅದ್ದೂರಿ ಸ್ವಾಗತ ಮತ್ತು ರಾಜಕೀಯ ಪ್ರದರ್ಶನಗಳಿಗೆ ಆದ್ಯತೆ ನೀಡುವುದು ಸರಿಯಲ್ಲ ಎಂದೂ ಅವರು ಟೀಕಿಸಿದರು.



ಸ್ವಾತಂತ್ರ್ಯ ದಿನಾಚರಣೆ ಮತ್ತು ವಂದೇ ಮಾತರಂನ 150 ನೇ ವಾರ್ಷಿಕೋತ್ಸವದ ಸಂದರ್ಭದಲ್ಲಿ, ಬುಧವಾರ ಬಳ್ಳಾರಿಯಲ್ಲಿ ಎಬಿವಿಪಿ ಕಾರ್ಯಕರ್ತರು 450 ಮೀಟರ್ ತಿರಂಗಾವನ್ನು ಪ್ರದರ್ಶಿಸಿದರು.

### ಬೆಳೆವಿಮೆ ತಾರತಮ್ಯ ಖಂಡಿಸಿ ಕಾಳಗಿ ಸಂಪೂರ್ಣ ಬಂದ್

## ರೈತರ ಹೋರಾಟಕ್ಕೆ ವ್ಯಾಪಾರಿಗಳು, ಸಾರ್ವಜನಿಕರ ಬೆಂಬಲ; ನ್ಯಾಯಯುತ ಪರಿಹಾರಕ್ಕೆ ಆಗ್ರಹ



**ಕಲಬುರಗಿ, ಆ, 12:** ಬೆಳೆ ವಿಮೆ ಪರಿಹಾರದಲ್ಲಿ ಆಗಿರುವ ತಾರತಮ್ಯ ಉದ್ದೇಶಪೂರ್ವಕವಾಗಿ ಮಾಡಿ ರೈತರಿಗೆ ಅನ್ಯಾಯ ಮಮಾಡಲಾಗಿದೆ ಖಂಡಿಸಿ ರೈತರು ನಡೆಸುತ್ತಿರುವ ಹೋರಾಟಕ್ಕೆ ಜಿಲ್ಲೆಯ ಕಾಳಗಿ ತಾಲ್ಲೂಕು ಕೇಂದ್ರದಲ್ಲಿ ವ್ಯಾಪಾರಸ್ಥರು ಹಾಗೂ ಸಾರ್ವಜನಿಕರು ಸಂಪೂರ್ಣ ಬೆಂಬಲ ವ್ಯಕ್ತಪಡಿಸಿದ ಹಿನ್ನೆಲೆಯಲ್ಲಿ ಕಾಳಗಿ ಪಟ್ಟಣ ಸಂಪೂರ್ಣ ಬಂದ್ ಆಗಿ ಸ್ತಬ್ಧಗೊಂಡಿತು.

ಬೆಳೆ ವಿಮೆ ಪಾವತಿಯಲ್ಲಿ ಅರ್ಹ ರೈತರಿಗೆ ಅನ್ಯಾಯವಾಗಿದ್ದು, ವಿಮೆ ಪಾವತಿಗೆ ಸಂಬಂಧಿಸಿದ ತಾರತಮ್ಯವನ್ನು ಸರಿಪಡಿಸಿ ನಷ್ಟಕ್ಕೊಳಗಾದ ರೈತರಿಗೆ ನ್ಯಾಯಯುತ ಪರಿಹಾರ ನೀಡಬೇಕು ಎಂಬುದು ರೈತರ ಪ್ರಮುಖ ಬೇಡಿಕೆಯಾಗಿದೆ. ರೈತರ ಹೋರಾಟಕ್ಕೆ ಬೆಂಬಲ ಸೂಚಿಸಿದ ವ್ಯಾಪಾರಸ್ಥರು ಸ್ವಯಂಪ್ರೇರಿತವಾಗಿ ಅಂಗಡಿ-ಮುಂಗಟ್ಟುಗಳನ್ನು ಮುಚ್ಚಿ ಬಂದ್‌ಗೆ ಕೈಜೋಡಿಸಿದರು.

ಬೆಳಗ್ಗೆಯಿಂದಲೇ ಪಟ್ಟಣದ ಪ್ರಮುಖ ಮಾರುಕಟ್ಟೆ, ಅಂಗಡಿ-ಮುಂಗಟ್ಟುಗಳು ಹಾಗೂ ವಾಣಿಜ್ಯ ಚಟುವಟಿಕೆಗಳು ಸ್ಥಗಿತಗೊಂಡಿದ್ದವು. ಬಸ್ ನಿಲ್ದಾಣ ಸೇರಿದಂತೆ ಪ್ರಮುಖ ಪ್ರದೇಶಗಳಲ್ಲಿ ಜನಸಂಚಾರವೂ ವಿರಳವಾಗಿತ್ತು. ಇದರಿಂದ ಕಾಳಗಿ ಪಟ್ಟಣ ಬಹುತೇಕ ಬಿಕೋ ಎನ್ನುತ್ತಿತ್ತು.

ತಾಲೂಕಿನ ವಿವಿಧ ಗ್ರಾಮಗಳಿಂದ ನೂರಾರು ರೈತರು ಸ್ವಯಂಪ್ರೇರಿತವಾಗಿ ಕಾಳಗಿಗೆ ಆಗಮಿಸಿ ಬಸವೇಶ್ವರ ವೃತ್ತದಿಂದ ಅಂಬೇಡ್ಕರ್ ವೃತ್ತದವರೆಗೆ ಕಾಲ್ನಡಿಗೆ ಮೂಲಕ ತೆರಳಿ, ಕಾಳಗಿ-ಕಲಬುರಗಿ ರಾಜ್ಯ ಹೆದ್ದಾರಿಯಲ್ಲಿ ಪ್ರತಿಭಟನೆ ನಡೆಸಿದರು. ಈ ವೇಳೆ ರೈತರು ಬೆಳೆ ವಿಮೆ ತಾರತಮ್ಯದ ವಿರುದ್ಧ ಘೋಷಣೆಗಳನ್ನು ಕೂಗಿ ಆಕ್ರೋಶ ವ್ಯಕ್ತಪಡಿಸಿದರು.

ರೈತರು ಮಾತನಾಡಿ, ಬೆಳೆ ವಿಮೆ ಯೋಜನೆಗೆ ನಿಯಮಾನುಸಾರ ಪ್ರೀಮಿಯಂ ಪಾವತಿಸಿದ್ದರೂ ಹಲವು ಅರ್ಹ ರೈತರಿಗೆ ಸಮರ್ಪಕ ಪರಿಹಾರ ದೊರೆತಿಲ್ಲ. ಒಂದೇ ಪ್ರದೇಶದಲ್ಲಿ ಬೆಳೆ ಬೆಳೆದ ರೈತರಲ್ಲಿ ಕೆಲವರಿಗೆ ವಿಮೆ ಪರಿಹಾರ ದೊರೆತರೆ, ಇನ್ನು ಕೆಲವರಿಗೆ ಪರಿಹಾರ ದೊರೆಯದಿರುವುದು ತಾರತಮ್ಯಕ್ಕೆ ಕಾರಣವಾಗಿದೆ ಎಂದು ಆರೋಪಿಸಿದರು.

### ಅಕ್ಷರ ಗ್ಲೋಬಲ್ ಶಾಲಾ-ಕಾಲೇಜಿನಲ್ಲಿ 'ಸಂಕಲ್ಪ-2026 ಸಂಭ್ರಮ

## ಸೈನಿಕರಿಗೆ ಪತ್ರ ಬರೆದ ಅಕ್ಷರ ಗ್ಲೋಬಲ್ ಶಾಲೆ ವಿದ್ಯಾರ್ಥಿಗಳು



**ಬಳ್ಳಾರಿ. ಆ. 12 :** ನಗರದ ಸಿರುಗುಪ್ಪ ರಸ್ತೆ ವಕ್ರಾಣಿ ಕ್ಯಾಂಪ್ ಸಮೀಪದ ಅಕ್ಷರ ಗ್ಲೋಬಲ್ ಶಾಲೆ ಮತ್ತು ಕಾಲೇಜಿನಲ್ಲಿ 80ನೇ ಸ್ವಾತಂತ್ರ್ಯ ದಿನಾಚರಣೆ ಅಂಗವಾಗಿ ಆಯೋಜಿಸಿರುವ 'ಸಂಕಲ್ಪ-2026' ಕಾರ್ಯಕ್ರಮದ ಮೂರನೇ ದಿನ ವಿವಿಧ ಸ್ಪರ್ಧೆಗಳನ್ನು ಆಯೋಜಿಸ ಲಾಗಿತ್ತು. ವಿದ್ಯಾರ್ಥಿಗಳ ಪೋಷಕರಿಗಾಗಿ ರಂಗೋಲಿ ಸ್ಪರ್ಧೆ ಹಾಗೂ ವಿದ್ಯಾರ್ಥಿಗಳಿಗಾಗಿ `Letter to Soldier Project Veer Patra ಹೆಸರಿನಲ್ಲಿ ಸೈನಿಕರಿಗೆ ಪತ್ರ ಬರೆಯುವ ಸ್ಪರ್ಧೆ ಮತ್ತು ಪ್ರಬಂಧ ಕಾರ್ಯಕ್ರಮ ನಡೆಯಿತು.

ಈ ಕಾರ್ಯಕ್ರಮಕ್ಕೆ ಅಕ್ಷರ ಗ್ಲೋಬಲ್ ಶಾಲೆ ಮತ್ತು ಕಾಲೇಜಿನ ಅಧ್ಯಕ್ಷರಾದ ಡಾ. ಅನುರಾಧ ಎಸ್. ಜೆ. ಅವರು ಚಾಲನೆ ನೀಡಿ, ರಂಗೋಲಿ ಸ್ಪರ್ಧೆಯ ತೀರ್ಪುಗಾರರಾಗಿ ಆರ್. ವೈ.ಎಂ.ಸಿ. ಕಾಲೇಜಿನ ಅಸಿಸ್ಟೆಂಟ್ ಪ್ರೊಫೆಸರ್ ಭಾಗ್ಯ ಹಾಗೂ ಆರ್. ವೈ.ಎಂ.ಎಸಿ. ಕಾಲೇಜಿನ ಅಸಿಸ್ಟೆಂಟ್ ಪ್ರೊಫೆಸರ್ ಜಯಶ್ರೀ ಕಾರ್ಯ ನಿರ್ವಹಿಸಿದರು.

ರಂಗೋಲಿ ಸ್ಪರ್ಧೆಯಲ್ಲಿ 50ಕ್ಕೂ ಹೆಚ್ಚು ಪೋಷಕರು ಉತ್ಸಾಹದಿಂದ ಭಾಗವಹಿಸಿ ತಮ್ಮ ಸೃಜನಶೀಲತೆಯನ್ನು ಪ್ರದರ್ಶಿಸಿದರು.

*ರಂಗೋಲಿ ಸ್ಪರ್ಧೆ ವಿಜೇತರು*

ಪ್ರಥಮ ಬಹುಮಾನ: ಪದ್ಮ ಪ್ರಿಯಾಂಕಾ, ದ್ವಿತೀಯ ಬಹುಮಾನ: ಶಶಿರೇಖಾ, ತೃತೀಯ ಬಹುಮಾನ: ಪ್ರೇಮಲತಾ `Letter to Soldier -Project Veer Patra' ಮೂಲಕ ದೇಶದ ಗಡಿಯಲ್ಲಿ ಸೇವೆ ಸಲ್ಲಿಸುತ್ತಿರುವ ಸೈನಿಕರಿಗೆ ಗೌರವ ಮತ್ತು ಕೃತಜ್ಞತೆ ಸಲ್ಲಿಸುವ ಸಂದೇಶವನ್ನು ವಿದ್ಯಾರ್ಥಿಗಳು ವ್ಯಕ್ತಪಡಿಸಿದರು.

## ವೃದ್ಧ ನಾಗೇಶ್ವರ ರಾವ್ ಅವರಿಗೆ ನ್ಯಾಯಕ್ಕಾಗಿ ಕಾನೂನು ಹೋರಾಟ



**ಬಳ್ಳಾರಿ, ಆ.12:** ಆಂಧ್ರಪ್ರದೇಶದ ಅನಂತಪುರ ಜಿಲ್ಲೆಯ ಕದಿರಿ ಪಟ್ಟಣದ 77 ವರ್ಷದ ವೃದ್ಧ ನಾಗೇಶ್ವರ ರಾವ್ (ಸಾಯಿರಾಮ್) ಅವರಿಗೆ ನ್ಯಾಯ ದೊರಕಿಸಿಕೊಡುವ ಉದ್ದೇಶ ದಿಂದ ರಾಷ್ಟ್ರೀಯ ಪುರುಷರ ಹಿತರಕ್ಷಣಾ ಸಮಿತಿ ಕಾನೂನು ಹೋರಾಟ ಆರಂಭಿಸಿದೆ.

ಸಮಿತಿಯ ಸ್ಥಾಪಕಿ ರಜನಿ ರಾಜ್, ಬಳ್ಳಾರಿ ಜಿಲ್ಲಾ ಅಧ್ಯಕ್ಷ ಹಾಗೂ ಎಸ್‌ಬಿಐ ನಿವೃತ್ತ ಉದ್ಯೋಗಿ ರಾಮಕೃಷ್ಣ ಬಲಿಜ, ಬಳ್ಳಾರಿ ಮುಖಂಡ ಆರ್. ಮನೋಹರ್ ಹಾಗೂ ವಕೀಲರ ತಂಡದೊಂದಿಗೆ ಆಂಧ್ರ ಪ್ರದೇಶಕ್ಕೆ ಭೇಟಿ ನೀಡಿ, ಅನಂತಪುರ ಐಜಿಪಿ, ಅನಂತಪುರ ಜಿಲ್ಲಾ ನ್ಯಾಯಾಧೀಶರು ಹಾಗೂ ಸತ್ಯಸಾಯಿ ಜಿಲ್ಲಾ ಎಸ್‌ಪಿ ಅವರನ್ನು ಭೇಟಿ ಮಾಡಿ, ನಾಗೇಶ್ವರರಾವ್ ಅವರಿಗೆ ಕಾನೂನುಬದ್ಧ ರಕ್ಷಣೆ ಹಾಗೂ ನ್ಯಾಯ ಒದಗಿಸುವಂತೆ ಮನವಿ ಸಲ್ಲಿಸಿದರು.

ನಾಗೇಶ್ವರ ರಾವ್ ಅವರು ಜೀವನಪೂರ್ತಿ ಶ್ರಮಪಟ್ಟು ಕಡಲೆಕಾಯಿ ವ್ಯಾಪಾರ ನಡೆಸಿ ಸ್ವಂತ ಮನೆ ನಿರ್ಮಿಸಿ, ತಮ್ಮ ಇಬ್ಬರು ಪುತ್ರರಿಗೆ ಉತ್ತಮ ಶಿಕ್ಷಣ, ಉದ್ಯೋಗ ಹಾಗೂ ವಿವಾಹ ಮಾಡಿಕೊಟ್ಟಿದ್ದಾರೆ. ಆದರೆ ವೃದ್ಧಾಪ್ಯದಲ್ಲಿ ತಮ್ಮದೇ ಮಕ್ಕಳು ಮನೆಯಿಂದ ಹೊರಹಾಕಿದ್ದಾರೆ ಎಂದು ಅವರು ಆರೋಪಿಸಿದ್ದಾರೆ.

ಕಳೆದ 12 ವರ್ಷಗಳಿಂದ ಆಶ್ರಮಗಳು, ದಾನಿಗಳು ಹಾಗೂ ಸಮಾಜದ ಸಹೃದಯರ ನೆರವಿನಿಂದ ಜೀವನ ಸಾಗಿಸುತ್ತಿರುವ ಅವರು, ಹಲವು ಬಾರಿ ಸಂಬಂಧಪಟ್ಟ ಅಧಿಕಾರಿಗಳಿಗೆ ದೂರು ಸಲ್ಲಿಸಿದರೂ ಇದುವರೆಗೆ ನ್ಯಾಯ ದೊರೆತಿಲ್ಲ ಎಂದು ತಮ್ಮ ಅರ್ಜಿಯಲ್ಲಿ ತಿಳಿಸಿದ್ದಾರೆ.

ಪ್ರಸ್ತುತ ಬಳ್ಳಾರಿಯ ಬೃಂದಾವನ ಕಾಲೋನಿಯ ನಿವಾಸಿ ಆರ್. ಮನೋಹರ್ ಅವರು ನಾಗೇಶ್ವರ ರಾವ್ ಅವರನ್ನು ತಮ್ಮ ತಂದೆಯಂತೆ ನೋಡಿಕೊಂಡು, ವಾಸಕ್ಕೆ ಪ್ರತ್ಯೇಕ ಕೊಠಡಿ, ಆಹಾರ, ವೈದ್ಯಕೀಯ ಚಿಕಿತ್ಸೆ ಹಾಗೂ ಅಗತ್ಯ ಆರೈಕೆ ಒದಗಿಸುತ್ತಿದ್ದು, ಅವರ ಮಾನವೀಯ ಸೇವೆ ಶ್ಲಾಘನೀಯವಾಗಿದೆ.

ಈ ಸಂದರ್ಭದಲ್ಲಿ ರಾಷ್ಟ್ರೀಯ ಪುರುಷರ ಹಿತ ರಕ್ಷಣಾ ಸಮಿತಿ ವತಿಯಿಂದ, ವೃದ್ಧ ತಂದೆ-ತಾಯಿಯನ್ನು ನೋಡಿಕೊಳ್ಳುವುದು ಪ್ರತಿಯೊಬ್ಬ ಮಗುವಿನ ಕಾನೂನುಬದ್ಧ, ನೈತಿಕ ಹಾಗೂ ಸಾಮಾಜಿಕ ಜವಾಬ್ದಾರಿಯಾಗಿದೆ ಎಂದು ತಿಳಿಸಲಾಗಿದೆ. ನಾಗೇಶ್ವರ ರಾವ್ ಅವರನ್ನು ಮನೆಯಿಂದ ಹೊರಹಾಕಿದ ಪ್ರಕರಣವನ್ನು ಸಮಗ್ರವಾಗಿ ತನಿಖೆ ನಡೆಸಿ, ತಪ್ಪಿತಸ್ಥರ ವಿರುದ್ಧ ಕಾನೂನು ಕ್ರಮ ಕೈಗೊಂಡು, ವೃದ್ಧರಿಗೆ ನ್ಯಾಯ, ರಕ್ಷಣೆ ಹಾಗೂ ಗೌರವಯುತ ಜೀವನ ಕಲ್ಪಿಸುವಂತೆ ಸಂಬಂಧಪಟ್ಟ ಅಧಿಕಾರಿಗಳಿಗೆ ಒತ್ತಾಯಿಸಲಾಗಿದೆ.

ನಾಗೇಶ್ವರರಾವ್ ಅವರಿಗೆ ನ್ಯಾಯ ದೊರಕುವವರೆಗೆ ರಾಷ್ಟ್ರೀಯ ಪುರುಷರ ಹಿತರಕ್ಷಣಾ ಸಮಿತಿ ಅವರ ಪರವಾಗಿ ಕಾನೂನು ಹೋರಾಟವನ್ನು ಮುಂದುವರಿಸಲಿದೆ ಎಂದು ರಜನಿ ರಾಜ್ ತಿಳಿಸಿದ್ದಾರೆ.

## ಬಳ್ಳಾರಿ: ಜಿಲ್ಲಾಡಳಿತದಿಂದ ಮುಂದುವರಿದ ಅತಿಕ್ರಮಣ ತೆರವು ಕಾರ್ಯಾಚರಣೆ-ಸರ್ಕಾರಿ ಜಮೀನು ವಶಕ್ಕೆ



**ಬಳ್ಳಾರಿ,ಆ.12.**ತಾಲೂಕಿನ ಮುಂಡರಗಿ ಕೈಗಾರಿಕಾ ಪ್ರದೇಶದ (ಹಂತ-1) ವ್ಯಾಪ್ತಿಯಲ್ಲಿನ ಸರ್ಕಾರಿ ಜಮೀನಿನಲ್ಲಿ ಅಕ್ರಮವಾಗಿ ನಿರ್ಮಿಸಲಾಗಿದ್ದ ಶೆಡ್‌ಗಳನ್ನು ಕಂದಾಯ ಹಾಗೂ ಪೊಲೀಸ್ ಅಧಿಕಾರಿಗಳ ಸಮ್ಮುಖದಲ್ಲಿ ತೆರವುಗೊಳಿಸಲಾಗಿದೆ.

ಮುಂಡರಗಿ ಗ್ರಾಮದ ಸರ್ವೇ ಸಂಖ್ಯೆ 177/2 ರ ವ್ಯಾಪ್ತಿಯ 1.07 ಎಕರೆ ಸರ್ಕಾರಿ ಜಮೀನನ್ನು ಅತಿಕ್ರಮಿಸಿ ಅನಧಿಕೃತವಾಗಿ ಶೆಡ್ ನಿರ್ಮಿಸಲಾಗಿತ್ತು. ಈ ಕುರಿತು ಪರಿಶೀಲನೆ ನಡೆಸಿದ ಅಧಿಕಾರಿಗಳ ತಂಡ, ಬುಧವಾರ ಬೆಳಿಗ್ಗೆ ಬೃಹತ್ ತೆರವು ಕಾರ್ಯಾಚರಣೆ ನಡೆಸಿ, ಅನಧಿಕೃತ ನಿರ್ಮಾಣಗಳನ್ನು ನೆಲಸಮಗೊಳಿಸಿದೆ.

ಅದೇ ರೀತಿ ಸರ್ವೇ ನಂ.322 ರ 11.40 ಎಕರೆ ಖರಾಬು ಜಮೀನನ್ನು ಒತ್ತುವರಿ ಮಾಡಲಾಗಿತ್ತು. ಅದನ್ನು ತೆರವುಗೊಳಿಸಲಾಗಿದೆ.

ಕಾರ್ಯಾಚರಣೆಯ ವೇಳೆ ಕಂದಾಯ ಇಲಾಖೆಯ ಅಧಿಕಾರಿಗಳು, ಸಿಬ್ಬಂದಿ ಹಾಗೂ ಬಿಗಿ ಪೊಲೀಸ್ ಬಂದೋಬಸ್ತ್ ನಿಯೋಜಿಸಲಾಗಿತ್ತು. ಅನಧಿಕೃತವಾಗಿ ಸರ್ಕಾರಿ ಆಸ್ತಿಗಳನ್ನು ಕಬಳಿಸಲು ಯತ್ನಿಸುವವರ ವಿರುದ್ಧ ಕಠಿಣ ಕಾನೂನು ಕ್ರಮ ಕೈಗೊಳ್ಳಲಾಗುವುದು ಎಂದು ಈ ಸಂದರ್ಭದಲ್ಲಿ ಅಧಿಕಾರಿಗಳು ಎಚ್ಚರಿಕೆ ನೀಡಿದ್ದಾರೆ.

ತೆರವುಗೊಳಿಸಿದ ಜಮೀನಿನಲ್ಲಿ 'ಈ ಜಾಗವು ಸರ್ಕಾರಕ್ಕೆ ಸೇರಿದ್ದು, ಅತಿಕ್ರಮಣ ಮಾಡುವುದು ಶಿಕ್ಷಾರ್ಹ ಅಪರಾಧ' ಎಂದು ಎಚ್ಚರಿಕೆ ಫಲಕವನ್ನು ಸಹ ಅಳವಡಿಸಲಾಗಿದೆ.

### ದರೋಜಿ ಕೆರೆ ಸಂರಕ್ಷಣೆ - ಮಾಲಿನ್ಯ ತಡೆಗೆ ಕಟ್ಟುನಿಟ್ಟಿನ ಕ್ರಮ

## ಜಿಲ್ಲಾ ವಿಪತ್ತು ನಿರ್ವಹಣಾ ಪ್ರಾಧಿಕಾರದ ಸಭೆಯಲ್ಲಿ ಡಿಸಿ ನಾಗೇಂದ್ರ ಪ್ರಸಾದ್ ಸೂಚನೆ



**ಬಳ್ಳಾರಿ,ಆ.12:** ದರೋಜಿ ಕೆರೆಯ ಜಲಚರ ವ್ಯವಸ್ಥೆ ಹಾಗೂ ಪರಿಸರವನ್ನು ರಕ್ಷಿಸಲು ಮತ್ತು ಮಾಲಿನ್ಯವನ್ನು ಸಂಪೂರ್ಣವಾಗಿ ತಡೆಗಟ್ಟಲು ಸಂಬಂಧಪಟ್ಟ ಎಲ್ಲಾ ಇಲಾಖೆಗಳು ಒಗ್ಗೂಡಿ ಕಟ್ಟುನಿಟ್ಟಿನ ಕ್ರಮ ಕೈಗೊಳ್ಳಬೇಕೆಂದು ಜಿಲ್ಲಾ ವಿಪತ್ತು ನಿರ್ವಹಣಾ ಪ್ರಾಧಿಕಾರದ ಅಧ್ಯಕ್ಷರೂ ಆದ ಜಿಲ್ಲಾಧಿಕಾರಿ ನಾಗೇಂದ್ರ ಪ್ರಸಾದ್.ಕೆ ಅವರು ಹೇಳಿದರು.

ದರೋಜಿ ಕೆರೆಯು ಅತ್ಯಂತ ಸೂಕ್ಷ್ಮ ಹಾಗೂ ಶ್ರೀಮಂತ ಜಲಚರ ಪರಿಸರ ವ್ಯವಸ್ಥೆಯನ್ನು ಹೊಂದಿದೆ. ಇಲ್ಲಿ ಬೆಳೆಯುವ ಬೃಹತ್ ಗಾತ್ರದ ದರೋಜಿ ತಳಿಯ ಮೀನುಗಳಿಗೆ ಕೋಲ್ಕತ್ತಾದಂತಹ ದೂರದ ನಗರಗಳಲ್ಲೂ ಭಾರೀ ಬೇಡಿಕೆಯಿದೆ. ಈ ಕೆರೆಯು ಹಿಂದೆ ಎರಡು ಪ್ರತ್ಯೇಕ ಕೆರೆಗಳಾಗಿದ್ದು, ನಂತರದ ದಿನಗಳಲ್ಲಿ ಒಂದಾಗಿ ಮಾರ್ಪಟ್ಟಿದೆ ಎಂದು ತಿಳಿಸಿದರು.

**ಮಾಲಿನ್ಯದ ಮೂಲ ಹಾಗೂ ಕೆರೆ ಹೂಳು ತುಂಬುವಿಕೆ:** ನಾರಿಹಳ್ಳ ಪ್ರದೇಶದಿಂದ ಹರಿದುಬರುವ ನೀರು ಮತ್ತು ಹೂಳು ಕೆರೆಯ ನೀರಿನ ಶೇಖರಣಾ ಸಾಮರ್ಥ್ಯವನ್ನು ಕುಗ್ಗಿಸಿದೆ. ಜೊತೆಗೆ, ಕುಡಿತಿನಿ, ಕುರೇಕುಪ್ಪ ಹಾಗೂ ತೋರಣಗಲ್ಲು ಭಾಗಗಳ ಸಂಸ್ಕರಿಸದ ತ್ಯಾಜ್ಯ ನೀರು ಹಾಗೂ ಘನತ್ಯಾಜ್ಯಗಳು ನೇರವಾಗಿ ಕೆರೆಗೆ ಸೇರುತ್ತಿರುವುದು ಮಾಲಿನ್ಯಕ್ಕೆ ಮುಖ್ಯ ಕಾರಣವಾಗಿದೆ ಎಂದರು.

ಕೆರೆಯ ಮಾಲಿನ್ಯ ನಿಯಂತ್ರಣಕ್ಕೆ ನೀರಾವರಿ ಇಲಾಖೆ, ಅರಣ್ಯ ಇಲಾಖೆ, ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿ, ಕುರೇಕುಪ್ಪ, ತೋರಣಗಲ್ಲು ಸ್ಥಳೀಯ ಆಡಳಿತ ಸಂಸ್ಥೆಗಳು, ಗ್ರಾಮೀಣ ಕುಡಿಯುವ ನೀರು ಮತ್ತು ಸರಬರಾಜು ಇಲಾಖೆ ಸೇರಿದಂತೆ ಎಲ್ಲಾ ಭಾಗಿದಾರರ ಜಂಟಿ ಸಭೆಯನ್ನು ಶೀಘ್ರದಲ್ಲೇ ಕರೆಯಲಾಗುವುದು ಎಂದರು.

**ಕಲುಷಿತ ನೀರು ಸಂಸ್ಕರಣೆ ಮತ್ತು ಕ್ರಿಯಾ ಯೋಜನೆ:** ಕೆರೆಗೆ ಕಲುಷಿತ ನೀರು ಹರಿಯುವ ಸ್ಥಳಗಳನ್ನು ಗುರುತಿಸಿ, ನೀರು ಕೆರೆ ಸೇರುವ ಮುನ್ನವೇ ಸಂಸ್ಕರಿಸಲು ಸ್ಪಷ್ಟ ಕ್ರಿಯಾ ಯೋಜನೆ ತಯಾರಿಸಲಾಗುವುದು. ತ್ಯಾಜ್ಯ ನೀರು ಮತ್ತು ಕೈಗಾರಿಕಾ ಕಲುಷಿತ ನೀರನ್ನು ಸಂಸ್ಕರಿಸಿದ ನಂತರವೇ ಬಿಡಲು ಕಟ್ಟುನಿಟ್ಟಿನ ಸೂಚನೆ ನೀಡಲಾಗುತ್ತದೆ ಎಂದರು.

**ಸಂರಕ್ಷಣೆ ಮತ್ತು ಪ್ರವಾಸೋದ್ಯಮ ಅಭಿವೃದ್ಧಿ:** ಕೆರೆಯ ದಂಡೆಯ ಸವೆತ ತಡೆಯಲು ಮತ್ತು ಪರಿಸರ ಸಮತೋಲನ ಕಾಯಲು ಮ್ಯಾಂಗ್ರೋವ್ ಮಾದರಿಯ ಸಸ್ಯಗಳನ್ನು ನೆಡಲು ನಿರ್ಧರಿಸಲಾಗುವುದು. ದರೋಜಿ ಕೆರೆಯು ಪ್ರವಾಸಿ ಆಕರ್ಷಣೆಯ ಸಾಮರ್ಥ್ಯ ಹೊಂದಿದ್ದು, ಕೆರೆಯನ್ನು ಕಲುಷಿತ ಮುಕ್ತಗೊಳಿಸಿ ಪ್ರವಾಸೋದ್ಯಮ ಕೇಂದ್ರವಾಗಿ ಅಭಿವೃದ್ಧಿಪಡಿಸಲು ಯೋಜನೆ ರೂಪಿಸಲಾಗುತ್ತಿದೆ. ಈ ಯೋಜನೆಗೆ ಅಗತ್ಯವಿರುವ ವೆಚ್ಚವನ್ನು ಕೆಎಂಇಆರ್‌ಸಿ ಅಡಿಯಲ್ಲಿ ಭರಿಸಲು ಹಾಗೂ ಮುಂದಿನ ದಿನಗಳಲ್ಲಿ ತಜ್ಞರ ಸಲಹೆ ಪಡೆದು ಕೆರೆಯ ಜೀವವೈವಿಧ್ಯವನ್ನು ಉಳಿಸಲು ಸಮಗ್ರ ಹೆಜ್ಜೆ ಇಡಲಾಗುವುದು ಎಂದರು.

ಜಿಲ್ಲೆಯಲ್ಲಿ ಸಣ್ಣ ನೀರಾವರಿ ಇಲಾಖೆಗೆ ಒಳಪಡುವ ಕೆರೆಗಳಲ್ಲಿ ನೀರಿನ ಮಟ್ಟ ತೀವ್ರವಾಗಿ ಕುಸಿತ ಕಂಡಿದ್ದು, ರೈತರಲ್ಲಿ ಭಾರೀ ಆತಂಕ ಮೂಡಿಸಿದ್ದು, ಬಳ್ಳಾರಿ ಮತ್ತು ಸಿರುಗುಪ್ಪ ತಾಲೂಕುಗಳಲ್ಲಿನ ಕೆರೆಗಳ ಸ್ಥಿತಿ ಚಿಂತಾಜನಕವಾಗಿವೆ. ಶೇ. 30ಕ್ಕಿಂತ ಕಡಿಮೆ ನೀರು ಸಂಗ್ರಹವಾಗಿದೆ. ಸಣ್ಣ ನೀರಾವರಿ ಇಲಾಖೆಯ ವ್ಯಾಪ್ತಿಯಲ್ಲಿ ಒಟ್ಟು 36 ಕೆರೆಗಳಿದ್ದು, ಈ ಪೈಕಿ ಬಳ್ಳಾರಿ ತಾಲೂಕಿನಲ್ಲಿ 7 ಹಾಗೂ ಸಿರುಗುಪ್ಪ ತಾಲೂಕಿನಲ್ಲಿ 29 ಕೆರೆಗಳಿವೆ. ಪ್ರಸ್ತುತ ಹೆಚ್ಚಿನ ಕೆರೆಗಳು ಒಣಗುವ ಹಂತ ತಲುಪಿವೆ. ಕಳೆದ ಬಾರಿಗೆ ಹೋಲಿಸಿದರೆ ಈ ಬಾರಿ ಕೆರೆಗಳಲ್ಲಿ ನೀರಿನ ಸಂಗ್ರಹಣೆ ತೀವ್ರ ಪ್ರಮಾಣದಲ್ಲಿ ಕುಸಿದಿದೆ ಎಂದರು.

ಹಿಂಗಾರು ಮುಂಗಾರು ಅಥವಾ ಮಳೆಗಾಲದ ಹಿನ್ನೆಲೆಯಲ್ಲಿ ನಗರ ಹಾಗೂ ಗ್ರಾಮೀಣ ಪ್ರದೇಶಗಳಲ್ಲಿ ಕಲುಷಿತ ನೀರು ಸರಬರಾಜಾಗುವುದನ್ನು ತಡೆಯಲು ಸಂಬಂಧಪಟ್ಟ ಇಲಾಖೆಯ ಅಧಿಕಾರಿಗಳು ತಕ್ಷಣವೇ ಜಂಟಿ ತಪಾಸಣೆ ನಡೆಸಬೇಕು ಸೂಚನೆ ನೀಡಿದರು.

**ಮಳೆ ಮಾಪಕ ಯಂತ್ರಗಳ ವೈಫಲ್ಯ:** ಜಿಲ್ಲೆಯಾದ್ಯಂತ ಒಟ್ಟು 46 ಮಳೆ ಮಾಪಕ ಯಂತ್ರಗಳು ಪರಿಶೀಲನೆಯಲ್ಲಿದ್ದು, ಇವುಗಳಲ್ಲಿ ಹಲವು ಯಂತ್ರಗಳು ಸರಿಯಾಗಿ ಕಾರ್ಯನಿರ್ವಹಿಸುತ್ತಿಲ್ಲ. ಕೆಎಸ್‌ಎನ್‌ಡಿಎಂಸಿ ಕನ್ಸಲ್ಟೆಂಟ್ ಅವರೊಂದಿಗೆ ಸಮನ್ವಯ ಸಾಧಿಸಿ, ದೋಷಪೂರಿತ ಯಂತ್ರಗಳನ್ನು ತಕ್ಷಣವೇ ದುರಸ್ತಿಗೊಳಿಸಿ ಸಕ್ರಿಯಗೊಳಿಸಲು ಕ್ರಮ ಕೈಗೊಳ್ಳಬೇಕೆಂದು ತಾಕೀತು ಮಾಡಿದರು.

ತಾಲ್ಲೂಕು ಮಟ್ಟದ ವಿಪತ್ತು ನಿರ್ವಹಣಾ ಪ್ರಾಧಿಕಾರದ ಸಭೆಗಳು ಸರಿಯಾಗಿ ನಡೆಯುತ್ತಿಲ್ಲ. ಸಂಬಂಧಿಸಿದ ಶಾಸಕರೊಂದಿಗೆ ಸಮಯಾವಕಾಶ ಪಡೆದುಕೊಂಡು ಕಡ್ಡಾಯವಾಗಿ ನಡೆಸಬೇಕು. ಅದೇರೀತಿಯಾಗಿ ತಮ್ಮ- ತಮ್ಮ ಇಲಾಖೆಗಳ ಸಾಮಾನ್ಯ ಮಾಹಿತಿ ತಿಳಿದುಕೊಳ್ಳಬೇಕು ಎಂದು ತಾಲೂಕು ಮಟ್ಟದ ಅಧಿಕಾರಿಗಳಿಗೆ ನಿರ್ದೇಶನ ನೀಡಿದರು.

ಜಿಲ್ಲೆಯಲ್ಲಿ ಕುಡಿಯುವ ನೀರು, ಜಾನುವಾರುಗಳಿಗೆ ಮೇವಿನ ಲಭ್ಯತೆ, ಬೆಳೆ ವಿಮೆ ನೋಂದಣಿ, ರಸ್ತೆಗಳಲ್ಲಿ ತಗ್ಗು-ಗುಂಡಿ, ರಸ್ತೆ ಮೇಲ್ಸೇತುವೆ ದುರಸ್ತಿ, ನಿರಂತರ ವಿದ್ಯುತ್ ಸರಬರಾಜಿಗೆ ಆದ್ಯತೆ ನೀಡಬೇಕು. 'ಭಾರತ್ ಜೋಡೋ' ಯುವಕರ ಸಂಘ ನೋಂದಣಿ, ಜಿಲ್ಲಾ ಹಾಗೂ ತಾಲ್ಲೂಕು ಮಟ್ಟದಲ್ಲಿ 'ಪ್ರಜಾಸೇವೆ' ಕಾರ್ಯಕ್ರಮ ಆಯೋಜಿಸಲು ದಿನಾಂಕ, ವೇಳಾಪಟ್ಟಿ, ಸ್ಥಳ ನಿಗದಿ ಸೇರಿದಂತೆ ರೂಪುರೇಷೆ ಸಿದ್ಧಪಡಿಸಲಾಗುವುದು ಎಂದು ತಿಳಿಸಿದರು.

## ಹಾರ್ಮುಜ್ ಜಲಸಂಧಿಯ ಮೇಲೆ ಅಮೆರಿಕದ ಸಂಪೂರ್ಣ ನಿಯಂತ್ರಣ: ಟ್ರಂಪ್

**ಮೇರಿಲ್ಯಾಂಡ್, ಆಗಸ್ಟ್ 12:** ವಾಷಿಂಗ್ಟನ್ ಮತ್ತು ಟೆಹ್ರಾನ್ ನಡುವಿನ ನಿರಂತರ ಉದ್ವಿಗ್ನತೆಯ ನಡುವೆ, ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಅವರು ಇರಾನ್ ಅನ್ನು ನಂಬುವುದಿಲ್ಲ ಎಂದು ಹೇಳಿದ್ದಾರೆ ಮತ್ತು ಅಮೆರಿಕ ಪ್ರಸ್ತುತ ಹಾರ್ಮುಜ್ ಜಲಸಂಧಿಯ ಮೇಲೆ "ಸಂಪೂರ್ಣ ನಿಯಂತ್ರಣ" ಹೊಂದಿದೆ ಎಂದು ಹೇಳಿದ್ದಾರೆ. "ನಾನು ಇರಾನ್ ಅನ್ನು ನಂಬುವುದಿಲ್ಲ. ನಾನು ಇರಾನ್ ಅನ್ನು ನಂಬುತ್ತೇನೆ ಎಂದು ನೀವು ಏಕೆ ಹೇಳುತ್ತಿದ್ದೀರಿ, ನಾನು ಇರಾನ್ ಅನ್ನು ನಂಬುವ ಕೊನೆಯ ವ್ಯಕ್ತಿ ನಾನೇ" ಎಂದು ಟ್ರಂಪ್ ಓಹಿಯೋದಿಂದ ಹಿಂದಿರುಗಿದ ನಂತರ ಮೇರಿಲ್ಯಾಂಡ್‌ನ ಜಂಟಿ ನೆಲೆ ಆಂಡ್ರ್ಯೂಸ್‌ನಲ್ಲಿ ವರದಿಗಾರರಿಗೆ ತಿಳಿಸಿದರು. ಅವರು ನಿರಂತರವಾಗಿ ನನಗೆ ಸುಳ್ಳು ಹೇಳುತ್ತಿದ್ದಾರೆ ಎಂದು ಅವರು ಹೇಳಿದರು. ಯುನೈಟೆಡ್ ಸ್ಟೇಟ್ಸ್ ಕಾರ್ಯತಂತ್ರದ ಜಲಮಾರ್ಗವನ್ನು ನಿಯಂತ್ರಿಸುತ್ತದೆ ಎಂಬ ತನ್ನ ಹೇಳಿಕೆಯನ್ನು ಟ್ರಂಪ್ ಪುನರುಚ್ಚರಿಸಿದರು. ನಮಗೆ ಈಗ ಹಾರ್ಮುಜ್ ಜಲಸಂಧಿಯ ಮೇಲೆ ಸಂಪೂರ್ಣ ನಿಯಂತ್ರಣವಿದೆ. ಅವರಿಗೆ ನಿಯಂತ್ರಣವಿಲ್ಲ. ನಮಗೆ ಸಂಪೂರ್ಣ ನಿಯಂತ್ರಣವಿದೆ. ನಾವು ಅದನ್ನು ಹೊಂದಿದ್ದೇವೆ." ಅಮೆರಿಕದ ಬಲವಂತದ ಪ್ರತಿಕ್ರಿಯೆಯನ್ನು ಪ್ರಚೋದಿಸುವ ಕ್ರಮಗಳನ್ನು ತೆಗೆದುಕೊಳ್ಳದಂತೆ ಅವರು ಟೆಹ್ರಾನ್‌ಗೆ ಎಚ್ಚರಿಕೆ ನೀಡಿದರು. ಮತ್ತು ಒಂದು ಹಂತದಲ್ಲಿ, ಬಹುಶಃ ಅವರು ಏನಾದರೂ ಮಾಡಬಹುದು ಮತ್ತು ನಂತರ ಅವರು ದಿಗ್ಭ್ರಮೆಗೊಳ್ಳುತ್ತಾರೆ" ಎಂದು ಟ್ರಂಪ್ ಹೇಳಿದರು. ಇರಾನ್ ಈ ಪ್ರದೇಶದಲ್ಲಿ ತನ್ನ ಹಿಂದಿನ ಪ್ರಭಾವವನ್ನು ಕಳೆದುಕೊಂಡಿದೆ ಎಂದು ಪ್ರತಿಪಾದಿಸುವಾಗ ಯುನೈಟೆಡ್ ಸ್ಟೇಟ್ಸ್ ಬಲವಾದ ಸ್ಥಾನದಲ್ಲಿದೆ ಎಂದು ಅವರು ಹೇಳಿದರು. 'ಈಗ, ನಾವು ಉತ್ತಮ ಸ್ಥಾನದಲ್ಲಿದ್ದೇವೆ. 50 ವರ್ಷಗಳಿಂದ ಮಧ್ಯಪ್ರಾಚ್ಯದ ಮೇಲೆ ದಾಳಿ ಮಾಡುತ್ತಿರುವ ದೇಶ ನಮ್ಮದು... ಅವರು ಇನ್ನು ಮುಂದೆ ಮಧ್ಯಪ್ರಾಚ್ಯದ ಮೇಲೆ ದಾಳಿ ಮಾಡುತ್ತಿಲ್ಲ ಎಂದು ಅವರು ಹೇಳಿದರು. ಹೋರ್ಮುಜ್ ಜಲಸಂಧಿಯ ಸುತ್ತಲಿನ ಅಡೆತಡೆಗಳು ಜಾಗತಿಕ ಇಂಧನ ಪೂರೈಕೆಗೆ ಬೆದ 'ರಿಕೆಯನ್ನುಂಟುಮಾಡುತ್ತಿರುವಾಗ, ವಾಷಿಂಗ್ಟನ್ ಮತ್ತು ಟೆಹ್ರಾನ್ ಇನ್ನೂ ಮುಖಾಮುಖಿಯನ್ನು ಕೊನೆಗೊಳಿಸಲು ಅಂತಿಮ ಒಪ್ಪಂದಕ್ಕೆ ಬಂದಿಲ್ಲ. ವಿದೇಶಾಂಗ ಸಚಿವಾಲಯದ ವಕ್ತಾರ ಎಸ್ಮಾಯಿಲ್ ಬಕ್ಕೈ ಅವರು ಪಾಶ್ಚಿಮಾತ್ಯ ನಿರ್ಬಂಧಗಳನ್ನು ಟೀಕಿಸುತ್ತಾ ಫೆಬ್ರವರಿ 28, 2026 ರವರೆಗೆ ಜಲಮಾರ್ಗ ತೆರೆದಿತ್ತು ಎಂದು ಇರಾನಿನ ರಾಜ್ಯ ಪ್ರಸಾರಕ ಪ್ರೆಸ್ ಟಿವಿ ಉಲ್ಲೇಖಿಸಿದೆ. ಹೋರ್ಮುಜ್ ಜಲಸಂಧಿಯನ್ನು



ಸುತ್ತುವರೆದಿರುವ ಪರಿಸ್ಥಿತಿ ಮತ್ತು ಅದಕ್ಕೆ ಏನಾಯಿತು ಎಂಬುದು ಅಮೆರಿಕ ಮತ್ತು ಇಸ್ರೇಲಿ ಆಡಳಿತದ ಮಿಲಿಟರಿ ಆಕ್ರಮಣದಿಂದ ಉಂಟಾಗಿದೆ ಎಂಬುದನ್ನು ನಾವು ಮರೆಯಬಾರದು, ಅದು ಇನ್ನೂ ಮುಂದುವರೆದಿದೆ ಎಂದು ಬಕ್ಕೈ ಹೇಳಿದರು. ಇರಾನ್ ಷರತ್ತುಗಳನ್ನು ವಿಧಿಸಿದೆ ಎಂಬ ಹೇಳಿಕೆಗಳಿಗೆ ಸಂಬಂಧಿಸಿದಂತೆ, ಅವರು ಆ ವಿಷಯವನ್ನು ತಮ್ಮದೇ ಆದ ಸರ್ಕಾರದೊಂದಿಗೆ ಎತ್ತಿಕೊಳ್ಳಬೇಕು ಎಂದು ಅವರು ಹೇಳಿದರು. ಜಲಮಾರ್ಗದ ಮೇಲಿನ ಉದ್ವಿಗ್ನತೆಗಳು ಸಂಘರ್ಷದಲ್ಲಿ ಪ್ರಮುಖ ಘರ್ಷಣಾ ಬಿಂದುವಾಗಿ ಉಳಿದಿವೆ, ಕಾರ್ಯತಂತ್ರದ ಜಲಸಂಧಿಯ ಮೂಲಕ ಸಾಗಣೆಗೆ ವ್ಯವಸ್ಥೆಗಳ ಕುರಿತು ಟೆಹ್ರಾನ್ ಮತ್ತು ಓಮಾನ್ ನಡುವೆ ಚರ್ಚೆಗಳು ನಡೆಯುತ್ತಿವೆ.

## ಲೆಬನಾನ್, ಗಾಜಾ ಮೇಲೆ ಇಸ್ರೇಲ್ ನಿಲ್ಲದ ದಾಳಿ: ಅಮೆರಿಕ–ಇರಾನ್ ಮಾತುಕತೆ ಪ್ರಯತ್ನ ತೀವ್ರ



**ಇಸ್ಲಾಮಾಬಾದ್, ಆಗಸ್ಟ್ 12:** 60 ದಿನಗಳ ಒಪ್ಪಂದದ ಗಡುವು ಭಾನುವಾರ ಮುಕ್ತಾಯಗೊಳ್ಳಲಿದ್ದು, ಪಾಕಿಸ್ತಾನವು ಅಮೆರಿಕ ಮತ್ತು ಇರಾನ್ ಅನ್ನು ಮಾತುಕತೆಯ ಮೇಜಿಗೆ ತರಲು ಮತ್ತು ಶಾಂತಿ ಪ್ರಕ್ರಿಯೆಯನ್ನು ದುರ್ಬಲಗೊಳಿಸುವ ಪ್ರಯತ್ನಗಳನ್ನು ತಡೆಯಲು ಕೆಲಸ ಮಾಡುತ್ತಿದೆ ಎಂದು ದೇಶದ ವಿದೇಶಾಂಗ ಸಚಿವಾಲಯ ತಿಳಿಸಿದೆ. ಇಸ್ಲಾಮಾಬಾದ್ ಪ್ರಾದೇಶಿಕ ಸ್ಥಿರತೆ, ಕಾರ್ಯತಂತ್ರದ ಜಲಮಾರ್ಗದ ಪುನರಾರಂಭ ಮತ್ತು ವಾಷಿಂಗ್ಟನ್ ಮತ್ತು ಟೆಹ್ರಾನ್ ನಡುವಿನ ಇಸ್ಲಾಮಾಬಾದ್ ತಿಳುವಳಿಕೆ ಒಪ್ಪಂದ (MoU) ಅನುಷ್ಠಾನದ ಕುರಿತು ಚರ್ಚೆಗಳನ್ನು ಮುನ್ನಡೆಸಲು ಪ್ರಯತ್ನಿಸುತ್ತಿರುವಾಗ, ನಖ್ವಿ ತಮ್ಮ ಭೇಟಿಯ ಸಮಯದಲ್ಲಿ ಇರಾನ್ ಅಧ್ಯಕ್ಷ ಮಸೌದ್ ಪೆಜೆಶ್ಕಿಯಾನ್ ಮತ್ತು ವಿದೇಶಾಂಗ ಸಚಿವ ಅಬ್ಬಾಸ್ ಅರಘ್ಚಿ ಅವರನ್ನು ಭೇಟಿಯಾದರು. ಉನ್ನತ ರಾಜತಾಂತ್ರಿಕ ಮೂಲದ ಪ್ರಕಾರ, ಹಾರ್ಮುಜ್ ಜಲಸಂಧಿಯನ್ನು ಪುನಃ ತೆರೆಯುವ ಕುರಿತು ನಖ್ವಿ ಯುನೈಟೆಡ್ ಸ್ಟೇಟ್ಸ್ ಮತ್ತು ಪಾಕಿಸ್ತಾನದ ಫೀಲ್ಡ್ ಮಾರ್ಷಲ್ ಅಸಿಮ್ ಮುನೀರ್ ಅವರಿಂದ ಸಂದೇಶಗಳನ್ನು ಸಾಗಿಸಿದರು. ಇಸ್ಲಾಮಾಬಾದ್ ಒಪ್ಪಂದಕ್ಕೆ ಸಂಬಂಧಿಸಿದ ಮಾತುಕತೆಗಳನ್ನು ಮುನ್ನಡೆಸಲು ಅವರು ಪ್ರಯತ್ನಿಸಿದರು. ಒಪ್ಪಂದವು ಹತ್ತಿರದಲ್ಲಿದೆ ಎಂದು ಪಾಕಿಸ್ತಾನ ಹೇಳಿಕೊಂಡಿದೆ. ಇರಾನ್ ವಿರುದ್ಧ ಅಮೆರಿಕ–ಇಸ್ರೇಲ್ ಯುದ್ಧ ನಡೆದು ಐದು ತಿಂಗಳಿಗಿಂತ ಹೆಚ್ಚು ಸಮಯ ಕಳೆದರೂ, ಮುಖಾಮುಖಿಯನ್ನು ಕೊನೆಗೊಳಿಸುವ ಒಪ್ಪಂದದ ಸಾಧ್ಯತೆಗಳು ಸ್ಪಷ್ಟವಾಗಿಲ್ಲ. ಈ ವಾರದ ಆರಂಭದಲ್ಲಿ, ಇರಾನ್ ವಿದೇಶಾಂಗ ಸಚಿವ ಅಬ್ಬಾಸ್ ಅರಘ್ಚಿ ಅವರು ಅಮೆರಿಕದೊಂದಿಗೆ ಯಾವುದೇ ನೇರ ಮಾತುಕತೆ ನಡೆದಿಲ್ಲ ಎಂದು ಹೇಳಿದರು. ಪಾಕಿಸ್ತಾನದ ಅಧಿಕಾರಿಗಳು ಈ ಹಿಂದೆ ಇಸ್ಲಾಮಾಬಾದ್ ಎರಡೂ ಕಡೆಯ ನಡುವಿನ ಸಂಭಾಷಣೆಗೆ ಬದ್ಧವಾಗಿದೆ ಎಂದು ಹೇಳಿದ್ದರು. ಏತನ್ಮಧ್ಯೆ, ಟೆಹ್ರಾನ್‌ನಿಂದ ಪ್ರತಿಕೂಲ ವಾಕ್ಚಾತುರ್ಯ ಮತ್ತು ಸೇಡಿನ ಕರೆಗಳು ಮುಂದುವರೆದಿವೆ. ಕೆಲವು ಪಾಶ್ಚಿಮಾತ್ಯ ವ್ಯಾಖ್ಯಾನಕಾರರು, ವಿಶೇಷವಾಗಿ ಬಲಪಂಥೀಯರು, ಇರಾನ್ ತನ್ನ ಅಮೇರಿಕನ್ ವಿರೋಧಿ ಸಿದ್ಧಾಂತದಿಂದಾಗಿ ಒಪ್ಪಂದವನ್ನು ಮಾಡಿಕೊಳ್ಳಲು ಅಸಮರ್ಥವಾಗಿದೆ ಎಂದು ವಾದಿಸಿದ್ದಾರೆ.

### ಇಸ್ರೇಲಿ ದಾಳಿಗಳು ಗಾಜಾ ಪಟ್ಟಿ:

ಕಳೆದ 24 ಗಂಟೆಗಳಲ್ಲಿ ಗಾಜಾ ಪಟ್ಟಿಯ ಮೇಲೆ ಇಸ್ರೇಲಿ ನಡೆಸಿದ ಹೊಸ ದಾಳಿಗಳಲ್ಲಿ ಕನಿಷ್ಠ ಇಬ್ಬರು ಪ್ಯಾಲೆಸ್ಟೀನಿಯನ್ನರು ಗಾಯಗೊಂಡಿದ್ದಾರೆ, ಆದರೆ ಪ್ಯಾಲೆಸ್ಟೀನಿ ಆರೋಗ್ಯ ಸಚಿವಾಲಯದ ಪ್ರಕಾರ, ಹಿಂದಿನ ದಾಳಿಗಳ ಅವಶೇಷಗಳಿಂದ ಒಂದು ಶವವನ್ನು ವಶಪಡಿಸಿಕೊಳ್ಳಲಾಗಿದೆ. ಇಸ್ರೇಲಿ ಪಡೆಗಳು ದಕ್ಷಿಣ ಲೆಬನಾನ್‌ನಲ್ಲಿರುವ ನಾಲ್ಕು ಅಂತಸ್ತಿನ ಸಾರ್ವಜನಿಕ ಶಾಲೆಯನ್ನು ಸ್ಫೋಟಿಸಿ ನಾಶಪಡಿಸಿವೆ ಎಂದು ದೇಶದ ರಾಷ್ಟ್ರೀಯ ಸುದ್ದಿ ಸಂಸ್ಥೆ ತಿಳಿಸಿದೆ.

## ಹಾರ್ಮುಜ್ ಜಲಸಂಧಿಯಲ್ಲಿ ಅಡ್ಡಿ–ಆತಂಕಗಳ ನಡುವೆ 2026 ರ ಇಂಧನ ಸಂಸ್ಥೆಯಿಂಥ ತೈಲಬೇಡಿಕೆ ಕಡಿತ

**ಪ್ಯಾರಿಸ್, ಆಗಸ್ಟ್ 12:** ಹಾರ್ಮುಜ್ ಜಲಸಂಧಿಯ ಮೂಲಕ ಸಾಗಣೆಗೆ ಅಡ್ಡಿ ಮತ್ತು ಬಳಕೆಯ ಮೇಲೆ ಪರಿಣಾಮ ಬೀರುವ ಬೆಲೆಗಳ ಏರಿಕೆಯನ್ನು ಉಲ್ಲೇಖಿಸಿ ಅಂತರರಾಷ್ಟ್ರೀಯ ಇಂಧನ ಸಂಸ್ಥೆ ಬುಧವಾರ ಈ ವರ್ಷ ಜಾಗತಿಕ ತೈಲ ಬೇಡಿಕೆಯ ಮುನ್ಸೂಚನೆಯನ್ನು ತೀವ್ರವಾಗಿ ಕಡಿತಗೊಳಿಸಿದೆ. ಜುಲೈ ವರದಿಯಲ್ಲಿ ದಿನಕ್ಕೆ 1 ಮಿಲಿಯನ್ ಬ್ಯಾರೆಲ್ ಕುಸಿತದ ಮುನ್ಸೂಚನೆಗೆ ಹೋಲಿಸಿದರೆ, ಜಾಗತಿಕ ತೈಲ ಬೇಡಿಕೆಯು ದಿನಕ್ಕೆ 1.6 ಮಿಲಿಯನ್ ಬ್ಯಾರೆಲ್‌ಗಳಷ್ಟು ಕಡಿಮೆಯಾಗುವ ನಿರೀಕ್ಷೆಯಿದೆ. ಫೆಬ್ರವರಿ ಅಂತ್ಯದಲ್ಲಿ ಇರಾನ್ ಮೇಲೆ ಯುಎಸ್ ಮತ್ತು ಇಸ್ರೇಲಿ ದಾಳಿ ಮಾಡುವ ಮೊದಲು ಕಂಡುಬಂದ ಮಟ್ಟಕ್ಕಿಂತ ತೈಲ ಬೆಲೆಗಳು ಗಮನಾರ್ಹವಾಗಿ ಹೆಚ್ಚಿವೆ, ಇದು ಹಲವಾರು ಗಲ್ಫ್ ದೇಶಗಳಲ್ಲಿ ತೈಲ ಮೂಲಸೌಕರ್ಯವನ್ನು ಹಾನಿಗೊಳಿಸಿದ ಮತ್ತು ಪ್ರಮುಖ ಪೂರೈಕೆ ಮಾರ್ಗಗಳನ್ನು ತೀವ್ರವಾಗಿ ಅಡ್ಡಿಪಡಿಸಿದ ಯುದ್ಧವನ್ನು ಪ್ರಚೋದಿಸಿತು.

ಹಾರ್ಮುಜ್ ಜಲಸಂಧಿಯ ಮೂಲಕ ಟ್ಯಾಂಕರ್ ಮತ್ತು ಸರಕು ಸಾಗಣೆಯನ್ನು ಇರಾನ್ ಪರಿಣಾಮಕಾರಿಯಾಗಿ ಸ್ಥಗಿತಗೊಳಿಸಿದೆ, ಇದರ ಮೂಲಕ ಜಾಗತಿಕ ತೈಲ ಪೂರೈಕೆಯ ಐದನೇ ಒಂದು ಭಾಗವು ಸಾಮಾನ್ಯವಾಗಿ ಹಾದುಹೋಗುತ್ತದೆ. "ಹಾರ್ಮುಜ್ ಜಲಸಂಧಿಯ ನಿರಂತರ ಮುಚ್ಚುವಿಕೆ ಮತ್ತು ಇಂಧನ ಬೆಲೆಗಳ ಏರಿಕೆಯು ತೈಲ ಬಳಕೆಯ ಮೇಲೆ ಪರಿಣಾಮ ಬೀರುತ್ತಿದೆ" ಎಂದು ಪ್ಯಾರಿಸ್ ಮೂಲದ IEA ಹೇಳಿದೆ. ವರದಿಯಾದ ಕದನ ವಿರಾಮ ಮತ್ತು ಜಲಸಂಧಿಯನ್ನು ಪುನಃ ತೆರೆಯುವ ಒಪ್ಪಂದವು ಸನ್ನಿಹಿತವಾಗಿದೆ ಎಂದು ಪದೇ ಪದೇ ಹೇಳಿಕೊಂಡರೂ, ಸೀಮಿತ ಸಂಖ್ಯೆಯ ಹಡಗುಗಳಿಗೆ ಮಾತ್ರ ಅಂಗೀಕಾರಕ್ಕೆ ಅವಕಾಶ ನೀಡಲಾಗಿದೆ. ಪರಿಣಾಮವಾಗಿ ಉಂಟಾದ "ಹಠಾತ್ ರಾಜತಾಂತ್ರಿಕ ಪಿವೋಟ್‌ಗಳು" ಜಾಗತಿಕ ತೈಲ ಮಾರುಕಟ್ಟೆಗಳಲ್ಲಿ ಏರಿಳಿತಕ್ಕೆ ಕಾರಣವಾಗಿವೆ ಎಂದು ಐಇಎ ಹೇಳಿದೆ. ಜುಲೈನಲ್ಲಿ ಜಾಗತಿಕ ತೈಲ ಸರಬರಾಜು ದಿನಕ್ಕೆ 2.4 ದಶಲಕ್ಷ ಬ್ಯಾರಲ್‌ನಿಂದ 101.5 ದಶಲಕ್ಷ ಬ್ಯಾರಲ್‌ಗೆ ಏರಿದೆ ಎಂದು ಐಇಎ ಹೇಳಿದೆ. ಆದಾಗ್ಯೂ, ಅದು ಒಂದು ವರ್ಷದ ಹಿಂದಿನ ಮಟ್ಟಕ್ಕಿಂತ ದಿನಕ್ಕೆ 6.3 ದಶಲಕ್ಷ ಬ್ಯಾರಲ್‌ಗಳಷ್ಟು ಕಡಿಮೆಯಾಗಿದೆ. "ಜುಲೈ ಮತ್ತು ಆಗಸ್ಟ್ ಆರಂಭದಲ್ಲಿ ನವೀಕರಿಸಿದ ಹಗೆತನ ಮತ್ತು ಸಮುದ್ರ ಅಡಚಣೆಗಳು ಚೇತರಿಕೆಯ ಪ್ರಯತ್ನಗಳನ್ನು ದುರ್ಬಲ ಗೊಳಿಸಿದವು" ಎಂದು ಸಂಸ್ಥೆ ಹೇಳಿದೆ. ಮುಂದಿನ ವರ್ಷ ಚೇತರಿಸಿಕೊಳ್ಳುವ ಮೊದಲು ಈ ವರ್ಷ ಜಾಗತಿಕ ತೈಲ ಪೂರೈಕೆ ದಿನಕ್ಕೆ ಸರಾಸರಿ 4.3 ದಶಲಕ್ಷ ಬ್ಯಾರಲ್‌ಗಳಷ್ಟು ಕಡಿಮೆಯಾಗಲಿದೆ ಎಂದು ಸಂಸ್ಥೆ ಈಗ ನಿರೀಕ್ಷಿಸುತ್ತದೆ. ಬೇಡಿಕೆಯ ಬದಿಯಲ್ಲಿ, ಈ ವರ್ಷದ ನಾಲ್ಕನೇ ತ್ರೈಮಾಸಿಕದಲ್ಲಿ ಬಳಕೆ ಬೆಳವಣಿಗೆಗೆ ಮರಳುತ್ತದೆ ಎಂದು ಸಂಸ್ಥೆ ನಿರೀಕ್ಷಿಸುತ್ತದೆ.

## ಕೊಲಂಬಿಯಾ ಭೂಕಂಪದಲ್ಲಿ ಮೃತಪಟ್ಟವರ ಸಂಖ್ಯೆ 250ಕ್ಕೆ ಏರಿಕೆ

ಪೆರೇರಾ (ಕೊಲಂಬಿಯಾ): ಕೊಲಂಬಿಯಾದಲ್ಲಿ ಸಂಭವಿಸಿದ ಪ್ರಬಲ ಭೂಕಂಪನದಲ್ಲಿ ಸಾವನ್ನಪ್ಪಿದವರ ಸಂಖ್ಯೆ ಕನಿಷ್ಠ 250ಕ್ಕೆ ಏರಿಕೆ ಕಂಡಿದೆ. ಸಾವಿನ ಸಂಖ್ಯೆ ಇನ್ನಷ್ಟು ಹೆಚ್ಚುವ ಸಾಧ್ಯತೆಗಳಿವೆ. ಪಶ್ಚಿಮ ಕೊಲಂಬಿಯಾದಾದ್ಯಂತ ಅನೇಕರು ಅಪಾರ್ಟ್‌ಮೆಂಟ್, ಕಚೇರಿ ಕಟ್ಟಡಗಳ ಅವಶೇಷಗಳ ಅಡಿಯಲ್ಲಿ ಸಿಲುಕಿದ್ದು, ಬದುಕುಳಿದವರ ರಕ್ಷಣೆ ಮಾಡುವ ಕಾರ್ಯಾಚರಣೆಯಲ್ಲಿ ಯೋಧರು ಮತ್ತು ಸ್ವಯಂ ಸೇವಕರು ಅವಿರತವಾಗಿ ಶ್ರಮಿಸುತ್ತಿದ್ದಾರೆ.

ಅಲ್ಲಿನ ಅಧಿಕಾರಿಗಳ ಪ್ರಕಾರ, 7.4 ತೀವ್ರತೆಯಲ್ಲಿ ಭೂಮಿ ಕಂಪಿಸಿದ್ದು, ಘಟನೆಯಲ್ಲಿ 1,670ಕ್ಕೂ ಹೆಚ್ಚು ಜನರು ಗಾಯಗೊಂಡಿದ್ದಾರೆ. ಇದು ಆರೋಗ್ಯ ಇಲಾಖೆ ಮತ್ತು ಪರಿಹಾರ ಕಾರ್ಯಾಚರಣೆಮೇಲೆ ತೀವ್ರವಾದ ಒತ್ತಡತಂದಿದೆ. ಇತ್ತೀಚಿನವರ್ಷಗಳಲ್ಲಿ ಕೊಲಂಬಿಯಾದಲ್ಲಿ ನಡೆಯುತ್ತಿರುವ ಅತಿದೊಡ್ಡ ವಿಪತ್ತು ನಿರ್ವಹಣಾ ಕಾರ್ಯಾಚರಣೆ ಇದಾಗಿದೆ. ಪೆರೇರಾ, ಕಾಲಿಯಲ್ಲಿ ಭೂಕಂಪನದಿಂದ ಕಟ್ಟಡಗಳುಸಂಪೂರ್ಣನೆಲಸಮವಾಗಿದ್ದು, ಅವಶೇಷಗಳ ರಾಶಿ ಕಂಡು ಬರುತ್ತಿದೆ. ಅಲ್ಲದೇ ಭೂಕಂಪನದ ನಂತರದ ಕಂಪನಗಳು ಹೆಚ್ಚಿನ ಆತಂಕವನ್ನು ಸೃಷ್ಟಿಸಿವೆ. ನಂತರದ ಕಂಪನಗಳಿಂದ ಕಟ್ಟಡಗಳು ಅಲಗಾಡುತ್ತಿದ್ದು, ಇದರಿಂದ ಭೀತಿಗೊಳಗಾಗಿರುವ ಜನರು ಉದ್ಯಾನಗಳಲ್ಲಿ ಮಲಗಿ ಕಾಲ ಕಳೆಯುತ್ತಿದ್ದಾರೆ.

## ಇಂಧನ ವಲಯ ತೀವ್ರ ಅನಿಲ ಕೊರತೆಯಿಂದ ಸಂಕಷ್ಟದಲ್ಲಿ: ಬಾಂಗ್ಲಾದೇಶದ ವಿದ್ಯುತ್ ಬಿಕ್ಕಟ್ಟು ಉಲ್ಬಣ

**ಢಾಕಾ, ಆಗಸ್ಟ್ 12:** ಬಾಂಗ್ಲಾದೇಶದ ಇಂಧನ ವಲಯವು ತೀವ್ರ ಅನಿಲ ಕೊರತೆಯಿಂದ ಬಳಲುತ್ತಿರುವುದರಿಂದ, ವಿದ್ಯುತ್ ಉತ್ಪಾದನೆಯನ್ನು ನಿರ್ಬಂಧಿಸುತ್ತಿದೆ ಮತ್ತು ಗ್ರಾಮೀಣ ಪ್ರದೇಶಗಳು ದೀರ್ಘಕಾಲದ ಲೋಡ್–ಶೆಡ್ಡಿಂಗ್ ಅನ್ನು ಎದುರಿಸುತ್ತಿವೆ, ಕೆಲವು ಗ್ರಾಹಕರು ದಿನಕ್ಕೆ 16 ಗಂಟೆಗಳವರೆಗೆ ವಿದ್ಯುತ್ ಕಡಿತವನ್ನು ವರದಿ ಮಾಡುತ್ತಿದ್ದಾರೆ. ಆಗಸ್ಟ್ 12 ರಂದು ರಾಷ್ಟ್ರೀಯ ಗ್ರಿಡ್ ದತ್ತಾಂಶವು ಬೆಳಿಗ್ಗೆ 8 ಗಂಟೆಗೆ 15,249 ಮೆಗಾವ್ಯಾಟ್ ವಿದ್ಯುತ್ ಬೇಡಿಕೆಯನ್ನು ತೋರಿಸಿದೆ, ಇದು 12,935 ಮೆಗಾವ್ಯಾಟ್ ಪೂರೈಕೆಗೆ ವಿರುದ್ಧವಾಗಿ 2,314 ಮೆಗಾವ್ಯಾಟ್ ಕೊರತೆಯನ್ನು ಉಳಿಸಿದೆ. ಬೆಳಗ್ಗೆ 4 ಗಂಟೆಗೆ, ಬೇಡಿಕೆ 13,018 ಮೆಗಾವ್ಯಾಟ್ ಪೂರೈಕೆಗೆ ವಿರುದ್ಧವಾಗಿ 15,969 ಮೆಗಾವ್ಯಾಟ್ ಆಗಿತ್ತು, ಆದರೆ ಕೊರತೆಯು ಬೆಳಿಗ್ಗೆ 1 ಗಂಟೆಗೆ 3,194 ಮೆಗಾವ್ಯಾಟ್‌ಗೆ ತಲುಪಿತ್ತು. ಬಿಸಿನೆಸ್ ಸ್ಟ್ಯಾಂಡರ್ಡ್ ಬಿಡಿ ಪ್ರಕಾರ, ಪ್ರಮುಖ ನಗರ ಕೇಂದ್ರಗಳ ಹೊರಗೆ ಕೊರತೆಗಳು ವಿಶೇಷವಾಗಿ ತೀವ್ರವಾಗಿವೆ, ಮಂಗಳವಾರದ ಬೇಡಿಕೆಗೆ ಹೋಲಿಸಿದರೆ ಮೈಮೆನ್‌ಸಿಂಗ್ ಅತ್ಯಧಿಕ ಲೋಡ್–ಶೆಡ್ಡಿಂಗ್ ಅನ್ನು ದಾಖಲಿಸಿದೆ. ವರದಿಯ ಪ್ರಕಾರ, ಅಗತ್ಯವಿರುವ ವಿದ್ಯುತ್ ಸರಬರಾಜಿನಲ್ಲಿ ಶೇ. 30.57 ರಷ್ಟು ವಿದ್ಯುತ್ ಲಭ್ಯವಿರಲಿಲ್ಲ. ದೀರ್ಘಕಾಲದ ಕಡಿತವು ಮನೆಗಳು ಮತ್ತು ಆರ್ಥಿಕ ಚಟುವಟಿಕೆಗಳನ್ನು ಸಹ ಅಡ್ಡಿಪಡಿಸುತ್ತಿದೆ. ಮಕ್ಕಳು, ವೃದ್ಧರು ಮತ್ತು ಅನಾರೋಗ್ಯ ಪೀಡಿತರು ಬಿಸಿಲಿನಲ್ಲಿ ಕಷ್ಟಪಡುತ್ತಿದ್ದಾರೆ, ಆದರೆ ವಿಶ್ವಾಸಾರ್ಹ ವಿದ್ಯುತ್ ಅನ್ನು ಅವಲಂಬಿಸಿರುವ ವಿದ್ಯಾರ್ಥಿಗಳು ಮತ್ತು ವ್ಯವಹಾರಗಳು ತೊಂದರೆಗಳನ್ನು ಎದುರಿಸುತ್ತಿವೆ. ಈ ಬಿಕ್ಕಟ್ಟು ಮೀನುಗಾರಿಕೆ, ಕೋಳಿ ಸಾಕಣೆ ಮತ್ತು ಕೃಷಿಯ ಮೇಲೆ ಪ್ರತಿಕೂಲ ಪರಿಣಾಮ ಬೀರಿದೆ, ಪಟುವಾಖಾಲಿಯ ಮಿರ್ಜಾಗಂಜ್‌ನಲ್ಲಿ ರಾತ್ರಿಯ ವೇಳೆ ಪದೇ ಪದೇ ಕಡಿತಗೊಳ್ಳುವುದರಿಂದ ಹಿಲ್ಸಾ ಮೀನುಗಾರಿಕೆ ಋತುವಿನಲ್ಲಿ ಐಸ್ ಉತ್ಪಾದನೆಗೆ ಅಡ್ಡಿಯುಂಟಾಗುತ್ತದೆ,




## ರಷ್ಯಾ ಪರ ಮಧ್ಯಸ್ಥರಾಗಿ ನ್ಯಾ. ಡಿ ವೈ ಚಂದ್ರಚೂಡ್ ನೇಮಕ

**ನವದೆಹಲಿ, ಆ. 12:** ಮಾಜಿ ಭಾರತದ ಮುಖ್ಯ ನ್ಯಾಯಮೂರ್ತಿ (ಸಿಜೆಐ) ಡಿ ವೈ ಚಂದ್ರಚೂಡ್ ಅವರನ್ನು ರಷ್ಯಾ, ಉಕ್ರೇನ್‌ನ ಸರ್ಕಾರಿ ಸ್ವಾಮ್ಯದ ಬ್ಯಾಂಕ್ ಒಷಾಡ್‌ಬ್ಯಾಂಕ್ ದಾಖಲಿಸಿರುವ ಹೂಡಿಕೆ ಒಪ್ಪಂದದ ವಿವಾದದಲ್ಲಿ ತನ್ನ ಪರ ಮಧ್ಯಸ್ಥರಾಗಿ ನೇಮಕ ಮಾಡಿದೆ.

ಗ್ಲೋಬಲ್ ಆರ್ಬಿಟ್ರೇಷನ್ ರಿವ್ಯೂ ವರದಿ ಪ್ರಕಾರ, ಈ ಪ್ರಕರಣದ ಮೂರು ಸದಸ್ಯರ ಮಧ್ಯಸ್ಥಿಕೆ ನ್ಯಾಯಮಂಡಳಿಗೆ ಕೋಸ್ಟರಿಕಾದ ಮಧ್ಯಸ್ಥಿಕಿ ಹಾಗೂ ಮಾಜಿ ವ್ಯಾಪಾರ ಸಚಿವೆ ಡಯಾಲಾ ಜಿಮೆನೆಜ್ ಅಧ್ಯಕ್ಷತೆ ವಹಿಸಲಿದ್ದಾರೆ. ಜಿಮೆನೆಜ್ ಅವರನ್ನು ಎರಡೂ ಕಡೆಯವರು ಒಮ್ಮತದಿಂದ ನ್ಯಾಯಮಂಡಳಿಯ ಅಧ್ಯಕ್ಷರಾಗಿ ಆಯ್ಕೆ ಮಾಡಿದ್ದಾರೆ. ಒಷ್ಚಾಡ್ಬ್ಯಾಂಕ್ ಪರವಾಗಿ ಗ್ರೀಸ್‌ನ ಮಧ್ಯಸ್ಥಕ ಹಾಗೂ ನ್ಯಾಷನಲ್ ಯೂನಿವರ್ಸಿಟಿ ಆಫ್ ಸಿಂಗಾಪುರದ ಪ್ರಾಧ್ಯಾಪಕ ಸ್ಟಾವ್ರೋಸ್ ಬ್ರೆಕೌಲಾಕಿಸ್ ಅವರನ್ನು ನೇಮಿಸಲಾಗಿದೆ.

ಈ ಮಧ್ಯಸ್ಥಿಕೆ ಪ್ರಕ್ರಿಯೆ 1998ರಲ್ಲಿ ರಷ್ಯಾ ಮತ್ತು ಉಕ್ರೇನ್ ನಡುವೆ ಜಾರಿಯಾಗಿದ್ದ



ದ್ವಿಪಕ್ಷೀಯ ಹೂಡಿಕೆ ಒಪ್ಪಂದದ ಅಡಿಯಲ್ಲಿ ಆರಂಭವಾಗಿದೆ. ರಷ್ಯಾದ ಸೇನಾ ಕಾರ್ಯಾಚರಣೆಗಳಿಂದ, ವಿಶೇಷವಾಗಿ 2022ರ ಪೂರ್ಣ ಪ್ರಮಾಣದ ಆಕ್ರಮಣದ ಬಳಿಕ, ಡೊನೆಟ್ಸ್ಕ್, ಲುಹಾನ್ಸ್ಕ್, ಖೆರ್ಸನ್ ಮತ್ತು ಝಪೋರಿಝಿಯಾ ಪ್ರದೇಶಗಳಲ್ಲಿನ ತನ್ನ ಆಸ್ತಿಗಳು ಹಾಗೂ ಕಾರ್ಯಾಚರಣೆಗಳನ್ನು ಕಳೆದುಕೊಂಡಿರುವುದಾಗಿ ಒಷ್ಚಾಡ್ಬ್ಯಾಂಕ್ ಆರೋಪಿಸಿದೆ.

ಬ್ಯಾಂಕ್ ಮಾಡಿರುವ ಪರಿಹಾರ ಮೊತ್ತದ ಬೇಡಿಕೆ ನೂರಾರು ಮಿಲಿಯನ್ ಡಾಲರ್‌ಗಳಷ್ಟಿದೆ ಎಂದು ವರದಿಯಾಗಿದೆ.

2025ರ ಜುಲೈನಲ್ಲಿ ರಷ್ಯಾಗೆ ವಿವಾದದ ಕುರಿತು ನೋಟಿಸ್ ನೀಡಲಾಗಿದ್ದರೂ ಯಾವುದೇ ಪ್ರತಿಕ್ರಿಯೆ ಬಂದಿಲ್ಲ ಎನ್ನಲಾಗಿದ್ದು, ಬಳಿಕ ಒಷ್ಚಾಡ್ಬ್ಯಾಂಕ್ ಮಧ್ಯಸ್ಥಿಕೆ ಪ್ರಕ್ರಿಯೆ ಆರಂಭಿಸಿದೆ.

ಇದಕ್ಕೂ ಮುನ್ನ ವಿಂಟರ್‌ಶಾಲ್ ಡೀ ಮತ್ತು ಉಕ್ರೇನರ್‌ಗೊ ಸಂಸ್ಥೆಗಳು ದಾಖಲಿಸಿದ್ದ ಒಪ್ಪಂದ ಸಂಬಂಧಿತ ಪ್ರಕರಣಗಳಲ್ಲಿ ರಷ್ಯಾ ಪರ ಮಧ್ಯಸ್ಥರಾಗಿ ಕಾರ್ಯನಿರ್ವಹಿಸುವಂತೆ ಡಿ.ವೈ. ಚಂದ್ರಚೂಡ್ ಅವರನ್ನು ಸಂಪರ್ಕಿಸಲಾಗಿತ್ತು. ಆದರೆ, ಆ ಪ್ರಸ್ತಾವನೆಗಳನ್ನು ಅವರು ತಿರಸ್ಕರಿಸಿದ್ದರು.

ವಿಂಟರ್‌ಶಾಲ್ ಪ್ರಕರಣದಲ್ಲಿ ಪರ್ಮನೆಂಟ್ ಕೋರ್ಟ್ ಆಫ್ ಆರ್ಬಿಟ್ರೇಷನ್ ಚಂದ್ರಚೂಡ್ ಅವರನ್ನು ನೇಮಕಾತಿ ಪ್ರಾಧಿಕಾರವಾಗಿ ಆಯ್ಕೆ ಮಾಡಿದ್ದ ಅದೇ ದಿನ ರಷ್ಯಾ ಅವರನ್ನು ಮಧ್ಯಸ್ಥರಾಗಿ ಸಂಪರ್ಕಿಸಿತ್ತು ಎನ್ನಲಾಗಿದೆ. ಈ ಸಂವಹನವನ್ನು ಬಹಿರಂಗಪಡಿಸಿದ ಬಳಿಕ ಚಂದ್ರಚೂಡ್ ಅವರು ಆ ನೇಮಕಾತಿ ಪಾತ್ರದಿಂದ ಹಿಂದೆ ಸರಿದಿದ್ದರು.

## ಸೀನಿಯರ್ ಕಾಮನ್ವೆಲ್ತ್ ಫೆನ್ಸಿಂಗ್ ಚಾಂಪಿಯನ್‌ಶಿಪ್: 3ನೇ ದಿನ ಭಾರತ 5 ಪದಕ

**ನವದೆಹಲಿ, ಆಗಸ್ಟ್ 12:** ನೈಜೀರಿಯಾದ ಲಾಗೋಸ್ನಲ್ಲಿ ನಡೆದ ಕಾಮನ್ವೆಲ್ತ್ ಫೆನ್ಸಿಂಗ್ ಚಾಂಪಿಯನ್ಶಿಪ್ನಲ್ಲಿ ಸೀನಿಯರ್ ವೈಯಕ್ತಿಕ ಸ್ಪರ್ಧೆಗಳಲ್ಲಿ ಮೂರು ಚಿನ್ನ, ಒಂದು ಬೆಳ್ಳಿ ಮತ್ತು ಒಂದು ಕಂಚಿನ ಪದಕಗಳನ್ನು ಗೆಲ್ಲುವ ಮೂಲಕ ಭಾರತೀಯ ಫೆನ್ಸಿಂಗ್ ತಂಡ ಮೂರನೇ ದಿನದಂದು ಮತ್ತೊಂದು ಮಾಸ್ಟರ್‌ಕ್ಲಾಸ್ ಅನ್ನು ಪ್ರದರ್ಶಿಸಿತು.



ಅಧಿಕೃತ ಪ್ರಕಟಣೆಯ ಪ್ರಕಾರ, ಸೀನಿಯರ್ ಮಹಿಳೆಯರ ಫಾಯಿಲ್, ಸೀನಿಯರ್ ಪುರುಷರ ಎಪಿ ಮತ್ತು ಸೀನಿಯರ್ ಪುರುಷರ ಸೇಬರ್‌ನಲ್ಲಿ ಪ್ರಾಬಲ್ಯ ಸಾಧಿಸಿರುವ ಟೀಮ್ ಇಂಡಿಯಾದ 3ನೇ ದಿನದ ಅದ್ಭುತ ಪ್ರದರ್ಶನವು ದೇಶದ ಒಟ್ಟಾರೆ ಒಟ್ಟು ಪದಕಗಳ ಸಂಖ್ಯೆಯನ್ನು ಅಸಾಧಾರಣ 29 ಪದಕಗಳಿಗೆ ತರುತ್ತದೆ – ಇದರಲ್ಲಿ 8 ಚಿನ್ನ, 7 ಬೆಳ್ಳಿ ಮತ್ತು 14 ಕಂಚಿನ ಪದಕಗಳು ಸೇರಿವೆ.

ಭಾರತವು ಸೀನಿಯರ್ ಮಹಿಳೆಯರ ಫಾಯಿಲ್ ವಿಭಾಗದಲ್ಲಿ ತಕ್ಷಣದ ಪ್ರಾಬಲ್ಯವನ್ನು ಸ್ಥಾಪಿಸಿತು, ಅದ್ಭುತ ಚಿನ್ನ–ಬೆಳ್ಳಿ ಜಯ ಸಾಧಿಸಿತು. ಕನಗಲಕ್ಷ್ಮಿ ನಿಖರವಾದ ಮತ್ತು ನಿಯಂತ್ರಿತ ಅಭಿಯಾನದ ನಂತರ ಚಿನ್ನದ ಪದಕವನ್ನು ಪಡೆದರು, ಆದರೆ ತಂಡದ ಸಹ ಆಟಗಾರ್ತಿ ಜಾಯ್ಸ್ ಆಶಿತಾ ಬೆಳ್ಳಿಯನ್ನು ಪಡೆದರು ಮತ್ತು ಇಂಗ್ಲೆಂಡ್ನ ಜಾರ್ಜಿಯಾ ಗ್ರೀನ್ ಮತ್ತು ಎಮಿಲಿ ಗುಡ್ಜೈಲ್ಡ್ ಕಂಚು ಗೆದ್ದಿದ್ದಾರೆ. ಹಿರಿಯ ಪುರುಷರ ವಿಭಾಗದಲ್ಲಿ ಯಶಸ್ಸು ಮುಂದುವರೆಯಿತು, ರಾಜೇಂದ್ರನ್ ಶಾಂತಿಮೋಲ್ ಶೆರ್ಜಿನ್ ಅದ್ಭುತ ಪ್ರದರ್ಶನ ನೀಡಿ ಭಾರತಕ್ಕೆ ದಿನದ ಎರಡನೇ ಚಿನ್ನದ ಪದಕ ತಂದುಕೊಟ್ಟರು. ಶೆರ್ಜಿನ್ ದಕ್ಷಿಣ ಆಫ್ರಿಕಾದ ಕ್ರುಗರ್ ಪೀಟರ್ ಅವರನ್ನು ಹಿಂದಿಕ್ಕಿದರು, ಅವರು ಬೆಳ್ಳಿ ಪದಕವನ್ನು ಗೆದ್ದರು, ಆದರೆ ವೇಲ್ಸ್‌ನ ಬರ್ಕ್ಹಾರ್ಡ್ ಮಾರ್ಕ್ ಮತ್ತು ದಕ್ಷಿಣ ಆಫ್ರಿಕಾದ ಲೊಸೆವ್ಸ್ಕಿ ಸೆರ್ಗೆ ಕಂಚಿನ ಪದಕಗಳನ್ನು ಹಂಚಿಕೊಂಡರು.

ಹಿರಿಯ ಪುರುಷರ ಸೇಬರ್ ಸ್ಪರ್ಧೆಯಲ್ಲಿ, ಸಿಂಗ್ ಕರಣ್ ಸಿಂಗ್ ಆಸ್ಟ್ರೇಲಿಯಾದ ಶಿವ್ ಯೂಂಗಿ ವಿರುದ್ಧ ಅತ್ಯುತ್ತಮ ಫೈನಲ್ ಹೋರಾಟದೊಂದಿಗೆ ಭಾರತದ ದಿನದ ಮೂರನೇ ಚಿನ್ನದ ಪದಕವನ್ನು ಗೆದ್ದರು, ಅವರು ಬೆಳ್ಳಿ ಪದಕವನ್ನು ಪಡೆದರು. ನೈಜೀರಿಯಾದ ಅಕಿನ್‌ಒಯೆಸ್‌ಓಂಒಂ ಒಲುವಾಫೊಲಾಯೆಮಿ ಜೊತೆಗೆ ಸಹ ಆಟಗಾರ ಕುಮಾರೇಶನ್ ಪದ್ಮ ಗಿಶೋ ನಿಧಿ ಕಂಚಿನ ಪದಕ ಗೆಲ್ಲುವ ಮೂಲಕ ಪದಕ ಗಳಿಕೆಗೆ ಕಾರಣರಾದರು. ಇಂದು ಚಾಂಪಿಯನ್ಶಿಪ್ ಮುಕ್ತಾಯಗೊಳ್ಳುತ್ತಿದ್ದಂತೆ, ಭಾರತೀಯ ತಂಡವು ಫಾಯಿಲ್, ಎಪಿ ಮತ್ತು ಸೇಬರ್ ವಿಭಾಗಗಳಲ್ಲಿ ಅಂತಿಮ ಸ್ಪರ್ಧೆಗಳತ್ತ ಗಮನ ಹರಿಸಿದೆ.

ಮೊದಲ ಮೂರು ದಿನಗಳಲ್ಲಿ ಗೆದ್ದ 29 ಪದಕಗಳ ಆವೇಗದ ಆಧಾರದ ಮೇಲೆ, ಟೀಮ್ ಇಂಡಿಯಾ ತನ್ನ ಪ್ರಾಬಲ್ಯವನ್ನು ಕಾಯ್ದುಕೊಳ್ಳುವ ಮತ್ತು ಲಾಗೋಸ್ನಲ್ಲಿ ಅಭಿಯಾನವನ್ನು ಉನ್ನತ ಮಟ್ಟದಲ್ಲಿ ಮುಗಿಸುವ ಗುರಿಯನ್ನು ಹೊಂದಿದೆ.